ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 23 ಶನಿವಾರ 2024

ಸಂಪುಟ: 44 | ಸಂಚಿಕೆ: 334 | ಪುಟಗಳು: 12


ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಬೋರ್ಡ್ ಪರೀಕ್ಷೆಗೆ ಹೈಕೋರ್ಟ್ ಅಸ್ತು

ಮಾ.25ರಿಂದ 28ರವರೆಗೆ 5, 8, 9ನೇ ತರಗತಿ ಪರೀಕ್ಷೆ





ಬೆಂಗಳೂರು, ಮಾ. 22–ರಾಜ್ಯ ಪಠ್ಯಕ್ರಮ ಬೋಧಿಸುವ ಸರ್ಕಾರಿ, ಅನುದಾನಿತ, ಅನುದಾನ ರಹಿತ ಶಾಲೆಗಳ 5, 8, 9ನೇ ತರಗತಿಯ ಬೋರ್ಡ್ ಪರೀಕ್ಷೆಗಳನ್ನು ಮಾರ್ಚ್ 25ರಿಂದ 28ರವರೆಗೆ ನಡೆಸಲು ಕರ್ನಾಟಕ ಶಿಕ್ಷಣ ಇಲಾಖೆ ವೇಳಾ ಪಟ್ಟಿ ಪ್ರಕಟಿಸಿದೆ.

ಬೋರ್ಡ್ ಪರೀಕ್ಷೆಗಳ ನಡೆಸುವುದನ್ನು ಪ್ರಶ್ನಿಸಿ ಅನುದಾನ ರಹಿತ ಖಾಸಗಿ ಶಾಲೆಗಳ ಸಂಘ (ರುಪ್ಸಾ) ಸಲ್ಲಿಸಿದ್ದ ಅರ್ಜಿಯನ್ನು ಶುಕ್ರವಾರ ರಾಜ್ಯ ಹೈಕೋರ್ಟ್ ವಜಾ ಮಾಡಿದ ಬೆನ್ನಲ್ಲೇ ಶಿಕ್ಷಣ ಇಲಾಖೆ ಬೋರ್ಡ್ ಪರೀಕ್ಷೆಗಳ ವೇಳಾ ಪಟ್ಟಿಗಳನ್ನು ಪ್ರಕಟಿಸಿದೆ. ಈಗಾಗಲೇ ಕೆಲ ವಿಷಯಗಳ ಪರೀಕ್ಷೆಗಳು ಮುಗಿದಿದ್ದು, ಬಾಕಿ ಇರುವ ವಿಷಯಗಳ ಪರೀಕ್ಷೆಯನ್ನು ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಇಲ್ಲದ ದಿನ ಬೆಳಗಿನ ಅವಧಿಯಲ್ಲಿ ಹಾಗೂ ಉಳಿದ ದಿನ ಮಧ್ಯಾಹ್ನದ ಅವಧಿಯಲ್ಲಿ ನಡೆಸಲು ತೀರ್ಮಾನಿಸಲಾಗಿದೆ. ಮಾ.25ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳೂ ಆರಂಭವಾಗುತ್ತಿದ್ದು, ಈ ಪರೀಕ್ಷೆಗಳು ಇರುವ ಮಾ.25 ಮತ್ತು 27ರಂದು ಮಧ್ಯಾಹ್ನದ ಅವಧಿಯಲ್ಲಿ ಹಾಗೂ ● 2ನೇ ಪುಟಕ್ಕೆ

ಬೋರ್ಡ್ ಪರೀಕ್ಷಾ ವೇಳಾಪಟ್ಟಿ

5ನೇ ತರಗತಿ:
ಮಾರ್ಚ್ 25– ಪರಿಸರ ಅಧ್ಯಯನ
ಮಾರ್ಚ್ 26– ಗಣಿತ


8ನೇ ತರಗತಿ:
ಮಾರ್ಚ್ 25– ತೃತೀಯ ಭಾಷೆ
ಮಾರ್ಚ್ 26– ಗಣಿತ
ಮಾರ್ಚ್ 27– ವಿಜ್ಞಾನ
ಮಾರ್ಚ್ 28– ಸಮಾಜ ವಿಜ್ಞಾನ

9ನೇ ತರಗತಿ:
ಮಾರ್ಚ್ 25– ತೃತೀಯ ಭಾಷೆ
ಮಾರ್ಚ್ 26– ಗಣಿತ
ಮಾರ್ಚ್ 27– ವಿಜ್ಞಾನ
ಮಾರ್ಚ್ 28– ಸಮಾಜ ವಿಜ್ಞಾನ

ಸುಪ್ರೀಂ ಮೊರೆ ಹೋಗಲು ರುಪ್ಸಾ ನಿರ್ಧಾರ



ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್ ಮೊರೆಹೋಗಲು ರುಪ್ಸಾ ನಿರ್ಧರಿಸಿದೆ. ಹೈಕೋರ್ಟ್ ವಿಭಾಗೀಯ ಪೀಠದ ಆದೇಶವನ್ನು ಗೌರವಿಸುತ್ತೇವೆ. ಆದರೆ, ಈ ಆದೇಶ ತೃಪ್ತಿ ತಂದಿಲ್ಲ ಎಂದು ರುಪ್ಸಾ ಅಧ್ಯಕ್ಷ ಲೋಕೇಶ್ ತಾಳಿಕಟ್ಟೆ ತಿಳಿಸಿದ್ದಾರೆ. ಈ ಬಾರಿ ನಡೆಯುತ್ತಿರುವ ಬೋರ್ಡ್ ಪರೀಕ್ಷೆಗಳನ್ನು ಮುಗಿಸಿ, ಮುಂದಿನ ವರ್ಷದಿಂದ ಸೂಕ್ತ ಕ್ರಮ ತೆಗೆದುಕೊಳ್ಳಿ ಎಂದು ಹೈಕೋರ್ಟ್ ವಿಭಾಗೀಯ ಪೀಠ ಹೇಳಿದೆ. ಇದರಿಂದ ಈ ಬಾರಿ ಬೋರ್ಡ್ ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತದೆ. ಹೀಗಾಗಿ ನಾವು ಸುಪ್ರೀಂಕೋರ್ಟ್ ಮೆಟ್ಟಿಲೇರಲು ನಿರ್ಧರಿಸಿದ್ದೇವೆ. ಸಾಕಷ್ಟು ಪೋಷಕರು ಸಹ ಈ ಬಗ್ಗೆ ನಮಗೆ ಒತ್ತಾಯ ಮಾಡಿದ್ದಾರೆ ಎಂದು ಹೇಳಿದರು.



ದಕ್ಷಿಣಕಾಶಿ ನಂಜನಗೂಡಿನಲ್ಲಿ ಶುಕ್ರವಾರ ಶ್ರೀಕಂಠೇಶ್ವರ ಗೌತಮ ಪಂಚ ರಥೋತ್ಸವ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ 6 ದಿನ ಇಡಿ ವಶಕ್ಕೆ



ನವದೆಹಲಿ, ಮಾ.22–ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ಹೆಚ್ಚಿನ ವಿಚಾರಣೆಗಾಗಿ ದೆಹಲಿ ಕೋರ್ಟ್ 6 ದಿನಗಳ ಕಾಲ ಜಾರಿ ನಿರ್ದೇಶನಾಲಯ(ಇಡಿ)ದ ವಶಕ್ಕೆ ನೀಡಿ ಶುಕ್ರವಾರ ಆದೇಶಿಸಿದೆ. ಅರವಿಂದ್ ಕೇಜ್ರಿವಾಲ್ ಅವರಿಗೆ ಅಬಕಾರಿ ನೀತಿ ಪ್ರಕರಣದಲ್ಲಿ ಬಂಧನದಿಂದ ರಕ್ಷಣೆ ನೀಡಲು ದೆಹಲಿ ಹೈಕೋರ್ಟ್ ಗುರುವಾರ ನಿರಾಕರಿಸಿತ್ತು. ಇದರ ಬೆನ್ನಲ್ಲೇ ಇಡಿ ಅಧಿಕಾರಿಗಳ ತಂಡ ದೆಹಲಿ ಮುಖ್ಯಮಂತ್ರಿ ನಿವಾಸಕ್ಕೆ ತೆರಳಿ, ಕೆಲ ಗಂಟೆಗಳ ಕಾಲ ಕೇಜ್ರಿವಾಲ್ ಅವರನ್ನು ವಿಚಾರಣೆಗೆ ಒಳಪಡಿಸಿ, ಬಳಿಕ ಬಂಧಿಸಿತ್ತು. ಇಡಿ ಅಧಿಕಾರಿಗಳು ಇಂದು ಮಧ್ಯಾಹ್ನ ಕೇಜ್ರಿವಾಲ್ ಅವರನ್ನು ದೆಹಲಿಯ ರೋಸ್ ಅವೆನ್ಯೂ ಕೋರ್ಟ್‌ಗೆ ● 2ನೇ ಪುಟಕ್ಕೆ

ಬಿಜೆಪಿಗೆ ಸೋಲಿನ ಭೀತಿ; ಹಾಗಾಗಿ ವಿಪಕ್ಷಗಳ ಬ್ಯಾಂಕ್ ಖಾತೆ ಸೀಜ್

● ರಾಜ್ಯದ ಉಸ್ತುವಾರಿ ಸುರ್ಜೇವಾಲ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಪತ್ರಿಕಾಗೋಷ್ಠಿಯಲ್ಲಿ ಆರೋಪ ● ಸಾಂವಿಧಾನಿಕ ಸಂಸ್ಥೆಗಳ ಬಳಸಿಕೊಂಡು ಪ್ರತಿಪಕ್ಷಗಳ ಹತ್ತಿಕ್ಕುವ ಪ್ರಯತ್ನ



ಬೆಂಗಳೂರು,ಮಾ.22(ಕೆಎಂಶಿ)– ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಸೋಲುವ ಭೀತಿಯಿಂದ ಕೇಂದ್ರದ ಬಿಜೆಪಿ ಸರ್ಕಾರ ವಿರೋಧ ಪಕ್ಷಗಳ ಬ್ಯಾಂಕ್ ಖಾತೆ ಮುಟ್ಟುಗೋಲು, ಮುಖ್ಯಮಂತ್ರಿಗಳ ಬಂಧನ, ರಾಜ್ಯಪಾಲರ ದುರ್ಬಳಕೆ, ಸಂವಿಧಾನಿಕ ಸಂಸ್ಥೆಗಳ ದುರುಪಯೋಗಕ್ಕೆ ಮುಂದಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಿಡಿಕಾರಿದ್ದಾರೆ.

ರಾಜ್ಯದ ಉಸ್ತುವಾರಿ ಹೊಣೆ ಹೊತ್ತ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸುರ್ಜೇವಾಲ ಜೊತೆಗೂಡಿ ಇಂದು ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

ಲೋಕಸಭಾ ಚುನಾವಣೆಯಲ್ಲಿ ಸೋಲಿನ ಭಯದಿಂದ ಬಿಜೆಪಿ ಸಂವಿಧಾನದ ಅಡಿಯಲ್ಲಿರುವ ಸಂಸ್ಥೆಗಳನ್ನು ದುರುಪಯೋಗ ಮಾಡಿಕೊಂಡು ಪ್ರತಿಪಕ್ಷಗಳನ್ನು ಹತ್ತಿಕ್ಕುತ್ತಿದೆ ಎಂದರು. ಇಂತಹ ಬಿಜೆಪಿಯನ್ನು ಸ್ಪಷ್ಟವಾಗಿ ತಿರಸ್ಕರಿಸಬೇಕು ಎಂದು ರಾಜ್ಯ ಮತ್ತು ರಾಷ್ಟ್ರದ ಜನತೆಗೆ ಕರೆ ನೀಡಿದರು. ಬಿಜೆಪಿಗೆ ಪ್ರಜಾತಂತ್ರ ಮತ್ತು ಸಂವಿಧಾನದ ಮೇಲೆ ನಂಬಿಕೆ ಇಲ್ಲ, ಸರ್ವಾಧಿಕಾರದಲ್ಲಿ ಮಾತ್ರ ನಂಬಿಕೆ ಇದೆ ಎಂದರು. ಮುಕ್ತ ಮತ್ತು ನ್ಯಾಯ ಸಮ್ಮತ ಚುನಾವಣೆ ನಡೆಸಲು ಕೇಂದ್ರ ಚುನಾವಣಾ ಆಯೋಗ ಕಟ್ಟುನಿಟ್ಟಿನ ಕ್ರಮ ಜರುಗಿಸುವಂತೆ ಒತ್ತಾಯಿಸಿದರು.

ಬ್ರಿಟಿಷರನ್ನು ಭಾರತದಿಂದ ಓಡಿಸಲು ಸುದೀರ್ಘ ಹೋರಾಟ ನಡೆಸಿ ಹುತಾತ್ಮರಾದ, ಜೈಲು ಸೇರಿದ ಚರಿತ್ರೆ ಇರುವ ಪಕ್ಷ ಕಾಂಗ್ರೆಸ್. ಬಿಜೆಪಿ ನಮಗೆ ಎಷ್ಟೇ ತೊಂದರೆ ಕೊಟ್ಟರೂ ಕಾಂಗ್ರೆಸ್ ಕಾರ್ಯಕರ್ತರು ಹೋರಾಟದ ಹಾದಿಯಲ್ಲೇ ಎಲ್ಲವನ್ನೂ ಎದುರಿಸಲಿದ್ದಾರೆ ಎಂದರು.

ಪ್ರಜಾಪ್ರಭುತ್ವದಲ್ಲಿ ಜನಾಭಿಪ್ರಾಯ ಅಂತಿಮ. ಕಾಂಗ್ರೆಸ್ ಜನರಿಂದ ಹಣ ಸಂಗ್ರಹಿಸಿದೆ. ಜನರು ಸ್ವಯಂಪ್ರೇರಿತವಾಗಿ ಕೊಟ್ಟ ಹಣ ಕಾಂಗ್ರೆಸ್ ಖಾತೆಯಲ್ಲಿತ್ತು. ಸಣ್ಣ ತಾಂತ್ರಿಕ ಕಾರಣ ನೀಡಿ ಇಡೀ ಖಾತೆಯನ್ನು ಸೀಜ್ ಮಾಡಿರುವುದು ಸರ್ವಾಧಿಕಾರಿ ಧೋರಣೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಪಕ್ಷ ಚುನಾವಣೆ ನಡೆಸದಂತೆ ಬಿಜೆಪಿ ಈ ರೀತಿಯ ತೊಂದರೆ ಕೊಡುವುದು ಪ್ರಜಾಪ್ರಭುತ್ವಕ್ಕೆ ಮಾರಕ, ಇದು ಖಂಡನೀಯ ಎಂದರು. ಬಿಜೆಪಿ ಮನುಸ್ಮೃತಿಯ ಮಾರಕ ಮನಸ್ಥಿತಿಯನ್ನು ಹೊಂದಿದೆ. ಬಿಜೆಪಿಗೆ ● 2ನೇ ಪುಟಕ್ಕೆ

ಲೋಕಸಭಾ ಚುನಾವಣೆ ಹಿನ್ನೆಲೆ

ಬ್ಯಾಂಕ್ ವಹಿವಾಟು ಮೇಲೆ ತೀವ್ರ ನಿಗಾ

50 ಸಾವಿರ ಡ್ರಾ ಮಾಡಿದರೆ ಮಾಹಿತಿ ನೀಡಬೇಕು



ಮೈಸೂರು, ಮಾ. 22(ಆರ್‌ಕೆ)– 2024ರ ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಬ್ಯಾಂಕ್ ಖಾತೆಗಳ ಹಣಕಾಸು ವಹಿವಾಟುಗಳ ಮೇಲೆ ಭಾರತ ಚುನಾವಣಾ ಆಯೋಗ (ಇಸಿಐ) ತೀವ್ರ ನಿಗಾ ಇರಿಸಿದೆ.

ರಾಷ್ಟ್ರೀಯ, ಖಾಸಗಿ, ಸಹಕಾರಿ ಬ್ಯಾಂಕ್‌ಗಳು, ಕೆಎಸ್‌ಎಫ್‌ಸಿ, ಇಂಡಸ್ಟ್ರೀಯಲ್ ಬ್ಯಾಂಕ್‌ಗಳು, ಖಾಸಗಿ ಹಣಕಾಸು ಸಂಸ್ಥೆಗಳ ಆರ್ಥಿಕ ವಹಿವಾಟು ಮೇಲೆ ಎಚ್ಚರ ವಹಿಸಲಾಗಿದೆ. ಗ್ರಾಹಕರ ಖಾತೆಗೆ 50,000 ರೂ.ಗಳಿಗಿಂತ ಹೆಚ್ಚು ಮೊತ್ತದ ಹಣ ಜಮೆಯಾದರೆ ಅಥವಾ ಕ್ರೆಡಿಟ್ ಆದರೆ ಜಿಲ್ಲಾ ಚುನಾವಣಾಧಿಕಾರಿಗಳ ಮೂಲಕ ಭಾರತ ಚುನಾವಣಾ ಆಯೋಗಕ್ಕೆ ಮಾಹಿತಿ ನೀಡಬೇಕೆಂದು ಸೂಚನೆ ನೀಡಲಾಗಿದೆ.

ಲೋಕಸಭಾ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದು ಆಯೋಗದ ಮಾರ್ಗಸೂಚಿಯನ್ವಯ ಯಾವುದೇ ವ್ಯಕ್ತಿ ಒಂದು ದಿನಕ್ಕೆ ಸಕಾರಣವಿಲ್ಲದೆ, ಬ್ಯಾಂಕ್ ಅಥವಾ ಎಟಿಎಂನಿಂದ 50,000 ರೂ.ಗಳಿಗೂ ಅಧಿಕ ● 7ನೇ ಪುಟಕ್ಕೆ

ಕಾವೇರಿಯಿಂದಲೇ ಮೈಸೂರಲ್ಲಿ ಧಾರ್ಮಿಕತೆ, ಆರ್ಥಿಕತೆ ನೆಲೆ ನಿಂತಿದೆ

ತಲಕಾವೇರಿಯಲ್ಲಿ ಪೂಜೆ ಸಲ್ಲಿಸಿ ಪ್ರಚಾರಕ್ಕೆ ಚಾಲನೆ ನೀಡಿದ ಮೈಸೂರು–ಕೊಡಗು ಬಿಜೆಪಿ ಅಭ್ಯರ್ಥಿ ಯದುವೀರ್




ಕೊಡಗಿನ ತಲಕಾವೇರಿಯ ಕಾವೇರಿ ಉಗಮ ಸ್ಥಾನದಲ್ಲಿ ಯದುವೀರ್ ಪೂಜೆ ಸಲ್ಲಿಸಿದರು.

ಮಡಿಕೇರಿ, ಮಾ.22–ಮೈಸೂರು ರಾಜವಂಶಸ್ಥರಾದ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಶುಕ್ರವಾರ ತಲಕಾವೇರಿಗೆ ಭೇಟಿ ನೀಡಿ ಕಾವೇರಿ ಮಾತೆಗೆ ವಿಶೇಷ ಪೂಜೆ ಸಲ್ಲಿಸುವುದರೊಂದಿಗೆ ನಾಡಿನಲ್ಲಿ ಉತ್ತಮ ಮಳೆ–ಬೆಳೆ ಆಗಿ ನಾಡಲ್ಲಿ ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಿದ ನಂತರ ಈ ಭಾಗದಲ್ಲಿ ಪ್ರಚಾರ ಕಾರ್ಯವನ್ನು ವಿಧ್ಯುಕ್ತವಾಗಿ ಆರಂಭಿಸಿದರು.

ಯದುವೀರ್ ಅವರು ಬಿಜೆಪಿ ಅಭ್ಯರ್ಥಿಯಾದ ನಂತರ ಎರಡನೇ ಬಾರಿಗೆ ಕೊಡಗಿಗೆ ಆಗಮಿಸಿದ್ದು, ಕಳೆದ ಮಾ.15ರಂದು ಮಡಿಕೇರಿಯ ಕಾವೇರಿ ಹಾಲ್‌ನಲ್ಲಿ ನಡೆದ ರಾಜ್ಯ ಬಿಜೆಪಿ ಹಿಂದುಳಿದ ವರ್ಗಗಳ ಸಮಾವೇಶದಲ್ಲಿ ಭಾಗವಹಿಸಿದ್ದರು. ಶುಕ್ರವಾರ ಬೆಳಗ್ಗೆ ಭಾಗಮಂಡಲಕ್ಕೆ ಆಗಮಿಸಿದ ಯದುವೀರ್ ಅವರನ್ನು ಮಾಜಿ ಶಾಸಕ ಕೆ.ಜಿ.ಬೋಪಯ್ಯ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಆತ್ಮೀಯವಾಗಿ ಬರಮಾಡಿಕೊಂಡರು. ಭಾಗಮಂಡಲಕ್ಕೆ ಆಗಮಿಸುತ್ತಿದ್ದಂತೆಯೇ ತ್ರಿವೇಣಿ ಸಂಗಮಕ್ಕೆ ತೆರಳಿದ ಯದುವೀರ್, ಕಾವೇರಿ ನೀರನ್ನು ತಲೆಗೆ ಪ್ರೋಕ್ಷಣೆ ಮಾಡಿಕೊಂಡು ನಂತರ ಶ್ರೀ ಭಗಂಡೇಶ್ವರ ದೇವರ ಸನ್ನಿಧಾನಕ್ಕೆ ತೆರಳಿ, ಸಂಕಲ್ಪದ ● 7ನೇ ಪುಟಕ್ಕೆ

ಅರಮನೆ ಹಿತ ಕಾಯೋರು ಬೇಕೋ; ಜನ ಸಾಮಾನ್ಯರ ಮನೆ ಕಾಯೋರು ಬೇಕೋ!

ಮತದಾರರ ಆಯ್ಕೆಗೆ ಬಿಟ್ಟಿದ್ದೇನೆ; ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ



ಮೈಸೂರು ಕಾಂಗ್ರೆಸ್ ಭವನದಲ್ಲಿ ಶುಕ್ರವಾರ ಮೈಸೂರು–ಕೊಡಗು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಅಭಿನಂದಿಸಲಾಯಿತು.

ಮೈಸೂರು, ಮಾ.22(ಬಿಎಲ್‌ಯು)– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ರಾಜಮನೆತನದ ದತ್ತು ಪುತ್ರ V/s ಸಾಮಾನ್ಯ ವ್ಯಕ್ತಿಯ ನಡುವೆ ನೇರ ಪೈಪೋಟಿ ಏರ್ಪಟ್ಟಿದ್ದು, ಜನ ಸಾಮಾನ್ಯರ ಮನೆ ಕಾಯುವ ನಾನು ಬೇಕೊ ಅಥವಾ ಅರಮನೆ ಕಾಯೋ ಪ್ರತಿನಿಧಿ ಬೇಕೊ ನೀವೇ ನಿರ್ಧರಿಸಿ. ಕಾಂಗ್ರೆಸ್ ಅಭ್ಯರ್ಥಿ ಎಂ. ಲಕ್ಷ್ಮಣ ಮತದಾರರಿಗೆ ಬಿಟ್ಟ ಆಯ್ಕೆ ಇದು.

ಮೈಸೂರಿನ ಕಾಂಗ್ರೆಸ್ ಭವನದಲ್ಲಿಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣೆಯಲ್ಲಿ ಸ್ಪರ್ಧೆ ಮಾಡಲು ಇಷ್ಟವಿಲ್ಲದ ಯದುವೀರ್ ಅವರಿಗೆ ಬಿಜೆಪಿ ಒತ್ತಾಯ ಮಾಡಿ ಟಿಕೆಟ್ ಕೊಟ್ಟಿದೆ. ಇದರಿಂದ ಬೇರೆ ಯಾರದೋ ರಾಜಕೀಯ ಕುತಂತ್ರಕ್ಕೆ ಯದುವೀರ್ ಚುನಾವಣೆಯಲ್ಲಿ ಸ್ಪರ್ಧೆ ಮಾಡಬಾರದಿತ್ತು ಎಂದು ಅಭಿಪ್ರಾಯಪಟ್ಟರು. ಮೈಸೂರು ರಾಜಮನೆತನದ ಬಗ್ಗೆ ನಮಗೆ ಅಪಾರ ಗೌರವವಿದೆ. ಸಮಾಜಕ್ಕೆ ರಾಜರು ನೀಡಿದ ಕೊಡುಗೆ ಸ್ಮರಣೀಯವಾಗಿದೆ. ಆದರೆ ಮೀಸಲಾತಿ ವಿರೋಧಿ, ಸಾಮಾಜಿಕ ವಿರೋಧಿ, ದಲಿತ ವಿರೋಧಿ ಬಿಜೆಪಿ ಪಕ್ಷದ ಅಭ್ಯರ್ಥಿಯಾಗಿರುವುದು ನಮಗೆ ಬೇಸರ ತಂದಿದೆ. ಒಂದು ವೇಳೆ ಯದುವೀರ್ ಕಾಂಗ್ರೆಸ್ ಟಿಕೆಟ್ ಕೇಳಿದ್ದರೆ ನಾವೇ ಕೊಡುತ್ತಿದ್ದೆವು ಎಂದು ಲಕ್ಷ್ಮಣ ಸ್ಪಷ್ಟಪಡಿಸಿದರು. ಮೈಸೂರು ಲೋಕಸಭಾ ಕ್ಷೇತ್ರದಲ್ಲಿ 1977ರಿಂದ ಒಕ್ಕಲಿಗರಿಗೆ ಕಾಂಗ್ರೆಸ್‌ನಲ್ಲಿ ಪ್ರಾಧ್ಯಾನತೆ ಇರಲಿಲ್ಲ. ತುಳಸಿದಾಸಪ್ಪ ನಂತರ ಒಕ್ಕಲಿಗರಿಗೆ ಅವಕಾಶವೇ ಸಿಕ್ಕಿಲ್ಲ. ಈಗ ಸಿದ್ದರಾಮಯ್ಯ ಮೂಲಕ ನನಗೆ ಟಿಕೆಟ್ ದೊರೆಯುವ ● 7ನೇ ಪುಟಕ್ಕೆ

ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ಗೆ ಜಿ.ಪ್ರಣತಿ ಆಯ್ಕೆ



ಮೈಸೂರು, ಮಾ. 22– ಮೈಸೂರಿನ ಉದಯೋನ್ಮುಖ ಕ್ರೀಡಾ ತಾರೆ ಹಾಗೂ ಪೊಲೀಸ್ ಪಬ್ಲಿಕ್ ಶಾಲೆಯ 3ನೇ ತರಗತಿ ವಿದ್ಯಾರ್ಥಿ ಜಿ. ಪ್ರಣತಿ ಪ್ರತಿಷ್ಠಿತ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ಗೆ ಅತ್ಯಂತ ಕಿರಿಯ ವಯಸ್ಸಿನ ವುಶು ಮಾರ್ಷಲ್ ಆರ್ಟ್ಸ್‌ನಲ್ಲಿ ರಾಷ್ಟ್ರೀಯ ಪದಕ ವಿಜೇತೆಯಾಗಿ ಹೊರಹೊಮ್ಮಿದ್ದಾರೆ.

ಕಳೆದ ಒಂದೂವರೆ ವರ್ಷದಿಂದ ಈ ಆಯ್ಕೆ ಪರಿಶೀಲನೆ ಪ್ರಕ್ರಿಯೆ ನಡೆ ಯುತ್ತಿತ್ತು ಗಿನ್ನಿಸ್ ಬುಕ್ ಆಫ್ ರೆಕಾರ್ಡ್ಸ್‌ನ ಭಾರತೀಯ ಸಮಾನವಾದ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾರತೀಯರ ನಿಜವಾದ ಅತ್ಯುತ್ತಮ ಸಾಧನೆಗಳನ್ನು ಗುರುತಿಸುತ್ತದೆ. ಈ ಮೊದಲು ಪ್ರಣತಿ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್, ಇಂಡಿಯಾಸ್ ವರ್ಲ್ಡ್ ರೆಕಾರ್ಡ್ಸ್ ಮತ್ತು ಕರ್ನಾಟಕ ಅಚೀವರ್ಸ್ ಬುಕ್ ಆಫ್ ರೆಕಾರ್ಡ್ಸ್‌ಗಳಲ್ಲಿ ಸ್ಥಾನ ಪಡೆದಿದ್ದಾಳೆ. ಪದಕ ವಿಜೇತರಲ್ಲಿ ಯಾರೂ 11 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಲ್ಲದ ಕಾರಣ ಪ್ರಣತಿಯನ್ನು ಭಾರತದ ಅತ್ಯಂತ ಕಿರಿಯ ವಯಸ್ಸಿನ ಪದಕ ವಿಜೇತೆ ಎಂದು ಗುರುತಿಸಲಾಗಿದೆ. ರಾಷ್ಟ್ರೀಯ ಪದಕವನ್ನು ಪಡೆದಾಗ ಪ್ರಣತಿಗೆ ಕೇವಲ 7 ವರ್ಷ, 2022ರಲ್ಲಿ ತಮಿಳುನಾಡಿನ ಕನ್ಯಾಕುಮಾರಿಯಲ್ಲಿ ನಡೆದ ವುಶು ಸಬ್ ಜೂನಿಯರ್ ರಾಷ್ಟ್ರೀಯ ಚಾಂಪಿಯನ್‌ಶಿಪ್‌ನಲ್ಲಿ ತನಗಿಂತ ಹಿರಿಯ ಕ್ರೀಡಾಪಟುಗಳ ಜೊತೆ ಸ್ಪರ್ಧಿಸಿ ಕಂಚಿನ ಪದಕವನ್ನು ಗೆದ್ದು ಈ ಸಾಧನೆಯನ್ನು ಮಾಡಿದ್ದಾಳೆ. ಈಕೆ ಎಸ್.ಡಿ. ಗಿರಿಧರ್ ಮತ್ತು ಎಲ್. ಸಂಗೀತಾ ದಂಪತಿ ಪುತ್ರಿ.



ಲಾ ಗೈಡ್ ಕಾನೂನು ಮಾಸ ಪತ್ರಿಕೆಯ ಗೌರವ ಸಂಪಾದಕರಾದ ಹೆಚ್.ಎನ್. ವೆಂಕಟೇಶ ಅವರ ಜನ್ಮ ದಿನದ ಪ್ರಯುಕ್ತ ಉದ್ಯಮಿಗಳಾದ ರಾಜೀವ್, ಹರೀಶ್ ಕುಮಾರ್ ಹೆಗ್ಗಡೆ, ವಕೀಲರಾದ ವಾಮನ್. ಮಾಜಿ ನಗರ ಪಾಲಿಕೆ ಸದಸ್ಯ ಲೋಕೇಶ್ ಪಿಯಾ, ಅಭಿಷೇಕ ಹೆಗ್ಗಡೆ. ಜಯಂತ್ ಇತರರು ಅಭಿನಂದಿಸಿ, ಶುಭ ಕೋರಿದರು.

ನಿಧನ



ಬಿ.ಜೆ.ಮಹಾಬಲ್ ರಾಜ್

ಮೈಸೂರು, ಮಾ. 22– ಸ್ಟೇಟ್ ಬ್ಯಾಂಕ್ ಆಫ್ ಮೈಸೂರ್‌ನ ನಿವೃತ್ತ ನೌಕರ ಹಾಗೂ ಮೈಸೂರಿನ ಶಕ್ತಿನಗರದ ನಿವಾಸಿ ಬಿ.ಜೆ. ಮಹಾಬಲ್ ರಾಜ್(69) ಶುಕ್ರವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಅಸ್ಲಂ ಪಾಷಾ

ಮೈಸೂರು, ಮಾ.22–ಮೈಸೂರಿನ ಉದಯಗಿರಿ ನಿವಾಸಿ ಹಾಗೂ ಉದ್ಯಮಿ ಅಸ್ಲಂ ಪಾಷಾ(46) ಅವರು ಇಂದು ಸಂಜೆ 7.30ರಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ಪತ್ನಿ, ಸಹೋದರಿಯರು, ಭಾವ, ಅತ್ತಿಗೆ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ನಾಳೆ (ಶನಿವಾರ) ಬೆಳಗ್ಗೆ 10 ಗಂಟೆಗೆ ಉದಯಗಿರಿಯ ಖುಬಾ ಮಸೀದಿಯಲ್ಲಿ ಪ್ರಾರ್ಥನೆ ನಂತರ ಟಿಪ್ಪು ಸರ್ಕಲ್‌ನಲ್ಲಿರುವ ಮುಸ್ಲಿಂ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಒಂದನೇ ಪುಟದಿಂದ

5, 8, 9ನೇ ತರಗತಿ ಪರೀಕ್ಷೆ

ಈ ಪರೀಕ್ಷೆಗಳು ಇಲ್ಲದಿರುವ ಮಾರ್ಚ್ 26 ಮತ್ತು 28ರಂದು ಬೆಳಗಿನ ಅವಧಿಯಲ್ಲಿ 5, 8 ಮತ್ತು 9ನೇ ತರಗತಿಯ ಬೋರ್ಡ್ ಪರೀಕ್ಷೆಗಳು ನಡೆಯಲಿವೆ.

ಹಿನ್ನೆಲೆ: ರಾಜ್ಯ ಸರ್ಕಾರವು 5, 8, 9 ಮತ್ತು 11ನೇ ತರಗತಿಗೆ ಈ ಬಾರಿ ಬೋರ್ಡ್ ಪರೀಕ್ಷೆ ನಡೆಸಲು 2023ರ ಡಿಸೆಂಬರ್‌ನಲ್ಲಿ ಸುತ್ತೋಲೆ ಹೊರಡಿಸಿತ್ತು. ಸರ್ಕಾರದ ಈ ಸುತ್ತೋಲೆಯನ್ನು ಪ್ರಶ್ನಿಸಿ ರುಪ್ಸಾ ಹೈಕೋರ್ಟ್ ಮೆಟ್ಟಿಲೇರಿತ್ತು. ರುಪ್ಸಾ ವಾದವನ್ನು ಆಲಿಸಿದ ಹೈಕೋರ್ಟ್ ಏಕ ಸದಸ್ಯ ಪೀಠ ಸರ್ಕಾರದ ಸುತ್ತೋಲೆಯನ್ನು ರದ್ದುಪಡಿಸಿ, ಬೋರ್ಡ್ ಪರೀಕ್ಷೆ ನಡೆಸದಂತೆ ಕಳೆದ ಮಾರ್ಚ್ 5ರಂದು ಆದೇಶ ನೀಡಿತ್ತು. ಈ ಆದೇಶವನ್ನು ಪ್ರಶ್ನಿಸಿ ಶಿಕ್ಷಣ ಇಲಾಖೆ, ಹೈಕೋರ್ಟ್ ವಿಭಾಗೀಯ ಪೀಠದಲ್ಲಿ ಮೇಲ್ಮನವಿ ಸಲ್ಲಿಸಿತ್ತು. ವಿಭಾಗೀಯ ಪೀಠವು ಏಕಸದಸ್ಯ ಪೀಠ ಬೋರ್ಡ್ ಪರೀಕ್ಷೆ ನಡೆಸದಂತೆ ನೀಡಿದ್ದ ತಡೆಯಾಜ್ಞೆಯನ್ನು ತೆರವುಗೊಳಿಸಿತ್ತು.

ರುಪ್ಸಾ ವಿಭಾಗೀಯ ಪೀಠದ ಆದೇಶವನ್ನು ಪ್ರಶ್ನಿಸಿ ಮಾರ್ಚ್ 13ರಂದು ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿತ್ತು. ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ಹೈಕೋರ್ಟ್‌ನಲ್ಲಿ ಮತ್ತೇ ವಿಚಾರಣೆ ನಡೆಸಿ ತೀರ್ಪು ನೀಡುವಂತೆ ಸೂಚಿಸಿತ್ತು. ಶುಕ್ರವಾರ ಬೆಳಗ್ಗೆ ನ್ಯಾಯಮೂರ್ತಿ ಸೋಮಶೇಖರ್ ಹಾಗೂ ನ್ಯಾಯಮೂರ್ತಿ ರಾಜೇಶ್ ರೈ ಅವರನ್ನೊಳಗೊಂಡ ವಿಭಾಗೀಯ ಪೀಠದ ಮುಂದೆ ಸರ್ಕಾರವು, ಈಗಾಗಲೇ 11ನೇ ತರಗತಿಯ ಎಲ್ಲಾ ವಿಷಯಗಳ ಪರೀಕ್ಷೆ ಮುಕ್ತಾಯವಾಗಿದೆ. 8 ಹಾಗೂ 9ನೇ ತರಗತಿಗಳ ತಲಾ 2 ವಿಷಯಗಳ ಪರೀಕ್ಷೆಯೂ ನಡೆದಿವೆ. 5, 8, 9ನೇ ತರಗತಿಯ ಉಳಿದ ಪರೀಕ್ಷೆಗಳನ್ನು ಸೋಮವಾರದಿಂದಲೇ ನಡೆಸಲು ಸರ್ಕಾರ ಸಿದ್ಧವಿದೆ ಎಂದು ತಿಳಿಸಿತು. ರುಪ್ಸಾ ಅರ್ಜಿಯನ್ನು ವಜಾ ಮಾಡಿದ ಹೈಕೋರ್ಟ್ ವಿಭಾಗೀಯ ಪೀಠ ಬೋರ್ಡ್ ಪರೀಕ್ಷೆಗಳನ್ನು ಸರ್ಕಾರ ನಡೆಸಬಹುದು ಹಾಗೂ ಪರೀಕ್ಷೆ ಪ್ರಕ್ರಿಯೆ ಸ್ಥಗಿತಗೊಂಡ ಹಂತದಿಂದಲೇ ಮುಂದುವರಿಯಬೇಕು ಎಂದು ಆದೇಶ ನೀಡಿತು. ಇದರ ಬೆನ್ನಲ್ಲೇ ಸರ್ಕಾರ ಬೋರ್ಡ್ ಪರೀಕ್ಷೆ ವೇಳಾಪಟ್ಟಿ ಪ್ರಕಟಿಸಿದೆ.

ಹಾಗಾಗಿ ವಿಪಕ್ಷಗಳ ಬ್ಯಾಂಕ್ ಖಾತೆ ಸೀಜ್

ಅಸಮಾನತೆ ಇರಬೇಕು. ಜಾತಿ ವ್ಯವಸ್ಥೆ ಗಟ್ಟಿಯಾಗಬೇಕು. ನಿರುದ್ಯೋಗ ಹೆಚ್ಚಾಗಬೇಕು. ರೈತರ ಸಮಸ್ಯೆಗಳಿಗೆ ಪರಿಹಾರ ಸಿಗಬಾರದು. ಈ ಸಮಸ್ಯೆಗಳ ವಿರುದ್ಧ ಕಾಂಗ್ರೆಸ್ ಹೋರಾಟ ನಡೆಸಬಾರದು ಎನ್ನುವ ಮನಸ್ಥಿತಿ ಬಿಜೆಪಿಯದ್ದಾಗಿದೆ. ಇದಕ್ಕಾಗಿ ಕಾಂಗ್ರೆಸ್ ಪಕ್ಷಕ್ಕೆ ಹಣ ಇಲ್ಲದಂತೆ ಮಾಡಲು ಬ್ಯಾಂಕ್ ಖಾತೆಗಳನ್ನು ಸೀಜ್ ಮಾಡಲಾಗಿದೆ ಎಂದರು.

ಪಕ್ಷದ ಕಾರ್ಯಕರ್ತರಿಂದ ಸಂಗ್ರಹಿಸಿದ್ದೆವು : ಇದೇ ಸಂದರ್ಭದಲ್ಲಿ ಮಾತನಾಡಿದ ಶಿವಕುಮಾರ್, ನಾವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕೆಲಸ ಮಾಡುತ್ತಿದ್ದೇವೆ. ನಾವು ರಾಜ್ಯದಲ್ಲಿ 78 ಲಕ್ಷ ಪಕ್ಷದ ಸದಸ್ಯತ್ವ ನೀಡಿ ಪ್ರತಿಯೊಬ್ಬರಿಂದ 10 ರೂ. ಸಂಗ್ರಹಿಸಿ ಎಐಸಿಸಿಗೆ ನೀಡಿದೆವು. ಇನ್ನು ಯುವ ಕಾಂಗ್ರೆಸ್ ಸದಸ್ಯತ್ವದಿಂದ 90 ಕೋಟಿ ಸಂಗ್ರಹವಾಗಿತ್ತು. ವಿಧಾನಸಭೆ ಚುನಾವಣೆ ಸಮಯದಲ್ಲಿ ಟಿಕೆಟ್ ಆಕಾಂಕ್ಷಿಗಳಿಂದ ತಲಾ 2 ಲಕ್ಷ ಸಂಗ್ರಹಿಸಿ ಸುಮಾರು 20 ಕೋಟಿ ಸಂಗ್ರಹಿಸಲಾಯಿತು.

ಈ ಬಾರಿ ಲೋಕಸಭೆ ಚುನಾವಣೆ ಸಮಯದಲ್ಲೂ ದೇಣಿಗೆ ಸಂಗ್ರಹಿಸಲು ಮುಂದಾಗಿದ್ದೆ. ಎಐಸಿಸಿ ನಾಯಕರು ಬೇಡ ಎಂದು ತಿಳಿಸಿದರು. ನಾವು ಪಕ್ಷದ ಕಟ್ಟಡ, ಸಿಬ್ಬಂದಿ ವೇತನ ನೀಡಲು ಪರದಾಡುವ ಸಂದರ್ಭದಲ್ಲಿ ಎಐಸಿಸಿ ಖಾತೆಯಲ್ಲಿನ 290 ಕೋಟಿಯಷ್ಟು ಹಣವನ್ನು ಕೇಂದ್ರ ಸರ್ಕಾರ ಆದಾಯ ತೆರಿಗೆ ಇಲಾಖೆ ಮೂಲಕ ಮುಟ್ಟುಗೋಲು ಹಾಕಿಸಿದ್ದಾರೆ. ನಾವು ನ್ಯಾಯಾಧಿಕರಣಕ್ಕೆ ಹೋದರೂ ನಮಗೆ ನಿರಾಳತೆ ಸಿಗುತ್ತಿಲ್ಲ. ಇಂತಹ ಪರಿಸ್ಥಿತಿಯಲ್ಲಿ ನಾವು ಯಾರ ಬಳಿ ನ್ಯಾಯ ಕೇಳಬೇಕು. ನಮ್ಮದು ವ್ಯವಹಾರಿಕ ಸಂಸ್ಥೆಯಲ್ಲ. ನಮಗೆ ಜನರ ದೇಣಿಗೆ ಮಾತ್ರ ಸಿಗುತ್ತಿದೆ. ನಮಗೆ ಚುನಾವಣಾ ಬಾಂಡ್ ಮೂಲಕ ನಮಗೆ ಸಿಕ್ಕಿರೋದು ಕೇವಲ 11% ಮಾತ್ರ. ಆದರೆ ಬಿಜೆಪಿ ಅವರಿಗೆ 57% ಸಿಕ್ಕಿದೆ. ಇಂದು ಪತ್ರಿಕೆಗಳಲ್ಲಿ ಯಾರು ಯಾರಿಗೆ ಎಷ್ಟು ದೇಣಿಗೆ ನೀಡಿದ್ದಾರೆ ಎಂಬ ಮಾಹಿತಿ ಬಹಿರಂಗವಾಗಿದೆ. ನಾವು ಮಾಧ್ಯಮಗಳಲ್ಲಿ ಪಕ್ಷದ ವತಿಯಿಂದ ಜಾಹೀರಾತು ನೀಡಲು ಈಗ ಸಾಧ್ಯವಾಗದ ಪರಿಸ್ಥಿತಿ ಎದುರಾಗಿದೆ. ಖಾತೆಗಳನ್ನು ಮುಟ್ಟುಗೋಲು ಹಾಕಿಕೊಂಡರೆ ವಿರೋಧ ಪಕ್ಷಗಳು ಚುನಾವಣೆ ನಡೆಸುವುದು ಹೇಗೆ? ಎಂದು ಪ್ರಶ್ನಿಸಿದರು.

ಅರವಿಂದ್ ಕೇಜ್ರಿವಾಲ್ 6 ದಿನ ಇಡಿ ವಶಕ್ಕೆ

ಹಾಜರುಪಡಿಸಿ, ಹೆಚ್ಚಿನ ವಿಚಾರಣೆಗಾಗಿ ಆರೋಪಿಯನ್ನು 10 ದಿನ ತಮ್ಮ ವಶಕ್ಕೆ ನೀಡುವಂತೆ ಕೋರಿದರು. ಆರೋಪಿಯ ವಿಚಾರಣೆ ನಡೆಸಿದ ವಿಶೇಷ ನ್ಯಾಯಾಧೀಶೆ ಕಾವೇರಿ ಬವೇಜಾ ಅವರು, ದೆಹಲಿ ಸಿಎಂ ಕೇಜ್ರಿವಾಲ್ ಅವರನ್ನು ಮಾರ್ಚ್ 28ರವರೆಗೆ ಇಡಿ ವಶಕ್ಕೆ ನೀಡಿ ಆದೇಶಿಸಿದ್ದಾರೆ. ಇಡಿ ಪರವಾಗಿ ಎಎಸ್‌ಜಿ ಎಸ್‌ವಿ ರಾಜು ಅವರು ವಾದ ಮಂಡಿಸಿದರೆ, ಕೇಜ್ರಿವಾಲ್ ಅವರ ಪರವಾಗಿ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ಅವರು ವಾದ ಮಂಡಿಸಿದರು.

ಈಗ ರದ್ದಾದ ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ ದೆಹಲಿ ಮುಖ್ಯಮಂತ್ರಿಯನ್ನು ಬಂಧಿಸಿದೆ.

ಎನ್‌ಡಿಎ ಒಕ್ಕೂಟ ಅಧಿಕಾರದಿಂದ ದೂರವಿಡಲು ಕರಪತ್ರ ಚಳವಳಿ

ಮತದಾರರನ್ನು ಭೇಟಿ ಮಾಡಿ ಬಿಜೆಪಿಗೆ ಮತ ಹಾಕದಂತೆ ಮನವಿ: ರೈತ ಸಂಘ

ಮೈಸೂರು, ಮಾ.22(ಜಿಎ)–ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ ಒಕ್ಕೂಟ ಅಧಿಕಾರಕ್ಕೆ ಬರುವುದನ್ನು ತಡೆಯಲು ರೈತ, ಕಾರ್ಮಿಕ ಮಹಾ ಪಂಚಾಯತ್ ವತಿಯಿಂದ ಕರಪತ್ರ ಚಳುವಳಿ ಮತ್ತು ಮತದಾರರ ಭೇಟಿ ಮೊದಲಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಇದರಲ್ಲಿ ರಾಜ್ಯ ರೈತ ಸಂಘವೂ ಪಾಲ್ಗೊಳ್ಳಲಿದೆ ಎಂದು ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ರಾಜ್ಯ ವಿಧಾನಸಭಾ ಚುನಾವಣೆ ವೇಳೆ ರೈತ, ದಲಿತ, ಕಾರ್ಮಿಕ, ಮಹಿಳಾ, ಯುವಜನ ಮೊದಲಾದ ಸಂಘಟನೆಗಳು ಶ್ರಮಿಸಿದ ಫಲವಾಗಿ ಬಿಜೆಪಿಯನ್ನು ಅಧಿಕಾರದಿಂದ ಇಳಿಸಲಾಯಿತು. ಈಗಲೂ ಇದೇ ಪ್ರಯತ್ನ ಮತ್ತಷ್ಟು ವಿಸ್ತಾರವಾಗಿ ಮಾಡಲಾಗುತ್ತಿದ್ದು, ಕಳೆದ 10 ವರ್ಷಗಳ ಮೋದಿ ಆಡಳಿತ ರೈತ, ಕಾರ್ಮಿಕ, ಜನಸಾಮಾನ್ಯರ ನೆಮ್ಮದಿಗೆ ಭಂಗ ತಂದಿದೆ ಎಂದರು. ಬಿಜೆಪಿ ಅವಧಿಯಲ್ಲಿ ಸುಮಾರು ಒಂದು ಲಕ್ಷ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೋದಿ ಸರ್ಕಾರ ಮಾತಿಗೆ ತಪ್ಪಿದೆ. ವಿದ್ಯುಚ್ಛಕ್ತಿ ಕಾಯ್ದೆ ತಿದ್ದುಪಡಿಯನ್ನು ರೈತ ಮುಖಂಡರ ಒಪ್ಪಿಗೆ ಇಲ್ಲದೇ ಸಂಸತ್‌ನಲ್ಲಿ ಮಂಡಿಸಲಾಗಿದೆ. ರೈತರ ಆದಾಯವನ್ನು ದ್ವಿಗುಣಗೊಳಿಸುವುದಾಗಿ ಹೇಳಿದ್ದರಾದರೂ ಅದು ಈಡೇರಿಲ್ಲ. ಕೇವಲ ಉತ್ಪಾದನಾ ವೆಚ್ಚ ದ್ವಿಗುಣಗೊಂಡಿದೆ. ರೈತರ ಸಾಲ ಮನ್ನಾ ಮಾಡುವುದಾಗಿ ಭರವಸೆ ನೀಡಿದ್ದರೂ, ಇದಕ್ಕಾಗಿ ಯೋಜನೆ ರೂಪಿಸಿಲ್ಲ. ಕೇವಲ ಕಾರ್ಪೊರೇಟ್ ಕಂಪನಿಗಳ ಸಾಲ ಮಾತ್ರ ಮನ್ನಾ ಮಾಡಲಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಬಾಗಲಕೋಟೆ, ಉತ್ತರ ಕನ್ನಡ ಮತ್ತು ಕೆಲವು ಕ್ಷೇತ್ರಗಳಲ್ಲಿ ರೈತ ಸಂಘದ ಮುಖಂಡರು ಸ್ಪರ್ಧಿಸಲು ನಿರ್ಧರಿಸಿದ್ದಾರೆ. ಕಾಲಾವಕಾಶ ಇಲ್ಲದ ಕಾರಣ ಮೈಸೂರು– ಕೊಡಗು ಲೋಕಸಭಾ ಕ್ಷೇತ್ರದಿಂದ ತಾವು ಸ್ಪರ್ಧಿಸುತ್ತಿಲ್ಲ. ಇನ್ನು, ರೈತ ಸಂಘ ಇಂತಹ ಪಕ್ಷಕ್ಕೇ ಮತ ಹಾಕುವಂತೆ ಮನವಿ ಮಾಡುವುದಿಲ್ಲ. ಕೇವಲ ಬಿಜೆಪಿಗೆ ಮಾತ್ರ ಹಾಕಬೇಡಿ ಎಂದು ಮನವಿ ಮಾಡುತ್ತೇವೆ ಎಂದರು. ಸುದ್ದಿಗೋಷ್ಠಿಯಲ್ಲಿ ಹೊಸಕೋಟೆ ಬಸವರಾಜು, ಪ್ರಸನ್ನ ಎನ್.ಗೌಡ, ಪಿ. ಮರಂಕಯ್ಯ, ನಾಗನಳ್ಳಿ ವಿಜೇಂದ್ರ ಉಪಸ್ಥಿತರಿದ್ದರು.

ವಿಶ್ವ ಜಲ ದಿನಾಚರಣೆ: ಹೋಟೆಲ್‌ಗಳಲ್ಲಿ ನೀರಿನ ಮಿತ ಬಳಕೆ ಸಂಬಂಧ ಜಾಗೃತಿ

ಅಮೃತ ಸ್ವರೂಪ ನೀರು ಜೀವ ಸಂಕುಲಕ್ಕೆ ಆಧಾರ: ನಾರಾಯಣಗೌಡ



ಮೈಸೂರು, ಮಾ. 22– ಜೀವ ಜಲವಾಗಿರುವ ನೀರು ಪ್ರಕೃತಿಯು ಮನುಷ್ಯ ಹಾಗೂ ಪ್ರಾಣಿ ಪಕ್ಷಿಗಳಿಗೆ ನೀಡಿದ ವರ. ಇದು ನೈಸರ್ಗಿಕ ಸಂಪತ್ತು. ನೀರಿಗೆ ನೀರೇ ಪರ್ಯಾಯ. ಮಳೆ ಇದಕ್ಕೆ ಮೂಲಾಧಾರ. ಅಮೃತ ಸ್ವರೂಪದ ನೀರು ಜೀವ ಸಂಕುಲಕ್ಕೆ ಆಧಾರ ಎಂದು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಹೇಳಿದರು.

ನಗರದ ಚಾಮುಂಡಿಪುರಂನಲ್ಲಿರುವ ಅಪೂರ್ವ ಹೋಟೆಲ್ ಆವರಣದಲ್ಲಿ ಅಪೂರ್ವ ಸ್ನೇಹ ಬಳಗ ಹಾಗೂ ಅರಿವು ಸಂಸ್ಥೆ ವತಿಯಿಂದ ವಿಶ್ವ ಜಲ ದಿನದ ಅಂಗವಾಗಿ ಹೋಟೆಲ್‌ಗಳಲ್ಲಿ ಗ್ರಾಹಕರು ನೀರನ್ನು ಹಿತಮಿತವಾಗಿ ಬಳಸುವ ಮೂಲಕ ನೀರನ್ನು ಸಂರಕ್ಷಿಸಬೇಕೆಂದು ಮನವಿ ಮಾಡಿದರು ನೀರಿನ ಮಹತ್ವದ ಜಾಗೃತಿಯುಳ್ಳ ಕರಪತ್ರವನ್ನು ಅಂಟಿಸಿ ಗ್ರಾಹಕರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ನೀರಿನ ಮಹತ್ವ ಮೂಡಿಸಬೇಕಾದದ್ದು ಹೋಟೆಲ್‌ಗಳ ಹೊಣೆಗಾರಿಕೆಯೂ ಹೌದು. ದರ ಪಟ್ಟಿಯನ್ನು ಪ್ರಕಟಿಸಿದಂತೆ ನೀರಿನ ಮಹತ್ವದ ಬಗ್ಗೆ ಅರಿವು ಮೂಡಿಸುವತ್ತ ಹೋಟೆಲ್‌ಗಳು ಹೆಜ್ಜೆ ಇಡಬೇಕಾಗಿದೆ. ಗ್ರಾಹಕರು ಏನಾದರೂ ಅಂದುಕೊಳ್ಳಲಿ. ಆದರೆ ನೀರನ್ನು ಮಿತವಾಗಿ ಬಳಸಿ ಎಂಬಂತಹ ಜಾಗೃತಿಯ ಬರಹಗಳು ಹೋಟೆಲ್ ಗೋಡೆಗಳಲ್ಲಿ ಕಾಣಿಸುವಂತೆ ಪ್ರಕಟಿಸುವುದು ಒಳಿತು. ನೀರಿನ ತೀವ್ರತೆಯ ಬಗ್ಗೆ ಗಮನ ಸೆಳೆಯುವ ನಿಟ್ಟಿನಲ್ಲಿ ನೀರಿನ ಮಹತ್ವವಾದ ಜಾಗೃತಿಯ ಪೋಸ್ಟರ್‌ಗಳನ್ನು ಅಂಟಿಸಿ ಇನ್ನು ಹೆಚ್ಚು ಗ್ರಾಹಕರಿಗೆ ಜಾಗೃತಿ ಮೂಡಿಸಲು ಮುಂದಾಗೋಣ ಎಂದು ಹೇಳಿದರು.

ಅಪೂರ್ವ ಸ್ನೇಹ ಬಳಗದ ಅಧ್ಯಕ್ಷರಾದ ಅಪೂರ್ವ ಸುರೇಶ್, ಸಾಮಾಜಿಕ ಹೋರಾಟಗಾರ ವಿಕ್ರಂ ಅಯ್ಯಂಗಾರ್, ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮೈಸೂರು ಘಟಕದ ಅಧ್ಯಕ್ಷ ಚಂದ್ರಶೇಖರ್, ಪ್ರಸಾದ್ ಜೆಟ್ಟಿ ಸುರೇಶ್ ಗೋಲ್ಡ್, ಸಂದೀಪ್, ಧರ್ಮೇಂದ್ರ, ನಾಗೇಶ್, ಶ್ರೀಕಾಂತ್ ಕಶ್ಯಪ್, ದಯಾನಂದ್, ಹಾಗೂ ಇನ್ನಿತರರು ಹಾಜರಿದ್ದರು.

ಚರ್ಮದ ಆರೈಕೆ ಕುರಿತು ಜಾಗೃತಿ ಕಾರ್ಯಕ್ರಮ



ಮೈಸೂರು, ಮಾ. 22– ಮೈಸೂರಿನ ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಕಾಲೇಜಿನಲ್ಲಿ ಆರೋಗ್ಯ, ನೈರ್ಮಲ್ಯ ಮತ್ತು ಕ್ಷೇಮ ಕೇಂದ್ರದ ವತಿಯಿಂದ 'ಚರ್ಮದ ಆರೈಕೆ' ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಪ್ಲಾಸ್ಟಿಕ್ ಮತ್ತು ಕಾಸ್ಮೆಟಿಕ್ ಸರ್ಜನ್ ಮತ್ತು ಸಂಪನ್ಮೂಲ ವ್ಯಕ್ತಿ ಡಾ. ಧಾರಿಣಿ ಶಹಾಂಕ್ ಮಾತನಾಡುತ್ತಾ, ಚರ್ಮದ ವಿವಿಧ ಪದರಗಳು ಮತ್ತು ಅದರ ಪಾತ್ರದ ಬಗ್ಗೆ ವಿವರಿಸಿದರು. ನಿಯಮಿತ ಶುಚಿಗೊಳಿಸುವಿಕೆಯಿಂದ ಕೊಳಕು, ಎಣ್ಣೆ ಮತ್ತು ಕಲ್ಮಶಗಳನ್ನು ತೆಗೆದುಹಾಕಬಹುದು. ರಂಧ್ರಗಳ ದಟ್ಟಣೆಯನ್ನು ತಡೆಗಟ್ಟುವುದು ಹಾಗೂ ಮೊಡವೆಗಳ ಪ್ರಭಾವದ ಬಗ್ಗೆ ವಿವರಿಸಿದರು.

ಯುವಿ ಕಿರಣಗಳು ಅಕಾಲಿಕ ವಯಸ್ಸಾಗುವಿಕೆ ಮತ್ತು ಚರ್ಮದ ಹಾನಿಯನ್ನು ಉಂಟುಮಾಡುತ್ತದೆ. ಆದ್ದರಿಂದ ಸಾಕಷ್ಟು ಎಸ್‌ಪಿಎಫ್ ಇರುವ ಸನ್‌ಸ್ಕ್ರೀನ್ ಬಳಸುವುದು ಅನಿವಾರ್ಯವಾಗಿದೆ. ಜೀವಸತ್ವಗಳು, ಖನಿಜಗಳು ಮತ್ತು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿರುವ ಸಮತೋಲಿತ ಆಹಾರವನ್ನು ಸೇವಿಸಬೇಕು. ಇಂಥಹ ಆಹಾರಗಳು ಆರೋಗ್ಯಕರ ಚರ್ಮಕ್ಕೆ ಸಹಕಾರಿಯಾಗಿದೆ ಹಾಗೂ ಶುಷ್ಕತೆಯನ್ನು ತಡೆಗಟ್ಟಲು ಚರ್ಮವನ್ನು ಹೈಡ್ರೀಕರಿಸಬೇಕು ಎಂದು ತಿಳಿಸಿದರು. ಕೂದಲು ಉದುರುವಿಕೆ ಮತ್ತು ಚರ್ಮಕ್ಕೆ ಸಂಬಂಧಿಸಿದ ಸಮಸ್ಯೆಗಳು ಸಂಕೀರ್ಣವಾದ ಪರಸ್ಪರ ಸಂಪರ್ಕಗಳನ್ನು ಹಂಚಿಕೊಳ್ಳುತ್ತವೆ. ವಿವಿಧ ಆಂತರಿಕ ಮತ್ತು ಬಾಹ್ಯ ಅಂಶಗಳಿಂದ ಪ್ರಭಾವಿತವಾಗಿರುತ್ತದೆ. ತ್ವರಿತವಾಗಿ ಔಷಧೀಯ ಚಿಕಿತ್ಸೆ ನೀಡುವುದರಿಂದ ಉರಿಯೂತ, ತುರಿಕೆ ಮತ್ತು ಕೂದಲು ಉದುರುವಿಕೆಯನ್ನು ಕಡಿಮೆ ಮಾಡುತ್ತದೆ.

ವೃತ್ತಿಪರ ಮೌಲ್ಯಮಾಪನ ಮತ್ತು ವೈಯಕ್ತಿಕಗೊಳಿಸಿದ ಚಿಕಿತ್ಸಾ ಯೋಜನೆಗಳಿಗಾಗಿ ಚರ್ಮರೋಗ ತಜ್ಞರು ಅಥವಾ ಟ್ರೈಕೊಲಾಜಿಸ್ಟ್‌ಗಳನ್ನು ಸಂಪರ್ಕಿಸುವುದು ಅತ್ಯವಶ್ಯಕ. ಪಿಆರ್‌ಪಿ ಅಥವಾ ಲೇಸರ್ ಚಿಕಿತ್ಸೆಗಳಂತಹ ಸುಧಾರಿತ ಚಿಕಿತ್ಸೆಗಳನ್ನು ಬಳಸಿ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ.ಬಿ.ಆರ್. ಜಯಕುಮಾರಿ ವಹಿಸಿದ್ದರು. ಕ್ಷೇಮ ಕೇಂದ್ರದ ಸಂಚಾಲಕಿ ಡಾ.ಎಸ್.ಪೂರ್ಣಿಮಾ ಸ್ವಾಗತಿಸಿದರು. ಕ್ಷೇಮ ಕೇಂದ್ರದ ಸಹ ಸಂಚಾಲಕಿ ಶ್ರೀಮತಿ ರಮ್ಯ.ವಿ ಸೇರಿದಂತೆ ಅಧ್ಯಾಪಕರು ಮತ್ತು ಅಧ್ಯಾಪಕೇತರರು ಹಾಗೂ ಸುಮಾರು 90ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸಮರ್ಥನಂ ಸಂಸ್ಥೆಯಿಂದ ಸರ್ಕಾರಿ ಅಂಧರ ಶಾಲೆಗೆ ಕಂಪ್ಯೂಟರ್ ಲ್ಯಾಬ್ ಕೊಡುಗೆ



ಮೈಸೂರು, ಮಾ. 22– ಸಮರ್ಥನಂ ಅಂಗವಿಕಲರ ಸಂಸ್ಥೆಯು ಸಿಗ್ನಿಫೈ ಕಂಪನಿಯ ಸಹಾಯದೊಂದಿಗೆ ಜಗ್ ಮಗ್ ಪಾಠಶಾಲಾ ಸಿ.ಎಸ್.ಆರ್ ಯೋಜನೆಯಡಿಯಲ್ಲಿ ಮೈಸೂರಿನ ಸರ್ಕಾರಿ ಅಂಧರ ಮಕ್ಕಳ ಪಾಠಶಾಲೆಗೆ ಕಂಪ್ಯೂಟರ್ ಲ್ಯಾಬ್ ಅನ್ನು ಕೊಡುಗೆಯಾಗಿ ನೀಡಲಾಯಿತು.

ಸರ್ಕಾರಿ ಅಂಧರ ಶಾಲೆಯಲ್ಲಿ ಕಂಪ್ಯೂಟರ್ ಲ್ಯಾಬ್ ಉದ್ಘಾಟನೆಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಡಿ.ಮೋಹನ್, ರಮಣ ಮನ್ನಾರ್ಸ್, ಸಮರ್ಥನ ಸಂಸ್ಥೆಯ ಮುಖ್ಯಸ್ಥ ಶಿವರಾಂ ದೇಶಪಾಂಡೆ, ಶಾಲೆಯ ಅಧೀಕ್ಷಕರಾದ ಸತೀಶ ಕ್ಯಾತನಹಳ್ಳಿ, ಸಿಗ್ನಿಫೈ ಕಂಪನಿಯ ಇಮ್ರಾನ್ ಖಾನ್, ಸಮರ್ಥನಂ ಸಂಸ್ಥೆಯ ಮೈಸೂರು ವಿಭಾಗೀಯ ಸಂಯೋಜಕ ಶಿವರಾಜು ಸೇರಿದಂತೆ ಸಾಮೂಹಿಕವಾಗಿ ಟೇಪ್ ಕತ್ತರಿಸುವ ಮೂಲಕ ಉದ್ಘಾಟಿಸಿದರು.

ಈ ವೇಳೆ ಮೈಸೂರು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಡಿ.ಮೋಹನ್ ಮಾತನಾಡಿ, ವಿಕಲಚೇತನರು ತಂತ್ರಜ್ಞಾನದ ಬಗ್ಗೆ ಹೆಚ್ಚು ತಿಳಿದುಕೊಂಡು ಅದನ್ನು ಸರಿಯಾದ ರೀತಿಯಲ್ಲಿ ಬಳಕೆ ಮಾಡಬೇಕು. ತಂತ್ರಜ್ಞಾನ ವಿಕಲಚೇತನರ ಶೈಕ್ಷಣಿಕ ವೃದ್ಧಿಗೆ ಸಹಕಾರಿಯಾಗುತ್ತದೆ ಇದರ ಬಳಕೆ ಎಲ್ಲರಿಗೂ ದೊರಕಬೇಕು ಎಂದರು. ಸಮರ್ಥನಂ ಸಂಸ್ಥೆಯ ಮುಖ್ಯಸ್ಥ ಶಿವರಾಂ ದೇಶಪಾಂಡೆ ಮಾತನಾಡಿ, ಸಮರ್ಥನಂ ಅಂಗವಿಕಲರ ಸಂಸ್ಥೆಯು ದೇಶಾದ್ಯಂತ 16 ಅಂಧ ಶಾಲೆಗಳಿಗೆ ಕಂಪ್ಯೂಟರ್ ಲ್ಯಾಬ್ ಅನುಷ್ಠಾನ ಮಾಡಲಾಗಿದೆ. ದೇಶಾದ್ಯಂತ 10 ಸಾವಿರಕ್ಕಿಂತ ಹೆಚ್ಚು ಉನ್ನತ ಶಿಕ್ಷಣ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ವಸತಿ ಯೋಜನೆ, ಸಾಧನ ಸಲಕರಣೆಗಳನ್ನು ನೀಡಿ ಅವರ ಉನ್ನತ ಶಿಕ್ಷಣಕ್ಕೆ ನೆರವು ನೀಡುತ್ತಿದೆ. ಅಲ್ಲದೆ ದೃಷ್ಟಿ ವಿಕಲಚೇತನರ ಮತ್ತು ಅವಕಾಶ ವಂಚಿತರ ಅಭಿವೃದ್ಧಿಗೆ ತಾರತಮ್ಯ ರಹಿತ ಅವಕಾಶಗಳನ್ನು ಒದಗಿಸುವ ಕ್ರೋಢೀಕೃತ ಸಮಾಜವನ್ನು ಸೃಷ್ಟಿಸುವ ನಿಟ್ಟಿನಲ್ಲಿ ಸಂಸ್ಥೆ ಪ್ರಮುಖ ಪಾತ್ರವನ್ನು ನಿರ್ವಹಿಸುತ್ತದೆ ಎಂದರು. ಮನ್ನಾರ್ ಗ್ರೂಪ್ಸ್ ಮಾಲೀಕ ರಮಣ ಮನ್ನಾರ್ಸ್ ಮಾತನಾಡಿ, ಸರ್ಕಾರ ಅಥವಾ ಸರ್ಕಾರೇತರ ಸಂಸ್ಥೆಗಳು ನೀಡುವ ಯೋಜನೆ ಅಥವಾ ಸೌಲಭ್ಯಗಳನ್ನು ಸರಿಯಾದ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಅಂಧರ ಶಾಲೆಯ ಅಧೀಕ್ಷಕ ಸತೀಶ್ ಕ್ಯಾತನಹಳ್ಳಿ, ದಿನೇ ದಿನೆ ಬೆಳೆಯುತ್ತಿರುವ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿಕಲಚೇತನರು ತಮ್ಮಲ್ಲಿರುವ ಪ್ರತಿಭೆ, ಸಾಮರ್ಥ್ಯ ಬಳಸಿಕೊಂಡು ಬದುಕಿನಲ್ಲಿ ಸಾಧನೆ ಮಾಡಬೇಕು ಎಂದರು. ಸಮರ್ಥನಂ ಸಂಸ್ಥೆಯ ಮೈಸೂರು ವಿಭಾಗದ ಸಂಯೋಜಕ ಶಿವರಾಜು, ಸದರನ್ ಸ್ಟಾರ್ ಕಂಟ್ರಕ್ಷನ್‌ನ ಭರತ್, ಶ್ರೀಲೀಲಾ, ಭ್ರಮರಾಂಭ, ಪದ್ಮ, ಬೃಂದಾ ಬಾಯಿ, ಶಿಕ್ಷರಾದ ಅರುಣ್ ಕುಮಾರ್ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

23.3.2024 ಶನಿವಾರ, ಮಳೆ ನಕ್ಷತ್ರ: ಉತ್ತರಾಭಾದ್ರ 17.03.2024ರಿಂದ 30.03.2024
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಪಾಲ್ಗುಣ ಮಾಸ, ಶುಕ್ಲ ಪಕ್ಷ, ತಿಥಿ: ತ್ರಯೋದಶಿ, ನಕ್ಷತ್ರ: ಪುಬ್ಬ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ರವರೆಗೆ.

■ **ಜೆಎಸ್‌ಎಸ್ ಕಾನೂನು ಕಾಲೇಜು, ಸುರಾನ ಮತ್ತು ಸುರಾನ ಅಂತರರಾಷ್ಟ್ರೀಯ ಅಟಾರ್ನಿ :** 21ನೇ ರಾಷ್ಟ್ರೀಯ ಅಣುಕು ನ್ಯಾಯಾಲಯ ಸ್ಪರ್ಧೆ, ಉದ್ಘಾಟನೆ: ಭೂಪಾಲ್‌ನ ರಾಷ್ಟ್ರೀಯ ಕಾನೂನು ಶಾಲೆ ಉಪಕುಲಪತಿ ಪ್ರೊ. ಎಸ್.ಸೂರ್ಯಪ್ರಕಾಶ್, ಅಧ್ಯಕ್ಷತೆ: ಭೂಪಾಲ್‌ನ ರಾಷ್ಟ್ರೀಯ ಕಾನೂನು ಶಾಲೆ ವಿಶ್ರಾಂತ ಉಪಕುಲಪತಿ ಡಾ.ವಿ.ವಿಜಯಕುಮಾರ್, ಉಪಸ್ಥಿತರು: ಜೆಎಸ್‌ಎಸ್‌ಎಲ್‌ಸಿ ಮುಖ್ಯ ಕಾರ್ಯನಿರ್ವಾಹಕ ಪ್ರೊ. ಕೆ.ಎಸ್. ಸುರೇಶ್, ಪ್ರೀತಮ್ ಸುರಾನ, ಜೆಎಸ್‌ಎಸ್ ಕಾನೂನು ಕಾಲೇಜು ಪ್ರಿನ್ಸಿಪಾಲ್ ಡಾ. ಎಸ್. ನಟರಾಜು, ಸ್ಥಳ: ಜೆಎಸ್‌ಎಸ್ ಕಾನೂನು ಕಾಲೇಜು, ಸರಸ್ವತಿಪುರಂ, ಬೆಳಗ್ಗೆ 9.30ಕ್ಕೆ

■ **ಕಲ್ಪತರು ಚಾರಿಟೆಬಲ್ ಟ್ರಸ್ಟ್, ಮೈಸೂರು ವಿಶ್ವವಿದ್ಯಾನಿಲಯ ಮುದ್ರಣಾಲಯ ನೌಕರರು, ಮಾನಸಗಂಗೋತ್ರಿ :** ಮೈಸೂರು ವಿಶ್ವವಿದ್ಯಾನಿಲಯ ಮುದ್ರಣಾಲಯ ಮೇಲ್ವಿಚಾರಕ ಪುರುಷೋತ್ತಮ ಅವರಿಗೆ ಬೀಳ್ಕೊಡುಗೆ ಸಮಾರಂಭ, ಉದ್ಘಾಟನೆ : ಮಧುಮೇಹ ತಜ್ಞ ಡಾ. ವಿ. ಲಕ್ಷ್ಮೀನಾರಾಯಣ್, ಆಶಯ ನುಡಿ : ಕರ್ನಾಟಕ ವಸತಿ ಶಿಕ್ಷಣ ಶಾಲೆಗಳ ಸಂಘದ ಸಲಹೆಗಾರ ಡಾ. ಎಸ್. ತುಕಾರಾಮ್, ಮುಖ್ಯ ಅತಿಥಿಗಳು : ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ವಿಶ್ರಾಂತ ಪ್ರಾಧ್ಯಾಪಕ ಪ್ರೊ. ಸಿ. ನಾಗಣ್ಣ, ಹಿರಿಯ ಪ್ರಾಧ್ಯಾಪಕ ಪ್ರೊ. ಎನ್. ಚಿನ್ನಸ್ವಾಮಿ ಸೋಸಲೆ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಗೌರವ ಸಮರ್ಪಣೆ : ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ. ಎಂ. ಮಾದಯ್ಯ, ಉಪಸ್ಥಿತರು : ಮೈಸೂರು ವಿಶ್ವವಿದ್ಯಾನಿಲಯ ಮುದ್ರಣಾಲಯ ನಿರ್ದೇಶಕ ಎಸ್. ಸತೀಶ್, ಅಧ್ಯಕ್ಷತೆ : ಕಲ್ಪತರು ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಡಾ. ಅಮ್ಮಸಂದ್ರ ಸುರೇಶ್, ಸ್ಥಳ: ಕುತ್ತೆತ್ತೂರು ಸೀತಾರಾಮರಾವ್ ಭವನ, 1ನೇ ಮುಖ್ಯ ರಸ್ತೆ, ಕೃಷ್ಣಮೂರ್ತಿಪುರಂ, ಬೆಳಗ್ಗೆ 10.30ಕ್ಕೆ.

■ **ವ್ಯವಸ್ಥಾಪಕರು :** ಡಾ. ಐಸಾಕ್ ರಾಜರತ್ನಂ ಬರೆದಿರುವ ಯಶಸ್ಸಿನ ಹೆಜ್ಜೆಗಳು (ಕನ್ನಡ) ಮತ್ತು ಆರ್ಗನೈಜೇಷನ್ ಕಲ್ಚರ್ (ಇಂಗ್ಲಿಷ್) ಪುಸ್ತಕಗಳ ಬಿಡುಗಡೆ ಸಮಾರಂಭ, ಸ್ಥಳ: ದೀನರ ಮಾತೆ ದೇವಾಲಯ, ಬನ್ನಿಮಂಟಪ, ಬೆಳಗ್ಗೆ 11ಕ್ಕೆ.

■ **ಜೆಎಸ್‌ಎಸ್ ಶುಶ್ರೂಷ ಶಾಲೆ:** 36ನೇ ಸಾಲಿನ ಜಿಎನ್‌ಎಂ ವಿದ್ಯಾರ್ಥಿಗಳ ಪ್ರತಿಜ್ಞಾವಿಧಿ ಸ್ವೀಕಾರ ಸಮಾರಂಭ, ಮುಖ್ಯ ಅತಿಥಿಗಳು: ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಉಪನಿರ್ದೇಶಕ ಡಾ. ಎಸ್.ಟಿ. ಶ್ರೀನಿವಾಸಮೂರ್ತಿ, ಅಧ್ಯಕ್ಷತೆ: ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್. ಮಹೇಶ್, ಅತಿಥಿಗಳು: ಜೆಎಸ್‌ಎಸ್ ವೈದ್ಯಕೀಯ ಅಧೀಕ್ಷಕ ಡಾ.ಸಿ.ಪಿ.ಮಧು, ಶುಶ್ರೂಷ ಸೇವೆಗಳ ಮುಖ್ಯಾಧಿಕಾರಿ ಜೆನೆಟ್ ಮತಾಯಸ್, ಸ್ಥಳ: ಶ್ರೀ ರಾಜೇಂದ್ರ ಶತಮಾನೋತ್ಸವ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಬೆಳಗ್ಗೆ 11ಕ್ಕೆ.

■ **ಶ್ರೀ ನಟರಾಜ ಮಹಿಳಾ ವಸತಿ ಪ್ರಥಮ ದರ್ಜೆ ಕಾಲೇಜು :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ಸಾನ್ನಿಧ್ಯ : ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರಾದ ಪ್ರೊ. ಧರಣಿದೇವಿ ಮಾಲಗತ್ತಿ, ಮುಖ್ಯ ಅತಿಥಿಗಳು: ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ ನಿರ್ದೇಶಕರಾದ ಡಾ. ಎಂ. ಪುಷ್ಪಾವತಿ, ಸನ್ಮಾನಿತರು : ವಿದ್ವಾಂಸರಾದ ಡಾ. ಭ್ರಮರಾಂಭ ಮಹೇಶ್ವರಿ, ಅಧ್ಯಕ್ಷತೆ : ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 11ಕ್ಕೆ.

■ **ವಿದ್ಯಾರ್ಥಿ, ಯುವಜನ ಮತ್ತು ಮಹಿಳಾ ಸಂಘಟನೆಗಳಾದ ಎಐಡಿಎಸ್‌ಓ, ಎಐಡಿವೈಓ, ಎಐಎಂಎಸ್‌ಎಸ್ ಸಂಘಟನೆಗಳು :** ಭಗತ್ ಸಿಂಗ್ ಮತ್ತು ರಾಜಗುರು ಸುಖದೇವ್‌ರವರ 94ನೇ ಹುತಾತ್ಮ ದಿನಾಚರಣೆ, ಸ್ಥಳ: ರಾಮಸ್ವಾಮಿ ವೃತ್ತ, ಬೆಳಗ್ಗೆ 11ಕ್ಕೆ.

■ **ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್, ಮೈಸೂರು ಜಿಲ್ಲಾ ಸಮಿತಿ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ಉಪಸ್ಥಿತರು : ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆ ರಾಜ್ಯ ಕಾರ್ಯದರ್ಶಿ ದೇವಿ, ಸಿಐಟಿಯು ರಾಜ್ಯ ಕಾರ್ಯದರ್ಶಿ ಸುನಂದಾ, ಸ್ಥಳ: ರೋಟರಿ ಹಾಲ್, ಜೆಎಲ್‌ಬಿ ರಸ್ತೆ, ಬೆಳಗ್ಗೆ 11.30ಕ್ಕೆ.

■ **ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯ :** ಪದವೀಧರರ ದಿನಾಚರಣೆ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ : ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ. ಬೆಟಸೂರ್‌ಮಠ್, ಉಪಸ್ಥಿತರು : ಸಮಕುಲಾಧಿಪತಿಗಳಾದ ಡಾ.ಬಿ.ಸುರೇಶ್ ಮತ್ತು ಡಾ.ಸುರೀಂದರ್ ಸಿಂಗ್, ಮುಖ್ಯ ಅತಿಥಿಗಳು: ಪದ್ಮಶ್ರೀ ಪುರಸ್ಕೃತ ಹಾಗೂ ಮುಂಬಯಿಯ ಲೀಲಾವತಿ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆಯ ಹಿರಿಯ ಸಮಾಲೋಚಕ ಡಾ. ಶಶಾಂಕ್ ಆರ್.ಜೋಶಿ, ಸ್ಥಳ: ಜೆಎಸ್‌ಎಸ್ ವೈದ್ಯಕೀಯ ಸಂಸ್ಥೆಗಳ ಕ್ಯಾಂಪಸ್, ಸಂಜೆ 4 ಗಂಟೆಗೆ

■ **ಇಂಚರ ಮೆಲೋಡಿಸ್ :** ನನ್ನ ಜೀವ ನೀನು–ಅನಂತನಾಗ್ ಮತ್ತು ಶಂಕರ್‌ನಾಗ್‌ರವರ ಚಿತ್ರಗೀತೆಗಳ ಕರೋಕೆ ಗಾಯನ ಕಾರ್ಯಕ್ರಮ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ, ಜೆಎಲ್‌ಬಿ ರಸ್ತೆ, ಸಂಜೆ 5ಕ್ಕೆ.

■ **ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್, ಇನ್ನರ್ ವ್ಹೀಲ್ ಕ್ಲಬ್ ಆಫ್ ಮೈಸೂರು ಐಸಿರಿ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಲಾಫ್ಟರ್ ಯೋಗ ಆಚರಣೆ, ಗೌರವ ಅತಿಥಿಗಳು : ಇಂಟರ್‌ನ್ಯಾಷನಲ್ ಲಾಫ್ಟರ್ ಯೋಗ ತರಬೇತುದಾರರಾದ ಶ್ರೀಮತಿ ರಂಗಲಕ್ಷ್ಮಿ ಶ್ರೀನಿವಾಸ, ಅಧ್ಯಕ್ಷತೆ : ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಅಧ್ಯಕ್ಷ ಡಾ. ಆರ್. ದೀಪು, ಸ್ಥಳ: ಎಸ್.ಪಿ. ಭಟ್ ಹಾಲ್, ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್, ಜೆಎಲ್‌ಬಿ ರಸ್ತೆ, ಸಂಜೆ 5.30ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಮಹೀಪಾಲಾನಂದ ಅವರಿಂದ ಉಪನ್ಯಾಸ, ಸ್ಥಳ: ಆಶ್ರಮದ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ರಂಗಾಯಣ :** ರಂಗಾಯಣದ ರೆಪರ್ಟರಿ ಕಲಾವಿದರಿಂದ ಗೋರ್‌ಮಾಟಿ ನಾಟಕ ಪ್ರದರ್ಶನ, ರಂಗರೂಪ : ಶಿರಗಾನಹಳ್ಳಿ ಶಾಂತನಾಯಕ್, ನಿರ್ದೇಶನ : ಸಿ. ಬಸವಲಿಂಗಯ್ಯ, ಸ್ಥಳ: ಭೂಮಿಗೀತ, ರಂಗಾಯಣ, ಸಂಜೆ 6.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಸಿ.ಎಫ್.ಟಿ.ಆರ್.ಐ ಶೋಧ ಅನುಶೋಧ–ಪ್ರಾಯೋಜಿತ ಕಾರ್ಯಕ್ರಮ, 6.40 ಪದ ಸಂಸ್ಕೃತಿ– ಡಾ. ಕೊರ್ಗಿ ಶಂಕರ ನಾರಾಯಣ ಉಪಾಧ್ಯಾಯ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು–ಅಜಯ್ ವಾರಿಯರ್, 8.30 ವಿಶಿಷ್ಟ ವ್ಯಕ್ತಿ ವಿಶೇಷ ಯತ್ನ–ಭಾಗವಹಿಸುವವರು ರಾಜಮಾತೆ ಶ್ರೀಮತಿ ಪ್ರಮೋದಾ ದೇವಿ ಒಡೆಯರ್, 10.00ಸೀತಾಲಕ್ಷ್ಮಿ ವೆಂಕಟೇಶನ್ – ಹಾಡುಗಾರಿಕೆ

ಮಧ್ಯಾಹ್ನ: 12.35 ದೇವರನಾಮ, 2.45 ಜನಪದ ಸಂಗೀತ, 1.20 ಭಾವಗೀತೆ–ರಶ್ಮಿ ಬಿನು, 3.30 ಮಕ್ಕಳ ಮಂಟಪ–ಮುಖಾಮುಖಿ–ಚಿತ್ರಕಲೆಯ ಬಗ್ಗೆ ತಿಳಿಸುತ್ತಾರೆ ಸತೀಶ್ ಎಸ್.ದಳವಾಯಿ, ಭಾಗವಹಿಸುವ ಮಕ್ಕಳು ಸೋಮಶೇಖರ್ ರಾವ್, ಕೀರ್ತನಾ, 4.00 ನಾಟಕ 'ತ್ಯಾಗ'. ಮೂಲಕಥೆ– ರವೀಂದ್ರನಾಥ್ ಟ್ಯಾಗೋರ್, ಬಾನುಲಿ ರೂಪ– ಅಹೋಬಲ ಶಂಕರ, ನಿರ್ದೇಶನ– ಯಮುನಾಮೂರ್ತಿ, 4.30 ನೆನಪಿನಂಗಳ–ಹೆಸರಾಂತ ಮಹಿಳಾ ಶಿಲ್ಪಿ ಜೆ.ವಿ. ಸುಭಾಷಿಣಿದೇವಿ ಅವರೊಂದಿಗೆ ಎಸ್. ಪುಟ್ಟತಾಯಮ್ಮ ಅವರು ನಡೆಸಿದ್ದ ಸಂವಾದ, 6.50 ಕೃಷಿರಂಗ–ಕಿಸಾನ್ ವಾಣಿ–ಭತ್ತದ ಬೇಸಾಯದಲ್ಲಿ ಯಾಂತ್ರೀಕರಣ ಕುರಿತು ಸಂವಾದ. ಭಾಗವಹಿಸುತ್ತಾರೆ ರೇಖಾ ಬಡಲಿಂಗಪ್ಪನವರ್ ಮತ್ತು ಎಂ. ಲೋಕೇಶ್, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ–ಮೋಹನ್ ಧಾರೇಖರ್ – ಗಾಯನ

ಮೈಸೂರು ಮಿತ್ರ

ಶನಿವಾರ 23 ಮಾರ್ಚ್ 2024

ಕ್ರಿಪ್ಟೊ ಕರೆನ್ಸಿ ಆಮಿಷದಲ್ಲಿ 19.74 ಲಕ್ಷ; ಅಕ್ರಮದ ಬೆದರಿಕೆ ಹಾಕಿ 96 ಸಾವಿರ; ಆಫರ್ ನೀಡಿ 49.93 ಲಕ್ಷ; ವರ್ಕ್ ಫ್ರಂ ಹೋಂ ಆಸೆ ತೋರಿ 6.25 ಲಕ್ಷ ವಂಚನೆ



ಆನ್‌ಲೈನ್‌ನಲ್ಲಿ ನಿತ್ಯವೂ ನಡೆಯುತ್ತಿದೆ ಮೋಸ... ಮೋಸ...

ಮೈಸೂರು, ಮಾ. 22– ಕ್ರಿಪ್ಟೊ ಕರೆನ್ಸಿ ಆಮಿಷ, ಅಕ್ರಮ ಹಣ ವರ್ಗಾವಣೆ ಮಾಡಿರುವ ಬೆದರಿಕೆ ಸೇರಿದಂತೆ ವಿವಿಧ ಕುತಂತ್ರಗಳನ್ನು ಮಾಡಿ ಮೈಸೂರಿನ ನಾಲ್ವರಿಗೆ ಆನ್‌ಲೈನ್ ಮೂಲಕ ಲಕ್ಷಾಂತರ ರೂ. ವಂಚಿಸಲಾಗಿದೆ.

ಸಿದ್ಧಾರ್ಥನಗರದ ಗೃಹಿಣಿ ಎಂ.ಎಸ್. ಇಂದ್ರಮ್ಮ(40) ಅವರು ಟೆಲಿಗ್ರಾಂ ಮೆಸೇಜ್ ನೋಡುತ್ತಿದ್ದಾಗ ಎಕ್ಸ್‌ಪರ್ಟ್ ಟ್ರೇಡ್ ಮೈನರ್ಸ್ ಗ್ರೂಪ್ ಎಂಬ ಮೆಸೇಜ್ ಬಂದ ಹಿನ್ನೆಲೆಯಲ್ಲಿ ಅವರು ಗ್ರೂಪ್ ಅಡ್ಮಿನ್‌ನನ್ನು ಸಂಪರ್ಕ ಮಾಡಿದ್ದಾರೆ. ಈ ವೇಳೆ ಕ್ರಿಪ್ಟೊ ಕರೆನ್ಸಿಯಲ್ಲಿ ಹಣ ಹೂಡಿಕೆ ಮಾಡಿದರೆ 24 ಗಂಟೆಗೆ ಶೇ. 20, 48 ಗಂಟೆಗೆ ಶೇ. 40, 72 ಗಂಟೆಗೆ ಶೇ. 60, 90 ಗಂಟೆಗೆ ಶೇ. 100ರಷ್ಟು ಲಾಭ ಬರುವುದಾಗಿ ಆಮಿಷವೊಡ್ಡಲಾಗಿದೆ. ಇದನ್ನು ನಂಬಿದ ಇಂದ್ರಮ್ಮ 19,74,580 ರೂ. ವರ್ಗಾವಣೆ ಮಾಡಿ ವಂಚನೆಗೊಳಗಾಗಿದ್ದಾರೆ.

ಅಕ್ರಮ ಬೆದರಿಕೆ: ವಿಜಯನಗರ 3ನೇ ಹಂತದ ಬಿ. ಭಾರ್ಗವಿ(31) ಎಂಬುವರಿಗೆ 9922997458 ಸಂಖ್ಯೆಯಿಂದ ಕರೆ ಮಾಡಿದ ವ್ಯಕ್ತಿ ಮುಂಬೈನಲ್ಲಿ 200 ಗ್ರಾಂ ಎಂಡಿಎಂಎ ಮಾದಕ ವಸ್ತು ವಶಪಡಿಸಿಕೊಳ್ಳಲಾಗಿದೆ. ಸೆಂಡರ್ ಡೀಟೈಲ್ಸ್ ಪರಿಶೀಲಿಸಿದಾಗ ನಿಮ್ಮ ಹೆಸರಿದೆ ಎಂದು ಬೆದರಿಸಿ, ತನಿಖೆ ಮಾಡಬೇಕೆಂದು ವಿಡಿಯೋ ಕಾಲ್ ಮಾಡಿದ್ದು ನಿಮ್ಮ ಆಧಾರ್ ಸಂಖ್ಯೆ ಬಳಸಿ ದೆಹಲಿ ಹಾಗೂ ಬಿಹಾರ್‌ನಲ್ಲಿ ಬ್ಯಾಂಕ್ ಖಾತೆಗಳನ್ನು ತೆರೆದಿದ್ದೀರಿ. ಈ ಖಾತೆಗಳ ಮೂಲಕ ಅಕ್ರಮ ಹಣ ವರ್ಗಾವಣೆ ಆಗಿದೆ ಎಂದು ಮತ್ತೊಂದು ಆರೋಪ ಹೊರಿಸಿದ್ದಾರೆ. ಅಲ್ಲದೇ, ಆರ್‌ಬಿಐನಿಂದ ಫೈನಾನ್ಶಿಯಲ್ ತನಿಖೆ ಮಾಡಬೇಕು. ಅದಕ್ಕಾಗಿ 96,100 ರೂ. ಪಾವತಿಸಿ. ನೀವು ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಭಾಗಿಯಾಗಿಲ್ಲ ಎಂಬುದು ದೃಢಪಟ್ಟರೆ ನಿಮ್ಮ ಹಣವನ್ನು ಹಿಂತಿರುಗಿಸಲಾಗುತ್ತದೆ ಎಂದು ತಿಳಿಸಿದ ಮೇರೆಗೆ ಭಾರ್ಗವಿಯವರು 96,100 ರೂ. ವರ್ಗಾವಣೆ ಮಾಡಿ ವಂಚನೆಗೊಳಗಾಗಿದ್ದಾರೆ.

ಆಫರ್ ಆಸೆಗೆ ಬಿದ್ದು ಮೋಸ: ವಿಜಯನಗರ 4ನೇ ಹಂತದ ಬಿ. ಹರಿಪ್ರಸಾತ್ (48) ಎಂಬುವರು ಇನ್‌ಸ್ಟಾಗ್ರಾಂನಲ್ಲಿ ಹಣ ಹೂಡಿಕೆ ಸಂಬಂಧಿಸಿದ ಪೋಸ್ಟ್‌ಗಳನ್ನು ನೋಡುತ್ತಿದ್ದಾಗ ಒಂದು ಪೋಸ್ಟ್‌ನಲ್ಲಿದ್ದ ಆಫರ್ ಅವರಿಗೆ ಇಷ್ಟವಾಗಿದೆ. ಈ ಹಿನ್ನೆಲೆಯಲ್ಲಿ ಸದರಿ ಪೋಸ್ಟ್‌ನ ಮೆಸೇಜ್ ಬಾಕ್ಸ್‌ಗೆ ಅವರು ತಮ್ಮ ಮೊಬೈಲ್ ಸಂಖ್ಯೆ ಮತ್ತು ಇ–ಮೇಲ್ ಐಡಿ ನಮೂದಿಸಿದ್ದಾರೆ. ನಂತರ ಅವರನ್ನು ಸಂಪರ್ಕಿಸಿದ ವಂಚಕರು, ಪ್ರತ್ಯೇಕವಾಗಿ ವಾಟ್ಸಾಪ್ ಗ್ರೂಪ್‌ವೊಂದರಲ್ಲಿ ಅವರನ್ನು ಸೇರಿಸಿ, ಆಕರ್ಷಕ ಆಫರ್‌ಗಳ ಬಗ್ಗೆ ವಿವರಿಸಿದ್ದಾರೆ. ಇದಕ್ಕೆ ಮರುಳಾದ ಹರಿಪ್ರಸಾತ್, 49,93,475 ರೂ. ವರ್ಗಾವಣೆ ಮಾಡಿದ್ದಾರೆ. ಇವರ ಹೂಡಿಕೆಗೆ ದೊಡ್ಡ ಮೊತ್ತದ ಲಾಭ ಬಂದಿದೆ ಎಂದು ಗ್ರೂಪ್‌ನಲ್ಲಿ ತೋರಿಸಲಾಗಿದೆ. ಅದನ್ನು ವಿತ್‌ಡ್ರಾ ಮಾಡಲು ಪ್ರಯತ್ನಿಸಿ ವಿಫಲರಾಗುವ ಮೂಲಕ ವಂಚನೆಗೊಳಗಾಗಿದ್ದಾರೆ.

ಜೆ.ಪಿ.ನಗರದ ಗೃಹಿಣಿ ಸುಷ್ಮಾ ಪ್ರದೀಪ್ (45) ಅವರಿಗೆ ಟೆಲಿಗ್ರಾಂ ಗ್ರೂಪ್ ಮೂಲಕ ವರ್ಕ್ ಫ್ರಂ ಹೋಂ ಲಿಂಕ್ ಅನ್ನು ರವಾನಿಸಲಾಗಿದೆ.

ಹಣ ಹೂಡಿಕೆ ಮಾಡಿ ಟಾಸ್ಕ್ ನಿರ್ವಹಿಸಿದರೆ ಲಾಭ ದೊರೆಯುತ್ತದೆ ಎಂದು ತಿಳಿಸಿದ್ದನ್ನು ನಂಬಿದ ಅವರು, 6,25,075 ರೂ. ವರ್ಗಾವಣೆ ಮಾಡಿ ವಂಚನೆಗೊಳಗಾಗಿದ್ದಾರೆ. ಈ ಎಲ್ಲಾ ಪ್ರಕರಣಗಳು ಮೈಸೂರು ನಗರ ಸೆನ್ ಠಾಣೆಯಲ್ಲಿ ದಾಖಲಾಗಿದೆ.

ನಾಳೆ ಮೈಸೂರಿಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭೇಟಿ



ಮೈಸೂರು, ಮಾ. 22– ಮೈಸೂರು ಚಿಂತಕರ ವೇದಿಕೆ (ಮೈಸೂರು ಥಿಂಕರ್ಸ್ ಫೋರಮ್) ವತಿಯಿಂದ ಕೇಂದ್ರ ಹಣಕಾಸು ಸಚಿವೆ ಶ್ರೀಮತಿ ನಿರ್ಮಲಾ ಸೀತಾರಾಮನ್ ಅವರೊಂದಿಗೆ ಮಾರ್ಚ್ 24ರ ಭಾನುವಾರ ಸಂಜೆ 4 ಗಂಟೆಗೆ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ (ಕೆಎಸ್‌ಒಯು) ಘಟಿಕೋತ್ಸವ ಸಭಾಂಗಣದಲ್ಲಿ ಅನೌಪಚಾರಿಕ ಸಂವಾದವನ್ನು ಆಯೋಜಿಸಲಾಗಿದೆ.

ಸಂವಾದದಲ್ಲಿ ಭಾರತದ ಭವಿಷ್ಯದ ಆರ್ಥಿಕ ಪ್ರಗತಿಯ ನೀಲನಕ್ಷೆಯ ಬಗ್ಗೆ ಅವರು ಕೇಳುಗರೊಂದಿಗೆ ಸಂವಾದ ನಡೆಸಲಿದ್ದಾರೆ. ಆಸಕ್ತರು www.bit.ly/TFMysuru ಕೊಂಡಿಯ ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊ. 99161 56490/ 99010 10990 ಸಂಪರ್ಕಿಸಬಹುದು.

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ ಲೇಟ್ ಜಿ. ವೆಂಕಟಶೆಟ್ಟಿ ರವರ ಮಗ ಶ್ರೀ. ಹೆಚ್. ವಿ. ರಂಗಸ್ವಾಮಿ ಮತ್ತು ಇತರರು, ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತಿನ ಮಾಲೀಕರಾಗಿದ್ದು, ಸದರಿ ಸ್ವತ್ತನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಅಪೇಕ್ಷಿಸಿರುತ್ತಾರೆ. ಅದರಂತೆ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಯಾರಿಗಾದರೂ ಬ್ಯಾಂಕ್ ಮತ್ತು ಹಣಕಾಸು ಸಂಸ್ಥೆಗಳನ್ನು ಒಳಗೊಂಡಂತೆ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ–ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 7 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಬಹುದಾಗಿದೆ. ತಪ್ಪಿದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿಯ ನಂತರ ಬರುವ ಆಕ್ಷೇಪಣೆ, ತಂಟೆ–ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ಜಿಲ್ಲೆ, ಹೆಚ್.ಡಿ. ಕೋಟೆ ತಾಲ್ಲೂಕು, ಕಸಬಾ ಹೋಬಳಿ, ಹೆಬ್ಬಲಗುಪ್ಪೆ ಗ್ರಾಮದ ಸರ್ವೆ ನಂ. 109/1 ರಲ್ಲಿ ವಿಸ್ತೀರ್ಣ 02 ಎಕರೆ 17 ಗುಂಟೆ, ಖಾತೆ ಸಂಖ್ಯೆ. 482, ಆಕಾರ ರೂ. 3–67, ಮತ್ತು ಸರ್ವೆ ನಂ. 109/2 ರಲ್ಲಿ ವಿಸ್ತೀರ್ಣ 02 ಎಕರೆ 16 ಗುಂಟೆ, ಖಾತೆ ಸಂಖ್ಯೆ. 331, ಆಕಾರ ರೂ. 3–63, ಒಟ್ಟು ವಿಸ್ತೀರ್ಣ 04 ಎಕರೆ 33 ಗುಂಟೆ ಉಳ್ಳ ಜಮೀನಿಗೆ ಚೆಕ್ಕುಬಂದಿ: ಪೂರ್ವಕ್ಕೆ: ಕಪಿಲಾ ನದಿ, ಪಶ್ಚಿಮಕ್ಕೆ: ರಸ್ತೆ, ಉತ್ತರಕ್ಕೆ ಸರ್ವೆ ನಂ. 108 ರ ಜಮೀನು ಮತ್ತು ದಕ್ಷಿಣಕ್ಕೆ ಸರ್ವೆ ನಂ. 110 ರ ಜಮೀನು.

ಸಹಿ/– ಶ್ರೀಲತಾ ದೀಕ್ಷಿತ್, ವಕೀಲರು
ಎಸ್‌ಎಲ್‌ಡಿ ಲಾ ಫರ್ಮ್, ನಂ.1458/ಎ,
ನಾರಾಯಣಶಾಸ್ತ್ರಿ ರಸ್ತೆ, , ಸಪ್ನ ಬುಕ್ ಹೌಸ್ ಸಮೀಪ,
ಮೈಸೂರು., ಮೊ: 9844640641
email: sldlawfirm2021@gmail.com

ಮಾಜಿ ಎಂಎಲ್‌ಸಿಗಳಾದ ಮರಿತಿಬ್ಬೇಗೌಡ, ಅಪ್ಪಾಜಿಗೌಡ ಸೇರಿ ಹಲವು ಜೆಡಿಎಸ್ ಮುಖಂಡರು ಕಾಂಗ್ರೆಸ್ ಸೇರ್ಪಡೆ



ಬೆಂಗಳೂರು, ಮಾ.22(ಕೆಎಂಶಿ)– ವಿಧಾನ ಪರಿಷತ್ ಸ್ಥಾನಕ್ಕೆ ರಾಜೀನಾಮೆ ನೀಡಿ ಜೆಡಿಎಸ್ ತೊರೆದ ಮರಿತಿಬ್ಬೇಗೌಡ ನೇತೃತ್ವದಲ್ಲಿ ಅನೇಕ ಕಾರ್ಯಕರ್ತರು ಇಂದು ಕಾಂಗ್ರೆಸ್ ಸೇರ್ಪಡೆಗೊಂಡರು.

ಕೆಪಿಸಿಸಿ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಸೇರಿದಂತೆ ಹಲವು ನಾಯಕರು, ಜೆಡಿಎಸ್ ಮತ್ತು ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಗೊಂಡ ಮಾಜಿ ಎಂಎಲ್‌ಸಿ ಅಪ್ಪಾಜಿಗೌಡ ಸೇರಿದಂತೆ ಮುಖಂಡರು, ಕಾರ್ಯಕರ್ತರನ್ನು ಪಕ್ಷಕ್ಕೆ ಸ್ವಾಗತಿಸಿದರು.

ಬಿಜೆಪಿ ಜತೆ ಜೆಡಿಎಸ್ ಮೈತ್ರಿಯಿಂದ ಅಸಮಾಧಾನಗೊಂಡ ಎರಡೂ ಪಕ್ಷಗಳ ಅನೇಕ ಮಂದಿ ತಮ್ಮ ನಾಯಕರೊಂದಿಗೆ ಕಾಂಗ್ರೆಸ್ ಸೇರಿದರು. ಮಂಡ್ಯ ಜಿಲ್ಲೆಯ ಜೆಡಿಎಸ್ ಕಾರ್ಯಕರ್ತರ ಜೊತೆ ಮಳವಳ್ಳಿ, ಬೆಂಗಳೂರಿನ ರಾಜರಾಜೇಶ್ವರಿ ವಿಧಾನಸಭಾ ಕ್ಷೇತ್ರಗಳ ಜೆಡಿಎಸ್ ಮತ್ತು ವಿವಿಧ ಮೋರ್ಚಾಗಳ ಅನೇಕ ಕಾರ್ಯಕರ್ತರನ್ನು ಕಾಂಗ್ರೆಸ್‌ಗೆ ಬರಮಾಡಿಕೊಳ್ಳಲಾಯಿತು.

ಕಾನೂನು ಬಾಹಿರವಾಗಿ ಮಗು ದತ್ತು ಪ್ರಕರಣ

ರೀಲ್ಸ್ ಸ್ಟಾರ್ ಸೋನುಗೌಡ 4 ದಿನ ಪೊಲೀಸ್ ವಶಕ್ಕೆ



ಬೆಂಗಳೂರು, ಮಾ.22–ಕಾನೂನು ಬಾಹಿರವಾಗಿ ಮಗುವನ್ನು ದತ್ತು ಪಡೆದ ಆರೋಪದ ಮೇಲೆ ಬಂಧನಕ್ಕೊಳಗಾಗಿರುವ ಬಿಗ್ ಬಾಸ್ ಒಟಿಟಿ ಕನ್ನಡ ಸೀಸನ್ 1 ರಿಯಾಲಿಟಿ ಶೋನ ಸ್ಪರ್ಧಿ ಸೋನು ಶ್ರೀನಿವಾಸ್‌ಗೌಡ ಅವರನ್ನು ಶುಕ್ರವಾರ ಕೋರ್ಟ್ ಹೆಚ್ಚಿನ ವಿಚಾರಣೆಗಾಗಿ ನಾಲ್ಕು ದಿನಗಳ ಕಾಲ ಪೊಲೀಸ್ ವಶಕ್ಕೆ ನೀಡಿದೆ.

ಬ್ಯಾಡರಹಳ್ಳಿ ಪೊಲೀಸರು ಇಂದು ಸೋನುಗೌಡ ಅವರನ್ನು ಬೆಂಗಳೂರಿನ ಸಿಜೆಎಂ ಕೋರ್ಟ್‌ಗೆ ಹಾಜರುಪಡಿಸಿದರು. ಮಗು ಪೋಷಕರನ್ನು ರಾಯಚೂರಿಗೆ ಕರೆದುಕೊಂಡು ಹೋಗಿ ಮಹಜರು ಮತ್ತು ಹೇಳಿಕೆ ಪಡೆಯಬೇಕಿದೆ. ಅಪಾರ್ಟ್‌ಮೆಂಟ್‌ನ ಅಕ್ಕಪಕ್ಕದ ಸ್ಥಳೀಯರ ಹೇಳಿಕೆ ಪಡೆಯಬೇಕಿದೆ. ಈ ಉದ್ದೇಶದಿಂದ ನಾಲ್ಕು ದಿನಗಳ ಕಾಲ ತಮ್ಮ ಕಸ್ಟಡಿಗೆ ನೀಡುವಂತೆ ಪೊಲೀಸರು ಮನವಿ ಮಾಡಿದರು. ಪೊಲೀಸರ ಮನವಿಯನ್ನು ಪುರಸ್ಕರಿಸಿದ ಕೋರ್ಟ್, ಆರೋಪಿ ಸೋನುಗೌಡ ಅವರನ್ನು ಮಾರ್ಚ್ 25ರ ವರೆಗೆ ಪೊಲೀಸರ ವಶಕ್ಕೆ ನೀಡಿ ಆದೇಶಿಸಿದೆ.

ಮಗುವನ್ನು ಅನಧಿಕೃತವಾಗಿ ಮನೆಯಲ್ಲಿ ಇಟ್ಟುಕೊಂಡಿದ್ದ ಆರೋಪದ ಮೇಲೆ ಸೋನುಗೌಡ ಅವರನ್ನು ಇಂದು ಬೆಳಗಿನ ಜಾವ ಬ್ಯಾಡರಹಳ್ಳಿ ಪೊಲೀಸರು ಬಂಧಿಸಿದ್ದರು. ಮಕ್ಕಳ ರಕ್ಷಣಾ ಇಲಾಖೆ ಅಧಿಕಾರಿಗಳು ಮತ್ತು ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಸೋನು ಗೌಡರನ್ನು ವಶಕ್ಕೆ ಪಡೆದಿದ್ದರು. ಮಗು ದತ್ತು ಪಡೆದಿರುವುದಾಗಿ ಸೋನುಗೌಡ ಇತ್ತೀಚೆಗೆ ಹೇಳಿಕೊಂಡಿದ್ದರು. 8 ವರ್ಷದ ಮಗುವನ್ನು ಕಾನೂನು ಬಾಹಿರವಾಗಿ ಅವರು ದತ್ತು ಪಡೆದಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿ ರಾಜ್ಯ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಗೀತಾ ದೂರು ನೀಡಿದ್ದರು. ಜೆ.ಜೆ.ಆ್ಯಕ್ಟ್ ಅಡಿ ಬ್ಯಾಡರಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

ಪ್ರಕಟಣೆಗಾಗಿ

ನಮ್ಮ ಕಕ್ಷಿದಾರರಾದ ಮೈಸೂರು ತಾಲ್ಲೂಕು, ಯಡಹಳ್ಳಿ ಗ್ರಾಮದ ರಾಚಪ್ಪ ಎನ್ನುವವರು ಗುರು ಬಿನ್ ರಾಚಪ್ಪ, ಸಹನ ಕೋಂ ಗುರು ಮತ್ತು ಇತರರ ಮೇಲೆ 4ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ ಓ.ಎಸ್. ನಂ.1216/2023 ರಂತೆ ಕೆಳಕಂಡ ಆಸ್ತಿಗಳ ಬಗ್ಗೆ ಭಾಗಕ್ಕಾಗಿ ದಾವೆ ಹೂಡಿದ್ದು ದಾವೆಯು ಇನ್ನೂ ಚಾಲ್ತಿಯಲ್ಲಿರುತ್ತದೆ. ಆದರೆ ದಾವೆಯ ಪ್ರತಿವಾದಿಗಳಾದ ಗುರು ಮತ್ತು ಸಹನ ಎಂಬುವವರು ದಾವೆ ಚಾಲ್ತಿಯಲ್ಲಿರುವುದನ್ನು ಮರೆಮಾಚಿ ಬೇರೆಯವರಿಗೆ ಕ್ರಯ ಮಾಡುತ್ತಿದ್ದಾರೆ ಎಂದು ತಿಳಿದು ಬಂದಿರುತ್ತದೆ. ಯಾವುದೇ ವ್ಯಕ್ತಿಗಳು ಕೆಳಕಂಡ ಷೆಡ್ಯೂಲ್ ಸ್ವತ್ತಿನ ಬಗ್ಗೆ ವ್ಯವಹರಿಸಿದಲ್ಲಿ ವ್ಯವಹಾರವು ಕಾನೂನುಬಾಹಿರವಾಗಿರುತ್ತದೆ ಮತ್ತು ನಮ್ಮ ಕಕ್ಷಿದಾರರನ್ನು ಬದ್ಧಪಡಿಸುವುದಿಲ್ಲ ಎಂದು ಈ ಮೂಲಕ ತಿಳಿಯಪಡಿಸಲಾಗುತ್ತದೆ.

ಷೆಡ್ಯೂಲ್ ಸ್ವತ್ತಿನ ವಿವರ: 1) ತಳೂರು ಗ್ರಾಮ, ಜಯಪುರ ಹೋಬಳಿ, ಮೈಸೂರು ತಾಲ್ಲೂಕು, ಸರ್ವೆ ನಂ.102/5 ರಲ್ಲಿ 1 ಎಕರೆ 18 ಗುಂಟೆ ಜಮೀನು. 2) ತಳೂರು ಗ್ರಾಮ, ಜಯಪುರ ಹೋಬಳಿ, ಮೈಸೂರು ತಾಲ್ಲೂಕು, ಸರ್ವೆ ನಂ. 103/7ರಲ್ಲಿ 1 ಎಕರೆ ಜಮೀನು, 3) ಯಡಹಳ್ಳಿ ಗ್ರಾಮ, ಜಯಪುರ ಹೋಬಳಿ, ಮೈಸೂರು ತಾಲ್ಲೂಕು, ಸರ್ವೆ ನಂ.23/3 ರಲ್ಲಿ 5 ಗುಂಟೆ ಜಮೀನು

Sd/- C.APPAJIGOWDA ,B.Sc. LL.B.
Advocate, No. 1531, 2nd Floor,
N.T.Street, K.R.Mohalla, Mysuru
Ph: 9845244498

ದಿನಾಂಕ: 20.3.2004.

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ವಿವರಿಸಿರುವ ಷೆಡ್ಯೂಲ್ ಸ್ವತ್ತಿನ ಮಾಲೀಕರು, ಷೆಡ್ಯೂಲ್ ಸ್ವತ್ತನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಒಪ್ಪಿರುತ್ತಾರೆ. ಅದರಂತೆ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಯಾರಿಗಾದರೂ, ಬ್ಯಾಂಕ್ / ಹಣಕಾಸು ಸಂಸ್ಥೆ ಒಳಗೊಂ ಡಂತೆ (ಆಕ್ಸಿಸ್ ಬ್ಯಾಂಕ್ ಸಾಲ ಹೊರತುಪಡಿಸಿ) ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ–ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 07 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿ ಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ತಪ್ಪಿದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿ ನಂತರ ಬರುವ ಆಕ್ಷೇಪಣೆ, ತಂಟೆ– ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ನಗರ, ದೇವರಾಜ ಮೊಹಲ್ಲಾ, 4ನೇ ಹಂತ, 2ನೇ ಘಟ್ಟ, ಡಿ. ದೇವರಾಜ ಅರಸು ರಸ್ತೆ ರಲ್ಲಿರುವ ವಾಣಿಜ್ಯ ಮಳಿಗೆ ನಂ. 140,ಇದರಲ್ಲಿರತಕ್ಕ ಕಟ್ಟಡ. ಮಳಿಗೆ ವಿಸ್ತೀರ್ಣ ಪೂರ್ವ–ಪಶ್ಚಿಮ: 20.00 ಅಡಿಗಳು ಮತ್ತು ಉತ್ತರ–ದಕ್ಷಿಣ: 30.00 ಅಡಿಗಳುಳ್ಳ ಸ್ವತ್ತಿಗೆ ಚಕ್ಕುಬಂದಿ: ಪೂರ್ವಕ್ಕೆ– ಮಳಿಗೆ ನಂ. 140/A, ಪಶ್ಚಿಮಕ್ಕೆ– ಮಳಿಗೆ ನಂ. 139/A, ಉತ್ತರಕ್ಕೆ – ಮಹಾರಾಣಿ ಕಾಲೇಜು ಹಾಸ್ಟೆಲ್ ಮತ್ತು ದಕ್ಷಿಣಕ್ಕೆ – ಡಿ. ದೇವರಾಜ ಅರಸು ರಸ್ತೆ.

ಸಹಿ/– ಶ್ರೀಲತಾ ದೀಕ್ಷಿತ್, ವಕೀಲರು, ನಂ. 1458/ಎ,
ಎಸ್‌ಎಲ್‌ಡಿ ಲಾ ಫರ್ಮ್, ನಾರಾಯಣಶಾಸ್ತ್ರಿ ರಸ್ತೆ,
ಸಪ್ನ ಬುಕ್ ಹೌಸ್ ಹತ್ತಿರ, ಮೈಸೂರು.
ಮೊ: 9844640641
email: sldlawfirm2021@gmail.com

ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ನಕ್ಕರೆ ಅದೇ ಸ್ವರ್ಗ

ಮಾಸ್ಟರ್ : ಹೋಮ್ ವರ್ಕ್ ಮಾಡಿದ್ದೀಯಾ ಜಲಜಾ?
ಜಲಜ : ಹೌದೂ ಸಾರ್
ಮಾಸ್ಟರ್ : ಸರಿ ತಗೊಂಡು ಬಾ
ಜಲಜ : ಅದು ಹೇಗೆ ತರಲಿ ಸಾರ್. ಮನೆ ಕೆಲಸ ಪಾತ್ರೆ ತೊಳೆದು, ಬಟ್ಟೆ ಒಗೆದು, ಕಸಗೂಡಿಸಿ, ಮನೆ ವರೆಸಿದ್ದೆಲ್ಲಾ ತರಕ್ಕಾಗಲ್ಲ ಸಾರ್!

ಮೈಸೂರು ಮಿತ್ರ
ಶನಿವಾರ, 23 ಮಾರ್ಚ್ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಪೂರ್ಣ ಆತ್ಮವಿಶ್ವಾಸಿಯೇ ನಿಸ್ಪೃಹನಾಗಿ ಸಾಧನೆಯಲ್ಲಿ ತಲ್ಲೀನನಾಗಬಲ್ಲ
–ರವೀಂದ್ರನಾಥ ಠಾಗೋರ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹುಟ್ಟಿಸಿದ ದೇವರು ಊಟ ಕೊಡಲಾರನೇ?

ನಿಮ್ಮ ಪತ್ರಗಳು

■ ಐಪಿಎಲ್ ಬಂತು ಯುವಕರೇ ಎಚ್ಚರ !

ಮಾನ್ಯರೇ,

ಇತ್ತೀಚಿನ ದಿನಗಳಲ್ಲಿ ಕ್ರಿಕೆಟ್‌ನಲ್ಲಿ ಅತ್ಯಂತ ಶ್ರೀಮಂತ ಪಂದ್ಯಾವಳಿ ಎಂದರೆ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್). ಶುಕ್ರವಾರದಿಂದ ಪ್ರಾರಂಭವಾಗುವ ಈ ಪಂದ್ಯಾವಳಿ ಸುಮಾರು 2 ತಿಂಗಳು ಕಾಲ ನಿರಂತರವಾಗಿ ನಡೆಯಲಿದೆ. ಇಂದಿನ ಯುವಪೀಳಿಗೆ ಬೇರೆ ಯಾವ ಪಂದ್ಯಾವಳಿಗೂ ತಲೆ ಕೆಡಿಸಿಕೊಳ್ಳದೇ ಐಪಿಎಲ್‌ನಲ್ಲಿ ಬೆಟ್ಟಿಂಗ್ ದಂಧೆಗೆ ಸಿಲುಕಿ ತಮ್ಮ ಆಸ್ತಿ, ಪಾಸ್ತಿಗಳನ್ನು ಕಳೆದುಕೊಳ್ಳುತ್ತಿದ್ದಾರೆ. ಇದರಲ್ಲಿ ಬುಕ್ಕಿ ಉದ್ಧಾರವಾಗುತ್ತಾನೆ. ಸಾರ್ವಜನಿಕರು ಮನೆ, ಮಠ ಕಳೆದುಕೊಳ್ಳುತ್ತಾರೆ. ಮೊದಲು 6 ಓವರ್‌ಗಳ ಸೆಷನ್‌ನಿಂದ ಪ್ರಾರಂಭವಾಗುತ್ತದೆ. ಮೊದಲು ಆಡುವ ತಂಡ ಮೊದಲ 6 ಓವರ್ (ಪವರ್ ಪ್ಲೇ)ಗೆ ಇಷ್ಟು ರನ್ ಬರುತ್ತೆ, ಬರಲ್ಲಾ ಎಂದು ಕಟ್ಟುತ್ತಾರೆ. ಆಮೇಲೆ 10 ಓವರ್‌ಗಳ ಸೆಷನ್, ನಂತರ 15 ಓವರ್‌ಗಳ ಸೆಷನ್, ಕೊನೆಯದು ಲಂಬಿ ಅಂದರೆ 20 ಓವರ್‌ಗಳ ಸೆಷನ್‌ಗೆ ಮುಕ್ತಾಯಗೊಳ್ಳುತ್ತದೆ. ಇನ್ನು ಪಂದ್ಯವನ್ನು ಈ ತಂಡ ಗೆಲ್ಲುತ್ತದೆ ಎಂದು ಕೋಟ್ಯಾಂತರ ಬೆಟ್ಟಿಂಗ್ ನಡೆಯುತ್ತದೆ. ಇದರಲ್ಲಿ ಪೊಲೀಸರಿಗೆ ಪಾಲು ಹೋಗುವುದರಿಂದ ಅವರೂ ಇವರ ಅಟ್ಟಹಾಸಕ್ಕೆ ಅಡ್ಡಿಪಡಿಸುವುದಿಲ್ಲ. ಇನ್ನು ಕೆಲವು ಬುಕ್ಕಿಗಳು ತುಂಬಾ ಹಳೆಯ ಗಿರಾಕಿಯಾದರೆ ಲಕ್ಷಗಟ್ಟಲೇ ಸಾಲ ಬರೆದುಕೊಳ್ಳುತ್ತಾರೆ. ಪಂದ್ಯ ಸೋತರೆ ಮರು ದಿನವೇ ಆ ಹಣವನ್ನು ಹಿಂತಿರುಗಿಸಬೇಕು. ಇಲ್ಲದಿದ್ದರೆ ವಿಳಾಸ ಗೊತ್ತಿರುವುದರಿಂದ ಮನೆಯ ಮುಂದೆ ಬಂದು ಗಲಾಟೆ ಮಾಡುತ್ತಾರೆ. ಇನ್ನು ಕೆಲವು ಯುವಕರು ಭಂಡತನದಿಂದ ಸಾಲದಿಂದ ಸೋತು, ಹಣವಿಲ್ಲದೇ ಆತ್ಮಹತ್ಯೆ ಮಾಡಿಕೊಂಡ ಪ್ರಕರಣಗಳೂ ಸಾಕಷ್ಟಿವೆ. ಆದುದರಿಂದ ಇಂದಿನ ಯುವಕರು ಈ ಐಪಿಎಲ್ ಬೆಟ್ಟಿಂಗ್‌ನಿಂದ ದೂರ ಸರಿದು, ತಮ್ಮ ಆಸ್ತಿ, ಪಾಸ್ತಿಗಳನ್ನು ಸುರಕ್ಷಿತವಾಗಿ ಇಟ್ಟುಕೊಳ್ಳಲಿ.

– ನಾಗಣ್ಣ, ಹಿರಿಯ ನಾಗರೀಕ, ವಿದ್ಯಾರಣ್ಯಪುರಂ, ಮೈಸೂರು

■ ಒಳಚರಂಡಿ ದುರಸ್ತಿಗೊಳಿಸಿ ಶುಚಿತ್ವ ಕಾಪಾಡಿ



ಮಾನ್ಯರೆ,

ಮೈಸೂರಿನ ಜಯನಗರದ 3ನೇ ಮುಖ್ಯ ರಸ್ತೆ, 1ನೇ ಅಡ್ಡರಸ್ತೆ, ಮನೆ ಸಂಖ್ಯೆ 107ರ ಬಾಗಿಲ ಮುಂಭಾಗವೇ ಕಳೆದ ಇಪ್ಪತ್ತು ದಿನಗಳಿಂದ ಒಳಚರಂಡಿಯ ಕೊಳಚೆ ನೀರು ಉಕ್ಕಿ ಹರಿಯುತ್ತಿರುವುದರಿಂದ ಸುತ್ತಮುತ್ತಲಿನ ವಾತಾವರಣ ಗಬ್ಬುನಾರುತ್ತಿದ್ದು, ಮೂಗು ಮುಚ್ಚಿಕೊಂಡು ಓಡಾಡುವಂತ ಪರಿಸ್ಥಿತಿ ನಿರ್ಮಾಣವಾಗಿದೆ. ಆ ಮನೆಯವರಿಗಂತೂ ದಿನವೂ ನರಕಯಾತನೆಯಾಗಿದ್ದು, ಹೆಂಗಸರು, ಮಕ್ಕಳು ಮನೆಯಿಂದ ಹೊರಗಡೆ ಬರಲೂ ಸಹ ತೊಂದರೆಯಾಗುತ್ತಿದೆ ಹೀಗಾಗಿ, ಸಂಬಂಧಪಟ್ಟವರು ಕೂಡಲೇ ಎಚ್ಚೆತ್ತು ತ್ವರಿತವಾಗಿ ಒಳಚರಂಡಿಯನ್ನು ದುರಸ್ತಿಗೊಳಿಸಿ ಅಲ್ಲಿನ ಶುಚಿತ್ವ ಕಾಪಾಡಬೇಕಿದೆ.

– ಬಿ. ಗಣೇಶ, ಕೆ.ಜಿ.ಕೊಪ್ಪಲು, ಮೈಸೂರು.

■ ಬೀದಿ ನಾಯಿ ಹಾವಳಿ ನಿಯಂತರಿಸಲು ಕ್ರಮ

ಮಾನ್ಯರೆ,

ಮಾ. 14ರ 'ಮೈಸೂರು ಮಿತ್ರ' ದಿನಪತ್ರಿಕೆಯಲ್ಲಿನ ಬೀದಿ ನಾಯಿಗಳ ಕಾಟ ತಪ್ಪಿಸಿ ವರದಿಗೆ ಸಂಬಂಧಪಟ್ಟಂತೆ ಮೈಸೂರು ಮಹಾನಗರ ಪಾಲಿಕೆಯ Dog Squad ಸಿಬ್ಬಂದಿಯು ದಿನಾಂಕ 14–03–2024ರಂದು ಕಾರ್ಯಾಚರಣೆ ನಡೆಸಿದ್ದು, ಬಹುತೇಕ ಬೀದಿನಾಯಿಗಳು ಪ್ರಾಣಿ ಜನನ ನಿಯಂತ್ರಣ ಶಸ್ತ್ರಚಿಕಿತ್ಸೆಗೆ ಒಳಪಟ್ಟಿರುತ್ತದೆ ಹಾಗೂ ಸಂತಾನಹಣ ಶಸ್ತ್ರಚಿಕಿತ್ಸೆಗೆ ಒಳಪಡದ ನಾಯಿಗಳನ್ನು ಹಿಡಿದು ಸಂತಾನಹರಣ ಶಸ್ತ್ರಚಿಕಿತ್ಸೆಗೆ ಒಳಪಡಿಸಲು ಕ್ರಮ ವಹಿಸಲಾಗಿದೆ. Animal Birth Control (Dogs) Rules 2001ರ ಪ್ರಕಾರ ಬೀದಿನಾಯಿಗಳನ್ನು ಕೊಲ್ಲುವುದಾಗಲೀ ಅಥವಾ ಸ್ಥಳಾಂತರಿಸುವುದಾಗಲೀ ಕಾನೂನು ಬಾಹಿರವಾಗಿರುತ್ತದೆ. ಆದುದರಿಂದ ನಗರಪಾಲಿಕೆಯು ಬೀದಿನಾಯಿಗಳ ಹಾವಳಿಯನ್ನು ನಿಯಂತ್ರಿಸಲು ರಾಷ್ಟ್ರ ವ್ಯಾಪ್ತಿ ಜಾರಿಯಲ್ಲಿರುವ ಪ್ರಾಣಿ ಜನನ ನಿಯಂತ್ರಣ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

– ಆರೋಗ್ಯಾಧಿಕಾರಿಗಳು, ಮೈಸೂರು ಮಹಾನಗರ ಪಾಲಿಕೆ

■ ಸರ್ಕಾರದ ಹಣ ದುರುಪಯೋಗಕ್ಕೆ ನಿದರ್ಶನ



ಮಾನ್ಯರೆ,

ಮೈಸೂರಿನ ಕುವೆಂಪುನಗರದ ವಿಶ್ವಮಾನವ ಜೋಡಿ ರಸ್ತೆ ಸೇರಿದಂತೆ ನಗರದ ಪ್ರಮುಖ ರಸ್ತೆಗಳಲ್ಲಿ ಕಳೆದ ಆರು ತಿಂಗಳ ಹಿಂದೆ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿ 'ಸೈಕಲ್ ಟ್ರಾಕ್' ನಿರ್ಮಾಣ ಮಾಡಿದ್ದಾರೆ. ಇದುವರೆಗೂ ಈ ಟ್ರಾಕ್‌ನಲ್ಲಿ ಒಂದು ಸೈಕಲ್ ಹೋಗಿದ್ದನ್ನು ನಾವು ನೋಡಿಲ್ಲ. ಈ ಟ್ರಾಕ್ ನಿರ್ಮಾಣ ಮಾಡಿದ್ದರಿಂದ ವಿಶಾಲವಾಗಿದ್ದ ರಸ್ತೆಯ ಎರಡೂ ಭಾಗಗಳು ಕಿರಿದಾಗಿದ್ದು, ವಾಹನ ಸವಾರರು ವಾಹನ ಓಡಿಸಲು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಹಾಗೂ ಈ ರಸ್ತೆಯಲ್ಲಿರುವ ವಾಣಿಜ್ಯ ಸಂಕೀರ್ಣಗಳು ಮತ್ತು ಹೋಟೆಲ್‌ಗಳ ಮುಂದೆ ವಾಹನಗಳನ್ನು ನಿಲ್ಲಿಸಲು ಪಾರ್ಕಿಂಗ್ ವ್ಯವಸ್ಥೆಯೇ ಇಲ್ಲದಂತಾಗಿದೆ. ಈ ಸೈಕಲ್ ಟ್ರಾಕ್ ನಿರ್ಮಾಣ ಮಾಡುವ ಮೊದಲು ಅಧಿಕಾರಿಗಳಿಗೆ ಈ ಬಗ್ಗೆ ಸೂಕ್ತ ತಿಳಿವಳಿಕೆ ಇರಬೇಕಿತ್ತು. ಸರ್ಕಾರದ ಹಣ ಹೇಗೆ ಪೋಲಾಗುತ್ತಿದೆ ಎಂಬುದಕ್ಕೆ ಇದಕ್ಕಿಂತ ಉದಾಹರಣೆ ಬೇಕಿಲ್ಲ?


–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ : 94482 08746 / 97421 79000

ಚಿಂತನೆ

ಜೀವನಕ್ಕೆ ನಿವೃತ್ತಿ ಇರಬಾರದು !!



"ಒಬ್ಬ ನ್ಯಾಯಾಧೀಶರು ನಿವೃತ್ತಿಗೆ ಮುಂಚೆ ವೃತ್ತಿಗೆ ಹಾಗೂ ಹುದ್ದೆಗೆ ಗೌರವ ತಂದಂತಹವರು. ಅವರನ್ನು ಇದೇ ರೀತಿಯ ಪ್ರಶ್ನೆ ಕೇಳಲಾಗಿತ್ತು. 'ನೀವು ನ್ಯಾಯಾಧೀಶರಾಗಿ ಉತ್ತಮ ಕೆಲಸ ಮಾಡಿದ್ದೀರಿ. ನಿಮಗೆ ಮತ್ತೊಂದು ಅವಕಾಶ ಸಿಕ್ಕರೆ ಏನಾಗಬೇಕೆಂದು ಬಯಸುತ್ತೀರಿ?' ಎಂದಾಗ ಅವರು ನೀಡಿದ ಉತ್ತರವೂ ಉಲ್ಲೇಖನೀಯವಾದುದು. ಅವರು ಹೇಳಿದರು; ಹಾಗೇನಾದರೂ ಆದರೆ ನಾನು ವೈದ್ಯನಾಗಬಯಸುತ್ತೇನೆ. ಏಕೆಂದರೆ ನಾನು ನ್ಯಾಯಾಧೀಶನಾಗಿ ಹಲವರಿಗೆ ಜೈಲು ಶಿಕ್ಷೆ, ಮತ್ತೆ ಕೆಲವರಿಗೆ ಗಲ್ಲು ಶಿಕ್ಷೆ ವಿಧಿಸಿ ಪ್ರಾಣಾಪಾಯ ತಂದಿರಬಹುದು. ವೈದ್ಯನಾದರೆ ಹಲವರ ಪ್ರಾಣವನ್ನಾದರೂ ಉಳಿಸಬಹುದು. ಅದು ಅಲ್ಲದೆ ನನಗೆ ಮೊದಲಿನಿಂದಲೂ ವೈದ್ಯನಾಗುವ ಆಸೆ ಇತ್ತು. ಆದರೆ ಪರಿಸ್ಥಿತಿ ನನ್ನನ್ನು ನ್ಯಾಯಾಧೀಶನಾಗಿ ಮಾಡಿತು ಎಂದು ನಗುತ್ತಾ ಹೇಳಿದರು.

ನಾವು ಎಷ್ಟು ದಿನ ಬದುಕುತ್ತೇವೆ ಎಂಬುದು ಮುಖ್ಯವಲ್ಲ, ಹೇಗೆ ಬದುಕುತ್ತೇವೆ ಎಂಬುದು ಮುಖ್ಯ. ಇದನ್ನು ಮಹಾ–ಮಹನೀಯರು ಸಂದರ್ಭಾನುಸಾರ ಹೇಳುತ್ತುಲೇ ಇರುತ್ತಾರೆ. ದೇವರು ನಮಗೆ ಕೆಲವು ಅಂಗಗಳನ್ನು ಒಂದೊಂದು ಕೊಟ್ಟರೆ, ಕೆಲವು ಅಂಗಗಳನ್ನು ಎರಡೆರಡು ಕೊಟ್ಟಿದ್ದಾನೆ. ಇದರ ಅರ್ಥ ಹೆಚ್ಚು ಸಮಾಜಮುಖಿಯಾಗಿರಬೇಕು ಎಂಬುದಾಗಿದೆ. ಎರಡು ಕೈಗಳಿಂದ ದುಡಿಯಬೇಕು, ಎರಡು ಕಾಲುಗಳಿಂದ ನಡೆಯಬೇಕು, ಎರಡು ಕಣ್ಣುಗಳಿಂದ ನೋಡಬೇಕು. ಎರಡು ಕಿವಿಗಳಿಂದ ಕೇಳಬೇಕು ಎಂಬುದು ವ್ಯಾಖ್ಯಾನ. ಇದು ವೇದಾಂತವಲ್ಲ. ಇದು ಜೀವನ ವಿಧಾನವಾಗಬೇಕು. ಜೀವನದ ಅರಂಭದಿಂದ ಇದು ನಮ್ಮ ಸಿದ್ಧಾಂತವಾಗಬೇಕು. ಎಲ್ಲರೂ ತಪ್ಪುಗಳನ್ನು ಮಾಡುತ್ತಾರೆ. ಅದು ತಪ್ಪು ಎಂದು ಗೊತ್ತಾದಾಗ ಸರಿಪಡಿಸಿಕೊಳ್ಳಬೇಕು, ಅಲ್ಲದೆ ಮತ್ತೆ ಅದೇ ತಪ್ಪುಗಳನ್ನು ಮಾಡಬಾರದು. ಇದಕ್ಕಾಗಿ ನಮಗೆ ಮೆದುಳು ಹಾಗೂ ಬುದ್ಧಿಯನ್ನು ಕೊಡಲಾಗಿದೆ. ಗೊತ್ತಿಲ್ಲದೇ ಮಾಡಿದ ತಪ್ಪನ್ನು ತಕ್ಷಣ ಅರಿತುಕೊಂಡು, ತಿದ್ದಿಕೊಂಡು ನಡೆಯುವುದು ವಿವೇಚನೆ ಎನಿಸಿಕೊಳ್ಳುತ್ತದೆ.

ನಮ್ಮಲ್ಲಿ ಅನೇಕರು ಹೇಳುವ ಮಾತಿದೆ. ನನಗೆ ಕೆಟ್ಟ ಮೇಲೆ ಈಗ ಬುದ್ಧಿ ಬಂದಿದೆ. ಆದರೆ ಈಗ ನನಗೆ ವಯಸ್ಸೂ ಆಗಿದೆ. ಈಗ ತಪ್ಪನ್ನು ತಿದ್ದಿಕೊಂಡರೂ ಪ್ರಯೋಜನವಿಲ್ಲ, ನನ್ನ ಬದುಕು ವ್ಯರ್ಥವಾಯಿತು ಎಂದು ಹೇಳುವವರೂ ಇದ್ದಾರೆ. ನಿಜ. ನಮಗೆ ಎರಡು ಜೀವನವಿಲ್ಲ. ಒಂದು ಜೀವನ ಸರಿಯಾಗಲಿಲ್ಲ; ಮತ್ತೊಂದು ಜೀವನವನ್ನು ಸರಿಪಡಿಸಿಕೊಂಡು ಹೋಗುತ್ತೇನೆ ಎನ್ನುವುದಕ್ಕೆ ಅವಕಾಶವಿಲ್ಲ. ಆದರೆ ಸರಿಪಡಿಸಿಕೊಳ್ಳಲು ವಯಸ್ಸು ಮುಖ್ಯವಾಗುವುದಿಲ್ಲ, ಮನಸ್ಸು ಮುಖ್ಯವಾಗುತ್ತದೆ. ಮಾಡಿದ್ದು ತಪ್ಪು ಎಂದಾದಾಗ ಅದನ್ನು ಸರಿಪಡಿಸಿಕೊಳ್ಳುವುದು ನಮ್ಮ ಕರ್ತವ್ಯ, ವಯಸ್ಸು ಎಲ್ಲರಿಗೂ ಆಗುತ್ತದೆ. ಏನು ಮಾಡಿದರೂ ಆಗುತ್ತದೆ, ಏನು ಮಾಡದಿದ್ದರೂ ಆಗುತ್ತದೆ. ಹಾಗೆಂದು ಸುಮ್ಮನೆ ನನಗೆ ವಯಸ್ಸಾಯಿತು ಎಂದು ಹೇಳುತ್ತಾ ಕುಳಿತುಕೊಳ್ಳುವುದು ನಮಗೆ ನಾವೇ ಮಾಡಿಕೊಂಡ ಮೋಸ ಎಂದು ಹೇಳಬಹುದು.

ನಮ್ಮಲ್ಲಿ ಸರ್ಕಾರಿ ಸೇವೆಯಲ್ಲಿ 60 ವರ್ಷಕ್ಕೆ ನಿವೃತ್ತಿ ಎಂದು ನಿಗಧಿಪಡಿಸಲಾಗಿದೆ. ಇದನ್ನೇ ಅನೇಕ ಸಾರ್ವಜನಿಕ ಸಂಸ್ಥೆಗಳೂ ಅನುಸರಿಸುತ್ತವೆ. 60ನ್ನು ಅರಳು–ಮರಳಿನ ಸಮಯ. ಹಾಗಾಗಿ ಅವರಿಂದ ಮತ್ತೆ ಮೊದಲಿನಂತೆ ಕೆಲಸ ಮಾಡಲಾಗುವುದಿಲ್ಲ ಎಂಬ ಕಾರಣಕ್ಕೆ ಹಾಗೂ 60ರ ನಂತರ ಆರೋಗ್ಯ ಸುಸ್ಥಿತಿಯಲ್ಲಿರುವುದು ಕಷ್ಟ ಎಂಬ ಕಾರಣ ನೀಡಿ ನಿವೃತ್ತಿ ಮಾಡಲಾಗುತ್ತದೆ. ನಮಗೆ ಕೆಲಸಕ್ಕೆ ಸೇರಿದಾಗಲೇ ನಮ್ಮ ನಿವೃತ್ತಿಯ ದಿನ ಯಾವುದೆಂದು ಗೊತ್ತಾಗಿರುತ್ತದೆ. ಹಾಗಾಗಿ ಮಾಡಬೇಕಾದ ಸಾರ್ವಜನಿಕ ಕೆಲಸಗಳನ್ನು ಆದಷ್ಟೂ ಮುತುವರ್ಜಿಯಿಂದ ಮುಗಿಸಿ ಹೆಮ್ಮೆಯಿಂದ, ಗರ್ವದಿಂದ ನಿವೃತ್ತಿ ಹೊಂದಬೇಕು.

ಈ ರೀತಿ ನಿವೃತ್ತಿ ಹೊಂದಿದವರಿಗೆ ನಿವೃತ್ತಿಯ ನಂತರ ಏನು ಎಂಬ ಪ್ರಶ್ನೆ ಕಾಡುತ್ತದೆ. ನನ್ನ ಸ್ನೇಹಿತರೊಬ್ಬರು ಸರ್ಕಾರಿ ಕೆಲಸಲ್ಲಿದ್ದಾಗ ಅವರಿಗೆ ಸ್ನೇಹಿತರು ಎಂದರೆ ಅವರೊಡನೆ ಕೆಲಸ ಮಾಡುವವರೇ ಆಗಿದ್ದರು, ಬೇರೆ ಸ್ನೇಹಿತರು ಇರಲಿಲ್ಲ ಹಾಗೂ ಬೇರೆ ಸ್ನೇಹಿತರನ್ನು ಮಾಡಿಕೊಳ್ಳುವ ಪ್ರಯತ್ನವನ್ನೂ ಅವರು ಮಾಡಲಿಲ್ಲ. ನಿವೃತ್ತಿಯ ನಂತರ ಸಮಯ ಕಳೆಯುವುದು ಅವರಿಗೆ ಕಷ್ಟವಾಗತೊಡಗಿತು. ಹಿಂದಿನ ಅಭ್ಯಾಸದಂತೆ ಬೆಳಿಗ್ಗೆ ಅವರು ಈ ಹಿಂದೆ ಕೆಲಸ ನಿರ್ವಹಿಸುತ್ತಿದ್ದ ಕಚೇರಿ ಹತ್ತಿರ ಹೋಗುವುದು, ಅಲ್ಲಲ್ಲಿ ಕುಳಿತು ಮಧ್ಯಾಹ್ನದ ನಂತರ ಮನೆಗೆ ಹೋಗುವುದು, ಹೀಗೆ ಅವರು ಮಾಡತೊಡಗಿದರು. ಅವರ ಸಹೋದ್ಯೋಗಿಗಳು ಕೆಲಸದಲ್ಲಿ ನಿರತರಾಗಿರುತ್ತಿದ್ದುದರಿಂದ ಇವರನ್ನು ಮಾತನಾಡಿಸಲು ಯಾರೂ ಬರುತ್ತಿರಲಿಲ್ಲ. ಇದರಿಂದಾಗಿ ಇವರಿಗೆ ಒಂಟಿತನ ಕಾಡತೊಡಗಿತು. ನಿಧಾನವಾಗಿ ಜೀವನದ ಬಗೆಗಿನ ಭರವಸೆ ಕಳೆದುಕೊಳ್ಳತೊಡಗಿದರು. ಇದು ಅನೇಕರ ಸ್ಥಿತಿ. ಅದು ಸರ್ಕಾರಿ ಕೆಲಸವೇ ಎಂದೇನಲ್ಲ. ಯಾವುದೇ ಕೆಲಸವಾದರೂ ಅದಕ್ಕೆ ಸಾಮಾನ್ಯವಾಗಿ ಒಂದು ನಿವೃತ್ತಿ ಎಂಬುದು ಇರುತ್ತದೆ. ಕೆಲಸ ಮಾಡುವ ಸಮಯದಲ್ಲಿ ಇತರರೊಡನೆ ಸ್ನೇಹ ಮಾಡಿಕೊಂಡವರು ಇಂತಹ ಮನೋವೇದನೆ ಅನುಭವಿಸುವುದಿಲ್ಲ. ಕಚೇರಿಯಲ್ಲಿ ಕೆಲಸ ಮಾಡುವವರಿಗೆ ಇತರರ ಸ್ನೇಹ ಹೇಗೆ ಸಾಧ್ಯ ಎಂದು ಕೆಲವರಿಗೆ ಅನ್ನಿಸಬಹುದು. ಆದರೆ ಕಚೇರಿ ಕೆಲಸಕ್ಕೆ ಎಂದು ಬರುವ ಇತರರ ಜೊತೆಗಾದರೂ ಸ್ನೇಹ ಮಾಡಿಕೊಳ್ಳಬಹುದು, ಅದಕ್ಕೆ ಪೂರಕವಾದ ಮನೋಭಾವ ಆರಂಭದಿಂದಲೇ ಬೆಳೆಸಿಕೊಳ್ಳಬೇಕು.

ನಿವೃತ್ತಿಯ ನಂತರ ಯಾರೂ ಸ್ನೇಹಿತರಾಗುವುದಿಲ್ಲ ಎಂಬ ಮನೋಭಾವ ಸೂಕ್ತವಾದುದಲ್ಲ. ನಮ್ಮಂತೆಯೇ ಮತ್ತಷ್ಟು ಜನರೂ ನಿರಾಶಾದಾಯಕ ಸ್ಥಿತಿಯಲ್ಲಿರಬಹುದು. ಅಂತಹವರ ಜೊತೆಗಾದರೂ ಸ್ನೇಹ ಮಾಡಿಕೊಳ್ಳಬಹುದು. ಮೊದಲಿನಿಂದಲೇ ಆಗಲಿಲ್ಲ, ಈಗ ಸಾಧ್ಯವೇ ಎಂಬ ನಿರಾಶೆಗೆ, ಸಾಧ್ಯವಿದೆ, ಮನಸ್ಸು ಮಾಡು! ಎಂದು ಹೇಳಬೇಕಾಗುತ್ತದೆ.

ನಮ್ಮಲ್ಲಿ ಅನೇಕರಿಗೆ ಇತರೆ ಚಟುವಟಿಕೆಗಳ ಬಗ್ಗೆ ಆಸಕ್ತಿ ಇಲ್ಲವೇ ಗಮನವೇ ಇರುವುದಿಲ್ಲ. ತಾವಾಯಿತು, ತಮ್ಮ ಕೆಲಸವಾಯಿತು ಎಂದೇ ಭಾವಿಸುತ್ತಾರೆ. ಇದರ ಬದಲು ಆರಂಭದಿಂದಲೂ ಓದು, ಬರಹ, ಸಮಾಜಸೇವೆ ಇತ್ಯಾದಿ ಅಭ್ಯಾಸ ರೂಢಿಸಿಕೊಂಡರೆ ಇಂತಹ ಸಮಸ್ಯೆ ಬರುವುದಿಲ್ಲ. ಅಲ್ಲದೆ ನಾವು ಕೆಲಸದಿಂದ ನಿವೃತ್ತರಾಗಿರಬಹುದು, ಆದರೆ ಜೀವನದಿಂದ ನಿವೃತ್ತರಾಗಿರುವುದಿಲ್ಲ ಜೀವ ಇರುವವರೆಗೂ ಜೀವನ ಇದ್ದೇ ಇರುತ್ತದೆ. ನಿವೃತ್ತಿಯ ನಂತರವೂ ಜೀವನ ಮಾಡಬಹುದು. ನಮ್ಮಲ್ಲಿ ಅನೇಕರು ನಿವೃತ್ತಿಯ ನಂತರ ಬರವಣಿಗೆ ಮಾಡಿ ಹೆಸರುವಾಸಿಯಾದವರಿದ್ದಾರೆ, ಇತ್ತೀಚೆಗೆ 85 ವರ್ಷದವರೊಬ್ಬರು ಮೊಮ್ಮಗಳ ಜೊತೆಗೆ ಒಂದು ಪದವಿ ಪಡೆದ ಬಗ್ಗೆ ಓದಿದ್ದೇವೆ. ಅವರಿಗೆ ಸಾಧ್ಯವಾದದ್ದು ನಮಗೇಕೆ ಸಾಧ್ಯವಿಲ್ಲ? ಎಂಬ ಬಗ್ಗೆ ಚಿಂತಿಸಬೇಕು.

ನಾವು ನಮ್ಮ ಜೀವನವನ್ನು ಪ್ರೀತಿಸಬೇಕು, ಪ್ರೀತಿಸುವುದನ್ನು ಕಲಿಯಬೇಕು. ಇರುವುದು ಒಂದೇ ಜೀವನ ಆಗಿರುವುದರಿಂದ ಹಿಂದೆ ಮಾಡಲಾಗದ್ದನ್ನು ನಿವೃತ್ತಿಯ ನಂತರವಾದರೂ ಮಾಡಬಹುದು. ಕೆಲಸವಿದ್ದಲ್ಲಿ, ಚಟುವಟಿಕೆ ಇದ್ದಲ್ಲಿ, ದೇಹವು ಆರೋಗ್ಯಪೂರ್ಣವಾಗಿರುತ್ತದೆ. ತಲೆಯನ್ನು ನಿರ್ದಿಷ್ಟ ವಿಷಯದ ಬಗ್ಗೆ ಚಿಂತನೆಗೆ ಒಳಪಡಿಸಬೇಕು. ಅದೂ ಧನಾತ್ಮಕ ಚಿಂತನೆಯಾಗಿರಬೇಕು. ಮೆದುಳಿನ ಸ್ವಭಾವ ಚಿಂತಿಸುವುದೇ ಆಗಿದೆ. ಸೂಕ್ತ ಚಿಂತನೆಗೆ ಅವಕಾಶ ನೀಡದಿದ್ದಲ್ಲಿ, ಯಾವುದೋ ಚಿಂತೆ ಅಲ್ಲಿ ಮನೆ ಮಾಡುತ್ತದೆ. ಸಂಸ್ಕೃತ ಶ್ಲೋಕವೊಂದು ಹೇಳುವುದೆಂದರೆ, 'ಚಿಂತೆಗೂ ಚಿತೆಗೂ ಒಂದು ಸೊನ್ನೆ ಮಾತ್ರ ವ್ಯತ್ಯಾಸ. ಚಿಂತೆ ಜೀವನವನ್ನು ಸುಟ್ಟರೆ, ಚಿತೆ ನಿರ್ಜೀವ ದೇಹವನ್ನು ಸುಡುತ್ತದೆ'. ಎರಡೂ ಸುಡುವಂತುಹುದೇ. ಆದ್ದರಿಂದ ಸೂಕ್ತ ಚಿಂತನೆಗೆ ಅವಕಾಶ ಮಾಡಿಕೊಳ್ಳಬೇಕು.

ನಮ್ಮಲ್ಲಿ ಅನೇಕ ಸ್ವಯಂಸೇವಾ ಸಂಸ್ಥೆಗಳಿವೆ. ಅವುಗಳಲ್ಲಿ ನಮ್ಮನ್ನು ತೊಗಿಸಿಕೊಳ್ಳಬಹುದು. ಹಾಗಾದಾಗ ಸಹಜವಾಗೇ ಒಂದಷ್ಟು ಜನರ ಪರಿಚಯವಾಗುತ್ತಾರೆ. ಅವರನ್ನು ಸ್ನೇಹಿತರನ್ನಾಗಿ ಮಾಡಿಕೊಳ್ಳಬಹುದು. ನಿವೃತ್ತಿ ಕೆಲಸಕ್ಕೆ ಮಾತ್ರ, ಜೀವನಕ್ಕಲ್ಲ. ಅದಕ್ಕೇ ಹೇಳುವುದು ಇಂತಹ ಮನೋಭಾವ ಬೆಳೆಸಿಕೊಂಡರೆ 60 ಎಂಬುದು ಅರಳುಮರಳಾಗದೆ, ಮರಳಿ ಅರಳುತ್ತದೆ ಎಂದು. ಅಂತಹ ಚಿಂತನೆ ನಮ್ಮದಾಗಬೇಕು. ನಮ್ಮ ಜೀವನದ ಕಾಳಜಿ ನಮಗೇ ಸೇರಿದ್ದು. ಎಲ್ಲಕ್ಕಿಂತ ವಯಸ್ಸಾಯಿತು ಎಂಬ ಮನೋಭಾವ ದೂರವಾಗಿಸಿಕೊಳ್ಳಬೇಕು.

ಜೀವನ ಪ್ರೀತಿಗೆ ಸಂಬಂಧಿಸಿದಂತೆ ಒಂದೆರಡು ಉದಾಹರಣೆಗಳನ್ನು ನೋಡುವುದಾದರೆ, ಕೆಲ ವರ್ಷಗಳ ಹಿಂದೆ ಮೈಸೂರಿಗೆ ಬಂದಿದ್ದ ಮಾಜಿ ರಾಷ್ಟ್ರಪತಿ ಎಪಿಜೆ ಅಬ್ದುಲ್ ಕಲಾಂ ಅವರು ಒಂದು ಸಮಾರಂಭದಲ್ಲಿ ಉಪನ್ಯಾಸ ನೀಡುವ ಕಾರ್ಯಕ್ರಮವಿತ್ತು. ಅವರ ಉಪನ್ಯಾಸದ ನಂತರ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮವಿತ್ತು. ಅದರಲ್ಲಿ ಒಬ್ಬ ವಿದ್ಯಾರ್ಥಿ ಕಲಾಂ ಅವರನ್ನು ಒಂದು ಪ್ರಶ್ನೆ ಕೇಳಿದ. 'ನೀವು ವಿಜ್ಞಾನಿಯಾಗಿದ್ದವರು, ಇಸ್ರೋದ ಅಧ್ಯಕ್ಷರಾಗಿದ್ದವರು, ಭಾರತವನ್ನು ರಾಕೆಟ್ ತಂತ್ರಜ್ಞಾನದಲ್ಲಿ ಮುನ್ನಡೆಸಿದವರು. ಭಾರತ ರತ್ನ ಪ್ರಶಸ್ತಿ ವಿಜೇತರು. ರಾಷ್ಟ್ರಪತಿಯಾಗಿಯೂ ಅಮೂಲ್ಯ ಸೇವೆ ಸಲ್ಲಿಸಿದವರು. ಈಗ ನೀವು ಮತ್ತೊಮ್ಮೆ ಹುಟ್ಟಿಬರುವ ಅವಕಾಶ ಸಿಕ್ಕರೆ ನೀವು ಏನಾಗಿ ಹುಟ್ಟಲು ಬಯಸುತ್ತೀರಿ?' ಎಂದು ಕೇಳಿದ. ಅದಕ್ಕೆ ಕಲಾಂ ಅವರು ತಕ್ಷಣ ನೀಡಿದ ಉತ್ತರ 'ನಾನು ಒಳ್ಳೆಯವನಾಗಿ ಹುಟ್ಟಲು ಬಯಸುತ್ತೇನೆ'. ಅದಕ್ಕೆ ಮತ್ತೊಬ್ಬ ವಿದ್ಯಾರ್ಥಿ 'ನೀವು ಒಳ್ಳೆಯವನಾಗೇ ಏಕೆ ಹುಟ್ಟಲು ಬಯಸುತ್ತೀರಿ?' ಎಂದಾಗ 'ನಾನು ಒಳ್ಳೆಯ ಮನುಷ್ಯನಾದರೆ ಮಾತ್ರ ಒಳ್ಳೆಯ ವಿಜ್ಞಾನಿಯಾಗಬಹುದು, ಒಳ್ಳೆಯ ರಾಷ್ಟ್ರಪತಿಯೂ ಆಗಬಹುದು'' ಎಂದಾಗ ಇಡೀ ಸಭಾಂಗಣ ಸಂಭ್ರಮಿಸಿತ್ತು. ಇದನ್ನು ಜೀವನದ ಉತ್ಸಾಹ ಎಂದು ಕರೆಯಬಹುದಲ್ಲವೆ?

ಇಂತಹುದೇ ಮತ್ತೊಂದು ಘಟನೆ. ಒಬ್ಬ ನ್ಯಾಯಾಧೀಶರು ನಿವೃತ್ತಿಗೆ ಮುಂಚೆ ವೃತ್ತಿಗೆ ಹಾಗೂ ಹುದ್ದೆಗೆ ಗೌರವ ತಂದಂತಹವರು. ಅವರನ್ನು ಇದೇ ರೀತಿಯ ಪ್ರಶ್ನೆ ಕೇಳಲಾಗಿತ್ತು. 'ನೀವು ನ್ಯಾಯಾಧೀಶರಾಗಿ ಉತ್ತಮ ಕೆಲಸ ಮಾಡಿದ್ದೀರಿ. ನಿಮಗೆ ಮತ್ತೊಂದು ಅವಕಾಶ ಸಿಕ್ಕರೆ ಏನಾಗಬೇಕೆಂದು ಬಯಸುತ್ತೀರಿ?' ಎಂದಾಗ ಅವರು ನೀಡಿದ ಉತ್ತರವೂ ಉಲ್ಲೇಖನೀಯವಾದುದು. ಅವರು ಹೇಳಿದರು; ಹಾಗೇನಾದರೂ ಆದರೆ ನಾನು ವೈದ್ಯನಾಗಬಯಸುತ್ತೇನೆ. ಏಕೆಂದರೆ ನಾನು ನ್ಯಾಯಾಧೀಶನಾಗಿ ಹಲವರಿಗೆ ಜೈಲು ಶಿಕ್ಷೆ, ಮತ್ತೆ ಕೆಲವರಿಗೆ ಗಲ್ಲು ಶಿಕ್ಷೆ ವಿಧಿಸಿ ಪ್ರಾಣಾಪಾಯ ತಂದಿರಬಹುದು. ವೈದ್ಯನಾದರೆ ಹಲವರ ಪ್ರಾಣವನ್ನಾದರೂ ಉಳಿಸಬಹುದು. ಅದು ಅಲ್ಲದೆ ನನಗೆ ಮೊದಲಿನಿಂದಲೂ ವೈದ್ಯನಾಗುವ ಆಸೆ ಇತ್ತು. ಆದರೆ ಪರಿಸ್ಥಿತಿ ನನ್ನನ್ನು ನ್ಯಾಯಾಧೀಶನಾಗಿ ಮಾಡಿತು ಎಂದು ನಗುತ್ತಾ ಹೇಳಿದರು. ಎಂತಹ ಅರ್ಥಗರ್ಭಿತ ಉತ್ತರ ಎನ್ನಿಸುತ್ತದೆ.

'ಜೀವನ ಇರುವುದು ಏನನ್ನಾದರೂ ಸಾಧಿಸಲು ಅದಕ್ಕೆ ಪೂರಕವಾಗಿ ಅಲೋಚಿಸಬೇಕು. ಒಂದು ಸಾಧ್ಯವಾಗದಿದ್ದಾಗ ಮತ್ತೊಂದೂ ಸಾಧ್ಯವಾಗುವುದಿಲ್ಲ ಎಂದೇನೂ ಅಲ್ಲ. ಇಲ್ಲಿ ಸಾಧನೆ ಎಂದರೆ ದೊಡ್ಡ ಸಾಧನೆ ಎಂದೇನೂ ಭಾವಿಸಬೇಕಾಗಿಲ್ಲ. ನಾಲ್ಕು ಜನರಿಗೆ ಬೇಕಾದವರಾಗಿ ಬಾಳುವುದೂ ಒಂದು ಸಾಧನೆ ಎಂದೇ ಕರೆಸಿಕೊಳ್ಳುತ್ತದೆ. ಜೀವನಕ್ಕೆ ಹಲವು ಮುಖಗಳಿವೆ. ಒಂದು ಆಗದಿದ್ದರೆ ಮತ್ತೊಂದು ಆಯ್ದುಕೊಳ್ಳಬಹುದು. ಪ್ರಯತ್ನಿಸುವ ಮನೋಭಾವ ಇದ್ದಾಗ ಇದು ಸಾಧ್ಯವಾಗುತ್ತದೆ. ಅದಕ್ಕೆ ವಯಸ್ಸಿನ ನಿರ್ಬಂಧವಿಲ್ಲ. ನಾನು ಒಂದು ಕೆಲಸ ಮಾಡುತ್ತಿರುವಾಗ ಮತ್ತೊಂದು ಕೆಲಸದ ಬಗ್ಗೆ ಆಲೋಚನೆ ಮಾಡುವುದು ತಪ್ಪಾಗುವುದಿಲ್ಲ, ಅದು ಮುಂಜಾಗರೂಕತೆ ಎನಿಸಿಕೊಳ್ಳುತ್ತದೆ. ಅಂತಹ ಮನೋಭಾವ ಸಾಧನೆಗೆ ಕಾರಣವಾಗುತ್ತದೆ.

ಜನರ ಸೇವೆಗೆ ರಾಜಕೀಯ ಅಧಿಕಾರ ಅನಿವಾರ್ಯ

● ಮೈಸೂರು-ಕೊಡಗು ಬಿಜೆಪಿ ಅಭ್ಯರ್ಥಿ ಯದುವೀರ್ ಅಭಿಮತ ● ನಮ್ಮ ಪೂರ್ವಜರ ಅಭಿವೃದ್ಧಿ ಕಾರ್ಯಗಳ ನಮ್ಮ ಜನ ಈಗಲೂ ನೆನೆಸಿಕೊಳ್ಳುತ್ತಿರುವುದು ಅತೀವ ಸಂತಸ ತಂದಿದೆ

ಮೈಸೂರು, ಮಾ.22(ಎಸ್‌ಪಿಎನ್)– ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ಸೇವೆಗೆ ರಾಜಕೀಯ ಅಧಿಕಾರ ಅವಶ್ಯ ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಪ್ರತಿಪಾದಿಸಿದರು.

ಮೈಸೂರು ನಿವೇದಿತಾನಗರದ ಸುಬ್ಬರಾವ್ ಉದ್ಯಾನವನ ಮುಂಭಾಗ ಬಿಜೆಪಿ ಚಾಮುಂಡೇಶ್ವರಿ ಮಂಡಲದ ವತಿಯಿಂದ ಆಯೋಜಿಸಿದ್ದ 'ಕಾರ್ಯಕರ್ತರ ಸಭೆ'ಯಲ್ಲಿ ಭಾಗವಹಿಸಿ ಮಾತನಾಡಿದರು. ಮೈಸೂರಿನ ಅಭಿವೃದ್ಧಿಗೆ ನೂರು ವರ್ಷಗಳ ಹಿಂದೆ ನಮ್ಮ ಪೂರ್ವಜರು ಅನೇಕ ಸಂಸ್ಥೆಗಳನ್ನು ಸ್ಥಾಪಿಸಿದ್ದರು. ಅವುಗಳ ಸೇವೆ ಇಂದಿಗೂ ಜನರಿಗೆ ಲಭ್ಯವಿದೆ. ಇಂತಹ ಯೋಜನೆಗಳನ್ನು ಪ್ರದಾನಿ ನರೇಂದ್ರ ಮೋದಿ ಅವರ ಆಳ್ವಿಕೆಯಲ್ಲೂ ಜಾರೀ ಮಾಡಲಾಗಿದೆ ಎಂದರು.

ಕಳೆದೊಂದು ವರ್ಷದಿಂದ ಚುನಾವಣೆಗೆ ನಿಲ್ಲಬೇಕು ಎಂದು ಅಂದುಕೊಂಡಿದ್ದೆ. ಹಾಗಾಗಿ ಈ ಬಾರಿ ಬಿಜೆಪಿಯಿಂದ ಮೈಸೂರು–ಕೊಡಗು ಲೋಕಸಭಾ ಅಭ್ಯರ್ಥಿಯಾಗಿದ್ದೇನೆ. ನನ್ನ ಗೆಲುವಿಗೆ ನಮ್ಮ ಪೂರ್ವಜರ ಅಭಿವೃದ್ಧಿ ಕಾರ್ಯ ಹಾಗೂ ಪ್ರಧಾನಿ ಮೋದಿಯವರ ಯೋಜನೆಗಳು ನೆರವಿಗೆ ಬರಲಿವೆ. ರಾಜ್ಯದ ಪ್ರತಿಯೊಬ್ಬ ಪ್ರಜೆ ಮೈಸೂರು ರಾಜಮನೆತನದ ಅಭಿವೃದ್ಧಿ ಕಾರ್ಯವನ್ನು ಇಂದಿಗೂ ಸ್ಮರಿಸುತ್ತಾರೆ. ಈ ಸ್ಮರಣೆಯನ್ನು ಕಾಪಾಡಿಕೊಂಡು ಹೋಗುವ ಜವಾಬ್ದಾರಿ ನನ್ನ ಮೇಲಿದೆ. ಹಾಗಾಗಿ ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿದ್ದೇನೆ ಎಂದು ತಿಳಿಸಿದರು.

ರಾಜರ ಆಳ್ವಿಕೆಯಲ್ಲಿ ಮೈಸೂರು ವಿವಿ, ಮೈಸೂರು ಸಿಲ್ಕ್, ಮೈಸೂರು ಸೋಪ್, ಮೈಸೂರು ಪಾಕ್ ಸೇರಿದಂತೆ ಮೈಸೂರಿನ ಹೆಸರು ಬ್ರಾಂಡ್ ಮಾಡಲು ಪ್ರಯತ್ನಿಸಿದ್ದಾರೆ. ಪ್ರಧಾನಿ ಮೋದಿ ಆಳ್ವಿಕೆಯಲ್ಲಿ ಮೇಕ್ ಇನ್ ಇಂಡಿಯಾ, ಸ್ಟಾರ್ಟ್ ಅಫ್, ಆತ್ಮ ನಿರ್ಭರ ಭಾರತದಂತ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಎಂದರು.

ಪ್ರಧಾನಿ ಮೋದಿ ಆಳ್ವಿಕೆಯಲ್ಲಿ ಅಭಿವೃದ್ಧಿ ಕಾರ್ಯಗಳು ನಾಗಾಲೋಟದಲ್ಲಿ ಸಾಗುತ್ತಿದ್ದು, ಇದರಿಂದ ಉತ್ತೇಜನಗೊಂಡು ನಾನು ಸಹ ರಾಜಕೀಯ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಲು ಮನಸ್ಸು ಮಾಡಿದ್ದೇನೆ. ಇದರ ಭಾಗವಾಗಿ ಕಳೆದ 10 ದಿನಗಳ ಹಿಂದೆ ಬಿಜೆಪಿ ಹೈಕಮಾಂಡ್, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಿಂದ ನನಗೆ ಟಿಕೆಟ್ ಘೋಷಣೆ ಮಾಡಿದೆ. ಅಂದಿನಿಂದ ಇಂದಿನವರೆಗೂ ಮೈಸೂರು–ಕೊಡಗು ಭಾಗದ ಕಾರ್ಯಕರ್ತರೊಂದಿಗೆ ಜೊತೆಗೂಡಿ ಮತಯಾಚನೆ ಮಾಡುತ್ತಿದ್ದೇನೆ. ಎಲ್ಲರೂ ಉತ್ತಮವಾಗಿ ಸ್ಪಂದಿಸುತ್ತಿರುವುದಕ್ಕೆ ಚಿರಋಣಿ ಎಂದು ತಿಳಿಸಿದರು.



ಮೈಸೂರು ನಿವೇದಿತಾನಗರದ ಸುಬ್ಬರಾವ್ ಉದ್ಯಾನವನ ಮುಂಭಾಗ ಬಿಜೆಪಿ ಚಾಮುಂಡೇಶ್ವರಿ ಮಂಡಲದ ವತಿಯಿಂದ ಆಯೋಜಿಸಿದ್ದ ಕಾರ್ಯಕರ್ತರ ಸಭೆಯಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿದರು.

ಸಜ್ಜನಿಕೆಯ ವ್ಯಕ್ತಿತ್ವ: ಶಾಸಕ ಟಿ.ಎಸ್. ಶ್ರೀವತ್ಸ ಮಾತನಾಡಿ, ಮೈಸೂರು ಸಂಸ್ಥಾನದಲ್ಲಿ ಆಳ್ವಿಕೆ ನಡೆಸಿದ ಯದುವಂಶದ ಬಗ್ಗೆ ಎಲ್ಲರಿಗೂ ಪರಿಚಯವಿದೆ. ಆ ಸಂಸ್ಥಾನದ ಕುಡಿ, ದಿ.ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಅವರ ದತ್ತು ಪುತ್ರರಾದ ಯದುವೀರ್ ಅವರನ್ನು ಈ ಲೋಕಸಭಾ ಚುನಾವಣೆಯಲ್ಲಿ ಅತ್ಯಧಿಕ ಮತಗಳಿಂದ ಗೆಲ್ಲಿಸುವ ಹೊಣೆ ಮೈಸೂರು–ಕೊಡಗು ಮತದಾರರ ಮೇಲಿದೆ ಎಂದರು.

ಅಭಿವೃದ್ಧಿಗೆ ಹೆಸರುವಾಸಿ: ಬಿಜೆಪಿ ಒಬಿಸಿ ಮೋರ್ಚಾ ರಾಜ್ಯಾಧ್ಯಕ್ಷ ರಘು.ಆರ್.ಕೌಟಿಲ್ಯ ಮಾತನಾಡಿ, ಬ್ರಿಟಿಷರ ಆಳ್ವಿಕೆಯಲ್ಲೇ ಮೈಸೂರಿಗೆ ಏನೇನು ಅಭಿವೃದ್ಧಿ ಮಾಡಬೇಕು ಅವೆಲ್ಲವನ್ನೂ ಮೈಸೂರು ಸಂಸ್ಥಾನದ ರಾಜರು ಮಾಡಿದ್ದಾರೆ. ಮೈಸೂರು ವಿವಿ, ಮೈಸೂರು ಅರಮನೆ, ಸಿಐಟಿಬಿ, ಕೆ.ಆರ್. ಆಸ್ಪತ್ರೆ ಸೇರಿದಂತೆ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಅವರು ನೀಡಿದ್ದ ಕೊಡುಗೆಗಳು ಅಜರಾಮರ ಎಂದು ರಾಜರ ಸೇವೆಯನ್ನು ಜನರು ಕೊಂಡಾಡುತ್ತಿದ್ದಾರೆ ಎಂದರು.

ಮಹಿಳಾ ಸಬಲೀಕರಣಕ್ಕೆ ಹೆಚ್ಚಿನ ಆದ್ಯತೆ: ಬಿಜೆಪಿ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಮಂಜುಳಾ ಮಾತನಾಡಿ, ಮೈಸೂರು ರಾಜಮನೆತನ ಮಹಿಳಾ ಸಬಲೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಿತ್ತು. ಹೆಣ್ಣು ಮಕ್ಕಳಿಗಾಗಿ ಶಾಲೆ ತೆರೆದಿದ್ದರು. ದೀನ–ದಲಿತರ ಏಳಿಗೆಗಾಗಿ ಮೀಸಲಾತಿ ಜಾರಿಗೆ ತಂದರು. ರೈತರ ಬದುಕು ಹಸನು ಮಾಡಲು ಕೆಆರ್‌ಎಸ್ ಸೇರಿದಂತೆ ಇತರೆ ಜಲಾಶಯಗಳನ್ನು ನಿರ್ಮಾಣ ಮಾಡಿದರು ಎಂದರು.

ಮೋದಿ ಆಳ್ವಿಕೆಯಲ್ಲೂ ಮುಂದುವರಿಕೆ: ಬಿಜೆಪಿ ಮೈಸೂರು ನಗರಾಧ್ಯಕ್ಷ ಎಲ್. ನಾಗೇಂದ್ರ ಮಾತನಾಡಿ, ಹಳೆ ಮೈಸೂರು ಭಾಗದ ಅಭಿವೃದ್ಧಿಗೆ ಮೈಸೂರು ರಾಜಮನೆತನದ ಕೊಡುಗೆ ಅಪಾರ. ಈ ಕಾರ್ಯವನ್ನು ಮುಂದೆ ಬಂದ ಎಲ್ಲಾ ರಾಜಕಾರಣಿಗಳು ಮುಂದುವರೆಸಿದ್ದಾರೆ. ನರೇಂದ್ರ ಮೋದಿ ಅವರ ಆಡಳಿತಾವಧಿಯಲ್ಲಿ ಅಭಿವೃದ್ಧಿ ಕೆಲಸಗಳು ಇಮ್ಮಡಿಯಾದವು. ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ಹೈವೇ, ರೈಲ್ವೆ ಇಲಾಖೆ ಆಧುನೀಕರಣ ಸೇರಿದಂತೆ ನಾನಾ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಎಂದು ತಿಳಿಸಿದರು.

ವೇದಿಕೆಯಲ್ಲಿ ಬಿಜೆಪಿ ಮೈಸೂರು ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಮಾಜಿ ಮೇಯರ್ ಶಿವಕುಮಾರ್, ನಗರ ಪ್ರಧಾನ ಕಾರ್ಯದರ್ಶಿಗಳಾದ ಬಿ.ಎಂ. ರಘು, ಕೇಬಲ್ ಮಹೇಶ್, ಈರೇಗೌಡ, ಚಾಮುಂಡೇಶ್ವರಿ ಮಂಡಲ ಅಧ್ಯಕ್ಷ ರಾಕೇಶ್ ಭಟ್, ಮೈಸೂರು ನಗರ ಉಪಾಧ್ಯಕ್ಷ ರಮೇಶ್, ನಗರ ಪಾಲಿಕೆ ಮಾಜಿ ಸದಸ್ಯರಾದ ಜಗದೀಶ್, ಲಕ್ಷ್ಮಿಕಿರಣ್, ಆರ್.ಕೆ.ಶರತ್, ಮುಖಂಡರಾದ ಗೆಜ್ಜಗಳ್ಳಿ ಮಹೇಶ್, ಅರುಣ್, ವಸಂತ್ ಕುಮಾರ್ ಸೇರಿದಂತೆ ಇತರರಿದ್ದರು. ಇದಕ್ಕೂ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ಪೂರ್ಣ ಕುಂಭ ಸ್ವಾಗತ ಕೋರಿ, ಗಟ್ಟಿಮೇಳದೊಂದಿಗೆ ವೇದಿಕೆವರೆಗೆ ಕರೆತರಲಾಯಿತು. ಕಾರ್ಯಕ್ರಮದ ಕೊನೆಯಲ್ಲಿ ಅನೇಕ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಯದುವೀರ್ ಅವರನ್ನು ಹಾರ–ತುರಾಯಿ ಹಾಕಿ ಬೆಂಬಲ ವ್ಯಕ್ತಪಡಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Vishveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಜಲ ಅಮೂಲ್ಯ, ಸದ್ಬಳಕೆ ಮಾಡಿಕೊಳ್ಳಿ

ಮೈಸೂರು ಜನತೆಗೆ ಪಾಲಿಕೆ ಆಯುಕ್ತೆ ಡಾ. ಮಧು ಕಿವಿಮಾತು



ಮೈಸೂರಿನ ವಾಣಿ ವಿಲಾಸ ನೀರು ಸರಬರಾಜು ಮಂಡಳಿಯಲ್ಲಿ ಶುಕ್ರವಾರ ನಡೆದ ವಿಶ್ವಜಲ ದಿನದ ಕಾರ್ಯಕ್ರಮದಲ್ಲಿ ಮಳೆ ನೀರು ಕೊಯ್ಲು ವ್ಯವಸ್ಥೆ ಅಳವಡಿಸಿಕೊಂಡಿರುವ ನಾಗರಿಕರಿಗೆ ಮೈಸೂರು ಮಹಾನಗರ ಪಾಲಿಕೆ ಆಯುಕ್ತೆ ಡಾ.ಎನ್.ಎನ್.ಮಧು ಅಭಿನಂದನಾ ಪತ್ರ ನೀಡಿ ಗೌರವಿಸಿದರು.

ಮೈಸೂರು,ಮಾ.22(ಎಂಟಿವೈ)– ಬೇಸಿಗೆ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಅಭಾವ ಸೃಷ್ಟಿಯಾಗದಂತೆ ನೋಡಿಕೊಳ್ಳುವ ನಿಟ್ಟಿನಲ್ಲಿ ನೀರಿನ ಸದ್ಬಳಕೆ ಮಾಡಿಕೊಳ್ಳಲು ಎಲ್ಲರೂ ಪಣ ತೊಡಬೇಕು ಎಂದು ಮೈಸೂರು ಮಹಾನಗರ ಪಾಲಿಕೆಯ ಆಯುಕ್ತೆ ಡಾ.ಎನ್.ಎನ್.ಮಧು ಸಲಹೆ ನೀಡಿದ್ದಾರೆ.

ಮೈಸೂರಿನ ವಾಣಿ ವಿಲಾಸ ನೀರು ಸರಬರಾಜು ಮಂಡಳಿಯ ಸಭಾಂಗಣದಲ್ಲಿ ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಆಯೋಜಿಸಿದ್ದ 'ವಿಶ್ವಜಲ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಬಾರಿ ಬೇಸಿಗೆ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಅಭಾವ ಸೃಷ್ಟಿಯಾಗುವ ಆತಂಕ ಎದುರಾಗಿದೆ. ಬೆಂಗಳೂರು ಸೇರಿದಂತೆ ವಿವಿಧೆಡೆ ಈಗಾಗಲೇ ನೀರಿನ ಸಮಸ್ಯೆ ಕಂಡು ಬಂದರೂ, ಮೈಸೂರಲ್ಲಿ ಸಮಸ್ಯೆಯಾಗಿಲ್ಲ. ಒಂದೆಡೆ ಕಬಿನಿ, ಮತ್ತೊಂದೆಡೆ ಕೆಆರ್‌ಎಸ್ ಜಲಾಶಯಗಳಿರುವುದರಿಂದ ಮೈಸೂರಿನ ಜನರಿಗೆ ವರದಾನವಾಗಿ ಪರಿಣಮಿಸಿದೆ ಎಂದರು.

ಜನರು ನೀರಿನ ಸದ್ಬಳಕೆ ಮಾಡಬೇಕು. ಕೆಲವರು ಕಾರು ಸೇರಿದಂತೆ ವಾಹನ ತೊಳೆಯಲು ಕುಡಿಯುವ ನೀರನ್ನೇ ಯಥೇಚ್ಛವಾಗಿ ಬಳಸಿ ಪೋಲು ಮಾಡುತ್ತಿರುವುದು ಕಂಡು ಬರುತ್ತಿದೆ. ನೀರನ್ನು ಪೋಲು ಮಾಡುವವರಿಗೆ ಮನವರಿಕೆ ಮಾಡಿಕೊಡಬೇಕು. ವಾಹನ ತೊಳೆಯಲು ಕುಡಿಯುವ ನೀರನ್ನು ಬಳಸದಂತೆ ಜಾಗೃತಿ ಮೂಡಿಸಬೇಕು. ಬೇಸಿಗೆ ವ್ಯಾಪಕವಾಗಿರುವುದರಿಂದ ಮುಂದಿನ ದಿನಗಳಲ್ಲಿ ನೀರಿನ ಅಭಾವ ಉಂಟಾಗಲೂಬಹುದು. ಎಲ್ಲರೂ ನೀರಿನ ಮಹತ್ವ ಅರಿತು ಮುಂದಿನ ಪೀಳಿಗೆಗೆ ಜೀವಜಲ ಕೊಡುಗೆ ನೀಡಲು ಮುಂದಾಗಬೇಕು ಎಂದು ಸಲಹೆ ನೀಡಿದರು.

ನೀರು ಸರಬರಾಜು ವ್ಯವಸ್ಥೆಯಲ್ಲಿ ವ್ಯತ್ಯಯ ಉಂಟಾದರೆ ಟ್ಯಾಂಕರ್ ಮೂಲಕ ಪೂರೈಸಲು ಕ್ರಮ ಕೈಗೊಳ್ಳಲಾಗಿದೆ. ಅದಕ್ಕಾಗಿ ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿದೆ. ಯಾವ ಬಡಾವಣೆಗಳಲ್ಲಿ ನೀರಿನ ಸಮಸ್ಯೆ ದೂರು ಬಂದರೆ, ತುರ್ತಾಗಿ ಸ್ಪಂದಿಸಲು ಕ್ರಮ ಕೈಗೊಳ್ಳಲಾಗಿದೆ. ಇನ್ನು ಎರಡು ತಿಂಗಳು ಹನಿ ನೀರಿಗೂ ಮಹತ್ವವಿದ್ದು, ಮೈಸೂರಿನ ಜನತೆ ನೀರು ಪೋಲಾಗದಂತೆ ನೋಡಿಕೊಳ್ಳಬೇಕು. ಎಲ್ಲೇ ಆದರೂ ನಲ್ಲಿಯಲ್ಲಿ ನೀರು ಸುರಿಯುತ್ತಿದ್ದರೆ, ನಿಲ್ಲಿಸಿ ನೀರನ್ನು ಸಂರಕ್ಷಿಸಬೇಕು ಎಂದರು.

ಅಭಿನಂದನಾ ಪತ್ರ: ಮೈಸೂರಲ್ಲಿ ಮಳೆ ನೀರು ಕೊಯ್ಲು ಮಾಡಿ, ಸದ್ಬಳಕೆ ಮಾಡಿಕೊಳ್ಳುತ್ತಿರುವ 14 ಮಂದಿಯಲ್ಲಿ ನಾಲ್ಕು ಮಂದಿಗೆ ಕಾರ್ಯಕ್ರಮದಲ್ಲಿ ಅಭಿನಂದನಾ ಪತ್ರ, ಪದಕ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನೀರಿನ ಸದ್ಬಳಕೆ ಕುರಿತಂತೆ ಮೈಸೂರು ವಿಶ್ವವಿದ್ಯಾನಿಲಯದ ಭೂ ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ.ಡಿ.ನಾಗರಾಜು ಮಾತನಾಡಿದರು. ಈ ಸಂದರ್ಭದಲ್ಲಿ ಪಾಲಿಕೆ ಉಪ ಆಯುಕ್ತೆ ಸಿಂಧು, ಎಸ್‌ಜೆಸಿಇ ಕಾಲೇಜಿನ ಪರಿಸರ ವಿಭಾಗದ ಮುಖ್ಯಸ್ಥ ಡಾ.ಬಿ.ಎಂ.ಸದಾಶಿವಮೂರ್ತಿ, ಎಇಇ ನಾಗರಾಜೇಗೌಡ, ಸೋಮಶೇಖರ್, ರವಿಕುಮಾರ್, ಉಮಾ, ಡಿ.ಅಶ್ವಿನಿ, ಇನ್ನಿತರರು ಉಪಸ್ಥಿತರಿದ್ದರು.

ಮಾ.31ರಂದು ಮೈಸೂರಿನಲ್ಲಿ ಅಹಿಂಸಾ ರನ್: ಪೋಸ್ಟರ್ ಬಿಡುಗಡೆ



ಗುರುವಾರ 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕ ಡಾ.ಕೆ.ಬಿ.ಗಣಪತಿ ಅವರು ಅಹಿಂಸಾ ರನ್ ಪೋಸ್ಟರ್ ಅನ್ನು ಬಿಡುಗಡೆ ಮಾಡಿದರು. ಈ ವೇಳೆ ಜೆಐಟಿಓ ಲೇಡಿಸ್ ವಿಂಗ್ ಚೀಫ್ ಸೆಕ್ರೆಟರಿ ರಜನಿ ಡಗ್ಲಿಯಾ, ಜೆಐಟಿಓ ಮೈಸೂರು ಚೀಫ್ ಸೆಕ್ರೆಟರಿ ಗೌತಮ್ ಸಲೇಚಾ, ಜೆಐಟಿಓ ಮೈಸೂರು ಟ್ರೆಸರರ್ ವಿನೋದ್ ಬೊಕಾಲಿವಾಲಾ, ಜೆಐಟಿಓ ಮೈಸೂರು ಚೇರ್ಮನ್ ಕಾಂತಿಲಾಲ್ ಎಸ್.ಜೈನ್, ಜೆಐಟಿಓ ಲೇಡಿಸ್ ವಿಂಗ್ ಚೇರ್ ಪರ್ಸನ್ ಮೊನಾ ಬಟೇವರ್, ಜೆಐಟಿಓ ಲೇಡಿಸ್ ವಿಂಗ್ ಪ್ರಾಜೆಕ್ಟ್ ಡೈರೆಕ್ಟರ್ ಸಪ್ನಗಾಂಧಿ ಉಪಸ್ಥಿತರಿದ್ದಾರೆ.

ಮೈಸೂರು, ಮಾ. 22(ಕೆಎಸ್)– ಮೈಸೂರಿನ ಜೈನ್ ಇಂಟರ್‌ನ್ಯಾಷನಲ್ ಟ್ರೇಡ್ ಆರ್ಗನೈಜೇಷನ್(ಜೆಐಟಿಓ)ನ ಮಹಿಳಾ ಘಟಕದ ವತಿಯಿಂದ ಮಾ. 31 ರಂದು ಶಾಂತಿ ಮತ್ತು ಅಹಿಂಸೆಗಾಗಿ ಐಐಎಫ್‌ಎಲ್ ಜಿತೋ ಅಹಿಂಸಾ ಓಟ ಆಯೋಜಿಸಲಾಗಿದೆ.

ಅಂದು ಬೆಳಗ್ಗೆ 5.30ಕ್ಕೆ ಮೈಸೂರು ಅರಮನೆಯ ಉತ್ತರ ದ್ವಾರದಲ್ಲಿರುವ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗ ಓಟಕ್ಕೆ ಚಾಲನೆ ನೀಡಲಾಗುವುದು. ಬಿಗ್‌ಬಾಸ್ ಕನ್ನಡ ಸೀಸನ್ 10ರ ವಿಜೇತ ಕಾರ್ತಿಕ್ ಮಹೇಶ್ ಮತ್ತು ಚಲನಚಿತ್ರ ನಟರೂ ಆದ ಕ್ರಿಕೆಟರ್ ಪ್ರದೀಪ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಎಲ್ಲಾ ವಯೋಮಾನದ ಜನರು 10 ಕಿ.ಮೀ., 5 ಕಿ.ಮೀ. ಮತ್ತು 3 ಕಿ.ಮೀ. ಓಟದಲ್ಲಿ ಭಾಗವಹಿಸಬಹುದು. 10 ಕಿ.ಮೀ. ಓಟದ ಮೊದಲ ಮೂವರು ವಿಜೇತರಿಗೆ ರೂ. 10,000, ರೂ. 7,000 ಮತ್ತು ರೂ. 5,000 ನಗದು ಬಹುಮಾನವಾಗಿ ನೀಡಲಾಗುವುದು. 5 ಕಿ.ಮೀ. ಓಟದ ಮೊದಲ ಮೂವರು ವಿಜೇತರಿಗೆ ರೂ. 7000, ರೂ. 5000 ಮತ್ತು ರೂ. 3000 ಹಾಗೂ 3 ಕಿ.ಮೀ. ಓಟದ ಮೊದಲ ಮೂವರು ವಿಜೇತರಿಗೆ ರೂ. 5000, ರೂ. 3000 ಮತ್ತು ರೂ. 2000 ನಗದು ಬಹುಮಾನ ನೀಡಲಾಗುವುದು. ಹೆಚ್ಚಿನ ಮಾಹಿತಿ ಮತ್ತು ನೋಂದಣಿಗೆ ಮೊ.9916544413 ಅಥವಾ 90369–09044 ಅಥವಾ ಲಾಗ್ ಆನ್ www.ahimsarun.com ಮಾ. 28 ರೊಳಗೆ ಸಂಪರ್ಕಿಸಿ ನೋಂದಾಯಿಸಿಕೊಳ್ಳಬಹುದು. ಸ್ಥಳದಲ್ಲೇ ನೋಂದಣಿಗೆ ಅವಕಾಶವಿರುವುದಿಲ್ಲ.

ಪ್ರಧಾನಿ ಮೋದಿಗೆ ಭೂತಾನ್‌ನ ಅತ್ಯುನ್ನತ ನಾಗರಿಕ ಗೌರವ 'ಆರ್ಡರ್ ಆಫ್ ದಿ ಡ್ರಕ್ ಗ್ಯಾಲ್ಪೊ' ಪ್ರಶಸ್ತಿ

ಥಿಂಪೂ, ಮಾ.22– ಪ್ರಧಾನಿ ನರೇಂದ್ರ ಮೋದಿ ಅವರಿಗೆ ಭೂತಾನ್ ನ ಅತ್ಯುನ್ನತ ನಾಗರಿಕ ಗೌರವವಾದ ' ಆರ್ಡರ್ ಆಫ್ ದಿ ಡ್ರಕ್ ಗ್ಯಾಲ್ಪೊ' ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಭೂತಾನ್ ದೊರೆ ಜಿಗ್ಮೆ ಖೇಸರ್ ನಾಂಗೇಲ್ ವಾಂಗ್ ಚುಕ್ ಅವರು ಈ ಪ್ರಶಸ್ತಿ ನೀಡಿ ಅಭಿನಂದಿಸಿದ್ದಾರೆ. ಪ್ರಧಾನಿ ಮೋದಿ, ಈ ಪ್ರಶಸ್ತಿ ಪಡೆದುಕೊಂಡ ಮೊದಲ ವಿದೇಶಿ ಸರ್ಕಾರದ ಮುಖ್ಯಸ್ಥರಾಗಿದ್ದಾರೆ.



ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಮೋದಿ, ಭೂತಾನ್‌ನ ಅತ್ಯುನ್ನತ ನಾಗರಿಕ ಗೌರವ 'ಆರ್ಡರ್ ಆಫ್ ದಿ ಗ್ಯಾಲ್ಪೊ' ಪ್ರಶಸ್ತಿ ಸ್ವೀಕರಿಸಲು ನನಗೆ ಸಂತಸವಾಗಿದೆ. ಈ ಪ್ರಶಸ್ತಿಯನ್ನು 140 ಕೋಟಿ ಭಾರತೀಯರಿಗೆ ಅರ್ಪಿಸುತ್ತೇನೆ ಎಂದು ತಿಳಿಸಿದ್ದಾರೆ.

ಮೈಸೂರಿನ 42 ಪರೀಕ್ಷಾ ಕೇಂದ್ರಗಳ ಸುತ್ತ ನಿಷೇದಾಜ್ಞೆ

ಮೈಸೂರು,ಮಾ.22(ಆರ್‌ಕೆ)–ಮೈಸೂರು ನಗರದಲ್ಲಿ ಮಾರ್ಚ್25 ರಿಂದ ಏಪ್ರಿಲ್4 ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ 42 ಕೇಂದ್ರಗಳ ಸುತ್ತ ಸೆಕ್ಷನ್ 144 ರೀತ್ಯಾ ನಿಷೇದಾಜ್ಞೆ ಜಾರಿಗೊಳಿಸಲಾಗಿದೆ. ಈ ಸಂಬಂಧ ಆದೇಶ ಹೊರಡಿಸಿರುವ ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಅವರು, ಪರೀಕ್ಷೆಗಳು ನಡೆಯುವ ಸಮಯದಲ್ಲಿ ಬೆಳಿಗ್ಗೆ 6ರಿಂದ ಸಂಜೆ 6 ಗಂಟೆವರೆಗೆ ನಿಷೇದಾಜ್ಞೆ ವಿಧಿಸಲಾಗಿದ್ದು, ಪರೀಕ್ಷಾ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಬೇರೆಯವರು ಸುಳಿಯುವಂತಿಲ್ಲ ಎಂದು ತಿಳಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತಲಿನ ಜೆರಾಕ್ಸ್ ಅಂಗಡಿಗಳನ್ನು ಬಂದ್ ಮಾಡುವಂತೆ ಸೂಚಿಸಲಾಗಿದ್ದು, ನಿಷೇದಾಜ್ಞೆ ಉಲ್ಲಂಘಿಸುವವರ ವಿರುದ್ಧ ಕಾನೂನು ರೀತಿಯ ಕ್ರಮ ಜರುಗಿಸಲಾಗುವುದು ಎಂದು ಆಯುಕ್ತರು ಆದೇಶದಲ್ಲಿ ತಿಳಿಸಿದ್ದಾರೆ.

ಮೃಗಾಲಯದ ಚಿರತೆ ದತ್ತು ಪಡೆದ ಕ್ರಿಕೆಟ್ ಆಟಗಾರ್ತಿ ವೇದಾ ಕೃಷ್ಣಮೂರ್ತಿ

ಮೈಸೂರು, ಮಾ.22(ಎಂಟಿವೈ)– ಭಾರತ ಮಹಿಳಾ ಕ್ರಿಕೆಟ್ ತಂಡದ ಆಟಗಾರ್ತಿ ಕು.ವೇದಾ ಕೃಷ್ಣಮೂರ್ತಿ ಆರನೇ ಬಾರಿಗೆ ಮೈಸೂರು ಮೃಗಾಲಯದಲ್ಲಿರುವ 'ಭಾವನಾ' ಹೆಸರಿನ ಹೆಣ್ಣು ಚಿರತೆಯನ್ನು ಒಂದು ವರ್ಷದ ಅವಧಿಗೆ ದತ್ತು ಪಡೆದಿದ್ದಾರೆ.

ವೈವಿದ್ಯಮಯ ಪ್ರಾಣಿ–ಪಕ್ಷಿ ಸಂಕುಲ ಹೊಂದಿರುವ ಮೈಸೂರು ಮೃಗಾಲಯ ದೇಶದ ಮುಂಚೂಣಿ ಮೃಗಾಲಯಗಳಲ್ಲಿ ಒಂದಾಗಿದ್ದು, ಪ್ರಾಣಿ–ಪಕ್ಷಿ ಪಾಲನೆಗಾಗಿ ಸಾರ್ವಜನಿಕರ ಸಹಭಾಗಿತ್ವಕ್ಕಾಗಿ ಮೃಗಾಲಯದಲ್ಲಿ ಪ್ರಾಣಿ ದತ್ತು ಯೋಜನೆ ಅನುಷ್ಠಾನಗೊಳಿಸಿದ್ದು, ಸಾಕಷ್ಟು ಮಂದಿ ಗಣ್ಯರು ಹಾಗೂ ಪ್ರಾಣಿ ಪ್ರಿಯರು ಮೃಗಾಲಯದಲ್ಲಿರುವ ಪ್ರಾಣಿ–ಪಕ್ಷಿಗಳನ್ನು ದತ್ತು ಪಡೆಯುತ್ತಿದ್ದಾರೆ. 6 ವರ್ಷದ ಹಿಂದೆ ಮೈಸೂರಿಗೆ ಭೇಟಿ ನೀಡಿದ್ದ ಭಾರತ ಮಹಿಳಾ ಕ್ರಿಕೆಟ್ ತಂಡದ ಆಟಗಾರ್ತಿ ಕು.ವೇದಾ ಕೃಷ್ಣಮೂರ್ತಿ ಚಿರತೆಯೊಂದನ್ನು ದತ್ತು ಪಡೆದಿದ್ದರು. ಇವರು ಕಳೆದ 6 ವರ್ಷದಿಂದ ಚಿರತೆಯನ್ನು ದತ್ತು ಪಡೆಯುತ್ತಿದ್ದಾರೆ. ಇಂದು ಮೃಗಾಯಲಕ್ಕೆ ಭೇಟಿ ನೀಡಿ, 50 ಸಾವಿರ ರೂ. ಪಾವತಿಸಿ ಭಾವನ ಹೆಸರಿನ ಚಿರತೆಯನ್ನು ಒಂದು ವರ್ಷದ ಅವಧಿಗೆ ದತ್ತು ಪಡೆದಿದ್ದಾರೆ ಎಂದು ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ಮಹೇಶ್ ಕುಮಾರ್ ತಿಳಿಸಿದ್ದಾರೆ.



ಚಿರತೆ ದತ್ತು ಪಡೆದ ಭಾರತದ ಮಹಿಳಾ ಕ್ರಿಕೆಟ್ ಪಟು ಕು.ವೇದಾ ಕೃಷ್ಣಮೂರ್ತಿ ಅವರಿಗೆ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ಮಹೇಶ್ ಕುಮಾರ್ ಪ್ರಶಂಸನಾ ಪ್ರಮಾಣ ಪತ್ರ ನೀಡಿದರು

ಸರ್ಕಾರಿ ವೈದ್ಯಾಧಿಕಾರಿಗಳ ಸಂಘದಿಂದ ಮಹಿಳಾ ದಿನಾಚರಣೆ



ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ವತಿಯಿಂದ ಮೈಸೂರಲ್ಲಿ ಶುಕ್ರವಾರ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಆಚರಿಸಲಾಯಿತು.

ಮೈಸೂರು, ಮಾ.22(ಎಂಟಿವೈ)– ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ವತಿಯಿಂದ ಮೈಸೂರಲ್ಲಿ ಶುಕ್ರವಾರ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಆಚರಿಸಲಾಯಿತು.

ಮೈಸೂರಿನ ಅರಮನೆ ಮುಂಭಾಗದ ಕೋಟೆ ಅಂಜನೇಯ ಸ್ವಾಮಿ ದೇವಾಲಯ ಆವರಣದಲ್ಲಿ ಆಯೋಜಿಸಿದ್ದ ಮಹಿಳಾ ದಿನದ ಜಾಗೃತಿ ಜಾಥಾಕ್ಕೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕರಾದ ಡಾ.ಬಿ.ಎಸ್.ಪುಷ್ಪಲತಾ ಚಾಲನೆ ನೀಡಿದರು. ಹಾರ್ಡಿಂಗ್ ವೃತ್ತದ ಮೂಲಕ ಬಳಿಕ ನಜ಼ರ್‌ಬಾದ್‌ನಲ್ಲಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿರುವ ವೈದ್ಯರ ಭವನ ಜಾಥಾ ತಲುಪಿತು.

ಮಹಿಳಾ ಸಬಲೀಕರಣವಾಗಬೇಕು: ವೈದ್ಯರ ಭವನದಲ್ಲಿ ನಡೆದ ಮಹಿಳಾ ದಿನದ ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕರಾದ ಡಾ.ಬಿ.ಎಸ್.ಪುಷ್ಪಲತಾ ಮಾತನಾಡಿ, ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲೂ ಸಾಧನೆ ಮಾಡಬೇಕು. ಮಹಿಳಾ ಸಬಲೀಕರಣವಾದಾಗ ಮಾತ್ರ ಏಳಿಗೆ ಸಾಧಿಸಬಹುದಾಗಿದೆ. ಇತ್ತೀಚಿನ ವರ್ಷಗಳಲ್ಲಿ ಎಲ್ಲಾ ಹಂತದಲ್ಲೂ ಸಾಧಕ ಮಹಿಳೆಯರು ಕಂಡು ಬರುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಇನ್ನಷ್ಟು ಸಾಧನೆ ಮಾಡಲು ಮಹಿಳೆಯರು ಮುಂದೆ ಬರಬೇಕು. ಸಾಧನೆ ಹಾದಿಯಲ್ಲಿ ಸಾಗುವ ವೇಳೆ ಯಾವುದೇ ಕಾರಣಕ್ಕೂ ಹಿಂದೆ ಸರಿಯಬಾರದು. ವೃತ್ತಿ ಕ್ಷೇತ್ರ ಮಾತ್ರವಲ್ಲದೆ, ಕೌಟುಂಬಿಕ ವಲಯದಲ್ಲೂ ಮಹಿಳೆಯರು ತಮ್ಮ ಜವಾಬ್ದಾರಿಯನ್ನು ನಿಭಾಯಿಸುತ್ತಿದ್ದಾರೆ. ಮಹಿಳೆಯರ ಸಾಧನೆಗೆ ಪುರುಷರ ಸಹಭಾಗಿತ್ವ, ಸಹಕಾರ ಇರಬೇಕು. ಸಮುದಾಯದಲ್ಲಿ ಗಂಡು–ಹೆಣ್ಣು ಎಂಬ ಬೇದಭಾವವಿಲ್ಲದೆ ಸರಿಸಮಾನರಾಗಿರಬೇಕು. ಆಗ ಮಾತ್ರ ಸಮ ಸಮಾಜ ನಿರ್ಮಾಣ ಸಾಧ್ಯ ಎಂದರು.

ಕಡ್ಡಾಯ ಮತದಾನದ ವಾಗ್ದಾನ: ಲೋಕಸಭಾ ಚುನಾವಣೆಯಲ್ಲಿ ಆರೋಗ್ಯ ಇಲಾಖೆಯ ಎಲ್ಲಾ ಸಿಬ್ಬಂದಿಗಳು ಕಡ್ಡಾಯವಾಗಿ ಮತದಾನ ಮಾಡಬೇಕು. ಅಲ್ಲದೆ, ತಮ್ಮ ಸುತ್ತಮುತ್ತಲಿನ ಜನರಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದರು. ಇದೇ ವೇಳೆ ಕಡ್ಡಾಯ ಮತದಾನದ ಬಗ್ಗೆ ಪ್ರತಿಜ್ಞೆ ಸ್ವೀಕರಿಸಲಾಯಿತು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಇಲಾಖೆಯ ಉಪನಿರ್ದೇಶಕ ಡಾ ವಸಂತ ಕುಮಾರ್, ವಿಭಾಗೀಯ ಜಂಟಿ ನಿರ್ದೇಶಕರಾದ ಡಾ. ಮಲ್ಲಿಕಾ, ಜಿಲ್ಲಾ ಆಸ್ಪತ್ರೆಯ ಶಸ್ತ್ರ ಚಿಕಿತ್ಸಕ ಡಾ. ಅಮರನಾಥ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಪಿ.ಸಿ. ಕುಮಾರಸ್ವಾಮಿ, ಡಾ.ಸಿ.ಎಂ.ಜಗದೀಶ್ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ಶನಿ ಮಹಾಶಾಂತಿ, ಸತ್ಯನಾರಾಯಣ ಪೂಜೆ

ಮೈಸೂರು, ಮಾ.22–ದೇವರಾಜ ಮೊಹಲ್ಲಾದಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಹುಣ್ಣಿಮೆ ಪ್ರಯುಕ್ತ ಮಾ.25ರ ಸೋಮವಾರ ಬೆಳಗ್ಗೆ ಸಾಮೂಹಿಕ ಸತ್ಯನಾರಾಯಣ ಪೂಜೆ ಮತ್ತು ಮೀನ, ಕರ್ಕಾಟಕ, ತುಲಾ, ಮಕರ, ಕುಂಭ, ಮೀನ ರಾಶಿಯವರಿಗೆ ಶನಿ ಮಹಾಶಾಂತಿ, ಬಾಧಾ ನಿವಾರಕ ಶ್ರೀ ಮಹಾ ಸುದರ್ಶನ ಹೋಮ, ಆರೋಗ್ಯ ಪ್ರಾಪ್ತಿಗಾಗಿ ಮಹಾ ಮೃತ್ಯುಂಜಯ ಹೋಮ ಮತ್ತು ಧನ್ವಂತರಿ ಹೋಮ ರಾಹು,ಕುಜ ಶಾಂತಿ ಏರ್ಪಡಿಸಲಾಗಿದೆ.

ಬೆಳಗ್ಗೆ 9.30ಕ್ಕೆ ಪ್ರಾರಂಭವಾಗಿ 12.30ಕ್ಕೆ ಪೂರ್ಣಾಹುತಿ ಮಹಾಮಂಗಳಾರತಿ ನೆರವೇರಲ್ಪಡುತ್ತದೆ. ಹೆಚ್ಚಿನ ವಿವರಗಳಿಗೆ ಮೈ ಕುಮಾರ್, ಜಾತಕ ವಿಮರ್ಶಕರು ಅವರನ್ನು 9845183392 9845183399 ಮೂಲಕ ಸಂಪರ್ಕಿಸಬಹುದು.

ಚೆನ್ನೈ ಆಸ್ಪತ್ರೆಯಲ್ಲಿ ಹೆಚ್‌ಡಿಕೆ ಆರೋಗ್ಯ ವಿಚಾರಿಸಿದ ಜಿಟಿಡಿ, ಸಿಎಸ್‌ಪಿ



ಹೆಚ್‌ಡಿಕೆ ದಾಖಲಾಗಿರುವ ಚೆನ್ನೈ ಆಸ್ಪತ್ರೆ ಮುಂದೆ ಶಾಸಕ ಜಿ.ಟಿ.ದೇವೇಗೌಡರು ಹಾಗೂ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು

ಮೈಸೂರು, ಮಾ.22(ಎಸ್‌ಬಿಡಿ)– ತಮಿಳುನಾಡು ಚೆನ್ನೈನ ಖಾಸಗಿ ಆಸ್ಪತ್ರೆಯಲ್ಲಿ ಹೃದಯ ಶಸ್ತ್ರಚಿಕಿತ್ಸೆಗೆ ಒಳಗಾದ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರನ್ನು ರಾಜ್ಯ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರೂ ಆದ ಶಾಸಕ ಜಿ.ಟಿ.ದೇವೇಗೌಡರು ಹಾಗೂ ಮಾಜಿ ಸಚಿವ ಸಿ.ಎಸ್. ಪುಟ್ಟರಾಜು ಅವರು ಶುಕ್ರವಾರ ಭೇಟಿಯಾಗಿ ಆರೋಗ್ಯ ವಿಚಾರಿಸಿದರು.

ಶಸ್ತ್ರ ಚಿಕಿತ್ಸೆ ಬಳಿಕ ಚೇತರಿಸಿಕೊಳ್ಳುತ್ತಿರುವ ಹೆಚ್‌ಡಿಕೆ ಜೊತೆ ಅರ್ಧ ಗಂಟೆಗೂ ಹೆಚ್ಚು ಕಾಲ ಇದ್ದು, ಬಹುಬೇಗ ಗುಣಮುಖರಾಗುವಂತೆ ಶುಭ ಕೋರಿದರು. ಈ ವೇಳೆ ನಾಡಿನ ಜನರ ಹಾರೈಕೆಯಿಂದ ಆರೋಗ್ಯದಲ್ಲಿ ಚೇತರಿಕೆ ಕಾಣುತ್ತಿದ್ದು, ಶೀಘ್ರದಲ್ಲೇ ಆಸ್ಪತ್ರೆಯಿಂದ ಬಿಡುಗಡೆಯಾಗಿ ಬೆಂಗಳೂರಿಗೆ ವಾಪಸ್ಸಾಗುತ್ತೇನೆ. ನಂತರ ರಾಜಕೀಯ ವಿದ್ಯಮಾನಗಳ ಬಗ್ಗೆ ಚರ್ಚಿಸೋಣ ಎಂದು ಕುಮಾರಸ್ವಾಮಿ ಹೇಳಿದ್ದಾಗಿ ಜಿ.ಟಿ.ದೇವೇಗೌಡರು ತಿಳಿಸಿದ್ದಾರೆ.

ಬಿಜೆಪಿ ಮುಖಂಡರಾದ ರಾಮು ಚಂದ್ರಗೌಡ, ವಕೀಲ ಪುಟ್ಟೇಗೌಡರು ಸೇರಿದಂತೆ ಹಲವು ಮುಖಂಡರು ಇದೇ ವೇಳೆ ಹೆಚ್‌ಡಿಕೆ ಅವರನ್ನು ಭೇಟಿಯಾಗಿ ಆರೋಗ್ಯ ವಿಚಾರಿಸಿದರು.

ಲೋಕಸಭಾ ಚುನಾವಣಾ ಕಣ ದಿನೇ ದಿನೆ ರಂಗೇರುತ್ತಿದ್ದು, ಇನ್ನೂ ಜೆಡಿಎಸ್ ಚಿಹ್ನೆಯಡಿ ಸ್ಪರ್ಧಿಸುವ ಮೈತ್ರಿ ಅಭ್ಯರ್ಥಿಗಳ ಹೆಸರು ಅಂತಿಮಗೊಂಡಿಲ್ಲ. ಮಂಡ್ಯದಲ್ಲಿ ಕುಮಾರಸ್ವಾಮಿ ಅವರೇ ಅಭ್ಯರ್ಥಿ ಎಂದು ಸಿ.ಎಸ್.ಪುಟ್ಟರಾಜು ಹೇಳಿದ್ದಾರೆ. ಅತ್ತ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಮುಖಂಡರು ಹಾಗೂ ಕಾರ್ಯಕರ್ತರು, ಹೆಚ್‌ಡಿಕೆ ಅವರು ನಮ್ಮ ಕ್ಷೇತ್ರ ಬಿಟ್ಟು ಹೋಗಬಾರದು. ನೀವೇ ಮಂಡ್ಯದಿಂದ ಸ್ಪರ್ಧಿಸಿ, ನಾವೂ ಪ್ರಚಾರ ನಡೆಸಿ ಗೆಲ್ಲಿಸುತ್ತೇವೆ ಎಂದು ನಿಖಿಲ್ ಕುಮಾರಸ್ವಾಮಿ ಅವರನ್ನು ಒತ್ತಾಯಿಸಿದ್ದಾರೆ. ಇತ್ತ ಹಾಸನದಲ್ಲೂ ಪ್ರಜ್ವಲ್ ರೇವಣ್ಣ ಸ್ಪರ್ಧೆಗೆ ಬಿಜೆಪಿ ಮುಖಂಡರ ಆಕ್ಷೇಪವಿದೆ. ಕುಮಾರಸ್ವಾಮಿ ಅವರು ಆಸ್ಪತ್ರೆಯಿಂದ ಬಿಡುಗಡೆಯಾಗಿ ವಾಪಸ್ಸಾದ ಕೂಡಲೇ ಅಭ್ಯರ್ಥಿಗಳನ್ನು ಅಂತಿಮಗೊಳಿಸುವ ಸವಾಲು ನಿರ್ವಹಿಸಬೇಕಿದೆ.

ಬುಡಕಟ್ಟು ಸಮುದಾಯ ಸ್ಥಳಾಂತರಿಸಿದ ಪ್ರದೇಶ ವನ್ಯಜೀವಿಗಳಿಗೆ ಮೀಸಲಾಗಬೇಕು

ವನ್ಯಜೀವಿ ಛಾಯಾಗ್ರಾಹಕ ಕೃಪಾಕರ್ ಅಭಿಮತ



31ನೇ ಫೆಡರೇಶನ್ ಆಫ್ ಇಂಡಿಯನ್ ಫೋಟೋಗ್ರಫಿ(FIP) ಸಮಾವೇಶವನ್ನು ವನ್ಯಜೀವಿ ಛಾಯಾಗ್ರಾಹಕ ಬಿ.ಎಸ್.ಕೃಪಾಕರ್ ಉದ್ಘಾಟಿಸಿದರು

ಮೈಸೂರು, ಮಾ.22(ಎಂಕೆ)– ಬುಡಕಟ್ಟು ಸಮುದಾಯದವನ್ನು ಸ್ಥಳಾಂತರಿಸಿದ ನಂತರ, ವನ್ಯಜೀವಿಗಳಿರುವ ಅರಣ್ಯ ಪ್ರದೇಶವನ್ನು ಅನ್ಯ ಉದ್ದೇಶಗಳಿಗೆ ಬಳಸದೇ ಸಂರಕ್ಷಣೆ ಮಾಡಬೇಕು ಎಂದು ವನ್ಯಜೀವಿ ಛಾಯಾಗ್ರಾಹಕ ಬಿ.ಎಸ್.ಕೃಪಾಕರ್ ಹೇಳಿದರು.

ನಗರದ ಸಯ್ಯಾಜಿರಾವ್ ರಸ್ತೆಯಲ್ಲಿರುವ ರಿಯೋ ಮೆರಿಡಿಯನ್ ಹೋಟೆಲ್‌ನಲ್ಲಿ ಯೂತ್ ಫೋಟೋಗ್ರಾಫಿಕ್ ಸೊಸೈಟಿ ವತಿಯಿಂದ 'ಗಜರಾಜ' ಶೀರ್ಷಿಕೆಯಡಿ ಆಯೋಜಿಸಿದ್ದ 31ನೇ ಫೆಡರೇಶನ್ ಆಫ್ ಇಂಡಿಯನ್ ಫೋಟೋಗ್ರಫಿ(FIP) ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ವನ್ಯಜೀವಿಗಳೊಂದಿಗೆ ಕಾಡಿನಲ್ಲಿ ವಾಸಿಸುವ ಬುಡಕಟ್ಟು ಸಮುದಾಯದವರು ಒಂದಲ್ಲಾ ಒಂದು ರೀತಿಯಲ್ಲಿ ಅರಣ್ಯ ರಕ್ಷಣೆಯನ್ನೂ ಮಾಡುತ್ತಿರುತ್ತಾರೆ. ಅವರನ್ನು ಬೇರೆ ಜಾಗಕ್ಕೆ ಸ್ಥಳಾಂತರಿಸಿದ ಬಳಿಕ ಬುಡಕಟ್ಟು ಸಮುದಾಯ ವಾಸವಿದ್ದ ಅರಣ್ಯ ಪ್ರದೇಶವನ್ನು ಅನ್ಯ ಉದ್ದೇಶಗಳಿಗೆ ಬಳಸದೇ ಅರಣ್ಯ ಪ್ರದೇಶವನ್ನಾಗಿಯೇ ಸಂರಕ್ಷಣೆ ಮಾಡಬೇಕು ಎಂದು ಒತ್ತಾಯಿಸಿದರು.

ಛಾಯಾಗ್ರಹಣ ಕಲೆ ಉತ್ತೇಜಿಸುವ ನಿಟ್ಟಿನಲ್ಲಿ ಫೋಟೋಗ್ರಫಿ ಸಮಾವೇಶ ಸಹಕಾರಿಯಾಗಿದೆ. ಫೋಟೋಗ್ರಫಿ ಸಮಾವೇಶ ಅಂತರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿ ಹೊಂದಿದ್ದು, ಛಾಯಾಗ್ರಹಣ ಕಲಿಕೆ ಕಲಾತ್ಮಕ ಮತ್ತು ತಾಂತ್ರಿಕ ಕೌಶಲಗಳ ಅಪರೂಪದ ಮಿಶ್ರಣ ಒದಗಿಸುತ್ತದೆ ಹಾಗೂ ಮಾರ್ಗದರ್ಶನ ನೀಡುವಲ್ಲಿಯೂ ಸಹಾಯಕವಾಗಿದೆ ಎಂದರು.

ಛಾಯಾಚಿತ್ರಗಳ ಪ್ರದರ್ಶನ: ಜಾನಪದ ಕಲಾಪ್ರಕಾರಗಳಾದ ಯಕ್ಷಗಾನ, ಡೋಲು ಕುಣಿತ, ವೀರಗಾಸೆ, ಮೈಸೂರು ಅರಮನೆ ಸೇರಿದಂತೆ ಮೈಸೂರಿನ ಪ್ರವಾಸಿ ತಾಣಗಳ ಅತ್ಯಾಕರ್ಷಕ ಛಾಯಾಚಿತ್ರಗಳನ್ನು ಸಮಾವೇಶದಲ್ಲಿ ಪ್ರದರ್ಶಿಸಲಾಯಿತು. ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ಎಸ್.ಟಿ.ರವಿಕುಮಾರ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಹಿರಿಯ ಛಾಯಾಗ್ರಾಹಕರಾದ ಅದಿತ್ ಅಗರ್‌ವಾಲ್, ಸುಧೀರ್ ಸೆಕ್ಸೆನಾ, ಬರೂಣ್ ಸಿನ್ಹಾ, ಸಿ.ಆರ್.ಸತ್ಯನಾರಾಯಣ್ ಯೂತ್ ಫೋಟೋಗ್ರಾಫಿಕ್ ಸೊಸೈಟಿ ಅಧ್ಯಕ್ಷ ಮಂಜು ವಿಕಾಶ್ ಶಾಸ್ತ್ರೀ, ಉಪಾಧ್ಯಕ್ಷ ಗಿರೀಶ್ ಅನಂತಮೂರ್ತಿ, ಕಾರ್ಯದರ್ಶಿ ಪ್ರೇಮಾ ಕಾಕಡೆ ಮತ್ತಿತರರಿದ್ದರು.

ಕಟ್ಟಡ ಕಟ್ಟುವ ಮುನ್ನವೇ ಭಾರೀ ಮರಕ್ಕೆ ಕೊಡಲಿ!

- ಅನುಮತಿ ಪಡೆದದ್ದು ರೆಂಬೆ ಕತ್ತರಿಸಲು; ಕತ್ತರಿಸಿದ್ದು ಇಡೀ ಮರವನ್ನ
- ಕಾನೂನಿನಲ್ಲಿ ನಮಗಿರುವುದು ಸೀಮಿತ ಅಧಿಕಾರ ಎಂದು ಕೈ ಚೆಲ್ಲಿದ ಅರಣ್ಯಾಧಿಕಾರಿಗಳು
- ಮುಂದೊಂದು ದಿನ ಮೈಸೂರು ನಗರ ಬೆಂಗಾಡಾಗುವುದನ್ನು ನೋಡುವ ದುರ್ಗತಿ ಬಾರದೇ ಇರದು!



ಮೈಸೂರು, ಮಾ.22(ಬಿಎಲ್ ಯು)– ಕಟ್ಟಡ ನಿರ್ಮಿಸಲು ಉದ್ದೇಶಿಸಿರುವ ಕಟ್ಟಡ ಮರೆಮಾಚಲಿದೆ ಎಂಬ ಕಾರಣಕ್ಕೆ ಹಸಿರಿನಿಂದ ಕಂಗೊಳಿಸುತ್ತಿದ್ದ ಭಾರೀ ಮರವನ್ನು ಬುಡ ಸಮೇತ ಧರೆಗುರುಳಿಸಿರುವ ಘಟನೆ ಮೈಸೂರಿನ ಸರಸ್ವತಿಪುರಂನಲ್ಲಿ ನಡೆದಿದೆ.

ಸರಸ್ವತಿಪುರಂ 11ನೇ ಮೈನ್, 1 ನೇ ಕ್ರಾಸ್ ಬಳಿ ಹಳೆ ಮನೆ ನೆಲಸಮಗೊಳಿಸಿ, ಹೊಸ ಕಟ್ಟಡ ನಿರ್ಮಾಣಕ್ಕೆ ಮಾಲೀಕರು ಮುಂದಾಗಿದ್ದಾರೆ. ಹೊಸ ಕಟ್ಟಡ ರಸ್ತೆಯ ಬದಿಯ ಮರದಿಂದ ಮರೆಯಾಗುತ್ತದೆ ಎಂಬುದು ಅದರ ಮಾಲೀಕರ ಚಿಂತೆ.

ಸರಿ, ಮರದ ಕೊಂಬೆಗಳು ಅಪಾಯಕಾರಿಯಾಗಿವೆ ಎಂದು ಅವುಗಳನ್ನು ಕತ್ತರಿಸಲು ಅರಣ್ಯ ಇಲಾಖೆಯಿಂದ ಅನುಮತಿ ಪಡೆದರು. ಕಳೆದ ಮೂರು ತಿಂಗಳ ಹಿಂದೆ ವಿವಿಧ ಹಸಿರಿನಿಂದ ಕಂಗೊಳಿಸುತ್ತಿದ್ದ ಕೊಂಬೆಗಳನ್ನು ಕತ್ತರಿಸಿಯಾಯ್ತು. ಬೋಳಾಗಿದ್ದ ಮರ ಮತ್ತೆ ಚಿಗುರೊಡೆಯಿತು.

ಈಗ ಕಟ್ಟಡ ನಿರ್ಮಾಣ ಕಾರ್ಯ ಆರಂಭವಾಯ್ತು. ಆದರೆ ಅಂದದ ಕಟ್ಟಡ ಈ ಮರದಿಂದ ಮರೆಯಾಗುವ ಚಿಂತೆ ಬಂತು.

ಅಂತೂ ಅರಣ್ಯ ಇಲಾಖೆ, ನಗರ ಪಾಲಿಕೆ ಸೇರಿದಂತೆ ಯಾವುದೇ ಇಲಾಖೆಯ ಅನುಮತಿ ಪಡೆಯದೇ ಬುಡ ಸಮೇತ ಮರ ಕತ್ತರಿಸಿದ್ದಾರೆ.

ಆಕಾಶ ಮಲ್ಲಿಗೆ ಜಾತಿಯ ಈ ಮರಕ್ಕೆ ಸುಮಾರು 40 ವರ್ಷವಾಗಿತ್ತು. ರೆಂಬೆ ಕೊಂಬೆ ಕತ್ತರಿಸಿದರೂ ಮತ್ತೆ ಚಿಗುರೊಡೆದು ಮರು ಜೀವ ಪಡೆಯುತ್ತಿದ್ದ ಮರವನ್ನು ಈಗ ನಿರ್ನಾಮ ಮಾಡಲಾಗಿದೆ. ಈ ಬಗ್ಗೆ ಸರಸ್ವತಿಪುರಂ ವಾಸಿಯೂ ಆದ ಮೈಸೂರು ಗ್ರಾಹಕ ಪರಿಷತ್ ಸದಸ್ಯ ಭಾನುಪ್ರಕಾಶ್ ಅರಣ್ಯ ಇಲಾಖೆಗೆ ದೂರು ನೀಡಿದ್ದರು. ಅರಣ್ಯ ಇಲಾಖೆ ಸಿಬ್ಬಂದಿ ಮರ ವಶಕ್ಕೆ ಪಡೆದಿದ್ದಾರೆ.

ಮರ ಕತ್ತರಿಸಿದರೆ 2 ಸಾವಿರ ದಂಡವೇ ಮಹಾ ಶಿಕ್ಷೆ!

ಅರಣ್ಯ ಕಾಯ್ದೆಯಲ್ಲಿ ದಾಖಲಾಗುವ ಪ್ರಕರಣಗಳು ಬಹಳ ಗಂಭೀರವಾಗಿರುತ್ತವೆ ಎಂಬ ಮಾತಿದೆ. ಆದರೆ ಇಲಾಖೆ ಅನುಮತಿ ಪಡೆಯದೆ ಮರ ಕತ್ತರಿಸುವ ವಿಚಾರದಲ್ಲಿ ಕರ್ನಾಟಕ ಅರಣ್ಯ ಕಾಯ್ದೆ ದಂಡಕ್ಕೆ ಮಾತ್ರ ಸೀಮಿತವಾಗಿದೆ. ಪೊಲೀಸ್ ಇಲಾಖೆಯ ಕಾಯ್ದೆಗಳಿಗಿಂತ ಅರಣ್ಯ ಇಲಾಖೆಯ ಬಹಳಷ್ಟು ಕಾಯ್ದೆಗಳು ಗಂಭೀರವಾಗಿದ್ದು, ತಪ್ಪಿತಸ್ಥರಿಗೆ ಜಾಮೀನು ಸಿಗುವುದೇ ಕಷ್ಟ.

ಆದರೆ ಮರ ಕತ್ತರಿಸುವ ತಪ್ಪಿತಸ್ಥರು ಕೇವಲ ಎರಡು ಸಾವಿರ ರೂಪಾಯಿ ದಂಡ ಪಾವತಿಸಿದರೆ ಸಾಕು ಶಿಕ್ಷೆಯಿಂದ ಪಾರಾಗಬಹುದು. ಇದರಿಂದ ಮನೆ, ಕಮರ್ಷಿಯಲ್ ಕಾಂಪ್ಲೆಕ್ಸ್ ಸೇರಿದಂತೆ ಇತರೆ ಕಟ್ಟಡಗಳ ಮಧ್ಯೆ ಇರುವ ಮರಗಳನ್ನು ಕತ್ತರಿಸಲಾಗುತ್ತಿದೆ.

ಒಂದು ಕಾಲದಲ್ಲಿ ಮೈಸೂರಿನ ದೇವರಾಜ ಅರಸ್ ರಸ್ತೆ, ಸಯ್ಯಾಜಿರಾವ್ ರಸ್ತೆ, ಕಾಳಿದಾಸ ರಸ್ತೆ ಸೇರಿದಂತೆ ಇತರೆಡೆ ದಟ್ಟವಾದ ಮರಗಳಿದ್ದವು. ಆದರೆ ಅಂಗಡಿಗಳಿಗೆ ಮರೆಯಾಗುತ್ತದೆ ಎಂಬ ಕಾರಣದಿಂದ ಬಹಳಷ್ಟು ಮರಗಳನ್ನು ಕತ್ತರಿಸಲಾಗಿದೆ. ಮರ ಕತ್ತರಿಸಿದಾಗ ಅರಣ್ಯ ಇಲಾಖೆ ವಿಧಿಸುವ ಎರಡು ಸಾವಿರ ದಂಡ ಪಾವತಿಸಿ ಕೈ ತೊಳೆದುಕೊಳ್ಳುತ್ತಿದ್ದಾರೆ. ಎರಡು ಸಾವಿರ ದಂಡ ತಾನೇ ಕೊಟ್ಟರಾಯಿತು ಎಂದು ಮರ ಕತ್ತರಿಸುವ ಧೋರಣೆ ಹೆಚ್ಚಾಗುತ್ತಿದೆ. ಒಂದು ಮರ ಬೆಳೆಸಲು ಹತ್ತಾರು ವರ್ಷ ಬೇಕು. ಹಸಿರಿನ ಮಹತ್ವ ತಿಳಿಯದ ಬಹಳಷ್ಟು ಜನರು ಮರಕ್ಕೆ ಕೊಡಲಿ ಹಾಕಿ ಪರಿಸರ ನಾಶಕ್ಕೆ ಮುಂದಾಗಿದ್ದಾರೆ. ಇದು ಸಹಜವಾಗಿಯೇ ಪರಿಸರ ಪ್ರೇಮಿಗಳನ್ನು ಆತಂಕಗೊಳಿಸಿದೆ.

ಅರಣ್ಯ ಕಾಯ್ದೆ ಪ್ರಕಾರ ಪ್ರಕರಣ ದಾಖಲು

ಕೊಂಬೆ ಕತ್ತರಿಸಲು ಅನುಮತಿ ಕೊಟ್ಟಿದ್ದರೆ, ಮರವನ್ನೆ ಕತ್ತರಿಸಿದ ಕಟ್ಟಡದ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸುತ್ತೇವೆ. ಬುಡ ಸಮೇತ ಮರ ಕತ್ತರಿಸಿರುವ ಬಗ್ಗೆ ಈಗಾಗಲೇ ಕಟ್ಟಡದ ಮಾಲೀಕರನ್ನು ಕರೆದು ವಿಚಾರಣೆ ಮಾಡಲಾಗಿದೆ.

ಹಿರಿಯ ಅಧಿಕಾರಿಗಳ ಅನುಮತಿ ಪಡೆದು ಕರ್ನಾಟಕ ಅರಣ್ಯ ಕಾಯ್ದೆ ಸೆಕ್ಷನ್ 33 ಪ್ರಕಾರ ತಪ್ಪಿತಸ್ಥರ ವಿರುದ್ಧ ಪ್ರಕರಣ ದಾಖಲಿಸಲಾಗುವುದು. ಈ ಸೆಕ್ಷನ್ ಪ್ರಕಾರ ತಪ್ಪಿತಸ್ಥರಿಗೆ ದಂಡ ವಿಧಿಸಬಹುದಷ್ಟೆ. ಇನ್ನು ಹೆಚ್ಚಿನ ಕ್ರಮಕ್ಕೆ ಅಧಿಕಾರ ಮತ್ತು ಕಾನೂನು ಇಲ್ಲ.

- ಸುಧೀಂದ್ರ, ಆರ್‌ಎಫ್‌ಓ

ಮೈಸೂರು ಮಿತ್ರ ಶನಿವಾರ 23 ಮಾರ್ಚ್ 2024

ಮಂಡ್ಯ ಲೋಕಸಭಾ ಚುನಾವಣೆ

ವೆಂಕಟರಮಣೇಗೌಡ ಗೆಲುವು ನಿಶ್ಚಿತ

ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿದ ಸ್ಟಾರ್ ಚಂದ್ರು

ನಾಗಮಂಗಲ,ಮಾ.22– ಜಿಲ್ಲೆಯಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗಿದ್ದು, ಕ್ಷೇತ್ರದ ಜನತೆ ಕಾಂಗ್ರೆಸ್ ಕೈ ಹಿಡಿಯಲಿದ್ದಾರೆ. ಯಾರು ಏನೇ ಹೇಳಿದರೂ ನಮ್ಮ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರ ಗೆಲುವು ನಿಶ್ಚಿತ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ಹೇಳಿದರು.

ತಾಲೂಕಿನ ಚುಂಚನಗಿರಿಯಲ್ಲಿ ಬೂತ್ ಮಟ್ಟದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಅಭಿವೃದ್ಧಿಗೆ ಮತ್ತೊಂದು ಹೆಸರೇ ಕಾಂಗ್ರೆಸ್. ಕಾಂಗ್ರೆಸ್‌ನಲ್ಲಿ ಎಲ್ಲಾ ವರ್ಗ ದವರಿಗೂ ಅಧಿಕಾರ ಹಂಚಿಕೆ ಮಾಡಲಾಗಿದೆ. ಎಲ್ಲಾ ಸಮಾಜದವರನ್ನು ಸಮಾ ನಾಗಿ ಕಾಣಲಾಗಿದೆ ಎಂದರು.

ಕಾಂಗ್ರೆಸ್ ಜೊತೆ ಮೈತ್ರಿಯಾದಾಗ ಜೆಡಿಎಸ್‌ಗೆ 7 ಸೀಟು ಬಿಟ್ಟುಕೊಡಲಾಗಿತ್ತು. ಆದರೀಗ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡ ಜೆಡಿಎಸ್ ಎರಡು ಸ್ಥಾನಗಳಿಗಷ್ಟೇ ಸೀಮಿತವಾಗಿದೆ ಎಂದು ಹೇಳಿದರು.

ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಮಾತನಾಡಿ, ಜಿಲ್ಲೆಯ ಜನತೆಯ ಸೇವೆ ಮಾಡಲೆಂದು ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದು ಕ್ಷೇತ್ರದ ಮತದಾರರು ನನಗೊಂದು ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ನಾನು ಈ ಜಿಲ್ಲೆಯವನೇ. ಇಲ್ಲೇ ವ್ಯಾಸಂಗ ಮಾಡಿದವನು. ಜಿಲ್ಲೆಗೂ ನನಗೂ ಸಾಕಷ್ಟು ವರ್ಷಗಳ ನಂಟಿದ್ದು ನಿಮ್ಮ ಸೇವೆ ಮಾಡಲು ನನ್ನನ್ನು ಬೆಂಬಲಿಸುವಂತೆ ವಿನಂತಿಸಿಕೊಂಡರು.

ಸಭೆಯಲ್ಲಿ ಕಾಂಗ್ರೆಸ್ ಮುಖಂಡರಾದ ಕೃಷ್ಣೇಗೌಡ, ತಿಮ್ಮರಾಯಿಗೌಡ, ಯಾಸಿನ್ ಸೇರಿದಂತೆ ನೂರಾರು ಕಾರ್ಯಕರ್ತರಿದ್ದರು.

ಚಾಮುಂಡೇಶ್ವರಿಗೆ ಪೂಜೆ: ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರು ನಾಡ ಅಧಿದೇವತೆ ತಾಯಿ ಚಾಮುಂಡೇಶ್ವರಿ ದೇವಿಗೆ ಶುಕ್ರವಾರ ವಿಶೇಷ ಪೂಜೆ ಸಲ್ಲಿಸಿದರು.

ದೇವಿಗೆ ಸೀರೆ, ಅರಿಶಿನ, ಕುಂಕುಮ, ಬಳೆ ಹಾಗೂ ಕಾಣಿಕೆಯನ್ನು ನೀಡಿ ವಿಶೇಷ ಪೂಜೆ ಸಲ್ಲಿಸಿ ನಾಡಿಗೆ ಒಳಿತಾಗಲೆಂದು ಪ್ರಾರ್ಥಿಸಿದರು.



ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ ಚಾಮುಂಡಿಬೆಟ್ಟದಲ್ಲಿ ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿದರು.

ದೇವಿಯ ದರ್ಶನದ ಬಳಿಕ ಮಾತನಾಡಿದ ವೆಂಕಟರಮಣಗೌಡರು, ನಾಡಿನ ಸಮಸ್ತ ಜನರ ಬಾಳಲ್ಲಿ ಸುಖ, ಸಮೃದ್ಧಿ ನೆಲೆಸಲ್ಲಿ. ಉತ್ತಮ ಮಳೆ, ಬೆಳೆಯಾಗಲಿ ಎಂದು ತಾಯಿ ಚಾಮುಂಡೇಶ್ವರಿ ದೇವಿಯಲ್ಲಿ ಪ್ರಾರ್ಥಿಸಲಾಯಿತು ಎಂದರು.

ಇದೇ ವೇಳೆ ಮಾತನಾಡಿದ ವಿಧಾನ ಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ ಅವರು, ಲೋಕ ಕಲ್ಯಾಣರ್ಥ ದೇವಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ರಾಜ್ಯದಲ್ಲಿ ಅತಿ ಹೆಚ್ಚು ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಗೋಪಾಲ್, ಮುನೇಗೌಡ ಸೇರಿದಂತೆ ಹಲವರು ಜೊತೆಯಲ್ಲಿದ್ದರು.

ವರದಕ್ಷಿಣೆ ಕಿರುಕುಳ; ಆತ್ಮಹತ್ಯೆಗೆ ಶರಣಾದ ಗೃಹಿಣಿ



ಕಿಕ್ಕೇರಿ,ಮಾ.22–ಹೋಬಳಿಯ ಲಿಂಗಾಪುರ ಗ್ರಾಮದಲ್ಲಿ ವರದಕ್ಷಿಣೆ ಕಿರುಕುಳ ತಾಳಲಾರದೆ ಗೃಹಿಣಿಯೊಬ್ಬರು ನೇಣಿಗೆ ಶರಣಾದ ಘಟನೆ ಜರುಗಿದೆ. ಗ್ರಾಮದ ರಾಜೇಂದ್ರ ಮತ್ತು ಮಂಜುಳಾ ದಂಪತಿಯ ಪುತ್ರಿ ಎಲ್.ಆರ್. ಪ್ರೇಮಕುಮಾರಿ(26) ಆತ್ಮಹತ್ಯೆಗೆ ಶರಣಾದ ಗೃಹಿಣಿ. ರಾಜೇಂದ್ರ ಅವರ 3ನೇ ಪುತ್ರಿಯಾದ ಈಕೆಯನ್ನು ಮೈಸೂರಿನ ಎನ್.ಆರ್. ಮೊಹಲ್ಲಾದ ನಿವಾಸಿ ಕುಮಾರಸ್ವಾಮಿ ಅವರ ಪುತ್ರ ರಾಘವೇಂದ್ರನೊಂದಿಗೆ 2 ವರ್ಷಗಳ ಹಿಂದೆ ಅದ್ದೂರಿಯಾಗಿ ಮದುವೆ ಮಾಡಿಕೊಡಲಾಗಿತ್ತು. ವಿವಾಹದ ವೇಳೆ 150 ಗ್ರಾಂ ಚಿನ್ನ, 5ಲಕ್ಷ ರೂ. ನಗದು ಕೂಡ ವರದಕ್ಷಿಣೆಯಾಗಿ ನೀಡಲಾಗಿತ್ತು ಎನ್ನಲಾಗಿದೆ

ಅರಂಭದ ಕೆಲವು ತಿಂಗಳು ಅನ್ಯೋನ್ಯವಾಗಿ ಬಾಳ್ವೆ ನಡೆಸುತ್ತಿದ್ದರು. ಕೆಲವು ತಿಂಗಳ ನಂತರ ಹಣದ ದಾಹದಿಂದ ಗಂಡನ ಮನೆಯವರು ಮತ್ತಷ್ಟು ಹಣವನ್ನು ವರದಕ್ಷಿಣೆಯಾಗಿ ತವರು ಮನೆಯಿಂದ ತರುವಂತೆ ಪದೇ ಪದೇ ಮಾನಸಿಕ ಹಾಗೂ ದೈಹಿಕವಾಗಿ ಹಿಂಸೆ ನೀಡುತ್ತಿದ್ದರು ಎನ್ನಲಾಗಿದೆ. ಸಾಕಷ್ಟು ರಾಜಿ, ಪಂಚಾಯಿತಿಗಳು ನಡೆದಿವೆಯಾದರೂ ಪ್ರಯೋಜನವಾಗಲಿಲ್ಲ. ವರದಕ್ಷಿಣೆ ಹಿಂಸೆ ತಾಳಲಾರದೆ ವರ್ಷದ ಹಿಂದೆ ತವರು ಮನೆಯವರು ಪ್ರೇಮಕುಮಾರಿಯನ್ನು ಮನೆಗೆ ಕರೆದುಕೊಂಡು ಬಂದಿದ್ದರು.

ದಾಂಪತ್ಯ ಕಲಹ ಮತ್ತು ವರದಕ್ಷಿಣೆ ಕಿರುಕುಳ ಸಂಬಂಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು ಕೆಆರ್.ಪೇಟೆ ನ್ಯಾಯಾಲಯದಲ್ಲಿ ದಾವೆ ಕೂಡ ಹೂಡಲಾಗಿತ್ತು.

ಪ್ರೇಮಕುಮಾರಿ ತನ್ನ ಭವಿಷ್ಯ ರೂಪಿಸಿಕೊಳ್ಳಲು ಹಾಸನದಲ್ಲಿ ಎಲ್‌ಎಲ್‌ಬಿ ವ್ಯಾಸಂಗಕ್ಕಾಗಿ ಸೇರಿಕೊಂಡಿದ್ದಳು. ಕಳೆದ ವಾರ ರಾಘವೇಂದ್ರ ತನ್ನ ಕುಟುಂಬದರೊಂದಿಗೆ ಸೇರಿಕೊಂಡು ಹಣ ತಂದುಕೊಡಲು ಈಕೆಗೆ ಪೋನ್ ಮೂಲಕ ಕರೆ ಮಾಡಿ ಬೆದರಿಕೆ ಹಾಕಿದ್ದಾರೆ. ಹಣ ನೀಡಲು ನಿರಾಕರಿಸಿದರೆ ಸುಫಾರಿ ಕೊಟ್ಟು ಕೊಲೆ ಮಾಡಿಸುವುದಾಗಿ ಬೆದರಿಕೆ ಹಾಕಲಾಗಿದೆ ಎನ್ನಲಾಗಿದೆ.

ತನ್ನ ಪತಿ, ಇವರ ಕುಟುಂಬದವರ ಬೆದರಿಕೆಗೆ ಹೆದರಿ ಡೆತ್‌ನೋಟ್ ಬರೆದು ತವರು ಮನೆ ಲಿಂಗಾಪುರದಲ್ಲಿ ನೇಣು ಬಿಗಿದುಕೊಂಡು ಪ್ರೇಮಕುಮಾರಿ ಮಾ.20ರ ಬುಧವಾರ ಸಂಜೆ ಸಾವಿಗೆ ಶರಣಾಗಿದ್ದಾಳೆ.

ವಿಷಯ ತಡವಾಗಿ ಬೆಳಕಿಗೆ ಬಂದು ಮೃತಳ ತಾಯಿ ಮಂಜುಳಾ ಕಿಕ್ಕೇರಿ ಪೊಲೀಸರಿಗೆ ದೂರು ನೀಡಿದ್ದಾರೆ. ಮೃತಳ ಶವವನ್ನು ಪಂಚನಾಮೆ ನಡೆಸಿ ವಾರಸುದಾರರಿಗೆ ಪೊಲೀಸರು ಒಪ್ಪಿಸಿದ್ದಾರೆ. ಕಿಕ್ಕೇರಿ ಪೊಲಿಸರು ತನಿಖೆ ನಡೆಸುತ್ತಿದ್ದಾರೆ.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಮಿತಿಯ ಸದಸ್ಯರ ನೇಮಕ



ಕೆ.ಆರ್.ಪೇಟೆ,ಮಾ.21– ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಕಾರ್ಯಕ್ರಮಗಳಾದ ಶಕ್ತಿ, ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹಜ್ಯೋತಿ ಹಾಗೂ ಯುವನಿಧಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಮಂಡ್ಯ ಜಿಲ್ಲಾ ಸಮಿತಿಯ ಸದಸ್ಯರಾಗಿ ಮಹಿಳಾ ಹೋರಾಟಗಾರ್ತಿ ಆದಿಹಳ್ಳಿ ಮೀನಾಕ್ಷಿ ನೇಮಕವಾಗಿದ್ದಾರೆ.

ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನಾ ಕಾರ್ಯಕ್ರಮಗಳ ಅನುಷ್ಠಾನ ಪ್ರಾಧಿಕಾರದ ಕಾರ್ಯದರ್ಶಿಗಳಾದ ಜಿ.ಸಿ.ಪ್ರಕಾಶ್ ಅವರು ಕೆ.ಆರ್.ಪೇಟೆ ತಾಲೂಕಿನ ಗ್ರಾಮದ ಕಾಂಗ್ರೆಸ್ ಮುಖಂಡರಾದ ಆದಿಹಳ್ಳಿ ಮೀನಾಕ್ಷಿ ಅವರನ್ನು ನೇಮಕ ಮಾಡಿದ್ದಾರೆ ಎಂದು ಪಕ್ಷದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಸ್ಪೀಡ್ ಹಂಪ್ಸ್ ಹಾಕುವಂತೆ ಆಗ್ರಹಿಸಿ ಪ್ರತಿಭಟನೆ

ಪಾಂಡವಪುರ,ಮಾ.22– ಪಟ್ಟಣದ ಹಿರೇಮರಳಿ ಗೇಟ್ ಬಳಿ ಅಪಘಾತಗಳು ಹೆಚ್ಚುತ್ತಿದ್ದು, ರಸ್ತೆಗೆ ಸ್ಪೀಡ್ ಹಂಪ್ ಹಾಕುವಂತೆ ಆಗ್ರಹಿಸಿ ಹಿರೇಮರಳಿ ಗ್ರಾಮದ ನಿವಾಸಿಗಳು ಪ್ರತಿಭಟನೆ ನಡೆಸಿದರು.

ಹಿರೇಮರಳಿ ಗೇಟ್ ಬಳಿ ಮುಖಂಡ ಎಚ್.ಎನ್.ಮಂಜುನಾಥ್ ನೇತೃತ್ವದಲ್ಲಿ ಜಮಾಯಿಸಿದ ಗ್ರಾಮಸ್ಥರು, ಎನ್‌ಎಚ್ ರಸ್ತೆ, ಪಿಡಬ್ಲ್ಯೂಡಿ ಹಾಗೂ ಕಾವೇರಿ ನೀರಾವರಿ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದರು.

ಹಿರೇಮರಳಿ ಗೇಟ್ ಬಳಿ ನಾಗಮಂಗಲ –ಪಾಂಡವಪುರ ಎನ್‌ಎಚ್ ರಸ್ತೆ ಹೋಗುತ್ತದೆ, ಈ ರಸ್ತೆಗೆ ವಿಸಿ ನಾಲೆ ಏರಿಯ ಕಡೆಯಿಂದ ಹಾಗೂ ಹಿರೇಮರಳಿ ಕಡೆಯಿಂದ ರಸ್ತೆ ಸಂಪರ್ಕಿಸುತ್ತವೆ. ಹಿರೇಮರಳಿ ಗೇಟ್ ಬಳಿ ನಾಗಮಂಗಲ–ಪಾಂಡವಪುರ ಮುಖ್ಯ ರಸ್ತೆಗೆ ಸ್ಪೀಡ್ ಬ್ರೇಕರ್ (ಹಂಸ್) ಹಾಕದೆ ಇರುವುದರಿಂದ ರಸ್ತೆ ಅಪಘಾತಗಳು ಹೆಚ್ಚು ಸಂಭವಿಸುತ್ತಿವೆ. ಎನ್.ಎಚ್. ರಸ್ತೆಗೆ ಸ್ಪೀಡ್ ಬ್ರೇಕರ್ ಹಾಕದೆ ಇರುವುದರಿಂದ ವಿಸಿ



ಪಾಂಡವಪುರ ಪಟ್ಟಣದ ಹಿರೇಮರಳಿ ಗ್ರಾಮದ ಬಳಿ ರಸ್ತೆಗೆ ಸ್ಪೀಡ್ ಬ್ರೇಕರ್ ಹಾಕುವಂತೆ ಆಗ್ರಹಿಸಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ನಾಲೆಯ ಏರಿಯ ರಸ್ತೆಯ ಕಡೆಯಿಂದ ಹಾಗೂ ಹಿರೇಮರಳಿ ಬರುವ ವಾಹನಗಳು ಅಪಘಾತಕ್ಕೆ ಒಳಗಾಗಿ ಸಾವು ನೋವುಗಳು ಸಂಭವಿಸುತ್ತಿವೆ, ಹಾಗಾಗಿ ಎನ್.ಎಚ್. ರಸ್ತೆ, ವಿಸಿ ನಾಲೆಯ ಏರಿಯ ಮೇಲಿನ ರಸ್ತೆ ಹಾಗೂ ಹಿರೇಮರಳಿ ಕಡೆಯಿಂದ ಬರುವ ಪಿಡಬ್ಲ್ಯೂಡಿ ರಸ್ತೆಗೆ ಸ್ಪೀಡ್ ಬ್ರೇಕರ್ ಹಾಕುವ ಮೂಲಕ ಅಪಘಾತಗಳನ್ನು ತಡೆಗಟ್ಟಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು, ಪಿಡಬ್ಲ್ಯೂಡಿ ಇಲಾಖೆಯ ಅಧಿಕಾರಿಗಳು, ಸರ್ಕಲ್ ಇನ್ಸ್‌ಪೆಕ್ಟರ್ ಕುಮಾರ್, ಸಬ್ ಇನ್ಸ್‌ಪೆಕ್ಟರ್ ಉಮೇಶ್ ಅವರು ಶ್ರೀಘ್ರವೇ ರಸ್ತೆಗೆ ಸ್ಪೀಡ್ ಬ್ರೇಕರ್ ಹಾಕಿಸಲಾಗುವುದು, ನಾಲೆಗೆ ಸೇರುತ್ತಿರುವ ಚರಂಡಿಯ ಕೊಳಚೆ ನೀರು ತಡೆಗೆ ಕ್ರಮವಹಿಸಲಾಗುವುದು ಎಂದು ಬರವಸೆ ನೀಡಿದರು.

ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷ ಚೇತನ, ಉಪಾಧ್ಯಕ್ಷ ಯಶ್ವಂತ್, ಶ್ರೀನಿವಾಸ್ ನಾಯ್ಕ, ಬಕೋಡಿ, ಸತ್ಯ, ಚಂದ್ರಪ್ಪ, ಈರೇಗೌಡ, ಮಂಜು ಸೇರಿದಂತೆ ಹಲವರು ಹಾಜರಿದ್ದರು

ಆರ್ಥಿಕ ಬೆಳವಣಿಗೆಗೆ ಪಂಚ ಗ್ಯಾರಂಟಿ ಸಹಕಾರಿ

ಪಾಂಡವಪುರ: ಆರ್ಥಿಕ ಬೆಳವಣಿಗೆಗೆ ಕಾಂಗ್ರೆಸ್ ಪಕ್ಷದ ಪಂಚ ಗ್ಯಾರಂಟಿಗಳು ಸಹಕಾರಿಯಾಗಿದೆ. ಕಾಂಗ್ರೆಸ್‌ನ ಗ್ಯಾರಂಟಿಗಳ ಫಲ ಮುಂದಿನ ದಿನಗಳಲ್ಲಿ ಎಲ್ಲರಿಗೂ ತಿಳಿಯಲಿದೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ಹೇಳಿದರು.

ಪಾಂಡವಪುರದಲ್ಲಿ ಮೇಲುಕೋಟೆ ವಿಧಾನಸಭಾ ಕ್ಷೇತ್ರ, ಸರ್ವೋದಯ ಕರ್ನಾಟಕ ಮತ್ತು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಕಾಂಗ್ರೆಸ್ ವತಿಯಿಂದ ಆಯೋಜಿಸಿದ್ದ ಜಂಟಿ ಸಭೆಯಲ್ಲಿ ಮಾತನಾಡಿ, ಬರಗಾಲದಲ್ಲಿ ಕಾಂಗ್ರೆಸ್ ಗ್ಯಾರಂಟಿಗಳು ರೈತರಿಗೆ ನೆರವಾಗಿವೆ. ಗ್ಯಾರಂಟಿಗಳಿಂದ ರೈತರಿಗೆ ಕೊಳ್ಳುವ ಶಕ್ತಿ ವೃದ್ಧಿಯಾಗಿದೆ ಎಂದರು.

ಕಾಂಗ್ರೆಸ್ ಯೋಜನೆಗಳು ರೈತ ಪರವಾಗಿರುವುದರಿಂದ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ ಅವರನ್ನು ರೈತ ಸಂಘ ಗೆಲ್ಲಿಸುವ ಕೆಲಸ ಮಾಡಲಿದೆ. ಬೂತ್ ಮಟ್ಟದಲ್ಲಿ ಪ್ರಚಾರ ಮಾಡಿ ಗೆಲ್ಲಿಸುವ ಕೆಲಸ ಆಗಬೇಕಿದೆ ಎಂದು ಹೇಳಿದರು.



ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಿರುವ ಶಾಸಕ ದರ್ಶನ್ ಪುಟ್ಟಣ್ಣಯ್ಯ

ವೆಂಕಟರಮಣೇಗೌಡ ಅವರು ನಾಗಮಂಗಲ ತಾಲೂಕಿನವರೇ. ರೈತ ಕುಟುಂಬದಲ್ಲಿ ಹುಟ್ಟಿ ನೂರಾರು ಜನರಿಗೆ ಉದ್ಯೋಗ ನೀಡಿದ್ದಾರೆ. ಜನ ಸೇವೆ ಮಾಡಲು ಬಂದಿದ್ದಾರೆ. ಅವರನ್ನು ಬೆಂಬಲಿಸಿ ಗೆಲ್ಲಿಸುವುದು ನಮ್ಮ ಕರ್ತವ್ಯ ಎಂದು ತಿಳಿಸಿದರು.

ಶಾಸಕ ರಮೇಶ್ ಬಾಬು ಬಂಡಿಸಿದ್ದೇಗೌಡ ಮಾತನಾಡಿ, ಮತದಾರರು ಭಾವನಾತ್ಮಕತೆಗೆ ಮರುಳಾಗಬಾರದು. ಜಿಲ್ಲೆಯ ಅಭಿವೃದ್ಧಿಗೆ ಕಾಂಗ್ರೆಸ್ ಬೆಂಬಲಿಸಿ. ಸ್ಟಾರ್ ಚಂದ್ರು, ರೈತ ಕುಟುಂಬದಿಂದ ಬಂದವರು. ಅವರಿಗೆ ರೈತರ ಕಷ್ಟ ಗೊತ್ತು ಎಂದರು.

ಸಚಿವ ಚಲುವರಾಯಸ್ವಾಮಿ ಮಾತನಾಡಿ, ಹೊಟ್ಟೆ ತುಂಬಿದವರಿಗೆ ಗ್ಯಾರಂಟಿ ಬಗ್ಗೆ ಗೊತ್ತಿಲ್ಲ. ಗ್ಯಾರಂಟಿಗಳು ರೈತರನ್ನು ಕಷ್ಟದಿಂದ ಪಾರು ಮಾಡಿದೆ. ಕೇಂದ್ರ ಸರ್ಕಾರ ಬರ ಪರಿಹಾರದ ಹಣ ಬಿಡುಗಡೆ ಮಾಡಿಲ್ಲ, ಆದರೂ ರಾಜ್ಯ ಸರ್ಕಾರ ರೈತರಿಗೆ ಹಣ ನೀಡಿದೆ. ಕರ್ನಾಟಕದ 26 ಸಂಸದರು ಬರ ಪರಿಹಾರ ಬಿಡುಗಡೆ ಬಗ್ಗೆ ಚಕಾರ ಎತ್ತಲಿಲ್ಲ. ಸೀಟಿಗಾಗಿ ಹತ್ತಾರು ಬಾರಿ ದೆಹಲಿಗೆ ಹೋಗುವ ಜೆಡಿಎಸ್‌ನವರು ಬರ ಪರಿಹಾರ ಹಣ ಏಕೆ ಕೇಳಲಿಲ್ಲ? ರೈತರ ಕಷ್ಟದ ಬಗ್ಗೆ ಏಕೆ ಬಾಯಿಬಿಡಲಿಲ್ಲ? ಎಂದು ಪ್ರಶ್ನಿಸಿದರು. ಸಭೆಯಲ್ಲಿ ಮಂಡ್ಯ ಜಿಲ್ಲಾ ರೈತ ಸಂಘದ ಅಧ್ಯಕ್ಷ ಕೆಂಪುಗೌಡ, ಪಾಂಡವಪುರ ತಾಲೂಕು ರೈತ ಸಂಘದ ಅಧ್ಯಕ್ಷ ನಾಗರಾಜ್, ಸಿ.ಡಿ.ಗಂಗಾಧರ್, ತ್ಯಾಗರಾಜು, ರಾಜಣ್ಣ, ಬೋಜೇಗೌಡ, ಸುನೀತಾ ಪುಟ್ಟಣ್ಣಯ್ಯ, ಉಮೇಶ್, ಹರೀಶ್ ಸೇರಿದಂತೆ ರೈತ ಸಂಘ ಹಾಗೂ ಕಾಂಗ್ರೆಸ್‌ನ ಹಲವು ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

ಮಾ.25ರಿಂದ ಉದ್ಭವ ಮುದುಲಿಂಗೇಶ್ವರ ಜಾತ್ರೆ

ನಾಗಮಂಗಲ,ಮಾ22–ಶ್ರೀ ಕ್ಷೇತ್ರ ಭೀಮನಹಳ್ಳಿ ಉದ್ಭವ ಮುದ್ದಲಿಂಗೇಶ್ವರ ಜಾತ್ರಾ ಮಹೋತ್ಸವ ಮಾ.25 ಮತ್ತು 26ರಂದು ನಡೆಯಲಿದೆ. ನಾಗಮಂಗಲ ತಾಲೂಕಿನ ದೇವಲಾಪುರ ಹೋಬಳಿ ಸಮೀಪವಿರುವ ಶ್ರೀಕ್ಷೇತ್ರ ಭೀಮನಹಳ್ಳಿ ಉದ್ಭವ ಮುದ್ದುಲಿಂಗೇಶ್ವರ ಜಾತ್ರಾ ಮಹೋತ್ಸವ ನಡೆಯಲಿದ್ದು, 25ರಂದು ಸ್ವಾಮಿಯ ಪೂಜಾ ಮಹೋತ್ಸವ ಹಾಗೂ 26ರಂದು ಕೊಂಡೋತ್ಸವ ಮತ್ತು ಅನ್ನ ಸಂತರ್ಪಣೆ ಕಾರ್ಯಕ್ರಮ ನಡೆಯಲಿದೆ.

ಸಂಪಿಗೆ ಬಿದ್ದು ಮಗು ಸಾವನ್ನಪ್ಪಿದ ಪ್ರಕರಣ

ಸಿಡಿಪಿಓ ಸೇರಿ ನಾಲ್ವರ ವಿರುದ್ಧ ದೂರು ದಾಖಲು

ಘಟನೆ ಖಂಡಿಸಿ ಪೋಷಕರು, ಗ್ರಾಮಸ್ಥರಿಂದ ಪ್ರತಿಭಟನೆ

ಹೆಚ್.ಡಿ.ಕೋಟೆ, ಮಾ.22– ತಾಲೂಕಿನ ಬಂಗ್ಲಿಹುಂಡಿ ಗ್ರಾಮದ ಅಂಗನವಾಡಿ ಸಂಪಿಗೆ ಬಿದ್ದು ಮಗು ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ವರ ವಿರುದ್ಧ ಇಲ್ಲಿನ ಅಂತರಸಂತೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನನ್ನ ಮಗುವಿನ ಸಾವಿಗೆ ಸಿಡಿಪಿಓ ಆಶಾ, ಸೂಪರ್‌ವೈಸರ್ ಚಿನ್ನಮ್ಮ, ಅಂಗನವಾಡಿ ಕಾರ್ಯಕರ್ತೆ ಗೀತಾ, ಸಹಾಯಕಿ ನಾಗಮ್ಮ ಅವರ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿ ಮಗುವಿನ ತಾಯಿ ಅಂಜು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಪ್ರತಿಭಟನೆ: ಮಗು ಅಹಲ್ಯ ಸಾವಿಗೆ ಕಾರಣರಾದವರ ವಿರುದ್ಧ ಸೂಕ್ತ ಕ್ರಮಕ್ಕೆ ಆಗ್ರಹಿಸಿ ಮಗುವಿನ ಪೋಷಕರು, ಸಂಬಂಧಿಕರು ಹಾಗೂ ಬಂಗ್ಲಿಹುಂಡಿ ಗ್ರಾಮಸ್ಥರು ಪಟ್ಟಣದ ಸಾರ್ವಜನಿಕರ ಆಸ್ಪತ್ರೆ ಬಳಿ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಪ್ರತಿಭಟನಾಕಾರರು, ಅಂಗನವಾಡಿ ಸಿಬ್ಬಂದಿ ಸಂಪ್ ತೆರೆದು ಮುಚ್ಚದೆ ಇದ್ದಿದ್ದರಿಂದ ಈ ಅವಘಡ



ಸಿಡಿಪಿಓ ಆಶಾ ಅವರನ್ನು ಪುರಸಭಾ ಸದಸ್ಯ ನರಸಿಂಹಮೂರ್ತಿ ತರಾಟೆ ತೆಗೆದುಕೊಂಡರು.

ಸಂಭವಿಸಿದೆ. ಇದಕ್ಕೆ ಸಿಡಿಪಿಓ, ಅಂಗನವಾಡಿ ಸಿಬ್ಬಂದಿ ನಿರ್ಲಕ್ಷ್ಯವೇ ಕಾರಣ. ಹೀಗಾಗಿ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸ್ಥಳಕ್ಕಾಗಮಿಸಿ ಮಗುವಿನ ಪೋಷಕರಿಗೆ ಸಾಂತ್ವನ ಹೇಳಿ ಮಾತನಾಡಿದ ಪುರಸಭಾ ಸದಸ್ಯ ಹೆಚ್.ಸಿ. ನರಸಿಂಹಮೂರ್ತಿ ಸಿಡಿಪಿಓ, ಆಶಾ ಮತ್ತು ಅಂಗನವಾಡಿ ಸಿಬ್ಬಂದಿಗಳ ಬೇಜಾಬ್ದಾರಿ ಈ ಘಟನೆಗೆ ಕಾರಣ. ಅದು ಅಂಗನವಾಡಿಗೆ ಸೇರಿದ ಸಂಪ್ ಆಗಿದ್ದರಿಂದ ಅದನ್ನು ಸರಿಯಾಗಿ ಮುಚ್ಚಬೇಕಾದದ್ದು ಸಿಬ್ಬಂದಿ ಕರ್ತವ್ಯ. ಆದರೆ ಅಂಗನವಾಡಿಯವರ ನಿರ್ಲಕ್ಷ್ಯದಿಂದಾಗಿ ಮಗು ಸಂಪ್‌ಗೆ ಬಿದ್ದು ಪ್ರಾಣ ಕಳೆದುಕೊಂಡಿದೆ. ಈ ದುರ್ಘಟನೆ ನಡೆದರೂ ಮೇಲಧಿಕಾರಿಗಳು ಸ್ಥಳಕ್ಕೆ ಆಗಮಿಸಿಲ್ಲ. ಇಷ್ಟೊಂದು ಬೇಜವಾಬ್ದಾರಿಯಾದರೆ ನಮ್ಮ ಮಕ್ಕಳನ್ನು ಅಂಗನವಾಡಿಗೆ ಕಳುಹಿಸುವುದಾದರೂ ಹೇಗೆ ಎಂದು ಪ್ರಶ್ನಿಸಿದರು.

ಘಟನೆಗೂ ನನಗೂ ಯಾವುದೇ ಸಂಬಂಧವಿಲ್ಲ ಎಂದು ಸಿಡಿಪಿಓ ಬೇಜವಾಬ್ದಾರಿ ಹೇಳಿಕೆ ನೀಡುತ್ತಾರೆ. ಹೀಗಾಗಿ ಇಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ ಅವರು ಮಗುವಿನ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಬೇಕು. ಇಲ್ಲದಿದ್ದರೆ ಧರಣಿ ಮಾಡುವುದಾಗಿ ಎಚ್ಚರಿಸಿದರು.

ಈ ವೇಳೆ ಪ್ರಕಾಶ್ ಬುದ್ಧ ಕರ್ನಾಟಕ ಭೀಮ ಸೇನಾ ತಾಲೂಕು ಅಧ್ಯಕ್ಷ, ಪುರಸಭಾ ಸದಸ್ಯ ಪ್ರೇಮ್ ಸಾಗರ್, ಸಿಂಡಿಕೇಟ್ ಸದಸ್ಯ ನಾಗರಾಜ್, ಗ್ರಾಪಂ ಸದಸ್ಯ ಸೋಮೇಶ್, ಡಿಎಸ್‌ಎಸ್ ಸಂಚಾಲಕ ಸಣ್ಣಕುಮಾರ್, ರಾಜನಾಯಕ, ಮುಖಂಡರಾದ ಕಲೀಮ್, ನಿಂಗರಾಜು, ಶೇಖರ್, ಬೆಟ್ಟನಾಯ್ಕ, ಉಮೇಶ್, ನಾಗನಾಯಕ, ದಾಸನಾಯ್ಕ, ಅಂಕನಾಯಕ, ನಿಂಗನಾಯ್ಕ ಇನ್ನಿತರರಿದ್ದರು.

ಕ್ಯಾತಘಟ್ಟ ಗ್ರಾಪಂ ಅಧ್ಯಕ್ಷರಾಗಿ ಕೆ.ಎಸ್.ಸಿದ್ದರಾಜು ಆಯ್ಕೆ

ಭಾರತೀನಗರ,ಮಾ.22–ಸಮೀಪದ ಕ್ಯಾತಘಟ್ಟ ಗ್ರಾಮ ಪಂಚಾಯಿತಿಗೆ ನೂತನ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಕೆ.ಎಸ್.ಸಿದ್ದರಾಜು ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ.

ಈ ಹಿಂದೆ ಅಧ್ಯಕ್ಷರಾಗಿದ್ದ ರಾಜೇಶ್ ಅವರು ರಾಜೀನಾಮೆ ನೀಡಿ ತೆರವಾದ ಹಿನ್ನೆಲೆಯಲ್ಲಿ ಕೆಎಸ್. ಸಿದ್ದರಾಜು ಅವರನ್ನು ಹೊರತುಪಡಿಸಿ ಬೇರೆ ಯಾರು ನಾಮ ಪತ್ರಸಲ್ಲಿಸದ ಕಾರಣ ಕೆ.ಎಸ್.ಸಿದ್ದರಾಜು ಅವರನ್ನು ಅವಿರೋಧವಾಗಿ ಚುನಾವಣಾಧಿಕಾರಿ ಪಶುಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಪ್ರವೀಣ್ ಅವರು ಆಯ್ಕೆಗೊಳಿಸಿದ್ದಾರೆ.

ಇದೇ ಸಂದರ್ಭದಲ್ಲಿ ಮುಖಂಡರಾದ ತಿಮ್ಮರಾಜು, ರವಿಕುಮಾರ್, ಕೆ.ಎಂ.ಗಿರೀಗೌಡ, ಸಿ.ಬಿ.ಸಿದ್ದರಾಜು, ದೇವರಾಜು, ರವಿಚಂದ್ರ, ತೊರೆಚಾಕನಹಳ್ಳಿ ಉಮೇಶ್, ಗ್ರಾ.ಪಂ ಉಪಾಧ್ಯಕ್ಷೆ ಜೀವಿತ, ಸದಸ್ಯರಾದ ರಾಜೇಶ್, ಪ್ರಕಾಶ್, ಶಿವನಂಜಪ್ಪ ಸಿದ್ದಲಕ್ಷ್ಮಮ್ಮ, ಮಹಾಲಕ್ಷ್ಮಿ, ಜ್ಯೋತಿ, ನಿರೂಷ, ವೆಂಕಟೇಶ್, ಶೈಲಜ, ಚನ್ನಾಜಮ್ಮ ಹಲವರಿದ್ದರು.



ಭಾರತೀನಗರ ಸಮೀಪದ ಕ್ಯಾತಘಟ್ಟ ಗ್ರಾಮ ಪಂಚಾಯಿತಿಗೆ ನೂತನ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಕೆ.ಎಸ್.ಸಿದ್ದರಾಜು ಅವಿರೋಧವಾಗಿ ಆಯ್ಕೆಗೊಂಡ ಹಿನ್ನೆಲೆಯಲ್ಲಿ ಮುಖಂಡರು ಅಭಿನಂದಿಸಿದರು.

ಹೀರೆಮರಳಿ ಡೇರಿ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ಪಾಂಡವಪುರ:ಮಾ:22–ತಾಲೂಕಿನ ಹಿರೇಮರಳಿ ಡೇರಿ ಅಧ್ಯಕ್ಷರಾಗಿ ಚಂದ್ರಶೇಖರ್ ಹಾಗೂ ಉಪಾಧ್ಯಕ್ಷೆಯಾಗಿ ಸವಿತ ಅವರು ಬುಧವಾರ ಅವಿರೋಧವಾಗಿ ಆಯ್ಕೆಯಾದರು.

ಡೇರಿಯ ಹಿಂದಿನ ಅಧ್ಯಕ್ಷ ಎಚ್.ಪಿ. ಜ್ಞಾನೇಶ್, ಉಪಾಧ್ಯಕ್ಷೆ ಜಿ.ಎಸ್.ಶೋಭಾ ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಚಂದ್ರಶೇಖರ್, ಸವಿತ ಇವರಿಬ್ಬರನ್ನು ಹೊರತುಪಡಿಸಿ ಉಳಿದ ಯಾವೊಬ್ಬ ನಿರ್ದೇಶಕರು ನಾಮಪತ್ರವನ್ನು ಸಲ್ಲಿಸದ ಹಿನ್ನೆಲೆಯಲ್ಲಿ ಡೇರಿಯ ನೂತನ ಅಧ್ಯಕ್ಷರಾಗಿ ಚಂದ್ರಶೇಖರ್ ಹಾಗೂ ಉಪಾಧ್ಯಕ್ಷೆಯಾಗಿ ಸವಿತ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಆನಂದನಾಯ್ಕ ಘೋಷಿಸಿದರು.

ನೂತನ ಅಧ್ಯಕ್ಷ ಚಂದ್ರಶೇಖರ್ ಹಾಗೂ ಉಪಾಧ್ಯಕ್ಷೆ ಸವಿತ ಅವರನ್ನು ಎಲ್ಲಾ ಮುಖಂಡರು, ನಿರ್ದೇಶಕರು ಅಭಿನಂಧಿಸಿದರು.

ಮುಖಂಡ ಎಚ್.ಎನ್.ಮಂಜುನಾಥ್, ದೊರೆಸ್ವಾಮಿ, ಶಿವಕುಮಾರ್, ಗ್ರಾಪಂ ಉಪಾಧ್ಯಕ್ಷ ಯಶ್ವಂತ್, ರಾಜೇಶ್, ಡೇರಿ ನಿರ್ದೇಶಕರಾದ ಕೃಷ್ಣೇಗೌಡ, ಪುರುಷೋತ್ತಮ್, ಮಲ್ಲಿಕಾರ್ಜುನ, ರವಿ, ಎ.ಟಿ.ರಘು, ಸುನೀಲ್ ಕುಮಾರ್, ಎಚ್.ಕೆ.ಪುಷ್ಪ, ಎಂ.ಎನ್. ಪದ್ಮ, ಲೀಲಾವತಿ, ಕಾರ್ಯದರ್ಶಿ ಜಗದೀಶ್ ಇದ್ದರು.

ಪಕ್ಷಿಧಾಮದಲ್ಲಿ 'ಪರಿಸರ ನಡಿಗೆ' ಕಾರ್ಯಕ್ರಮ

ಮಂಡ್ಯ : ಪರಿಸರ ರೂರಲ್ ಡೆವಲಪ್‌ಮೆಂಟ್ ಸೊಸೈಟಿ, ಮೈಸೂರಿನ ಅರಣ್ಯ ಇಲಾಖೆ ವನ್ಯಜೀವಿ ವಿಭಾಗ ಹಾಗೂ ಬನ್ನೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕಗಳ ವತಿಯಿಂದ ವಿಶ್ವ ಅರಣ್ಯ ದಿನ, ವಿಶ್ವ ಜಲದಿನದ ನಿಮಿತ್ತ 'ಪರಿಸರ ನಡಿಗೆ' ಕಾರ್ಯಕ್ರಮವನ್ನು ಮಾ. 23ರ ಬೆಳಗ್ಗೆ 9 ಗಂಟೆಗೆ ಶ್ರೀರಂಗಪಟ್ಟಣ ತಾಲೂಕಿನ ಗೆಂಡೇ ಹೊಸಹಳ್ಳಿಯ ಪಕ್ಷಿಧಾಮದಲ್ಲಿ ಹಮ್ಮಿಕೊಳ್ಳಲಾಗಿದೆ.

ಪರಿಸರ ನಡಿಗೆ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಿಂದ ಸಸ್ಯ ಸಂಕುಲ, ಪಕ್ಷಿ ಸಂಕುಲಗಳ ಪರಿಚಯ, ಎನ್‌ಎಸ್‌ಎಸ್ ಸ್ವಯಂ ಸೇವಕರುಗಳಿಂದ ಪ್ಲಾಸ್ಟಿಕ್ ನಿಷೇಧ ಕುರಿತು ಶ್ರಮದಾನ, ಜನಪದ ಕಲಾವಿದರುಗಳಿಂದ ಪರಿಸರ ಜಾಗೃತಿ ಮೂಡಿಸುವ ಗೀತಗಾಯನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಪರಿಸರ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ಅಧ್ಯಕ್ಷ ಮಂಗಲ ಎಂ.ಯೋಗೀಶ್ ತಿಳಿಸಿದ್ದಾರೆ.

ಇಂದು ತಿ.ನರಸೀಪುರಕ್ಕೆ ಎಸ್.ಬಾಲರಾಜ್ ಭೇಟಿ



ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡ ಡಾ.ರೇವಣ್ಣ ಮಾತನಾಡಿದರು.

ತಿ.ನರಸೀಪುರ, ಮಾ.22– ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ನಾಳೆ(ಶನಿವಾರ) ಪಟ್ಟಣಕ್ಕೆ ಆಗಮಿಸಿ ಕಾರ್ಯಕರ್ತರ ಸಭೆಯಲ್ಲಿ ಪಾಲ್ಗೊಳ್ಳಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಆಗಮಿಸುವಂತೆ ಬಿಜೆಪಿ ಮುಖಂಡ ಡಾ.ರೇವಣ್ಣ ಮನವಿ ಮಾಡಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಟ್ಟಣದ ಜೆಎಸ್‌ಎಸ್ ಸಭಾ ಭವನದಲ್ಲಿ ಶನಿವಾರ ಬೆಳಗ್ಗೆ 10.30ಕ್ಕೆ ನಡೆಯುವ ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರ ಸಭೆಯಲ್ಲಿ ಎಸ್.ಬಾಲರಾಜು ಭಾಗವಹಿಸಲಿದ್ದಾರೆ. ಕಾರ್ಯಕರ್ತರು, ಮಹಾಶಕ್ತಿ ಕೇಂದ್ರದ ಕಾರ್ಯಕರ್ತರು, ಬೂತ್ ಮಟ್ಟದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು.

ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಸಜ್ಜನ ರಾಜಕಾರಣಿಯಾಗಿದ್ದು, ಕಳೆದ 30 ವರ್ಷಗಳ ಸುದೀರ್ಘ ರಾಜಕಾರಣದಲ್ಲಿ ಶ್ರಮಪಟ್ಟು ಮೇಲೆ ಬಂದಿದ್ದು, ಒಮ್ಮೆ ಸ್ವತಂತ್ರ ಅಭ್ಯರ್ಥಿಯಾಗಿ ವಿಧಾನಸಭೆಗೆ ಆಯ್ಕೆಯಾಗಿದ್ದರು. ನಂತರ ಕೆಜೆಪಿಯಿಂದ ಸ್ಪರ್ಧಿಸಿ ಅಲ್ಪ ಮತಗಳ ಅಂತರದಿಂದ ಸೋತಿದ್ದರು. ಇದೀಗ ಬಿಜೆಪಿ ಪಕ್ಷ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಟಿಕೆಟ್ ನೀಡಿದೆ. ಕಳೆದ ಚುನಾವಣೆಯಲ್ಲಿ ನಮ್ಮ ತಿ.ನರಸೀಪುರ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಗೆ 55 ಸಾವಿರ ಮತಗಳು ಬಂದಿತ್ತು. ಈಗ ಪಕ್ಷ ಜೆಡಿಎಸ್‌ನೊಂದಿಗೆ ಮೈತ್ರಿ ಮಾಡಿಕೊಂಡಿರುವುದರಿಂದ 75 ಸಾವಿರಕ್ಕೂ ಹೆಚ್ಚು ಮತಗಳು ಸಿಗುವಂತೆ ಕಾರ್ಯಕರ್ತರು ಶ್ರಮ ವಹಿಸಬೇಕು. ಆ ಮೂಲಕ ಬಾಲರಾಜ್ ಅವರನ್ನು ಗೆಲ್ಲಿಸಿ ಪ್ರಧಾನಿ ನರಂದ್ರ ಮೋದಿ ಕೈ ಬಲ ಪಡಿಸಬೇಕೆಂದು ಮನವಿ ಮಾಡಿದರು.

ಪ್ರಭಾರಿ ಸುರೇಶ್ ಬಾಬು, ಕ್ಷೇತ್ರ ಬಿಜೆಪಿ ಅಧ್ಯಕ್ಷ ಶಿವಕುಮಾರ್ ಮಾತನಾಡಿದರು. ಪತ್ರಿಕಾಗೋಷ್ಠಿಯಲ್ಲಿ ಅಧ್ಯಕ್ಷ ಕೆ.ಸಿ.ಲೋಕೇಶ್ ನಾಯಕ್, ಮೈಸೂರು ಜಿಲ್ಲಾ ಗ್ರಾಮಾಂತರ ಕಾರ್ಯದರ್ಶಿ ಎನ್.ಎಂ.ರಾಮಚಂದ್ರ ಕರೋಹಟ್ಟಿ ಬಸವರಾಜು, ಮೈಸೂರು ಗ್ರಾಮಾಂತರ ಯುವ ಮೋರ್ಚಾ ಅಧ್ಯಕ್ಷ ಸಾಮ್ರಾಟ್ ಸುಂದ ರೇಶನ್, ಪುರಸಭೆ ಸದಸ್ಯ ಎಸ್.ಕೆ.ಕಿರಣ್, ಪ್ರಧಾನ ಕಾರ್ಯದರ್ಶಿ ಗೂಳಿ ಮಹೇಶ್, ಜಿಲ್ಲಾ ಉಪಾಧ್ಯಕ್ಷ ದಾಸಯ್ಯ, ಮಹದೇವಯ್ಯ, ಸೋಸಲೆ ಮಹಾ ಶಕ್ತಿ ಕೇಂದ್ರದ ಅಧ್ಯಕ್ಷ ಪುಟ್ಟಸ್ವಾಮಿ, ಯುವ ಮೋರ್ಚಾ ಕಾರ್ಯದರ್ಶಿ ನಂದನ್, ಹರೀಶ್ ಮತ್ತಿತರರಿದ್ದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಕಲ ಸಿದ್ಧತೆ: ಬಿಇಓ

ಕೆ.ಆರ್.ನಗರ, ಮಾ.22– ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಅವಳಿ ತಾಲೂಕಿನಲ್ಲಿ ಸಕಲ ಸಿದ್ಧತೆ ಕೈಗೊಳ್ಳಲಾಗಿದ್ದು, 3 ಸಾವಿರ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಕೃಷ್ಣಪ್ಪ ತಿಳಿಸಿದರು.

ಪರೀಕ್ಷೆ ಪೂರ್ವ ಸಿದ್ಧತೆಗಳ ಬಗ್ಗೆ ಪಟ್ಟಣದ ಶ್ರೀಕೃಷ್ಣರಾಜೇಂದ್ರ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪರಿಶೀಲಿಸಿ ಮಾತನಾಡಿದ ಅವರು, ಕೆ.ಆರ್.ನಗರ ಮತ್ತು ಸಾಲಿಗ್ರಾಮ ಅವಳಿ ತಾಲೂಕಿನಲ್ಲಿ 11 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದೆ. ಮಾ.25ರಿಂದ ಪರೀಕ್ಷೆಗಳು ಪ್ರಾರಂಭವಾಗಲಿದ್ದು ಏ.6ಕ್ಕೆ ಮುಕ್ತಾಯಗೊಳ್ಳಲಿದೆ ಎಂದರು.

ಪರೀಕ್ಷೆ ಬರೆಯಲಿರುವವರ ಪೈಕಿ 2826 ರೆಗ್ಯುಲರ್ ವಿದ್ಯಾರ್ಥಿಗಳು, 111 ಪುನರಾವರ್ತಿತ ವಿದ್ಯಾರ್ಥಿಗಳು, 38 ಖಾಸಗಿ ವಿದ್ಯಾರ್ಥಿಗಳು ಹಾಗೂ 23 ಖಾಸಗಿ ಪುನರಾವರ್ತಿತರು, ಇಬ್ಬರು 2011ನೇ ಸಾಲಿನ ಮರುಪರೀಕ್ಷಾರ್ಥಿಗಳು ಸೇರಿ ಒಟ್ಟು 1529 ಗಂಡು ಮಕ್ಕಳು ಹಾಗೂ 1471 ಹೆಣ್ಣು ಮಕ್ಕಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಕೆ.ಆರ್.ನಗರ ಮತ್ತು ಸಾಲಿಗ್ರಾಮ ತಾಲೂಕಿನ ಎಲ್ಲಾ ಪರೀಕ್ಷಾ ಕೇಂದ್ರಗಳನ್ನು ಮೊಬೈಲ್ ಆ್ಯಪ್ ಮೂಲಕ ಸಿಸಿಟಿವಿ ದೃಶ್ಯಗಳ ವೀಕ್ಷಣೆ ನಡೆಸಲಾಗುವುದು. ಅಕ್ರಮ ನಡೆಯದಂತೆ ಸೂಕ್ತ ನಿಗಾ ವಹಿಸಲಾಗುತ್ತದೆ ಎಂದರು.

ಪರೀಕ್ಷೆ ಬರೆಯುವ ಎಲ್ಲಾ ಮಕ್ಕಳಿಗೂ ಸಾರಿಗೆ ಸೌಕರ್ಯ ಕಲ್ಪಿಸುವಂತೆ ಸಂಬಂಧಪಟ್ಟ ಬಸ್ ಘಟಕದ ವ್ಯವಸ್ಥಾಪಕರಿಗೆ ಪತ್ರ ಬರೆಯಲಾಗಿದೆ. ಯಾವುದೇ ಆತಂಕವಿಲ್ಲದೆ ವಿದ್ಯಾರ್ಥಿಗಳು ಪರೀಕ್ಷೆ ಬರೆಯಬಹುದು ಎಂದರು.



ಬಿಇಓ ಆರ್.ಕೃಷ್ಣಪ್ಪ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಪೂರ್ವ ಸಿದ್ಧತೆ ಪರಿಶೀಲನೆ ನಡೆಸಿದರು.

ಕುಮಾರಸ್ವಾಮಿ ಆರೋಗ್ಯವೃದ್ಧಿಗೆ ವಿಶೇಷ ಪೂಜೆ

ಶ್ರೀರಂಗಪಟ್ಟಣ, ಮಾ.22– ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರ ಆರೋಗ್ಯ ವೃದ್ಧಿಗೆ ಪಟ್ಟಣದ ಮೂಡಲಬಾಗಿಲು ಆಂಜನೇಯ ದೇವಾಲಯದಲ್ಲಿ ತಾಲೂಕು ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥಿಸಿದರು. ತಾಲೂಕು ಜೆಡಿಎಸ್ ಅಧ್ಯಕ್ಷ ದಶರಥ ನೇತೃತ್ವದಲ್ಲಿ ವಿಶೇಷ ಪೂಜೆ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಪುರಸಭೆ ಮಾಜಿ ಉಪಾಧ್ಯಕ್ಷ ಎಸ್.ಪ್ರಕಾಶ್, ರಾಜ್ಯದ ನೀರಾವರಿ ಯೋಜನೆಗಳ ಅಭಿವೃದ್ಧಿಗೆ ಶ್ರಮಿಸಿರುವ ಹೆಚ್.ಡಿ.ದೇವೇಗೌಡರ ಸುಪುತ್ರ, ರೈತರ ಸಾಲ ಮನ್ನಾದ ರೂವಾರಿ ಹೆಚ್.ಡಿ.ಕುಮಾರಸ್ವಾಮಿ ಅವರು ಆರೋಗ್ಯವಾಗಿರಲು ಪೂಜೆ ಸಲ್ಲಿಸಲಾಗಿದೆ. ಕುಮಾರಸ್ವಾಮಿ ಅವರ ಸೇವೆ ರಾಜ್ಯ ಮತ್ತು ರಾಷ್ಟ್ರ ರಾಜಕಾರಣಕ್ಕೆ ಸದ್ಬಳಕೆಯಾಗಲಿ ಎಂದು ಕೋರಿದರು.

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮೈತ್ರಿ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಲಿರುವ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರ ಗೆಲುವಿಗೆ ಪ್ರಧಾನಿ ನರೇಂದ್ರ ಮೋದಿ, ರಾಜ್ಯದ ಬಿಜೆಪಿ ಮುಖಂಡರು, ಸಂಸದೆ ಸುಮಲತಾ ಹಾಗೂ ಜಿಲ್ಲೆಯ ಜೆಡಿಎಸ್ ಮುಖಂಡರು ಶ್ರಮಿಸಲಿದ್ದು, ಜಿಲ್ಲೆಯ ಮತದಾರರು ಕುಮಾರಸ್ವಾಮಿ ಅವರ ಗೆಲುವಿಗೆ ಸಹಕರಿಸಬೇಕೆಂದು ಪ್ರಕಾಶ್ ಮನವಿ ಮಾಡಿದರು.



ಒಂದನೇ ಪುಟದಿಂದ

ಧಾರ್ಮಿಕತೆ, ಆರ್ಥಿಕತೆ ನೆಲೆ ನಿಂತಿದೆ

ನಂತರ ವಿಶೇಷ ಪೂಜೆ ಸಲ್ಲಿಸಿದರು. ನಂತರ ತಲಕಾವೇರಿಗೆ ಭೇಟಿ ನೀಡಿದ ಯದುವೀರ್, ಕಾವೇರಿ ನದಿ ಉಗಮ ಸ್ಥಳ ತೀರ್ಥಕುಂಡಿಗೆ ವಿಶೇಷ ಪೂಜೆ ಸಲ್ಲಿಸಿದರು. ಜೊತೆಗೆ ಅಗಸ್ತ್ಯರು ಹಾಗೂ ಗಣಪತಿ ದೇವಸ್ಥಾನಕ್ಕೆ ತೆರಳಿ, ನಮಿಸಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾವೇರಿ ಮಾತೆಯೊಂದಿಗೆ ಮೈಸೂರು ಜಿಲ್ಲೆಯ ಧಾರ್ಮಿಕತೆ ಮಾತ್ರವಲ್ಲದೆ, ಆರ್ಥಿಕತೆಯೂ ನೆಲೆ ನಿಂತಿದೆ. ಇಂತಹ ಪುಣ್ಯ ಭೂಮಿಯ ಸೇವೆಗೆ ಅವಕಾಶ ದೊರೆತಿರುವುದು ನನ್ನ ಸೌಭಾಗ್ಯ ಎಂದರು. ಮೈಸೂರು ಜಿಲ್ಲೆಯ ಜನರೂ ಕೂಡ ಕಾವೇರಿ ಮಾತೆಯನ್ನು ಆರಾಧಿಸುತ್ತಾರೆ. ಕಾವೇರಿ ಮಾತೆ ನಮಗೆ ತಾಯಿಯಾಗಿ ಧಾರ್ಮಿಕತೆಯೊಂದಿಗೆ ಆರ್ಥಿಕತೆಯ ನೆಲೆಯನ್ನೂ ನೀಡಿದೆ. ಭಾಗಮಂಡಲ ಹಾಗೂ ತಲಕಾವೇರಿಯಲ್ಲಿ ಪೂಜೆ ಸಲ್ಲಿಸುವ ಮೂಲಕ ಚುನಾವಣಾ ಪ್ರಚಾರಕ್ಕೆ ಚಾಲನೆ ನೀಡಲಾಗಿದೆ. ನಾಡಿನಲ್ಲಿ ಉತ್ತಮ ಮಳೆ-ಬೆಳೆ ಆಗಿ ನಾಡು ಸಮೃದ್ಧವಾಗಲಿ ಎಂದು ಕಾವೇರಿ ಮಾತೆಯಲ್ಲಿ ಪ್ರಾರ್ಥಿಸಿದ್ದೇನೆ ಎಂದರು.

ಪ್ರತಾಪ್ ಸಿಂಹ ಭದ್ರ ಬುನಾದಿ ಹಾಕಿದ್ದಾರೆ: ಸಂಸದ ಪ್ರತಾಪ್ ಸಿಂಹ ಅವರ ಗೈರು ಹಾಜರಿ ಬಗ್ಗೆ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕಳೆದ 10 ವರ್ಷದಲ್ಲಿ ಸಂಸದರಾಗಿ ಪ್ರತಾಪ್ ಸಿಂಹ ಕ್ಷೇತ್ರವನ್ನು ಅಭಿವೃದ್ಧಿಪಡಿಸುವ ಮೂಲಕ ನಮಗೆ ಭದ್ರ ಬುನಾದಿ ಹಾಕಿದ್ದಾರೆ. ಚುನಾವಣೆಯಲ್ಲಿ ನನ್ನ ಗೆಲುವಿಗೆ ಸಹಕಾರ ನೀಡುವುದಾಗಿ ಈಗಾಗಲೇ ಅವರು ಹೇಳಿದ್ದಾರೆ ಎಂದರು. ಪ್ರಶ್ನೆಯೊಂದಕ್ಕೆ ಉತ್ತರಿಸಿದ ಯದುವೀರ್, ನಮ್ಮ ಪ್ರತಿಸ್ಪರ್ಧಿ ಆಗಿರುವ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಅವರನ್ನು ಸ್ವಾಗತಿಸಿ ಅಭಿನಂದಿಸುತ್ತೇನೆ. ಯಾವುದೇ ಚುನಾವಣೆಯಾಗಲೀ ಅಭ್ಯರ್ಥಿಯ ಸಾಮರ್ಥ್ಯದ ಆಧಾರದ ಮೇಲೆಯೆ ಮತದಾರರು ಆಯ್ಕೆ ಮಾಡುತ್ತಾರೆ. ಈವರೆಗಿನ ಪ್ರಚಾರದ ವೇಳೆ ಎಲ್ಲೆಡೆಯೂ ಜನರಿಂದ ಉತ್ತಮ ಸ್ಪಂದನೆ ದೊರೆತಿದೆ. ಪಕ್ಷದ ಕಾರ್ಯಕರ್ತರಲ್ಲಿ ಉತ್ಸಾಹವೂ ಕಂಡು ಬಂದಿದೆ. ಪ್ರಚಾರಕ್ಕೆ ಹೋದಾಗ ಹಲವೆಡೆ ಪಕ್ಷದ ಮುಖಂಡರು ಅಲ್ಲಿನ ಸಮಸ್ಯೆಗಳನ್ನು ನನ್ನ ಗಮನಕ್ಕೆ ತಂದಿದ್ದು, ಅದರ ಪರಿಹಾರಕ್ಕೂ ಸಲಹೆ ನೀಡಿದ್ದಾರೆ ಎಂದರು. ತಲಕಾವೇರಿ ಪೂಜೆಯ ನಂತರ ಚೇರಂಬಾಣೆಯಲ್ಲಿ ನಡೆದ ನಾಲ್ಕೂ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಯದುವೀರ್, ಪ್ರಧಾನಿ ನರೇಂದ್ರ ಮೋದಿಯವರು 2047ರ ವೇಳೆಗೆ ದೇಶವನ್ನು ವಿಕಸಿತ ಭಾರತವನ್ನಾಗಿ ಮಾಡಲು ಪಣ ತೊಟ್ಟು ಕೆಲಸ ಮಾಡುತ್ತಿದ್ದಾರೆ. ಅವರ ಆಶಯದಂತೆ ಮುಂದಿನ ಪೀಳಿಗೆಗೆ ಸಮೃದ್ಧ ಭಾರತವನ್ನು ನೀಡುವುದೇ ನಮ್ಮ ಗುರಿಯಾಗಿದೆ. ನಾವೆಲ್ಲರೂ ಒಂದಾಗಿ ಸುಭದ್ರ ರಾಷ್ಟ್ರ ಕಟ್ಟೋಣ. ಅಲ್ಲದೇ ಮೈಸೂರು-ಕೊಡಗು ಕ್ಷೇತ್ರವನ್ನು ಸಮಗ್ರ ಅಭಿವೃದ್ಧಿ ಹೊಂದಿದ ಮಾದರಿ ಕ್ಷೇತ್ರವನ್ನಾಗಿ ಮಾಡಲು ಎಲ್ಲರೂ ಬಿಜೆಪಿಗೆ ಆಶೀರ್ವಾದ ಮಾಡಬೇಕೆಂದು ಮನವಿ ಮಾಡಿದರು.

ಈ ವೇಳೆ ಮಾಜಿ ಶಾಸಕ ಕೆ.ಜಿ.ಬೋಪಯ್ಯ, ವಿಧಾನ ಪರಿಷತ್ ಸದಸ್ಯ ಸುಜಾ ಕುಶಾಲಪ್ಪ, ಪಕ್ಷದ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ, ಹಿಂದುಳಿದ ವರ್ಗಗಳ ಮೋರ್ಚಾ ಜಿಲ್ಲಾಧ್ಯಕ್ಷ ಅಪ್ಪು ರವೀಂದ್ರ, ಮಡಿಕೇರಿ ನಗರಾಧ್ಯಕ್ಷೆ ಅನಿತಾ ಪೂವಯ್ಯ, ಪಕ್ಷದ ಮುಖಂಡರಾದ ಉಮಾ ಪ್ರಭು, ಹೊಸೂರು ಸತೀಶ್ ಜೋಯಪ್ಪ, ಬೆಮ್ಮುಡ ಮೇದಪ್ಪ, ತಳೂರು ಕಿಶೋರ್ ಕುಮಾರ್, ಸುಬ್ರಮಣ್ಯ ಉಪಾಧ್ಯಾಯ, ನಾಗೇಶ್ ಕುಂದಲಪಾಡಿ, ಕಾಂಗೀರ ಸತೀಶ್, ಪಿ.ಡಿ.ಪೊನ್ನಪ್ಪ, ರಾಬಿನ್ ದೇವಯ್ಯ, ಉಮೇಶ್ ಸುಬ್ರಮಣಿ, ಬಿ.ಪಿ.ಅರುಣ್ ಕುಮಾರ್, ಡೀನ್ ಬೋಪಣ್ಣ, ಬಿ.ಪಿ.ಡಿಶು, ಕವನ್ ಕಾವೇರಿಯಪ್ಪ ಇನ್ನಿತರರು ಉಪಸ್ಥಿತರಿದ್ದರು.

ಜನ ಸಾಮಾನ್ಯರ ಮನೆ ಕಾಯೋರು ಬೇಕೋ!

ಮೂಲಕ ಒಕ್ಕಲಿಗ ಸಮುದಾಯಕ್ಕೆ ಮತ್ತೊಮ್ಮೆ ಅವಕಾಶ ಒದಗಿ ಬಂದಿದ್ದು, ಇದನ್ನು ಒಕ್ಕಲಿಗರು ಪರಿಗಣಿಸಬೇಕು. ಮುಖ್ಯಮಂತ್ರಿ ಸಿದ್ದ ರಾಮಯ್ಯ ಒಕ್ಕಲಿಗ ವಿರೋಧಿ ಎಂಬ ಆರೋಪ ಮಾಡುತ್ತಿದ್ದವರಿಗೆ ಇದು ತಕ್ಕ ಉತ್ತರವಾಗಿದೆ ಎಂದು ಟಾಂಗ್ ನೀಡಿದರು. ಮೈಸೂರು ಕೊಡಗು-ಲೋಕ ಸಭಾ ಕ್ಷೇತ್ರದಲ್ಲಿ 21 ಲಕ್ಷ ಮತದಾರರಿದ್ದು, ಎಂಟು ವಿಧಾನಸಭಾ ಕ್ಷೇತ್ರಗಳಿವೆ. ಇದ ರಲ್ಲಿ ಐವರು ಕಾಂಗ್ರೆಸ್ ಶಾಸಕರಿದ್ದಾರೆ. ಈ ಚುನಾವಣೆಯನ್ನು ಸಿದ್ದರಾಮಯ್ಯ ಗಂಭೀರವಾಗಿ ಪರಿಗಣಿಸಿದ್ದು, ನಾವು ಗೆದ್ದೇ ಗೆಲ್ಲುತ್ತೇವೆ ಎಂಬ ವಿಶ್ವಾಸವಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮಾರ್ಚ್ 24 ಮತ್ತು 27ರಂದು ಮೈಸೂರಿಗೆ ಆಗಮಿಸಿ ಚುನಾವಣಾ ಪ್ರಚಾರದಲ್ಲಿ ತೊಡಗುವರು. ಏಪ್ರಿಲ್ 11ರಂದು ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ಬೃಹತ್ ಸಮಾವೇಶ ನಡೆಸಲಾ ಗುವುದು. ಈ ಮೂಲಕ ಸರ್ಕಾರದ ಸಾಧನೆಯನ್ನು ಜನರ ಮುಂದಿಟ್ಟು ಮತ ಕೇಳುತ್ತೇವೆ ಎಂದು ಲಕ್ಷ್ಮಣ ತಿಳಿಸಿದರು. ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ವಿಜಯಕುಮಾರ್, ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷ ಬಿ.ಎಂ. ರಾಮು, ಮಾಜಿ ಮೇಯರ್ ಬಿ.ಕೆ. ಪ್ರಕಾಶ್, ಕಾಂಗ್ರೆಸ್ ಮುಖಂಡರಾದ ಸೀತಾರಾಮ್, ಶಿವಣ್ಣ, ತಿವಾರಿ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಈ ಬಾರಿ ಗೆಲ್ಲದಿದ್ದರೆ ನಾನು ಸತ್ತಂತೆ

ವಿಧಾನ ಪರಿಷತ್ ಸೇರಿದಂತೆ ನಾಲ್ಕು ಚುನಾವಣೆಯಲ್ಲಿ ಸೋಲುಂಡಿರುವ ನನ್ನ ಈ ಬಾರಿಯೂ ಮತದಾರರು ಕೈ ಹಿಡಿಯದಿದ್ದರೆ ನಾನು ಸತ್ತಂತೆ....!? ಚುನಾವಣೆಗಳಲ್ಲಿ ಸೋತು ನನಗೂ ಸಾಕಾಗಿದೆ, ಸುಸ್ತಾಗಿದೆ. ಮತ್ತೆ ಪರೀಕ್ಷೆ ಮಾಡಬೇಡಿ. ನನ್ನ ಗೆಲ್ಲಿಸಿ ಎಂದು ಮತದಾರರಲ್ಲಿ ಮನವಿ ಮಾಡಿದರು.

ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಯಿಂದ ಕಳೆದ ಎಂಟು ತಿಂಗಳ ಅವಧಿಯಲ್ಲಿ ಮೈಸೂರು ಜಿಲ್ಲೆಗೆ 1,500 ಕೋಟಿ ರೂಪಾಯಿ ಬಂದಿದೆ. ಇದನ್ನು ಪರಿಗಣಿಸಿ ಮೈಸೂರು ಜನರು ಕಾಂಗ್ರೆಸ್ ಕೈ ಹಿಡಿಯಲಿದ್ದಾರೆ ಎಂದು ಸಿದ್ದರಾಮಯ್ಯ ಕೂಡ ವಿಶ್ವಾಸ ಹೊಂದಿದ್ದಾರೆ. ಮೈಸೂರು ಜನರು ಅವರಿಗೆ ಅವಮಾನ ಮಾಡಬಾರದು ಎಂದರು. ನಾನು ಸಾಮಾನ್ಯ ರೈತ ಕುಟುಂಬದಿಂದ ಬಂದವನು. ನನಗೆ ರಾಜಕೀಯ ಹಿನ್ನೆಲೆ ಇಲ್ಲ. ಕಳೆದ 30 ವರ್ಷದ ರಾಜಕೀಯ ಜೀವನದಲ್ಲಿ ಭ್ರಷ್ಟಾಚಾರದ ಕಪ್ಪು ಮಸಿ ನನಗೆ ಅಂಟಿಕೊಂಡಿಲ್ಲ. ವಿವಾದಗಳಿಗೆ ಸಂಬಂಧಿಸಿದಂತೆ ನನ್ನ ಯಾವುದೇ ಆಡಿಯೋ, ವಿಡಿಯೋ ಇಲ್ಲ. ನಾನು ಸುಳ್ಳು ಹೇಳಲ್ಲ, ರೈಲು ಬಿಡಲ್ಲ. ಇನ್ನು ಐದು ವರ್ಷದಲ್ಲಿ ಮೈಸೂರು ಹಾಗೂ ಕೊಡಗು ಜಿಲ್ಲೆಯನ್ನು ಯಾವ ರೀತಿ ಅಭಿವೃದ್ಧಿ ಮಾಡುತ್ತೇನೆ ಎಂಬ ಬಗ್ಗೆ ನನ್ನದೇ ಆದ ಪರಿಕಲ್ಪನೆ ಇದ್ದು, ಈ ಸಂಬಂಧ ಶೀಘ್ರವೇ ಪ್ರಣಾಳಿಕೆ ಪ್ರಕಟಿಸುತ್ತೇನೆ ಎಂದು ಹೇಳಿದರು.

ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನವೂ ಇಲ್ಲ, ಮೀಸಲಾತಿಯೂ ಇಲ್ಲ

ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನವೂ ಇಲ್ಲ, ಮೀಸಲಾತಿಯೂ ಇಲ್ಲದಂತಾ ಗುತ್ತದೆ. ತರುವಾಯ ಗನ್ ಪಾಯಿಂಟ್ ಇಟ್ಟು ಸರ್ಕಾರ ಕೆಲಸ ಮಾಡಿಸುತ್ತದೆ ಎಂದು ಲಕ್ಷ್ಮಣ ಎಚ್ಚರಿಸಿದರು. ಮತದಾರರು ಯಾವುದೇ ಕಾರಣಕ್ಕೂ ಜಾತಿ ಮತ್ತು ಧರ್ಮದ ಆಧಾರದ ಮತ ಹಾಕಬಾರದು. ರಾಜ್ಯ ಸರ್ಕಾರ ಮಾಡಿರುವ ಅಭಿವೃದ್ಧಿ ಕಾರ್ಯ ಪರಿಗಣಿಸಿ ಕಾಂಗ್ರೆಸ್ ಬೆಂಬಲಿಸಬೇಕು. ನಾವು ಮತದಾರರ ಪರವಾಗಿ ಅಭಿವೃದ್ಧಿ ಕೆಲಸ ಮಾಡಿದ್ದು, ಈಗ ಕೂಲಿ ಕೇಳುತ್ತಿದ್ದೇವೆ ಎಂದು ತಿಳಿಸಿದರು. ಜಾರ್ಖಂಡ್ ಮುಖ್ಯಮಂತ್ರಿಯಾಗಿದ್ದ ಹೇಮಂತ್ ಸೋರೆನ್, ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಸೇರಿದಂತೆ ಬಹಳಷ್ಟು ನಾಯಕರನ್ನು ಬಿಜೆಪಿ ಸರ್ಕಾರ ಇಡಿ ಮೂಲಕ ಬಂಧಿಸಿದೆ. ಸಿದ್ದರಾಮಯ್ಯ ವಿರುದ್ಧ ವಕ್ರದೃಷ್ಟಿ ಹಾಯಿಸಲು ಅವರ ಯಾವುದಾದರೊಂದು ದೌರ್ಬಲ್ಯ ಹುಡುಕುತ್ತಿದ್ದು, ಅವರಿಗೆ ಏನು ಸಿಗುತ್ತಿಲ್ಲ ಎಂದು ಲಕ್ಷ್ಮಣ ಹೇಳಿದರು.

ಬ್ಯಾಂಕ್ ವಹಿವಾಟು ಮೇಲೆ ತೀವ್ರ ನಿಗಾ

ಹಣವನ್ನು ಡ್ರಾ ಮಾಡುವಂತಿಲ್ಲ. ಅದೇ ರೀತಿ ಫೋನ್‌ಪೇ, ಗೂಗಲ್ ಪೇ, ಆರ್‌ಟಿಜಿಎಸ್ ಮೂಲಕ ಬೇರೆಯವರಿಗೆ ರವಾನಿಸುವಂತಿಲ್ಲ. ತುರ್ತು ಸಂದರ್ಭಗಳಲ್ಲಿ ಅನಿವಾರ್ಯವೆನಿಸಿದರೆ ಮಾತ್ರ ಪೂರಕ ದಾಖಲೆಗಳನ್ನು ಸಲ್ಲಿಸಿ ಹಣ ಡ್ರಾ ಅಥವಾ ಪಾವತಿಸಬಹುದೇ ಹೊರತು, ಹಣ, ಚಿನ್ನಾಭರಣದ ರೂಪದಲ್ಲಿ ಬೇರೆಯವರಿಗೆ ಕೊಡುವುದು ಹಾಗೂ ಉಡುಗೊರೆ ರೂಪದಲ್ಲಿ ಕೊಡುವುದೂ ಸಹ ನೀತಿ ಸಂಹಿತೆಯ ಉಲ್ಲಂಘನೆಯಾಗಲಿದೆ. ದಿನನಿತ್ಯ ಬ್ಯಾಂಕ್ ವಹಿವಾಟು, ಚಿನ್ನಾಭರಣ ಗಿರವಿ ಅಥವಾ ಅಡಮಾನ ಮಾಡಿ ಬ್ಯಾಂಕ್‌ಗಳಲ್ಲಿ ಸಾಲ ಪಡೆಯುವುದು, ಖಾಸಗಿ, ಸಹಕಾರಿ ಬ್ಯಾಂಕ್, ಹಣಕಾಸು ಸಂಸ್ಥೆಗಳಲ್ಲಿ ಸಾಲಕ್ಕೆ ಅರ್ಜಿ ಹಾಕಿದಾಗಲೇ ಆ ಸಂಸ್ಥೆಗಳು ಮಾಹಿತಿ ನೀಡಬೇಕೆಂದು ಚುನಾವಣಾ ಆಯೋಗವು ನಿರ್ದೇಶನ ನೀಡಿದೆ. ರಾತ್ರಿ ವೇಳೆ ಎಟಿಎಂಗಳಲ್ಲಿ ಲಕ್ಷಾಂತರ ರೂ. ಹಣ ಡ್ರಾ ಮಾಡುವುದಕ್ಕೂ ಕಡಿವಾಣ ಹಾಕಿರುವ ಆಯೋಗವು, ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ವಿವಿಧ ಇಲಾಖೆಗಳ ಮೂಲಕ ಜಾರಿಗೆ ತಂದಿರುವ ಗ್ಯಾರಂಟಿ ಹಾಗೂ ಇನ್ನಿತರ ಜನಪರ ಯೋಜನೆಗಳ ಬ್ಯಾಂಕ್ ವಹಿವಾಟಿನ ಮೇಲೆ ನಿಗಾ ವಹಿಸಲಾಗಿದ್ದು, ನಿಗದಿಗಿಂತ ಅಧಿಕ ಮೊತ್ತದ ವಹಿವಾಟುಗಳಾಗಿದ್ದರೆ, ತಕ್ಷಣ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ರವಾನೆಯಾಗಲಿದೆ. ಚಿನ್ನಾಭರಣ ಅಂಗಡಿಗಳಲ್ಲಿ ಪ್ರತೀದಿನ ನಡೆಯುವ ವ್ಯಾಪಾರಕ್ಕೆ ಜಿಎಸ್‌ಟಿ ಬಿಲ್ ನೀಡಬೇಕು, ಜೊತೆಗೆ ಗ್ರಾಹಕರಿಗೂ ರಶೀದಿ ನೀಡಬೇಕು. ಇಲ್ಲದಿದ್ದಲ್ಲಿ ಆಭರಣ ಕೊಂಡೊಯ್ಯುವಾಗ ಗ್ರಾಹಕರು ಚೆಕ್‌ಪೋಸ್ಟ್‌ಗಳಲ್ಲಿ ಅದನ್ನು ತೋರಿಸಿ ಕೊಂಡೊಯ್ಯಲು ಅನುಕೂಲವಾಗುತ್ತದೆ. ಆನ್‌ಲೈನ್ ವ್ಯವಹಾರದ ಪ್ರತಿಯೊಂದು ವಹಿವಾಟು ಭಾರತ ಚುನಾವಣಾ ಆಯೋಗ, ಆದಾಯ ತೆರಿಗೆ ಮತ್ತು ವಾಣಿಜ್ಯ ತೆರಿಗೆ ಇಲಾಖೆ ಪೋರ್ಟಲ್‌ಗಳಲ್ಲಿ ಕಾಣಸಿಗುವಂತೆ ತಂತ್ರಾಂಶ ಸಿದ್ಧಪಡಿಸಲಾಗಿದ್ದು, ಆ ಮೂಲಕ ಚುನಾವಣಾ ಅಕ್ರಮಕ್ಕೆ ಹಣ ಬಳಕೆಯಾಗದಂತೆ ಕಟ್ಟೆಚ್ಚರ ವಹಿಸಲಾಗುತ್ತಿದೆ. ಅದೇ ರೀತಿ ಮೈಸೂರು ನಗರದಾದ್ಯಂತ ಬಡ್ಡಿ ಲೇವಾದೇವಿ ಮಾಡುವವರು, ಚೀಟಿ, ಕಂತು ವಹಿವಾಟಿನ ಬಗ್ಗೆಯೂ ಆಯಾ ಠಾಣಾ ಪೊಲೀಸರು ಸದ್ದಿಲ್ಲದೇ ಕಾರ್ಯಾಚರಣೆ ನಡೆಸುತ್ತಿದ್ದು, ರಿಯಲ್ ಎಸ್ಟೇಟ್ ವ್ಯವಹಾರ, ಆಸ್ತಿಗಳ ಪರಭಾರೆ ಮೇಲೂ ನಿಗಾ ಇರಿಸಲಾಗಿದೆ.

ಮಾ.25ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ

●ಮೈಸೂರು ಜಿಲ್ಲೆಯಲ್ಲಿ ಬರೆಯಲಿದ್ದಾರೆ 40,333 ವಿದ್ಯಾರ್ಥಿಗಳು ●ಪರೀಕ್ಷಾ ಭಯ ಹೋಗಲಾಡಿಸಲು ಕ್ರಮ ●ಬಸ್ಸಲ್ಲಿ ಸಕಾಲಕ್ಕೆ ಬರಲಾಗದಿದ್ದರೆ ಬೈಕ್ ವ್ಯವಸ್ಥೆ ●ಸಿಸಿ ಕ್ಯಾಮರಾ ಅಳವಡಿಕೆ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಡಿಡಿಪಿಐ ಹೆಚ್.ಕೆ.ಪಾಂಡು ಅವರು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಸಿದ್ಧತೆ ಕುರಿತು ವಿವರಿಸಿದರು.

ಮೈಸೂರು, ಮಾ.22(ಜಿಎ)- ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಮಾ.25 ರಿಂದ ಆರಂಭವಾಗಲಿದ್ದು, ಮೈಸೂರು ಜಿಲ್ಲೆಯಲ್ಲಿ 40,333 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದಾರೆ ಎಂದು ಡಿಡಿಪಿಐ ಹೆಚ್.ಕೆ.ಪಾಂಡು ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದಲ್ಲಿ 35, ಗ್ರಾಮೀಣ ಪ್ರದೇಶದಲ್ಲಿ 97 ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 132 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದ್ದು, 40,333 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಇವರಲ್ಲಿ 20,046 ಮಂದಿ ವಿದ್ಯಾರ್ಥಿಗಳು, 20,287 ವಿದ್ಯಾರ್ಥಿನಿಯರಿದ್ದು, ರೆಗ್ಯೂಲರ್ ವಿದ್ಯಾರ್ಥಿಗಳು 38,567, ಪುನರಾವರ್ತಿತ 829, ಖಾಸಗಿ ವಿದ್ಯಾರ್ಥಿಗಳು 634, ಖಾಸಗಿ ಪುನರಾವರ್ತಿತ 303 ವಿದ್ಯಾರ್ಥಿಗಳು ಪರೀಕ್ಷೆಬರೆಯಲಿದ್ದಾರೆ ಎಂದು ವಿವರಿಸಿದರು.

ಹೆಚ್.ಡಿ.ಕೋಟೆ-3,748, ಹುಣಸೂರು -4,382, ಕೆ.ಆರ್.ನಗರ-3,159, ಮೈಸೂರು ಉತ್ತರ-6,624, ಮೈಸೂರು ದಕ್ಷಿಣ-4,667, ಮೈಸೂರು ಗ್ರಾಮಾಂತರ-5,290, ನಂಜನಗೂಡು-5,173, ಪಿರಿಯಾಪಟ್ಟಣ-3,238, ಟಿ.ನರಸೀಪುರದಲ್ಲಿ 4,052 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದಾರೆ. ಕಾಡಂಚಿನ ಗ್ರಾಮಗಳಾದ ಹುಣಸೂರು ತಾಲೂಕಿನ ಗುರುಪುರ, ಹನಗೂಡು ಮತ್ತು ಹೆಚ್.ಡಿ.ಕೋಟೆ ತಾಲೂಕಿನ ಮೂಳ್ಳೂರು, ಬಿ.ಮಟಕೆರೆಯಲ್ಲಿ ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ವಿವರಿಸಿದರು.

ವಿದ್ಯಾರ್ಥಿಗಳಲ್ಲಿನ ಪರೀಕ್ಷಾ ಭಯ ಹೋಗಲಾಡಿಸಲು ಇಲಾಖೆ ಎಲ್ಲಾ ರೀತಿಯ ಕ್ರಮ ಕೈಗೊಂಡಿದೆ. ಹೀಗಾಗಿ ಮೊದಲನೇ ದಿನ ಬೆಳಗ್ಗೆ 9ಕ್ಕೆ ಪರೀಕ್ಷಾ ಕೊಠಡಿಗೆ ಹಾಜರಾಗಿ ಆತಂಕ ದೂರ ಮಾಡಿಕೊಳ್ಳಲು ತಿಳಿಸಲಾಗಿದೆ. ಇನ್ನು, ವಿದ್ಯಾರ್ಥಿಗಳನ್ನು ಸುಲಭವಾಗಿ ಗುರುತಿಸಲು ಸಾಧ್ಯವಾಗುವ ನಿಟ್ಟಿನಲ್ಲಿ ಎಲ್ಲರೂ ಶಾಲಾ ಸಮವಸ್ತ್ರ ಧರಿಸಿರಬೇಕು. ಮೊಬೈಲ್, ಸ್ಮಾರ್ಟ್ ವಾಚ್ ಮೊದಲಾದವನ್ನು ನಿರ್ಬಂಧಿಸಲಾಗಿದೆ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ನೀರು ಸೇರಿದಂತೆ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗಿದೆ ಎಂದರು. ಬಸ್‌ಗಳ ಮೂಲಕ ಪರೀಕ್ಷಾ ಕೇಂದ್ರಗಳಿಗೆ ಬರುವ ವಿದ್ಯಾರ್ಥಿಗಳಿಗೆ ಸೂಕ್ತ ಸಮಯಕ್ಕೆ ತಲುಪಲು ಸಾಧ್ಯವಾಗದಿದ್ದರೆ, ಪರೀಕ್ಷಾ ಕೇಂದ್ರಗಳಿಗೆ ನೇಮಕಗೊಂಡಿರುವ ಮುಖ್ಯ ಅಧೀಕ್ಷಕರಿಗೆ ಕರೆ ಮಾಡಿದರೆ, ಅವರ ತಂಡದವರು ತಮ್ಮ ಬೈಕ್‌ಗಳ ಮೂಲಕ ಮಕ್ಕಳನ್ನು ಪರೀಕ್ಷಾ ಕೇಂದ್ರಕ್ಕೆ ಕರೆತರುವ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತ ಭದ್ರತೆಗಾಗಿ ಮುನ್ನೆಚ್ಚರಿಕೆ ಕ್ರಮವಾಗಿ ಸಿಸಿ ಕ್ಯಾಮರಾ ಅಳವಡಿಸಲಾಗಿದೆ. ಜಿಲ್ಲಾ ಮತ್ತು ತಾಲೂಕು ಹಂತದಲ್ಲಿ ಸಹಾಯವಾಣಿ ತೆರೆಯಲಾಗಿದೆ ಎಂದು ಅವರು ಹೇಳಿದರು. ಈಗಾಗಲೇ ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ಪೋಷಕರ ಒಪ್ಪಿಗೆ ಪಡೆದು ರಾತ್ರಿ ತರಗತಿ ನಡೆಸಲಾಗುತ್ತಿದೆ. ಅಲ್ಲದೆ, ಪರೀಕ್ಷೆ ಸುಗಮವಾಗಿ ನಡೆಯುವಂತೆ, ಪರೀಕ್ಷಾ ಅಕ್ರಮ ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾಡಳಿತದ ಅಡಿಯಲ್ಲಿ ಎಲ್ಲಾ ಕ್ರಮ ಕೈಗೊಳ್ಳಲಾಗಿದೆ. ಹೀಗಾಗಿ ವಿದ್ಯಾರ್ಥಿಗಳು ಸಹಾ ಯಾವುದೇ ಭಯ ಇಲ್ಲದೇ ನಿರ್ಭೀತಿ ಯಿಂದ, ಸಂತಸ, ಉತ್ಸಾಹದಿಂದ ಪರೀಕ್ಷೆ ಬರೆಯುವಂತೆ ಸಲಹೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ಇಲಾಖೆ ಅಧಿಕಾರಿಗಳಾದ ಅನಿತ ರಾಜು, ನುರೂಪ್ ವ್ಲ್ಲಿ, ವಿರೂಪಾಕ್ಷಿ ಶಿವ ಮೂರ್ತಿ, ದೇವರಾಜು, ಕೆಂಪರಾಜು, ಪುಷ್ಪ ಉಪಸ್ಥಿತರಿದ್ದರು.

ಪರೀಕ್ಷಾ ವೇಳಾಪಟ್ಟಿ

ಮಾ. 25 ರ ಸೋಮವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.30 ರವರೆಗೆ ಪ್ರಥಮ ಭಾಷೆ, 27 ರ ಬುಧವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.30 ರವರೆಗೆ ಸಮಾಜ ವಿಜ್ಞಾನ, 30 ರ ಶನಿವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.30 ರವರೆಗೆ ವಿಜ್ಞಾನ, ಏಪ್ರಿಲ್ 2ರ ಮಂಗಳವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.30 ರವರೆಗೆ ಗಣಿತ, ಏಪ್ರಿಲ್ 3ರ ಬುಧವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.30 ರವರೆಗೆ ಆಯ್ದ ಕೇಂದ್ರಗಳಲ್ಲಿ ಪರ್ಯಾಯ ವಿಷಯ, ಏ.4 ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.15 ರವರೆಗೆ ತೃತೀಯ ಭಾಷೆ, ಏಪ್ರಿಲ್ 6ರ ಶನಿವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.15 ರವರೆಗೆ ದ್ವಿತೀಯ ಭಾಷೆ ಪರೀಕ್ಷೆಗಳು ನಡೆಯಲಿವೆ.

ಪದೇ ಪದೆ ಸಿಎಂ ಸಿದ್ದರಾಮಯ್ಯರನ್ನು ಟೀಕಿಸಿದರೆ ಪ್ರತಿಭಟನೆ

ವಿಪಕ್ಷ ನಾಯಕ ಅಶೋಕ್, ಅಶ್ವಥ್ ನಾರಾಯಣ್‌ಗೆ ಎಚ್ಚರಿಕೆ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿದರು.

ಮೈಸೂರು, ಮಾ.22(ಜಿಎ)-ವಿರೋಧ ಪಕ್ಷದ ನಾಯಕ ಅಶೋಕ್ ಹಾಗೂ ಮಾಜಿ ಸಚಿವ ಅಶ್ವತ್ಥ ನಾರಾಯಣ್ ಅವರು ಪದೆ ಪದೇ ಸಿಎಂ ಸಿದ್ದರಾಮಯ್ಯ ಅವರನ್ನು ದುರ್ಬಲ ಮುಖ್ಯಮಂತ್ರಿ ಎಂದು ಟೀಕಿಸುತ್ತಿದ್ದು, ಇದನ್ನು ಹೀಗೆ ಮುಂದುವರಿಸಿದಲ್ಲಿ ಈ ಇಬ್ಬರು ನಗರಕ್ಕೆ ಭೇಟಿ ನೀಡಿದ ವೇಳೆ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಮಾಜಿ ಶಾಸಕ ಎಂ.ಕೆ. ಸೋಮಶೇಖರ್ ಎಚ್ಚರಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ಪ್ರಬಲ ರಾಜಕೀಯ ನಾಯಕರಾಗಿದ್ದಾರೆ. ಈ ರೀತಿ ಇಲ್ಲದೇ ಹೋಗಿದ್ದಲ್ಲಿ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ 136 ಸ್ಥಾನ ದೊರಕಿಸಿಕೊಡಲು ಸಾಧ್ಯವಾಗುತ್ತಿತ್ತೆ ಎಂದು ಪ್ರಶ್ನಿಸಿದರು. ಚುನಾವಣೆಗೂ ಮೊದಲು ಕಾಂಗ್ರೆಸ್ ಪಕ್ಷ ನೀಡಿದ್ದ ಗ್ಯಾರಂಟಿ ಜಾರಿ ಭರವಸೆಯನ್ನು ಬಿಜೆಪಿ ಹಾಗೂ ಅದರ ಮುಖಂಡರು ಟೀಕಿಸಿದ್ದರು. ಇದರ ಜಾರಿ ಸಾಧ್ಯವಿಲ್ಲ ಎಂದಿದ್ದರು. ಆದರೆ ಅಧಿಕಾರಕ್ಕೆ ಬಂದ ಕೂಡಲೇ ಸಿದ್ದರಾಮಯ್ಯ ಅವರು ಅವನ್ನು ಜಾರಿಗೊಳಿಸಿದ್ದಾರೆ. ಗ್ಯಾರಂಟಿಗಳಿಂದಾಗಿ ರಾಜ್ಯ ದಿವಾಳಿಯಾಗುತ್ತದೆ ಎಂಬ ಟೀಕೆಗೆ ಪ್ರತಿಯಾಗಿ ಇಡೀ ದೇಶವೇ ಮೆಚ್ಚುವಂತಹ ಬಜೆಟ್ ಮಂಡಿಸಿದ್ದಾರೆ ಎಂದು ಶ್ಲಾಘಿಸಿದರು.

ಸಿದ್ದರಾಮಯ್ಯ ಅವರ ನೇರ ನುಡಿ ಹಾಗೂ ಯೋಜನೆಗಳು ಜನರಿಗೆ ತಲುಪುತ್ತಿರುವುದು ನಿಮಗೆ ತಡೆಯಲಾಗದೇ ಅವರ ಹೆಸರನ್ನು ಬಳಸಿಕೊಂಡು ನೀವು ಮೈಲೇಜ್ ತೆಗೆದುಕೊಳ್ಳೋಕೆ ಪ್ರಯತ್ನ ಮಾಡಿದ್ದೀರಾ? ಸಿದ್ದರಾಮಯ್ಯ ಅವರ ಏಳಿಗೆ ಮತ್ತು ಅಭಿವೃದ್ಧಿ ವಿಚಾರಗಳನ್ನು ಸಹಿಸದ ನೀವೆಷ್ಟು ವೀಕ್ ಎಂದು ತಿಳಿಯುತ್ತದೆ. ವಿರೋಧ ಪಕ್ಷದ ನಾಯಕರೇ ಇಲ್ಲದೇ ಆರು ತಿಂಗಳು ಸುಮ್ಮನೆ ಕುಳಿತಿದ್ರಿ. ನಿಮ್ಮಂತಹ ವೀಕ್ ವ್ಯಕ್ತಿಗಳಿಗೆ ಸಿದ್ದರಾಮಯ್ಯ ಬಗ್ಗೆ ಮಾತನಾಡುವ ಯಾವ ನೈತಿಕತೆಯೂ ಇಲ್ಲ ಕಿಡಿಕಾರಿದರು.

ಕೆಪಿಸಿಸಿ ವಕ್ತಾರ ಎಚ್.ಎ. ವೆಂಕಟೇಶ್ ಮಾತನಾಡಿ, ಸಿದ್ದರಾಮಯ್ಯ ಅವರು ಬಲಿಷ್ಠರಾಗಿರುವ ಕಾರಣದಿಂದಲೇ ಕಳೆದ ಚುನಾವಣೆಯಲ್ಲಿ ಬಿಜೆಪಿಯನ್ನು ಸೋಲಿಸಿದ್ದಾರೆ. ಕೇವಲ ಭ್ರಮೆ ಸೃಷ್ಟಿಸಲೆಂದಷ್ಟೇ ಬಿಜೆಪಿಯವರು ನಾಲ್ಕು ಜನರನ್ನು ನಿಲ್ಲಿಸಿ ಮೋದಿ ಮೋದಿ ಎಂದು ಕೂಗಿಸುತ್ತಿದ್ದಾರೆಂದು ಲೇವಡಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಶ್ರೀಧರ್, ಜಿ. ಸೋಮಶೇಖರ್, ಡೈರಿ ವೆಂಕಟೇಶ್ ಉಪಸ್ಥಿತರಿದ್ದರು.

ಪೊಲೀಸರಿಂದ ದಲಿತ ಯುವಕನ ಮೇಲೆ ದೌರ್ಜನ್ಯ ಆರೋಪ

ದಸಂಸದಿಂದ ಕ್ರಮಕ್ಕೆ ಆಗ್ರಹ

ಮೈಸೂರು, ಮಾ.22(ಜಿಎ)-ಮೈಸೂರಿನ ಪಡುವಾರಹಳ್ಳಿಯ ದಲಿತ ಯುವಕನ ಕೈ, ಕಾಲಿನ ಮೂಳೆ ಮುರಿದಿರುವ ಪೊಲೀಸರು ಮತ್ತು ಚಿಕಿತ್ಸೆಯಿಂದ ವಂಚಿಸಿರುವ ವೈದ್ಯರ ವಿರುದ್ಧ ಕಾನೂನು ಕ್ರಮ ಜರುಗಿಸಿ ಯುವಕನಿಗೆ ನ್ಯಾಯ ದೊಕಿಸಿಕೊಡುವಂತೆ ದಲಿತ ಸಂಘರ್ಷ ಸಮಿತಿ ಒತ್ತಾಯಿಸಿದೆ.

ಈ ಕುರಿತು ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಮಿತಿಯ ಸಂಚಾಲಕ ಚೋರನಹಳ್ಳಿ ಶಿವಣ್ಣ ಮಾತನಾಡಿ, ಮಾ.9ರಂದು ಪಡುವಾರಹಳ್ಳಿಯಲ್ಲಿ ನಡೆದ ಜೋಡಿ ಮಾರಮ್ಮನ ಹಬ್ಬದ ವೇಳೆ ತಮಟೆ ಶಬ್ದಕ್ಕೆ ಕುಣಿಯುತ್ತಿದ್ದ ದಲಿತ ಯುವಕ ಅಭಿಷೇಕ್ ಎಂಬಾತನ ಕೈ, ಕಾಲಿನ ಮೂಳೆ ಮುರಿಯುವಂತೆ ಜಯಲಕ್ಷ್ಮಿಪುರಂ ಠಾಣೆಯ ಇಬ್ಬರು ಪೊಲೀಸ್ ಪೇದೆಗಳು ಹಲ್ಲೆ ನಡೆಸಿದ್ದಾರೆ. ಇವರ ವಿರುದ್ಧ ನಗರ ಪೊಲೀಸ್ ಆಯುಕ್ತರು ಕೂಡಲೇ ಕ್ರಮ ಕೈಗೊಳ್ಳದಿದ್ದರೆ ಜಯಲಕ್ಷ್ಮೀಪುರಂ ಠಾಣೆ ಎದುರು ದಲಿತ ಸಂಘರ್ಷ ಸಮಿತಿ ಪ್ರತಿಭಟನೆ ನಡೆಸಲಿದೆ ಎಂದು ಎಚ್ಚರಿಸಿದರು.

ಮತ್ತೊಂದೆಡೆ ಹಲ್ಲೆಗೊಳಗಾದ ಯುವಕರ ಕೈ, ಕಾಲು ಮೂಳೆ ಮುರಿದ ಪರಿಣಾಮ ಚಿಕಿತ್ಸೆಗಾಗಿ ಡಿಆರ್‌ಎಂ ಆಸ್ಪತ್ರೆ ಕರೆದುಕೊಂಡು ಸಂದರ್ಭದಲ್ಲಿ ಅಲ್ಲಿನ ವೈದ್ಯರು ಸೂಕ್ತ ಚಿಕಿತ್ಸೆ ನೀಡದೆ, ಎಕ್ಸ್‌ರೇ ಮಾಡಿ ಯಾವುದೇ ತೊಂದರೆ ಇಲ್ಲ. ಎಲ್ಲವೂ ಸರಿಯಾಗಿದೆ ಎಂದು ಸುಳ್ಳು ವರದಿ ನೀಡಿದ್ದಾರೆ. ಆದರಿಂದ ಆಸ್ಪತ್ರೆ ವೈದ್ಯರ ವಿರುದ್ಧವೂ ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಹಲ್ಲೆಗೊಳಗಾದ ಯುವಕ ಅಭಿಷೇಕ್, ತಗಡೂರು ಶಿವಲಿಂಗಯ್ಯ, ಶಂಕರಪುರ ಶಿವಮೂರ್ತಿ ಉಪಸ್ಥಿತರಿದ್ದರು.

ದಲಿತ ನಾಯಕರ ಮಕ್ಕಳಿಗೆ ಟಿಕೆಟ್ ನೀಡಲು ರಾಜಕೀಯ ಪಕ್ಷಗಳ ನಿರಾಕರಣೆ

ಗಾಂಧಿನಗರ ದಲಿತ ಮಹಾಸಭಾ ಆರೋಪ

ಮೈಸೂರು, ಮಾ.22(ಜಿಎ)-ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಎಲ್ಲಾ ಪಕ್ಷಗಳು ಮೇಲ್ವರ್ಗದ ನಾಯಕರ ಮಕ್ಕಳಿಗೆ ಟಿಕೆಟ್ ನೀಡಿದ್ದು, ಈ ಸಂದರ್ಭದಲ್ಲಿ ದಲಿತ ನಾಯಕರ ಮಕ್ಕಳಿಗೆ ನಿರಾಕರಿಸುತ್ತಿವೆ ಎಂದು ನಗರದ ಗಾಂಧಿನಗರದ ದಲಿತ ಮಹಾಸಭಾ ಅಧ್ಯಕ್ಷ ಎಸ್.ರಾಜೇಶ್ ದೂರಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷಸಹಾ ಇದೇ ಹಾದಿಯಲ್ಲಿ ಸಾಗಿದ್ದು ಸತೀಶ್ ಜಾರಕಿಹೊಳಿ, ಲಕ್ಷ್ಮಿ ಹೆಬ್ಬಾಳ್ಕರ್, ಈಶ್ವರ ಖಂಡ್ರೆ ಅವರ ಮಕ್ಕಳಿಗೆ ಟಿಕೆಟ್ ನೀಡಿದ್ದರೆ, ಕೆ.ಎಚ್. ಮುನಿಯಪ್ಪ ಡಾ.ಎಚ್.ಸಿ. ಮಹದೇವಪ್ಪ ಅವರ ಪುತ್ರರಿಗೆ ನಿರಾಕರಿಸುವ ಮಾತು ಕೇಳಿಬಂದಿದೆ. ಇನ್ನು ಬಿಜೆಪಿ ಸಹಾ ಈಗಿನ ಸಂಸದ ವಿ. ಶ್ರೀನಿವಾಸ ಪ್ರಸಾದ್ ಅವರ ಅಳಿಯನಿಗೆ ಟಿಕೆಟ್ ನಿರಾಕರಿಸಿದೆ ಎಂದು ಬೇಸರಿಸಿ, ಚಾಮರಾಜನಗರ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಡಾ.ಹೆಚ್.ಸಿ.ಮಹದೇವಪ್ಪ ಅವರ ಪುತ್ರ ಸುನಿಲ್ ಬೋಸ್ ಅವರಿಗೆ ಟಿಕೆಟ್ ನೀಡದಿದ್ದಲ್ಲಿ ಪ್ರತಿಭಟನೆ ನಡೆಸಲಿದೆ ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಅಶೋಕ ಪುರ ಮಹೇಶ್, ಎಸ್.ಎ.ರಹೀಂ, ಶಿವರುದ್ರ, ಲಕ್ಷ್ಮಣ್, ರಾಕೇಶ್, ನಾಗರಾಜ್ ಉಪಸ್ಥಿತರಿದ್ದರು.

ಕಟ್ಟುನಿಟ್ಟಾಗಿ ಮಾದರಿ ನೀತಿ ಸಂಹಿತೆ ಜಾರಿಗೊಳಿಸಿ

ಅಧಿಕಾರಿಗಳಿಗೆ ಜಿಲ್ಲಾ ಚುನಾವಣಾಧಿಕಾರಿ ಡಾ. ಕೆ.ವಿ. ರಾಜೇಂದ್ರ ತಾಕೀತು



ಮೈಸೂರು, ಮಾ. 22(ಆರ್‌ಕೆ)- ಚುನಾವಣಾ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಸ್ಟ್ಯಾಟಿಕ್ ಸರ್ವಲನ್ಸ್ ಮತ್ತು ಫ್ಲೈಯಿಂಗ್ ಸ್ಕ್ವಾಡ್ ತಂಡದ ಅಧಿಕಾರಿಗಳಿಗೆ ಜಿಲ್ಲಾ ಚುನಾವಣಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ಇಂದಿಲ್ಲಿ ತಾಕೀತು ಮಾಡಿದ್ದಾರೆ.

ಮೈಸೂರಿನ ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಮುಕ್ತ, ನ್ಯಾಯ ಸಮ್ಮತ ಹಾಗೂ ಶಾಂತಿಯುತ ಮತದಾನ ಮಾಡಲು ನಾಗರಿಕರಿಗೆ ಉತ್ತಮ ವಾತಾವರಣ ಕಲ್ಪಿಸಬೇಕಾದ ಜವಾಬ್ದಾರಿ ಹೊತ್ತಿರುವ ಎಸ್‌ಎಸ್‌ಟಿ, ಎಫ್‌ಎಸ್‌ಟಿ ಸೇರಿದಂತೆ ನಿಯೋಜಿತ ಇತರ ತಂಡಗಳ ಅಧಿಕಾರಿಗಳು ಪರಿಣಾಮಕಾರಿಯಾಗಿ ಕರ್ತವ್ಯ ನಿರ್ವಹಿಸಬೇಕು ಎಂದರು.

ಚೆಕ್‌ಪೋಸ್ಟ್‌ಗಳು, ನಗರ ಪ್ರದೇಶದ ಸರ್‌ಪ್ರೈಸ್ ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ಮಾಡಿದಾಗ 50,000 ರೂ.ಗಿಂತ ಹೆಚ್ಚಿನ ಮೊತ್ತದ ನಗದು, ಆಭರಣ, ಗೃಹೋಪಯೋಗಿ ವಸ್ತುಗಳು ಹಾಗೂ ಉಡುಪುಗಳು ಪತ್ತೆಯಾದರೆ ವಾಹನ ಸಮೇತ ಅವುಗಳನ್ನು ವಶಪಡಿಸಿಕೊಂಡು ವರದಿಯೊಂದಿಗೆ ಆಯಾ ರಿಟರ್ನಿಂಗ್ ಆಫೀಸರ್‌ಗಳಿಗೆ ಒಪ್ಪಿಸಬೇಕೆಂದು ಅವರು ಸೂಚಿಸಿದರು.

ಅಧಿಕೃತವಾಗಿ ಘೋಷಣೆಯಾಗಿ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ ಬಳಿಕ ಕಾರ್ಯಚಟುವಟಿಕೆಗಳು ಚುರುಕುಗೊಳ್ಳುವುದರಿಂದ ತಪಾಸಣಾ ಕಾರ್ಯಕ್ಕೆ ನಿಯೋಜನೆಗೊಂಡಿರುವ ಅಧಿಕಾರಿಗಳು, ಸತ್ಯಾಸತ್ಯತೆ ಪರಾಮರ್ಶಿಸಿ ನೀತಿ ಸಂಹಿತೆ ಉಲ್ಲಂಘನೆಯಾಗಿರುವುದು ಕಂಡುಬಂದಲ್ಲಿ ನಿರ್ದಾಕ್ಷಿಣ್ಯ ಕ್ರಮ ವಹಿಸಬೇಕೆಂದು ಡಾ. ರಾಜೇಂದ್ರ ತಿಳಿಸಿದರು.

ನೀತಿ ಸಂಹಿತೆಯ ನಿಯಮ, ಜವಾಬ್ದಾರಿ, ಕರ್ತವ್ಯ ವ್ಯಾಪ್ತಿಯನ್ನು ಅರಿತು ಅದರನ್ವಯ ಕಾರ್ಯನಿರ್ವಹಿಸಿ ಎಲ್ಲಿಯೂ ನಿಯಮ ಉಲ್ಲಂಘನೆಯಾಗದಂತೆ ಎಚ್ಚರ ವಹಿಸಬೇಕು, ನೀವು ಯಾವುದೇ ಕಾರ್ಯಾಚರಣೆ ಮಾಡಿದರೂ ವೀಡಿಯೋ ರೆಕಾರ್ಡ್ ಮಾಡಿ ಸಾಕ್ಷ್ಯ ದಾಖಲಿಸಿಕೊಂಡು ಯಾವುದೇ ತರಹದ ಆರೋಪಗಳು ಕೇಳಿಬರದಂತೆ ನೋಡಿಕೊಳ್ಳಿ ಎಂದು ಇದೇ ವೇಳೆ ಸಲಹೆ ನೀಡಿದರು.

ಜಿಲ್ಲಾ ಪಂಚಾಯ್ತಿ ಸಿಇಓ ಕೆ.ಎಂ. ಗಾಯತ್ರಿ, ವಾಣಿಜ್ಯ ಇಲಾಖೆ ಜಂಟಿ ಆಯುಕ್ತ ಡಿ.ಕೆಂಬಣ್ಣ, ಅಬಕಾರಿ ಉಪ ಅಧೀಕ್ಷಕ ಮೋಹನ, ಇನ್ಸ್‌ಪೆಕ್ಟರ್ ಕಾಂತರಾಜ್ ಹಾಗೂ ಇತರ ಅಧಿಕಾರಿಗಳು ತರಬೇತಿ ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.

ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

ಮೈಸೂರು,ಮಾ.22-ಮೈಸೂರು ತಾಲೂಕಿನ ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ 2023-24 ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶ **www.ssp.postmatric.karnataka.gov.in** ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಮಾ.25 ಕೊನೆಯ ದಿನಾಂಕವಾಗಿರುತ್ತದೆ. ವಿದ್ಯಾರ್ಥಿಗಳು ಬ್ಯಾಂಕಿಗೆ ಭೇಟಿ ನೀಡಿ, ಆಧಾರ್ ಸಂಖ್ಯೆಯನ್ನು ಎನ್‌ಪಿಸಿಐ (ನ್ಯಾಷನಲ್ ಪೇಮೆಂಟ್ ಕಾರ್ಪೋರೇಷನ್ ಆಫ್ ಇಂಡಿಯಾ) ನಲ್ಲಿ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಮಾಡಿಸುವುದು ಕಡ್ಡಾಯವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೈಸೂರು ತಾಲೂಕಿನ ಡಾ.ಬಾಬು ಜಗಜೀವನರಾಂ ಭವನಕಟ್ಟಡ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಗ್ರೇಡ್-1 ಅವರ ದೂ.ಸಂ:0821-2520910 ಅನ್ನು ಸಂಪರ್ಕಿಸಬಹುದು.

ಮೈಸೂರು ನಗರ ಪಾಲಿಕೆಯಲ್ಲಿ ಮಹಿಳಾ ದಿನಾಚರಣೆ

66 ಪೌರ ಕಾರ್ಮಿಕ ಮಹಿಳೆಯರಿಗೆ ಗೌರವ



ಮೈಸೂರು ಮಹಾನಗರ ಪಾಲಿಕೆ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಅಂತರ ರಾಷ್ಟ್ರೀಯ ಮಹಿಳಾ ದಿನದ ಕಾರ್ಯಕ್ರಮದಲ್ಲಿ ಹಿರಿಯ ಮಹಿಳಾ ಪೌರಕಾರ್ಮಿಕರನ್ನು ಪಾಲಿಕೆ ವತಿಯಿಂದ ಗೌರವಿಸಲಾಯಿತು.

ಮೈಸೂರು,ಮಾ.22(ಎಂಟಿವೈ)- ಮಹಿಳೆಯರು ಮನೆ, ಮನಸ್ಸು ಹಾಗೂ ಸಮಾಜವನ್ನು ಸ್ವಚ್ಛಗೊಳಿಸುವ ಕಾಯಕದಲ್ಲಿ ತೊಡಗಿದ್ದಾರೆ ಎಂದು ಮೈಸೂರು ಮಹಾನಗರ ಪಾಲಿಕೆಯ ಆಯುಕ್ತೆ ಡಾ. ಎನ್.ಎನ್.ಮಧು ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಶುಕ್ರವಾರ ನಡೆದ ಮಹಿಳಾ ದಿನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರಿಗೆ ಪ್ರತಿ ದಿನವೂ ಮಹಿಳಾ ದಿನಾಚರಣೆಯೇ ಆಗಿರುತ್ತದೆ. ವಿವಿಧ ಹುದ್ದೆಗಳಲ್ಲಿರುವ ಮಹಿಳೆಯರು ತಮ್ಮ ಮನೆಯಲ್ಲಿ ಕಸ ಗುಡಿಸುವುದೂ ಸೇರಿದಂತೆ ಇನ್ನಿತರ ಕೆಲಸ ಮಾಡಿ, ಮನೆಯನ್ನು ಸ್ವಚ್ಛವಾಗಿಟ್ಟುಕೊಳ್ಳಲು ಪ್ರಯತ್ನಿಸುತ್ತಾರೆ. ಪ್ರತಿಯೊಂದು ಕ್ಷೇತ್ರದಲ್ಲಿರುವ ಮಹಿಳೆಯರು ಮನೆ, ಮನಸ್ಸು, ಸಮಾಜದಲ್ಲಿ ಸ್ವಚ್ಛತೆ ಕಾಪಾಡಲು ಶ್ರಮಿಸುತ್ತಾರೆ ಎಂದರು.

ಮೈಸೂರು ನಗರದ ವಾತಾವರಣ ಸ್ವಚ್ಛವಾಗಿರಬೇಕಾದರೆ ಪೌರಕಾರ್ಮಿಕರ ಸೇವೆ ಅಪರಿಮಿತ. ಕೆಲ ವರ್ಷದ ಹಿಂದೆ ಮೈಸೂರು ನಗರ ಸ್ವಚ್ಛತೆಯಲ್ಲಿ ನಂಬರ್ ಒನ್ ಸ್ಥಾನದಲ್ಲಿತ್ತು. ಇದಕ್ಕೆ ಪೌರಕಾರ್ಮಿಕರ ಶ್ರಮ ಕಾರಣ. ಆದರೆ ನಂತರದ ವರ್ಷಗಳಿಂದ ಸ್ವಚ್ಛತೆಯಲ್ಲಿ ಮುಂಚೂಣಿ ಸ್ಥಾನ ಪಡೆಯಲು ಹಿನ್ನಡೆಯಾಗುತ್ತಿದೆ. ಪಾರಂಪರಿಕ ನಗರಿ, ಸಾಂಸ್ಕೃತಿಕ ನಗರಿ ಎಂದು ಕರೆಯುವ ಮೈಸೂರು ಸ್ವಚ್ಛತೆಯಲ್ಲಿ ಪಡೆದಿದ್ದ ಮುಂಚೂಣಿ ಸ್ಥಾನವನ್ನು ಬಿಟ್ಟುಕೊಡಬಾರದು. ಮುಂಬರುವ ದಿನಗಳಲ್ಲಿ ಮತ್ತೆ ನಂಬರ್ ಒನ್ ಸ್ಥಾನ ಅಲಂಕರಿಸಬೇಕು ಎಂದು ಸಲಹೆ ನೀಡಿದರು.

ಪೌರಕಾರ್ಮಿಕರು ಇಲ್ಲದಿದ್ದರೆ ನಗರದ ಯಾವುದೇ ಸ್ಥಳದಲ್ಲೂ ನಿಲ್ಲುವುದಕ್ಕೂ ಆಗದಂತಹ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಕೆಲವೆಡೆ ಕಲುಷಿತ ವಾತಾವರಣದಲ್ಲೂ ಪೌರಕಾರ್ಮಿಕರು ಸ್ವಚ್ಛತಾ ಕಾರ್ಯ ನಡೆಸಿ, ವಾತಾವರಣ ಶುದ್ಧಗೊಳಿಸುತ್ತಾರೆ. ಮುಂಜಾನೆ ಮನೆಯಿಂದ ಬಂದು ರಸ್ತೆಗಳಲ್ಲಿ ಸ್ವಚ್ಛತಾ ಕಾರ್ಯ ನಡೆಸುತ್ತೀರಿ. ಮನೆಯಲ್ಲಿ ಮಕ್ಕಳಿಗೆ ಅಡುಗೆ ಮಾಡಿಕೊಡುವುದಕ್ಕೂ ಆಗದಂತಹ ಪರಿಸ್ಥಿತಿ ಪೌರಕಾರ್ಮಿಕ ಕುಟುಂಬದ್ದಾಗಿದೆ. ಕುಟುಂಬ ಸದಸ್ಯರ ಹಿತ ಕಾಯುವುದಕ್ಕೆ ಸಾಧ್ಯವಾಗದೇ ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಳ್ಳುವ ಪೌರಕಾರ್ಮಿಕ ಮಹಿಳೆಯರ ಸೇವೆಯನ್ನು ಪಾಲಿಕೆ ಸದಾ ಗೌರವಿಸುತ್ತದೆ ನಿಮಗೆ ಯಾರೇ ತೊಂದರೆ ನೀಡಿದರೂ ನಮ್ಮ ಗಮನಕ್ಕೆ ತರಬೇಕು. ಪರಿಸರ ಅಭಿಯಂತರರ ತಂಡದಲ್ಲೂ ಮಹಿಳಾ ಅಧಿಕಾರಿಗಳೇ ಇರುವುದರಿಂದ ನಿಮ್ಮ ಹಿತ ಕಾಯಲು ಪಾಲಿಕೆ ಬದ್ಧವಾಗಿದೆ ಅಧಿಕಾರಿ ವರ್ಗ ಹಾಗೂ ಪೌರಕಾರ್ಮಿಕರು ಪರಸ್ಪರ ಹೊಂದಾಣಿಕೆಯಿಂದ ಕೆಲಸ ಮಾಡಿ ಮೈಸೂರಿನ ಅಭಿವೃದ್ಧಿ ಶ್ರಮಿಸೋಣ ಎಂದರು.

ಪಾಲಿಕೆಯ ಕಂದಾಯ ಎಡಿಸಿ ಕುಸುಮ ಕುಮಾರಿ ಮಾತನಾಡಿ, ಮಹಿಳೆಯರು ಸಾಧನೆ ಮಾಡಬೇಕಾದರೆ ಕೇವಲ ಪುರುಷರ ಸಹಕಾರ ಮಾತ್ರ ಸಾಲದು. ಮಹಿಳೆಯರು ಸಾಧನೆಗೆ ಮಹಿಳೆಯರ ಪ್ರೋತ್ಸಾಹವೂ ಅಗತ್ಯ. ಈ ನಿಟ್ಟಿನಲ್ಲಿ ಎಲ್ಲಾ ಮಹಿಳೆಯರು ತಮ್ಮ ಮನೆಗಳಲ್ಲಿ ಹೆಣ್ಣು ಮಕ್ಕಳಿಗೆ ಶಿಕ್ಷಣ ಕೊಡಿಸಿ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುವುದಕ್ಕೆ ಪ್ರೇರೇಪಿಸಬೇಕು ಎಂದು ಸಲಹೆ ನೀಡಿದರು.

66 ಹಿರಿಯ ಪೌರಕಾರ್ಮಿಕ ಮಹಿಳೆಯರಿಗೆ ಗೌರವ: ಪಾಲಿಕೆ ವತಿಯಿಂದ ಆಯೋಜಿಸಿದ್ದ ಮಹಿಳಾ ದಿನದ ಕಾರ್ಯಕ್ರಮದಲ್ಲಿ ಮೈಸೂರು ಮಹಾನಗರ ಪಾಲಿಕೆಯ 65 ವಾರ್ಡ್ ಹಾಗೂ ಮುಡಾ ವ್ಯಾಪ್ತಿಯ ವಿಜಯನಗರದಲ್ಲಿ ಸ್ವಚ್ಛತಾ ಕಾರ್ಯದಲ್ಲಿ ತೊಡಗಿರುವ ಪೌರಕಾರ್ಮಿಕರಲ್ಲಿ ತಲಾ ಒಬ್ಬೊಬ್ಬರು ಹಿರಿಯ ಮಹಿಳಾ ಪೌರ ಕಾರ್ಮಿಕರನ್ನು ಪಾಲಿಕೆ ವತಿಯಿಂದ ಗೌರವಿಸಿ, ಪ್ರಮಾಣ ಪತ್ರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಉಪ ಆಯುಕ್ತೆ ಸಿಂಧು, ಕಂದಾಯ ಡಿಸಿ ಸುಜಾತ, ವಿವಿಧ ವಲಯ ಕಚೇರಿಗಳ ಸಹಾಯಕ ಆಯುಕ್ತರಾದ ರೇಖಾ ಶೆಟ್ಟಿ, ವಾಣಿ, ಮಂಜುನಾಥ್ ರೆಡ್ಡಿ, ನಾಗರಾಜ್, ಆರೋಗ್ಯಾಧಿಕಾರಿಗಳಾದ ಡಾ.ವೆಂಕಟೇಶ್, ಡಾ.ಹರ್ಷ, ಪರಿಸರ ಅಭಿಯಂತರರಾದ ಮೈತ್ರಿ ಸೇರಿದಂತೆ ಪಾಲಿಕೆ ಅಧಿಕಾರಿಗಳು ಉಪಸ್ಥಿತರಿದ್ದರು.

ಮೈಸೂರು ಮಿತ್ರ ಶನಿವಾರ 23 ಮಾರ್ಚ್ 2024

ದಾಖಲೆ ಇಲ್ಲದ 9 ಲಕ್ಷ ರೂ. ವಶ

ಚೆಕ್‌ಪೋಸ್ಟ್‌ಗಳಲ್ಲಿ ಚುನಾವಣಾಧಿಕಾರಿಗಳ ಹದ್ದಿನ ಕಣ್ಣು



ಕುಟ್ಟ ಚೆಕ್‌ಪೋಸ್ಟ್‌ನಲ್ಲಿ ಹಣ ವಶಪಡಿಸಿಕೊಂಡ ಚುನಾವಣಾಧಿಕಾರಿಗಳು.



ಕೊಪ್ಪ ಚೆಕ್‌ಪೋಸ್ಟ್‌ನಲ್ಲಿ ಹಣ ವಶಪಡಿಸಿಕೊಂಡ ಚುನಾವಣಾಧಿಕಾರಿಗಳು.

ಮಡಿಕೇರಿ, ಮಾ.22–ಲೋಕಸಭಾ ಚುನಾವಣೆ ನೀತಿ ಸಂಹಿತೆ ಕಟ್ಟುನಿಟ್ಟಾಗಿ ಜಿಲ್ಲೆಯಲ್ಲಿ ಜಾರಿಯಾಗಿದ್ದು, ಚೆಕ್‌ಪೋಸ್ಟ್‌ಗಳಲ್ಲಿ ಹದ್ದಿನ ಕಣ್ಣಿಡಲಾಗಿದೆ. ದಿನದ 24 ಗಂಟೆ ಚೆಕ್‌ಪೋಸ್ಟ್‌ನಲ್ಲಿ ಚುನಾವಣಾ ಕರ್ತವ್ಯನಿರತ ಅಧಿಕಾರಿಗಳು ಮತ್ತು ಸಿಬ್ಬಂದಿ ಬಿಗಿ ತಪಾಸಣೆ ನಡೆಸುತ್ತಿದ್ದಾರೆ. ಕುಶಾಲನಗರ–ಕೊಪ್ಪ ಚೆಕ್‌ಪೋಸ್ಟ್ ಮತ್ತು ಕುಟ್ಟ ಚೆಕ್ ಪೋಸ್ಟ್‌ಗಳಲ್ಲಿ ಚುನಾವಣಾಧಿಕಾರಿಗಳು ದಾಖಲೆ ಇಲ್ಲದೆ ಸಾಗಿಸುತ್ತಿದ್ದ ಒಟ್ಟು 9 ಲಕ್ಷ ರೂ. ನಗದನ್ನು ವಶಕ್ಕೆ ಪಡೆದಿದ್ದಾರೆ.

ಕುಟ್ಟ ಚೆಕ್‌ಪೋಸ್ಟ್: ಕೇರಳ ಮಾನಂದವಾಡಿಯಿಂದ ಕರ್ನಾಟಕದ ಕಡೆಗೆ ಯಾವುದೇ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 5 ಲಕ್ಷ ರೂ. ನಗದನ್ನು ಕುಟ್ಟ ಚೆಕ್‌ಪೋಸ್ಟ್‌ನಲ್ಲಿ ಚುನಾವಣಾಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಕುಟ್ಟ ಗಡಿ ಚೆಕ್ ಪೋಸ್ಟ್‌ನಲ್ಲಿ ಅಧಿಕಾರಿಗಳು ಕೇರಳದ ಕಡೆಯಿಂದ ಬಂದ ಕಾರನ್ನು ತಪಾಸಣೆ ನಡೆಸಿದಾಗ ಕೇರಳದ ವೈನಾಡು ಜಿಲ್ಲೆಯ ಮಾನಂದವಾಡಿ ನಿವಾಸಿ ನಾಸಿರ್ ಯಾವುದೇ ದಾಖಲೆಗಳಿಲ್ಲದ 500 ರೂ. ಮುಖಬೆಲೆಯ ಒಟ್ಟು 5 ಲಕ್ಷ ರೂ.ಗಳನ್ನು ಸಾಗಿಸುತ್ತಿರುವುದು ಪತ್ತೆಯಾ ಗಿದೆ. ನಂತರ ಅಧಿಕಾರಿಗಳು ಹಣವನ್ನು ವಶಪಡೆದುಕೊಂಡು ಸ್ಕ್ರೀನಿಂಗ್ ಕಮಿಟಿಗೆ ಹಸ್ತಾಂತರಿಸಿದರು. ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಲಾಗಿರುವ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ನವೀನ್, ಕುಟ್ಟ ಪೊಲೀಸ್ ಠಾಣೆ ಸಹಾಯಕ ನಿರೀಕ್ಷಕ ಫ್ರಾನ್ಸಿಸ್, ಸಿಬ್ಬಂದಿ ಮೋಹನ್ ಕುಮಾರ್, ಮಂಜು, ಅಬಕಾರಿ ಉಪನಿರೀಕ್ಷಕ ವಿ.ಸುರೇಂದ್ರ, ಶಿಕ್ಷಕರಾದ ಧರ್ಮಲಿಂಗ ಅವರ ತಂಡ ಕಾರ್ಯಾಚರಣೆ ನಡೆಸಿದೆ.

ಕೊಪ್ಪ ಚೆಕ್‌ಪೋಸ್ಟ್: ದಾಖಲೆಗಳಿಲ್ಲದೆ ವಾಹನದಲ್ಲಿ ಸಾಗಿಸುತ್ತಿದ್ದ 4 ಲಕ್ಷ ರೂ. ಅನ್ನು ಕುಶಾಲನಗರದ ಕೊಪ್ಪದ ವಾಹನ ತಪಾಸಣಾ ಕೇಂದ್ರದಲ್ಲಿ ಚುನಾವಣಾ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

ಟಿಬೆಟಿಯನ್ ನಿರಾಶ್ರಿತ ವ್ಯಕ್ತಿ ತನ್ನ ದ್ವಿಚಕ್ರ ವಾಹನದಲ್ಲಿ ಬೈಲುಕೊಪ್ಪದಿಂದ ಕುಶಾಲನಗರ ಕಡೆಗೆ ಬ್ಯಾಗ್‌ನಲ್ಲಿ ಹಣ ಸಾಗಿಸುತ್ತಿದ್ದಾಗ ಅಧಿಕಾರಿಗಳು ಪತ್ತೆಹಚ್ಚಿದ್ದಾರೆ. ಚೆಕ್‌ಪೋಸ್ಟ್ ಚುನಾವಣಾ ಅಧಿಕಾರಿ ಪೂವಯ್ಯ, ಮಹಾದೇವ್, ಅಭಿಷೇಕ್, ಪೊಲೀಸ್ ಅಧಿಕಾರಿ ಬಿ.ಎಸ್.ಉಮಾ, ಸಿಬ್ಬಂದಿ ಅರುಣ್ ಕುಮಾರ್, ಶಶಿಕುಮಾರ್, ಜಯಪ್ರಕಾಶ್ ಹಾಜರಿದ್ದರು.

ಟೋಲ್‌ಗೇಟ್‌ನಲ್ಲಿ 2.92 ಲಕ್ಷ ವಶ: ದಾಖಲೆ ಇಲ್ಲದೆ ಸಾಗಿಸುತ್ತಿದ್ದ 2,92,657 ರೂ. ಅನ್ನು ಕುಶಾಲನಗರದ ಟೋಲ್‌ಗೇಟ್ ಬಳಿಯ ವಾಹನ ತಪಾಸಣಾ ಕೇಂದ್ರದಲ್ಲಿ ಚುನಾವಣಾ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಮೈಸೂರು–ಕೊಡಗು ಗಡಿಭಾಗದಲ್ಲಿ ವಾಹನ ತಪಾಸಣೆ ಮಾಡುತ್ತಿದ್ದಾಗ ವ್ಯಕ್ತಿ ಬೈಕ್‌ನಲ್ಲಿ ಹಣ ಸಾಗಿಸುತ್ತಿರುವುದು ಪತ್ತೆಯಾಗಿದೆ. ನಂತರ ಚುನಾವಣಾಧಿಕಾರಿ ಪೂವಯ್ಯ ನೇತೃತ್ವದ ತಂಡ ಹಣವನ್ನು ವಶಪಡಿಸಿಕೊಂಡಿದೆ.

ತಪಾಸಣಾ ಕೇಂದ್ರದ ತಂಡದ ಸದಸ್ಯರಾದ ಮಹಾದೇವ್, ಅಭಿಷೇಕ್, ಎಎಸ್‌ಐ ಸುಬ್ರಹ್ಮಣ್ಯ, ಸಿಬ್ಬಂದಿ ಸಮಂತ್, ಜಯಪ್ರಕಾಶ್, ಸತೀಶ್ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಮಾ.30ರಿಂದ ಕುಂಡ್ಯೋಳಂಡ ಹಾಕಿ ಹಬ್ಬ

● ಈ ಬಾರಿ ದಾಖಲೆಯ 360 ತಂಡಗಳು ನೋಂದಣಿ ● ಪಾಂಡಂಡ ಕೆ.ಬೋಪಣ್ಣ ಮಾಹಿತಿ



ಮಡಿಕೇರಿ ಪತ್ರಿಕಾಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಕೊಡವ ಹಾಕಿ ಅಕಾಡೆಮಿಯ ಅಧ್ಯಕ್ಷ ಪಾಂಡಂಡ ಕೆ.ಬೋಪಣ್ಣ ಮಾತನಾಡಿದರು.

ಮಡಿಕೇರಿ, ಮಾ.22–ಕೊಡವ ಕುಟುಂಬಗಳ ನಡುವಿನ ಪ್ರತಿಷ್ಠಿತ ಕುಂಡ್ಯೋಳಂಡ ಹಾಕಿ ಹಬ್ಬ ಮಾ.30ರಿಂದ ಏ.28ರವರೆಗೆ ನಾಪೋಕ್ಲುವಿನ ಕೆಪಿಎಸ್ ಶಾಲೆಯ ಜನರಲ್ ತಿಮ್ಮಯ್ಯ ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ಕೊಡವ ಹಾಕಿ ಅಕಾಡೆಮಿ ಅಧ್ಯಕ್ಷ ಪಾಂಡಂಡ ಕೆ.ಬೋಪಣ್ಣ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿ ದಾಖಲೆಯ 360 ತಂಡಗಳು ಹೆಸರು ನೋಂದಾಯಿಸಿಕೊಂಡಿವೆ. ಕೂರ್ಗ್ 11 ಮತ್ತು ಇಂಡಿಯನ್ ನೇವಿ ನಡುವೆ ಉದ್ಘಾಟನಾ ಪಂದ್ಯ ಆಯೋಜಿಸಲಾಗಿದೆ. ಕೊಡವ ಹಾಕಿ ಅಕಾಡೆಮಿ 26 ವರ್ಷಗಳ ಹಿಂದೆ ಕೊಡವ ಹಾಕಿ ಹಬ್ಬದ ಜನಕ ದಿವಂಗತ ಪಾಂಡಂಡ ಕುಟ್ಟಣಿ ನೇತೃತ್ವದಲ್ಲಿ 1997ರಲ್ಲಿ ಸ್ಥಾಪಿತಗೊಂಡಿತು. ಅಂದಿನಿಂದ ಇಂದಿನವರೆಗೆ ಕೊಡವ ಕುಟುಂಬಗಳ ನಡುವಿನ ವಿಶ್ವದಾಖಲೆಯ ಹಾಕಿ ಹಬ್ಬವನ್ನು ಆಯೋಜಿಸಲಾಗುತ್ತಿದೆ ಎಂದರು.

ಹಾಕಿ ಹಬ್ಬದೊಂದಿಗೆ ಮ್ಯಾರಥಾನ್ ಓಟ, ವಧುವರರ ಸಮಾವೇಶ, ಆಹಾರ ಉತ್ಸವ, ಆರೋಗ್ಯ ಶಿಬಿರ, ವೃತ್ತಿ ಮಾರ್ಗದರ್ಶನ, ಹಾಕಿ ರಾಷ್ಟ್ರೀಯ, ಅಂತಾರಾಷ್ಟ್ರೀಯ ಆಟಗಾರರ ಪುನರ್ ಮಿಲನ ಮತ್ತು ಬಾಲೋ ಪಾಟ್ ತರಬೇತಿ ಮತ್ತಿತರ ಕಾರ್ಯಕ್ರಮ ನಡೆಯಲಿವೆ. ಅನೇಕ ಆಕರ್ಷಕ ಸ್ಟಾಲ್‌ಗಳು ಗಮನ ಸೆಳೆಯಲಿವೆ. ಪ್ರತಿಷ್ಠಿತ ವಿವಿಧ ವಾಹನ ಸಂಸ್ಥೆಗಳು, ಕಾಫಿ ಸಂಸ್ಥೆಗಳು ಸೇರಿದಂತೆ ವೈವಿಧ್ಯಮಯ ಸ್ಟಾಲ್‌ಗಳು ಇರಲಿವೆ ಎಂದು ಮಾಹಿತಿ ನೀಡಿದರು.

ಉದ್ಘಾಟನಾ ಪಂದ್ಯದಲ್ಲಿ ಡಿಸಿ: ಮಾ.30ರಂದು 'ಕೂರ್ಗ್ 11' ಮತ್ತು 'ಇಂಡಿಯನ್ ನೇವಿ' ನಡುವೆ ಉದ್ಘಾಟನಾ ಪಂದ್ಯ ನಡೆಯಲಿದೆ. 'ಕೂರ್ಗ್ 11' ತಂಡದಲ್ಲಿ ಜಿಲ್ಲಾಧಿಕಾರಿ ವೆಂಕಟ್‌ರಾಜಾ ಆಡುವ ಸಾಧ್ಯತೆ ಇದೆ. ಇದಕ್ಕೂ ಮೊದಲು ಸಾಯಿ ಮಡಿಕೇರಿ ಮತ್ತು ಸಾಯಿ ಪೊನ್ನಂಪೇಟೆ ಬಾಲಕಿಯರ ತಂಡಗಳ ನಡುವೆ ಪ್ರದರ್ಶನ ಪಂದ್ಯ ಆಯೋಜಿಸಲಾಗಿದೆ.

ಕೊಡವ ಹಾಕಿ ಅಕಾಡೆಮಿ ಕಳೆದ ವರ್ಷದಿಂದ 1 ಕೆಜಿ ಬೆಳ್ಳಿಯ ರೋಲಿಂಗ್ ಟ್ರೋಫಿ ನೀಡಿದೆ. ಈ ಬಾರಿಯ ಕುಂಡ್ಯೋಳಂಡ ಹಾಕಿ ಹಬ್ಬದಲ್ಲಿ 'ಮ್ಯಾನ್ ಆಫ್ ದಿ ಫೆಸ್ಟಿವಲ್' ಆಟಗಾರನಿಗೆ ಏತರ್ ಸ್ಕೂಟರ್ ಸಂಸ್ಥೆ ಎಲೆಕ್ಟ್ರಿಕ್ ಸ್ಕೂಟರ್ ಅನ್ನು ಬಹುಮಾನವಾಗಿ ನೀಡಲಿದೆ. ಬೆಂಗಳೂರಿನ ಪ್ರತಿಷ್ಠಿತ ಆರ್‌ವಿ ವಿಶ್ವವಿದ್ಯಾನಿಲಯ ಹಾಕಿ ಪಂದ್ಯಕ್ಕೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ತಂಡ ರಚಿಸಲು ಮುಂದಾಗಿದೆ. ಕೊಡವ ಹಾಕಿ ಅಕಾಡೆಮಿ ಶಿಫಾರಸು ಮಾಡುವ ಹಾಕಿ ಪಟುವಿಗೆ ಕಾಲೇಜಿನಲ್ಲಿ ಓದಲು ಅವಕಾಶ ಮತ್ತು ವಿದ್ಯಾರ್ಥಿ ವೇತನ ನೀಡಲು ನಿರ್ಧರಿಸಿದೆ ಎಂದು ತಿಳಿಸಿದರು.

2025ರಲ್ಲಿ 'ಮುದ್ದಂಡ' ಆತಿಥ್ಯ: ಹಾಕಿ ಅಕಾಡೆಮಿ ಉಪಾಧ್ಯಕ್ಷ ಕುಕ್ಕೇರ ಜಯ ಚಿಣ್ಣಪ್ಪ ಮಾತನಾಡಿ, ಹಾಕಿ ಅಕಾಡೆಮಿಯು 2025ರಲ್ಲಿ 25ನೇ ಆವೃತ್ತಿಯ ಕೊಡವ ಕುಟುಂಬಗಳ ಹಾಕಿಹಬ್ಬ ನಡೆಸಲು ಮುದ್ದಂಡ ಕುಟುಂಬಸ್ಥರಿಗೆ ಅವಕಾಶ ನೀಡಿದೆ. ಮಡಿಕೇರಿಯ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜು ಮೈದಾನದಲ್ಲಿ ನಡೆಯುತ್ತಿರುವುದು ವಿಶೇಷ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಕಾರ್ಯಾಧ್ಯಕ್ಷ ಮೇಕೇರಿರ ರವಿ ಪೆಮ್ಮಯ್ಯ ಉಪಸ್ಥಿತರಿದ್ದರು.

4 ಲಕ್ಷ ರೂ. ಬಹುಮಾನ

ಕುಂಡ್ಯೋಳಂಡ ಹಾಕಿ ಹಬ್ಬದ ವಿಜೇತ ತಂಡಕ್ಕೆ ಪ್ರಥಮ 4 ಲಕ್ಷ ರೂ. ದ್ವಿತೀಯ 3 ಲಕ್ಷ ರೂ., ತೃತೀಯ 2 ಲಕ್ಷ ರೂ. ಮತ್ತು 4ನೇ ಸ್ಥಾನದ ತಂಡಕ್ಕೆ 1 ಲಕ್ಷ ರೂ. ನಗದು ಬಹುಮಾನ ನೀಡಲಾಗುವುದು ಎಂದು ದಿನೇಶ್ ಕಾರ್ಯಪ್ಪ ತಿಳಿಸಿದರು. ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಹಾಕಿ ಹಬ್ಬಕ್ಕೆ ಚಾಲನೆ ನೀಡಲಿದ್ದಾರೆ. ಖ್ಯಾತ ಬರಹಗಾರ ಕಂಬೇರಂಡ ಕಾವೇರಿ ಪೊನ್ನಪ್ಪ ಮುಖ್ಯಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದರು.

2 ಕೋಟಿ ರೂ. ವೆಚ್ಚ

ಕುಂಡ್ಯೋಳಂಡ ಹಾಕಿ ಹಬ್ಬಕ್ಕೆ 2 ಕೋಟಿ ರೂ. ಖರ್ಚಾಗುತ್ತಿದ್ದು, ಕುಂಡ್ಯೋಳಂಡ ಕುಟುಂಬಸ್ಥರಿಂದ 30ಲಕ್ಷ ರೂ. ಸಂಗ್ರಹಿಸಲಾಗಿದೆ. ಕಳೆದ ವರ್ಷದ ಹಾಕಿ ಹಬ್ಬಕ್ಕೆ ಸರ್ಕಾರ 1 ಕೋಟಿ ರೂ. ನೀಡಿತ್ತು. ಈ ಬಾರಿ ಸರ್ಕಾರದ ಅನುದಾನ ಶೀಘ್ರ ದೊರೆತರೆ ಉತ್ತಮ ಎಂದು ಖಜಾಂಚಿ ಕುಂಡ್ಯೋಳಂಡ ವಿಶು ಪೂವಯ್ಯ ಹೇಳಿದರು.

ಅಧ್ಯಕ್ಷ ರಮೇಶ್ ಮುದ್ದಯ್ಯ ಮಾತನಾಡಿ, ಕುಂಡ್ಯೋಳಂಡ ಅತ್ಯಂತ ಚಿಕ್ಕ ಕುಟುಂಬವಾದರೂ ಹಾಕಿ ಹಬ್ಬದ ಯಶಸ್ಸಿಗಾಗಿ ಎಲ್ಲಾ ಸಿದ್ಧತೆ ಮಾಡಿಕೊಂಡಿದೆ. ಕೆಲವು ವರ್ಷಗಳಿಂದ ತಯಾರಿ ನಡೆದಿತ್ತು ಎಂದು ತಿಳಿಸಿದರು.

ಹುಲಿ ದಾಳಿ : ಹಸು ತೀವ್ರ ಗಾಯ

ಗೋಣಿಕೊಪ್ಪ, 22–ಟಿ.ಶೆಟ್ಟಿಗೇರಿ ಗ್ರಾಮದಲ್ಲಿ ಗುರುವಾರ ರಾತ್ರಿ ಹುಲಿ ದಾಳಿಯಿಂದ ಹಸು ತೀವ್ರವಾಗಿ ಗಾಯಗೊಂಡು ನರಳಾಡುವಂತಾಗಿದೆ.

ಗ್ರಾಮದಲ್ಲಿ ಕೃಷಿಕ ಚಟ್ಟಂಡ ಬೋಪಯ್ಯ ಅವರಿಗೆ ಸೇರಿದ ಹಸು ಹುಲಿ ದಾಳಿಗೆ ಸಿಲುಕಿದೆ. ಹಸುವಿನ ದೇಹದ ಹಲವು ಭಾಗಗಳಲ್ಲಿ ಸಾಕಷ್ಟು ಗಾಯವಾಗಿದ್ದು, ಸ್ಥಿತಿ ಚಿಂತಾಜನಕವಾಗಿದೆ. ಮೇಯಲು ಬಿಟ್ಟಿದ್ದ ಹಸು ರಾತ್ರಿಯಾದರೂ ಕೊಟ್ಟಿಗೆಗೆ ಬಂದಿರಲಿಲ್ಲ. ಇದರಿಂದ ಹಸುವಿನ ಮಾಲೀಕ ಬೋಪಯ್ಯ ಹುಡುಕಾಟ ನಡೆಸಿದಾಗ ಹಸು ಗಾಯಗೊಂಡು ನರಳಾಡುತ್ತಿರುವುದು ಪತ್ತೆಯಾಗಿದೆ. ನಂತರ ಹಸುವನ್ನು ಮನೆಯ ಬಳಿಗೆ ತಂದು ಚಿಕಿತ್ಸೆ ನೀಡಲಾಗುತ್ತಿದೆ. ಅರಣ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಮತ್ತು ಪಶುವೈದ್ಯರು ಭೇಟಿ ನೀಡಿ, ಸ್ಥಳ ಪರಿಶೀಲಿಸಿದರು.

ಸುಳ್ಳು ಸಂದೇಶ ಹರಿಬಿಟ್ಟ ವ್ಯಕ್ತಿ ಬಂಧನ

ಮಡಿಕೇರಿ, ಮಾ.22– ಸಾಮಾಜಿಕ ಜಾಲತಾಣದಲ್ಲಿ ಸುಳ್ಳು ಸಂದೇಶದ ವಿಡಿಯೋವನ್ನು ಹರಿಬಿಟ್ಟು ಕೋಮು ಸೌಹಾರ್ದತೆಗೆ ಧಕ್ಕೆ ತರುವ ಆರೋಪದಡಿ ವ್ಯಕ್ತಿಯನ್ನು ಕೊಡಗು ಪೊಲೀಸರು ಬಂಧಿಸಿದ್ದಾರೆ.

ಮೂಲತಃ ಉಡುಪಿ ಜಿಲ್ಲೆಯ ಕಾರ್ಕಳದ ನಿವಾಸಿಯಾಗಿರುವ ಪ್ರಸ್ತುತ ಉತ್ತರಪ್ರದೇಶದ ಮುಜಾಫರ್ ನಗರದ ಖತೋಲಿಯಲ್ಲಿರುವ ಸುಧಾಕರ್ ರಾವ್(55) ಬಂಧಿತ ಆರೋಪಿ. ಈತ ಮಾ.19ರಂದು ಸುಳ್ಳು ಸಂದೇಶ ಹರಿಬಿಟ್ಟ ಸಂಬಂಧ ಶನಿವಾರಸಂತೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಮಹಿಳೆಯರು ನಾಯಕತ್ವ ಗುಣ ಬೆಳೆಸಿಕೊಳ್ಳಬೇಕು



ಪೆರುಂಬಾಡಿ ಅಯ್ಯಪ್ಪ ಭಜನಾ ಮಂದಿರದಲ್ಲಿ ಆಯೋಜಿಸಿದ್ದ ಮಹಿಳಾ ದಿನಾಚರಣೆಯಲ್ಲಿ ಮೋಲಿ ಪುಡ್ತಾದೊ ಅವರನ್ನು ಸನ್ಮಾನಿಸಲಾಯಿತು.

ವಿರಾಜಪೇಟೆ: ಮಹಿಳೆಯರು ಸ್ವಸಹಾಯ ಸಂಘಗಳ ಮೂಲಕ ನಾಯಕತ್ವ ಗುಣಗಳನ್ನು ಬೆಳೆಸಿಕೊಂಡು, ತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣ ನೀಡುವಂತಾಗಬೇಕು ಎಂದು ಒಡಿಪಿ ಸಂಸ್ಥೆಯ ಮೈಸೂರಿನ ಸಂಯೋಜಕಿ ಮೋಲಿ ಪುಡ್ತಾದೊ ಹೇಳಿದರು.

ಸಮೀಪದ ಆರ್ಜಿ ಗ್ರಾಪಂ ವ್ಯಾಪ್ತಿಯ ಪೆರುಂಬಾಡಿ ಶ್ರೀ ಅಯ್ಯಪ್ಪ ಭಜನಾ ಮಂದಿರದ ಸಭಾಂಗಣದಲ್ಲಿ ಒಡಿಪಿ ಸಂಸ್ಥೆಯ ಕೇಂದ್ರ ಸಮಿತಿಯ ಸ್ವಸಹಾಯ ಸಂಘಗಳು ಹಾಗೂ ಮಡಿಕೇರಿಯ ಮಹಿಳೋದಯ ಮಹಿಳಾ ಒಕ್ಕೂಟದ ವತಿಯಿಂದ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಒಡಿಪಿ ಸಂಸ್ಥೆಯು ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದೆ 2 ಸಾವಿರಕ್ಕೂ ಹೆಚ್ಚು ಸ್ವಸಹಾಯ ಸಂಘ, 40 ಸಾವಿರ ಮಹಿಳೆಯರನ್ನು ಒಗ್ಗೂಡಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಗ್ರಾಪಂ ಅಭಿವೃದ್ಧಿ ಅಧಿಕಾರಿ ಪಿ.ಕೆ.ಪ್ರಮೋದ್ ಮಾತನಾಡಿ, ಸ್ವಸಹಾಯ ಸಂಘಗಳ ಸದಸ್ಯರು ಸಮಸ್ಯೆಗಳು ಬಂದಾಗ ಚಿಂತೆಪಡದೆ ಧೈರ್ಯದಿಂದ ಬಗೆಹರಿಸಿಕೊಂಡು ಒಗ್ಗಟ್ಟಿನಿಂದ ಅಭಿವೃದ್ಧಿ ಕಡೆಗೆ ಗಮನಹರಿಸಬೇಕು ಎಂದರು. ಕಾರ್ಯದರ್ಶಿ ರಾಜನ್, ಒಡಿಪಿ ಸಂಸ್ಥೆಯ ಮೈಸೂರಿನ ಎಫ್‌ಪಿಓ ಸಂಯೋಜಕ ಜಾನ್ ರಾಡ್ರಿಗಸ್ ಮಾತನಾಡಿದರು.

ಇದೇ ವೇಳೆ ಮೋಲಿ ಪುಡ್ತಾದೊ ಹಾಗೂ ಜಿಲ್ಲಾ ವಲಯ ಸಂಯೋಜಕಿ ಜಾಯ್ಸ್ ಮಿನೇಜೆಸ್ ಅವರನ್ನು ಸನ್ಮಾನಿಸಲಾಯಿತು. ಮಹಿಳೋದಯ ಮಹಿಳಾ ಒಕ್ಕೂಟದ ಅಧ್ಯಕ್ಷೆ ಇಂದಿರಾವತಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಒಡಿಪಿ ಕಾರ್ಯಕರ್ತರಾದ ರೀಟಾ, ಅನಿಲ್, ಮಹಾಒಕ್ಕೂಟದ ದುರ್ಗ, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರಾದ ರೀನಾ, ಸೌಮ್ಯ, ನವಚೈತನ್ಯ ಘಟಕದ ವಿಪಿನ್ನ ಹಾಜರಿದ್ದರು.

ಕಾಡಾನೆ ದಾಳಿ: ಕಾರ್ಮಿಕನಿಗೆ ಗಾಯ



ಸಿದ್ದಾಪುರ, ಮಾ.22–ನೆಲ್ಯಹುದಿಕೇರಿ ಗ್ರಾಮದ ಅತ್ತಿಮಂಗಲ ಬಳಿಯ ಕಾಫಿ ತೋಟವೊಂದರಲ್ಲಿ ಕಾಳು ಮೆಣಸು ಕುಯ್ಯುತ್ತಿದ್ದ ಕಾರ್ಮಿಕನ ಮೇಲೆ ಕಾಡಾನೆ ದಾಳಿ ನಡೆಸಿದ ಪರಿಣಾಮ ಕಾರ್ಮಿಕನ ಕಾಲಿಗೆ ಗಂಭೀರ ಗಾಯವಾಗಿದೆ.

ತಮಿಳುನಾಡಿನ ಸೇಲಂ ಮೂಲದ ಅಣ್ಣಾಮಲೈ (53) ಕಾಡಾನೆ ದಾಳಿಯಿಂದ ಗಾಯಗೊಂಡು ಮಡಿಕೇರಿ ಜಿಲ್ಲಾ ಆಸ್ಪತ್ರೆಗೆ ದಾಖಲಾಗಿದ್ದಾರೆ. ಈತ ತೋಟದಲ್ಲಿ ಏಣಿಯ ಮೇಲೆ ಕಾಳು ಮೆಣಸು ಕುಯ್ಯುತ್ತಿದ್ದಾಗ ಕಾಡಾನೆಯೊಂದು ದಿಢೀರ್ ದಾಳಿ ನಡೆಸಿ, ಕಾರ್ಮಿಕನ ತೊಡೆಗೆ ತಿವಿದು ಗಂಭೀರವಾಗಿ ಗಾಯಗೊಳಿಸಿದೆ. ವಲಯ ಅರಣ್ಯಾಧಿಕಾರಿ ಶಿವರಾಮ್, ಉಪ ವಲಯ ಅರಣ್ಯಾಧಿಕಾರಿ ಸುಬ್ರಾಯ ಹಾಗೂ ಸಿಬ್ಬಂದಿ ಸ್ಥಳ ಪರಿಶೀಲಿಸಿದರು. ಹಾಡಗಲೇ ಕಾಣಿಸಿಕೊಂಡ ಕಾಡಾನೆಯಿಂದ ಹೆದರಿದ ಅಕ್ಕಪಕ್ಕ ತೋಟದ ಕಾರ್ಮಿಕರು ಕೆಲಸ ಸ್ಥಗಿತಗೊಳಿಸಿ ಮನೆಗೆ ಹಿಂತಿರುಗಿದರು. ಈ ಭಾಗದಲ್ಲಿ ಕಾಡಾನೆಗಳ ಹಾವಳಿ ಮಿತಿಮೀರಿದ್ದು, ಕಾಡುಪ್ರಾಣಿಗಳ ಹಾವಳಿಯನ್ನು ಶಾಶ್ವತವಾಗಿ ತಡೆಗಟ್ಟಬೇಕು ಎಂದು ಕಾರ್ಮಿಕರು ಹಾಗೂ ಸ್ಥಳೀಯರು ಒತ್ತಾಯಿಸಿದ್ದಾರೆ.

ಕೊಳ್ಳೇಗಾಲದಲ್ಲಿ ಮರಳೇಶ್ವರಸ್ವಾಮಿ ರಥೋತ್ಸವ

● ತಹಸೀಲ್ದಾರ್ ಮಂಜುಳಾ ಪೂಜೆ ಸಲ್ಲಿಸಿ ಚಾಲನೆ ● ನೂರಾರು ಭಕ್ತರು ಭಾಗಿ



ಕೊಳ್ಳೇಗಾಲದಲ್ಲಿ ಶುಕ್ರವಾರ ನಡೆದ ಮರಳೇಶ್ವರ ರಥೋತ್ಸವದಲ್ಲಿ ಮಹಿಳೆಯರು ತೇರು ಎಳೆದರು.



ಕೊಳ್ಳೇಗಾಲ ತಾಲೂಕಿನ ಸಮೂಹ ದೇವಾಲಯದ ಸೋಮೇಶ್ವರ ರಥೋತ್ಸವಕ್ಕೆ ಶಾಸಕರಾದ ಮಂಜುನಾಥ್, ನರೇಂದ್ರಸ್ವಾಮಿ ಚಾಲನೆ ನೀಡಿದರು.

ಕೊಳ್ಳೇಗಾಲ, ಮಾ.22– ಶ್ರೀ ಮೀನಾಕ್ಷಿ ಸಮೇತ ಶ್ರೀ ಮರಳೇಶ್ವರಸ್ವಾಮಿ ಬ್ರಹ್ಮ ರಥೋತ್ಸವ ನೂರಾರು ಭಕ್ತರ ಸಮ್ಮುಖದಲ್ಲಿ ಶುಕ್ರವಾರ ವಿಜೃಂಭಣೆಯಿಂದ ಜರುಗಿತು.

ಪಟ್ಟಣದ ಮರಳೇಶ್ವರಸ್ವಾಮಿ ದೇವಾಲಯ ಮುಂಭಾಗ ರಥೋತ್ಸವಕ್ಕೆ ತಹಸೀಲ್ದಾರ್ ಮಂಜುಳಾ ವಿಶೇಷ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು. ಬಳಿಕ ರಾಜಬೀದಿಯಲ್ಲಿ ನೆರೆದಿದ್ದ ಭಕ್ತರು ರಥ ಎಳೆದು ಹರಕೆ ತೀರಿಸಿದರು.

ಬೆಳಗ್ಗೆ ದೇವಾಲಯದಲ್ಲಿ ರುದ್ರಾಭಿಷೇಕ, ರಥ ಸಂಪ್ರೋಕ್ಷಣೆ, ಬಲಿ ಪ್ರದಾನ, ಬ್ರಹ್ಮರಥ ಪೂಜೆ, ಬ್ರಹ್ಮ ಕಳಸ ಸ್ಥಾಪನೆ, ನವಕಳಸ ಪೂಜೆ, ನವಕಳಸ ಅಭಿಷೇಕ ನಂತರ ಉತ್ಸವ ಮೂರ್ತಿಯನ್ನು ದೇವಾಲಯ ಹಾಗೂ ರಥದ ಸುತ್ತ ಪ್ರದಕ್ಷಿಣೆ ಮಾಡಿ ರಥದ ಮೇಲೆ ಮೀನಾಕ್ಷಿ ಸಮೇತ ಮರಳೇಶ್ವರ ಸ್ವಾಮಿಯನ್ನು ಪ್ರತಿಷ್ಠಾಪಿಸಿ ಮಂಗಳವಾದ್ಯದೊಂದಿಗೆ ಉತ್ಸವ ನಡೆಸಲಾಯಿತು.

ಮಹಿಳೆಯರೇ ಹೆಚ್ಚಿನ ಸಂಖ್ಯೆಯಲ್ಲಿ ತೇರು ಎಳೆಯುವ ಮೂಲಕ ಗಮನ ಸೆಳೆದರು. ಪ್ರಧಾನ ಅರ್ಚಕರಾದ ಡಾ.ನಾಗೇಂದ್ರ ಎನ್.ಭಟ್ ಹಾಗೂ ಶಿವರಾಮ.ಜಿ.ಭಟ್ ಪೂಜಾ ಕೈಂಕರ್ಯ ನೆರವೇರಿಸಿದರು. ಸೇವಾರ್ಥದಾರರಾದ ಅಚ್ಗಾಲ್ ನಾಗರಾಜಯ್ಯ ಸಮ್ಮುಖದಲ್ಲಿ ವಿಶೇಷ ಪೂಜೆಗಳು ಜರುಗಿದವು. ರಥೋತ್ಸವದಲ್ಲಿ ಮುಜರಾಯಿ ಇಲಾಖೆ ನಿರೀಕ್ಷಕರಾದ ನಿರಂಜನ್, ಸುಮಂತ್, ನಾಗೇಂದ್ರ, ಬ್ರಾಹ್ಮಣ ಸಂಘದ ಅಧ್ಯಕ್ಷ ಶೇಖರ್ ಶಾಸ್ತ್ರೀ, ರಮೇಶ್ ಶಾಸ್ತ್ರೀ, ಹರಿಹರ ದಿಕ್ಷೀತ್, ವಿಶ್ವನಾಥ್ ದಿಕ್ಷೀತ್ ಇನ್ನಿತರಿದ್ದರು.

ಸೋಮೇಶ್ವರ ರಥೋತ್ಸವ: ಕೊಳ್ಳೇಗಾಲ ತಾಲೂಕಿನ ಶಿವನಸಮುದ್ರ ಸಮೂಹ ದೇವಾಲಯದಲ್ಲಿ ಶುಕ್ರವಾರ ಸೋಮೇಶ್ವರ ಬ್ರಹ್ಮ ರಥೋತ್ಸವ ವಿಜೃಂಭಣೆಯಿಂದ ಜರುಗಿತು.

ಮೀನಾಕ್ಷಿ ಸೋಮೇಶ್ವರ ದೇವಾಲಯದಲ್ಲಿ ಗಣಪತಿ, ಮನೋಮುನಿಯಮ್ಮ ಹಾಗೂ ಸೋಮೇಶ್ವರಸ್ವಾಮಿ ದೇವರ ಮೂರ್ತಿಗಳನ್ನು ಮೂರು ರಥದಲ್ಲಿ ಅಭಿಜನ್ ಮುಹೂರ್ತದಲ್ಲಿ ಸ್ಥಾಪಿಸಿ, ಪೂಜೆ ಸಲ್ಲಿಸಿ ಉತ್ಸವ ನಡೆಸಲಾಯಿತು. ಹನೂರು ಶಾಸಕ ಎಂ.ಆರ್.ಮಂಜುನಾಥ್, ಮಳವಳ್ಳಿ ಶಾಸಕ ನರೇಂದ್ರಸ್ವಾಮಿ ಅನೇಕ ಗಣ್ಯರು ರಥೋತ್ಸವದಲ್ಲಿ ಭಾಗಿಯಾಗಿ ವಿಶೇಷ ಪೂಜೆ ಸಲ್ಲಿಸಿದ್ದರು.

ದೇವಾಲಯದಲ್ಲಿ ಮುಂಜಾನೆಯಿಂದಲ್ಲೇ ದೇವರಿಗೆ ರುದ್ರಾಭಿಷೇಕ, ಫಲ ಪಂಚಾಮೃತಭೀಷೇಕ, ನವಗ್ರಹ ಪೂಜೆ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳು ನೆರವೇರಿಸಲಾಯಿತು. ಅರ್ಚಕರಾದ ನಾಗರಾಜಯ್ಯ, ಪ್ರಭಾಕರ್ ನೇತೃತ್ವದಲ್ಲಿ ಪೂಜಾ ಕಾರ್ಯ ಜರುಗಿದವು. ರಥೋತ್ಸವದಲ್ಲಿ ಉಪವಿಭಾಗಾಧಿಕಾರಿ ಶಿವಮೂರ್ತಿ, ಮುಜರಾಯಿ ಇಲಾಖೆಯ ಇಓ ಸುರೇಶ್ ಸೇರಿದಂತೆ ನೂರಾರು ಭಕ್ತರು ಪಾಲ್ಗೊಂಡಿದ್ದರು.

ಪ್ರಜಾಪ್ರಭುತ್ವ ಬಲವರ್ಧನೆಗೆ ಮತ ಚಲಾಯಿಸಿ



ಹನೂರಿನಲ್ಲಿ ಶುಕ್ರವಾರ ಏರ್ಪಡಿಸಿದ್ದ ಶ್ರಮದಾನ ಕಾರ್ಯಕ್ರಮದಲ್ಲಿ ಮತದಾನ ಕುರಿತ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಹನೂರು, ಮಾ.22–ಭಾರತ ವಿಶ್ವದ ಅತೀ ದೊಡ್ಡ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೊಂದಿದ್ದು, ಈ ಪ್ರಜಾಪ್ರಭುತ್ವದ ಜೀವಾಳವೇ ಮತದಾನವಾಗಿದೆ. ಆದ್ದರಿಂದ ಎಲ್ಲರೂ ತಪ್ಪದೇ ಮತದಾನ ಮಾಡಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರ ಉಮೇಶ್ ತಿಳಿಸಿದರು.

ಪಟ್ಟಣದ ಮಲೆಮಹದೇಶ್ವರಬೆಟ್ಟದ ಮುಖ್ಯ ರಸ್ತೆಯಲ್ಲಿ ತಾಲೂಕು ಪಂಚಾಯಿತಿ ಮತ್ತು ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಚುನಾವಣೆ ಅಂಗವಾಗಿ ಚುನಾವಣಾ ಪರ್ವ ದೇಶದ ಗರ್ವ ಎಂಬ ಘೋಷವಾಕ್ಯದೊಂದಿಗೆ ಆಯೋಜಿಸಿದ್ದ ಶ್ರಮದಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು. ಮತದಾನದಿಂದ ಯಾರು ದೂರ ಉಳಿಯಬಾರದು. ಯಾವುದೇ ಆಮಿಷಗಳಿಗೆ ಒಳಗಾಗಬಾರದು. ದೇಶ ಅಭಿವೃದ್ಧಿ ಪಥದತ್ತಾ ಸಾಗಲು ನಿಮ್ಮ ಹಕ್ಕು ಚಲಾಯಿಸಬೇಕು ಎಂದರು.

ಇದೇ ವೇಳೆ ಮಹದೇಶ್ವರಬೆಟ್ಟದ ಶಿವರಾತ್ರಿ ಜಾತ್ರೆಯಲ್ಲಿ ಭಾಗವಹಿಸಲು ಹೆಚ್ಚು ಭಕ್ತರು ಪಾದಯಾತ್ರೆ ನಡೆಸಿ ರಸ್ತೆ ಬದಿಯಲ್ಲಿ ಬೀಸಾಡಿದ್ದ ಪ್ಲಾಸ್ಟಿಕ್ ಸೇರಿದಂತೆ ಇತರೆ ತ್ಯಾಜ್ಯಗಳನ್ನು ಸುಮಾರು 25 ಕಿಮೀ ವರೆಗೂ ಶ್ರಮದಾನದ ಮೂಲಕ ಸಂಗ್ರಹಿಸಿ ಮತದಾನ ಜಾಗೃತಿ ಮೂಡಿಸಲಾಯಿತು.

ತಾಪಂ ಸಹಾಯಕ ನಿರ್ದೇಶಕ ರವೀಂದ್ರ ಮತದಾನ ಕುರಿತ ಪ್ರತಿಜ್ಞಾವಿಧಿ ಬೋಧಿಸಿದರು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಗೋವಿಂದಪ್ಪ, ಶಿವಣ್ಣ, ಸುರೇಶ, ರಾಮು, ಮಾದೇಶ ನಂದೀಶ, ಪುಷ್ಪಲತಾ, ಸಿದ್ದಪ್ಪ ಇತರರು ಹಾಜರಿದ್ದರು.

ಪರಿಹಾರ ಚೆಕ್ ವಿತರಣೆ



ಕಾಡಾನೆ ದಾಳಿಯಿಂದ ಮೃತಪಟ್ಟ ಕತ್ತೆಕಾಲು ಪೊಡು ಸೋಲಿಗರ ಹಾಡಿಯ ಮಾದ ಕುಟುಂಬದವರಿಗೆ ಜಿಲ್ಲಾ ಹುಲಿ ಸಂರಕ್ಷಣಾಧಿಕಾರಿ ದೀಪ ಕಾಂಟ್ರಾಕ್ಟರ್ ಪರಿಹಾರ ಚೆಕ್ ವಿತರಿಸಿದರು.

ಹನೂರು, ಮಾ.22– ಕಾಡಾನೆ ದಾಳಿಯಿಂದ ಮೃತಪಟ್ಟ ತಾಲೂಕಿನ ಕತ್ತೆಕಾಲು ಪೊಡು ಸೋಲಿಗರ ಹಾಡಿ ಯುವಕ ಮಾದ ಕುಟುಂಬದವರಿಗೆ ಚಾಮರಾಜನಗರ ಜಿಲ್ಲಾ ಹುಲಿ ಸಂರಕ್ಷಣಾಧಿಕಾರಿ ದೀಪ ಕಾಂಟ್ರಾಕ್ಟರ್ 5 ಲಕ್ಷ ರೂ. ಪರಿಹಾರದ ಚೆಕ್ ವಿತರಿಸಿದರು.

ನಿವಾಸಿಗಳ ಮನವಿ: ಕತ್ತೆಕಾಲು ಪೊಡು ಸೋಲಿಗರ ಹಾಡಿಗೆ ಭೇಟಿ ನೀಡಿದ ಅರಣ್ಯ ಸಂರಕ್ಷಣಾಧಿಕಾರಿ ದೀಪ ಕಾಂಟ್ರಾಕ್ಟರ್ ಅವರಿಗೆ ನಿವಾಸಿಗಳು, ಕಾಡುಪ್ರಾಣಿಗಳಿಂದ ರಕ್ಷಣೆ ಮಾಡುವಂತೆ ಮನವಿ ಮಾಡಿದರು.

ಅರಣ್ಯದಂಚಿನ ಗ್ರಾಮಗಳಿಗೆ ರಾತ್ರಿ ಹಗಲು ಎನ್ನದೆ ಕಾಡುಪ್ರಾಣಿಗಳು ಬರುತ್ತಿವೆ. ಅರಣ್ಯದಂಚಿನಲ್ಲಿ ಆನೆ ಕಂದಕ ಅಥವಾ ರೈಲ್ವೆ ಬ್ಯಾರೀಕೆಟ್ ಅಳವಡಿಸಬೇಕು. ಈ ಭಾಗದಲ್ಲಿ ಹೆಚ್ಚಿನ ಅರಣ್ಯ ಸಿಬ್ಬಂದಿಯನ್ನು ನೇಮಿಸಬೇಕು ಎಂದು ಮನವಿ ಮಾಡಿದರು. ಮನವಿ ಆಲಿಸಿದ ದೀಪ ಕಾಂಟ್ರಾಕ್ಟರ್ ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ನಡೆಯದಂತೆ ಮುಂಜಾಗ್ರತೆ ವಹಿಸುವುದಾಗಿ ಭರವಸೆ ನೀಡಿದರು.

ಬುಡಕಟ್ಟು ವಿದ್ಯಾರ್ಥಿಗಳಿಗೆ ವಿಶೇಷ ಪುನಶ್ಚೇತನ ಶಿಬಿರ



ಚಾಮರಾಜನಗರ ತಾಲೂಕಿನ ಹರದನಹಳ್ಳಿಯ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ ನಡೆದ ವಿಶೇಷ ಪುನಶ್ಚೇತನ ಶಿಬಿರದಲ್ಲಿ ವಿದ್ಯಾರ್ಥಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾನಾಗ್ ಪ್ರಮಾಣ ಪತ್ರ ವಿತರಿಸಿದರು.

ಚಾಮರಾಜನಗರ: ಶಾಲೆ ತೊರೆದ ಬುಡಕಟ್ಟು ಸಮುದಾಯದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ವಿಶೇಷ ಪುನಶ್ಚೇತನ ಶಿಬಿರದಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾನಾಗ್ ಶುಭ ಕೋರಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇನ್ನಿತರ ನೆರವಿನಿಂದ ಮೂರು ತಿಂಗಳಿಗೂ ಹೆಚ್ಚು ಕಾಲ ತಾಲೂಕಿನ ಹರದನಹಳ್ಳಿಯ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ ಶಾಲೆ ಬಿಟ್ಟ ಬುಡಕಟ್ಟು ಸಮುದಾಯದ 30 ವಿದ್ಯಾರ್ಥಿಗಳಿಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಜ್ಜುಗೊಳಿಸಲು ವಿಶೇಷ ಶಿಬಿರ ಆಯೋಜಿಸಲಾಗಿತ್ತು. ಶಿಬಿರದಲ್ಲಿ ಬುಡಕಟ್ಟು ವಿದ್ಯಾರ್ಥಿಗಳಿಗೆ ಊಟ, ವಸತಿ ಸಹಿತ 15 ಶಿಕ್ಷಕರು ವಿವಿಧ ವಿಷಯಗಳನ್ನು ಬೋಧಿಸಿದ್ದಾರೆ.

ವಿಶೇಷ ಕಲಿಕಾ ಪುನಶ್ಚೇತನ ಶಿಬಿರಕ್ಕೆ ಜಿಲ್ಲಾಧಿಕಾರಿ ಶಿಲ್ಪಾನಾಗ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಆನಂದ್ ಪ್ರಕಾಶ್ ಮೀನಾ ಇನ್ನಿತರರು ಭೇಟಿ ನೀಡಿ, ಪರೀಕ್ಷೆ ಬರೆಯುತ್ತಿರುವ ಬುಡಕಟ್ಟು ವಿದ್ಯಾರ್ಥಿಗಳಿಗೆ ಶುಭ ಕೋರಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಶಿಲ್ಪಾನಾಗ್, ಯಾವುದೇ ಭಯ ಪಡದೆ ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯಿರಿ. ಎಸ್‌ಎಸ್‌ಎಲ್‌ಸಿ ನಂತರ ಮುಂದಿನ ಶಿಕ್ಷಣಕ್ಕೆ ಎಲ್ಲಾ ಉತ್ತೇಜನ ನೀಡಲಾಗುವುದು. ಉತ್ತಮ ಶಿಕ್ಷಣ ಪಡೆದು ಉಜ್ವಲ ಭವಿಷ್ಯ ರೂಪಿಸಿಕೊಳ್ಳಿ. ಎಲ್ಲಾ ಯಶಸ್ಸು ನಿಮಗೆ ದೊರೆಯಲಿ ಎಂದು ಹಾರೈಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ರಾಮಚಂದ್ರರಾಜೇ ಅರಸ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಮಂಜುಳಾ, ರೋಟರಿ ಪಂಚಶೀಲ ಸಂಸ್ಥೆ ಕಿರಣ್ ರಾಬರ್ಟ್, ಬೆಂಜಮಿನ್ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಬಿಜೆಪಿ ಗೆಲುವಿಗೆ ಒಗ್ಗಟ್ಟಿನಿಂದ ಶ್ರಮಿಸಬೇಕು



ಗುಂಡ್ಲುಪೇಟೆ, ಮಾ.22–ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿಯೂ ಬಿಜೆಪಿ ಅಭ್ಯರ್ಥಿಯನ್ನು ಗೆಲ್ಲಿಸಲು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನಕುಮಾರ್ ಮನವಿ ಮಾಡಿದರು.

ಪಟ್ಟಣದ ಸಿಎಂಎಸ್ ಕಲಾಮಂದಿರದಲ್ಲಿ ಆಯೋಜಿಸಿದ್ದ ಬಿಜೆಪಿ ವಿವಿಧ ಮೋರ್ಚಾಗಳ ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಮಾ.25ರಂದು ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ಅಭ್ಯರ್ಥಿ ಎಸ್.ಬಾಲರಾಜು ಪರ ಚುನಾವಣಾ ಪ್ರಚಾರ ಸಭೆ ಆಯೋಜಿಸಲಾಗಿದೆ. ಪಕ್ಷದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದರು.

ನರೇಂದ್ರ ಮೋದಿ ಅವರನ್ನು ಮೂರನೇ ಬಾರಿಗೆ ಪ್ರಧಾನಿ ಮಾಡಲು ಜಿಲ್ಲೆಯಲ್ಲಿ ಕಮಲ ಮತ್ತೆ ಅರಳಬೇಕು. ಆದ್ದರಿಂದ ಕಾರ್ಯಕರ್ತರು ಯಾವುದೇ ಭಿನ್ನಾಭಿಪ್ರಾಯಗಳಿಗೆ ಅವಕಾಶ ನೀಡದೇ ಮೈತ್ರಿ ಪಕ್ಷವಾದ ಜಾ.ದಳ ಕಾರ್ಯಕರ್ತರು ಹಾಗೂ ಮುಖಂಡರೊಂದಿಗೆ ಒಗ್ಗಟ್ಟಾಗಿ ಕೆಲಸ ಮಾಡಬೇಕು ಎಂದು ಹೇಳಿದರು.

ಸಭೆಯಲ್ಲಿ ಬಿಜೆಪಿ ಮಂಡಲಾಧ್ಯಕ್ಷ ಸಿ.ಮಹದೇವಪ್ರಸಾದ್, ಮುಖಂಡರಾದ ಡಿ.ಪಿ.ಜಗದೀಶ್, ಎಲ್.ಸುರೇಶ್, ಹಿರಿಕಾಟಿ ಸೋಮಶೇಖರ್, ಎನ್.ಮಲ್ಲೇಶ್, ಮಹದೇವಶೆಟ್ಟಿ, ಮಾಧ್ಯಮ ಸಂಚಾಲಕ ಎಸ್.ಸಿ.ಮಂಜುನಾಥ್, ಪ್ರಣಯ್ ಭಾಗವಹಿಸಿದ್ದರು.

ತ.ನಾಡು ಗಡಿಭಾಗದಲ್ಲಿ ಮದ್ಯ ಮಾರಾಟ ನಿಷೇಧ

ಚಾಮರಾಜನಗರ: ಏ.19ರಂದು ತಮಿಳುನಾಡಿನಲ್ಲಿ ಲೋಕಸಭಾ ಚುನಾವಣೆ ಮತದಾನ ನಡೆಯುವ ಹಿನ್ನೆಲೆಯಲ್ಲಿ ಜಿಲ್ಲೆಯ ಗಡಿಭಾಗದಲ್ಲಿ ಮದ್ಯ ಮಾರಾಟ ನಿಷೇಧಿಸಲಾಗಿದೆ. ಚಾಮರಾಜನಗರ ಜಿಲ್ಲೆಯ ತಮಿಳುನಾಡು ಗಡಿಭಾಗ 5 ಕಿಮೀ ವ್ಯಾಪ್ತಿಯ ಎಲ್ಲಾ ಮದ್ಯದ ಅಂಗಡಿಗಳನ್ನು ಏ.17ರ ಸಂಜೆ 5 ಗಂಟೆಯಿಂದ ಏ.19ರ ಮಧ್ಯರಾತ್ರಿ 12 ಗಂಟೆವರೆಗೆ ಮುಚ್ಚಲು ಹಾಗೂ ಮದ್ಯ ಮಾರಾಟ, ಸಂಗ್ರಹಣೆ, ಹಂಚಿಕೆ ನಿಷೇಧಿಸಿ ಜಿಲ್ಲಾಧಿಕಾರಿ ಶಿಲ್ಪಾನಾಗ್ ಆದೇಶ ಹೊರಡಿಸಿದ್ದಾರೆ.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಬೇಕಾಗಿದ್ದಾರೆ
ಕಂಪ್ಯೂಟರ್ ಟೈಪಿಂಗ್ ಮಾಡಲು ಬರುವಂತಹ ಅಭ್ಯರ್ಥಿಗಳು ಆಫೀಸ್ ಕೆಲಸಕ್ಕೆ ಬೇಕಾಗಿದ್ದಾರೆ.
ಶೇಖರ್: 9945911118
ಅನಿಲ್: 7026996123
ARTHOR SERVICES PVT.LTD
NO. L-89, 2nd Floor, M Block, Opp. Karuna Hospital, Kuvempunagar, Mysore-570023

ಜಮೀನು ಮಾರಾಟಕ್ಕಿದೆ
3 ಎಕರೆ 20 ಕುಂಟೆ ಹೆಚ್.ಡಿ.ಕೋಟೆ ತಾಲ್ಲೂಕು ಹ್ಯಾಂಡ್ ಪೋಸ್ಟ್ ಯಿಂದ 3 ಕಿಲೋಮೀಟರ್ ಮೊರಾರ್ಜಿ ದೇಸಾಯಿ ಶಾಲೆ ಹತ್ತಿರ
9611830025

ಬೇಕಾಗಿದ್ದಾರೆ
Receptionist ಕೆಲಸಕ್ಕೆ ಹುಡುಗಿಯರು ಬೇಕಾಗಿದ್ದಾರೆ
ಸಂಬಳ 25000/-
Ph.7406 369 369

HOUSE FOR LEASE
3 BHK near Shubhodini Choultry, Hebbal, Mysore
Rs. 8.5 Lakhs
Ph: 9900382883

PROJECT FUNDING REQUIRED
REQUIRED PROJECT FUNDING FOR DTCP APPROVED LAYOUT
9880059793

ಬಾಲಾಜಿ ಕೃಪ ಪ್ರಾಪರ್ಟೀಸ್
ಮೈಸೂರಿನ ಚಾಮುಂಡಿ ಬೆಟ್ಟ ತಪ್ಪಲಿನಲ್ಲಿ ಲಲಿತಾದ್ರಿಪುರ ರಿಂಗ್ ರಸ್ತೆಗೆ ಹತ್ತಿರವಿರುವ ಮುಡಾ ನಿವೇಶನಗಳು ಮಾರಾಟಕ್ಕಿವೆ. ಸಂಪರ್ಕಿಸಿ:
9019562901, 8217596732

ವೃದ್ಧಾಶ್ರಮ
ಮಹಿಳೆಯರು ಮತ್ತು ಪುರುಷರಿಗಾಗಿ ವೃದ್ಧರನ್ನು ಎಲ್ಲಾ ರೀತಿಯ ಸೌಲಭ್ಯದೊಂದಿಗೆ ಮತ್ತು ಉತ್ತಮ ರೀತಿಯಲ್ಲಿ ಆರೈಕೆ ಮಾಡಲಾಗುವುದು
9980183405/6364693043

CHANGE OF NAME
I, Christiana Philomena Taylor residing in Sathagalli, Mysore 570019, solemnly affirm on oath that after my marriage with Mr. LEON ALLAN PEREIRA, I have changed my name as CHRISTIANA PHILOMENA PEREIRA on my own free will and sworn before Notary C.R. Seetharam on 4/03/2024. In future I will be identified as CHRISTIANA PHILOMENA PEREIRA.
Sd/- CHRISTIANA PHILOMENA PEREIRA

ಮಂಜೂರಾತಿ ಪತ್ರ ಕಳೆದಿದೆ
ಫಿಲಿಪ್ ಡಿ ಸಿಲ್ವಾ ಅವರ ಹೆಂಡತಿ ಜೊಸ್ಪಿನ್ ಪಿಂಟೊ ಇವರಿಗೆ ಸೇರಿದ ನಿವೇಶನ ಸಂಖ್ಯೆ 222, ಕೆಸರೆ 1ನೇ ಹಂತ, ಆರ್.ಎಸ್. ನಾಯ್ಡು ನಗರ, ಎನ್.ಆರ್. ಮೊಹಲ್ಲಾ, ಮೈಸೂರು ಇದರ ಮೂಲ ಮಂಜೂರಾತಿ ಪತ್ರ ಕಳೆದು ಹೋಗಿರುತ್ತದೆ.
ಸಿಕ್ಕಿದವರು ಕೂಡಲೇ ಸಂಪರ್ಕಿಸಿ
Mob : 08105701158

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 7204494854

ನಿವೇಶನಗಳು ಬೇಕಾಗಿವೆ
ಇಲವಾಲದ ಸುತ್ತ ಮುತ್ತ ಮುಡಾ ಹಾಗೂ ಡಿಟಿಸಿಪಿ ಎಲ್ಲಾ ಅಳತೆಯ ನಿವೇಶನಗಳು ತಕ್ಷಣವೇ ಬೇಕಾಗಿವೆ.
7760591291, 6363798472

ನಿವೇಶನಗಳು ಬೇಕಾಗಿವೆ
ವಿಜಯನಗರ 4ನೇ ಹಂತ, 2ನೇ ಘಟ್ಟದಲ್ಲಿ ಎಲ್ಲಾ ಅಳತೆಯ ಮುಡಾ ನಿವೇಶನಗಳು ಬೇಕಾಗಿದೆ.
6360633036, 8088689211

ಕೃಷ್ಣಂ ಹಿಲ್ ವೀವ್
ಬಂಡಿಪಾಳ್ಯ ರಿಂಗ್ ರಸ್ತೆಯಿಂದ ಕೇವಲ 300 ಮೀ ಅಂತರದಲ್ಲಿ ಆರ್‌ಎಂಸಿಗೆ ಹೊಂದಿಕೊಂಡಂತೆ ಮುಡಾ ಮತ್ತು ಸಾಲ ಸೌಲಭ್ಯವುಳ್ಳ ನಿವೇಶನಗಳು ಮಾರಾಟಕ್ಕಿವೆ.
9353843772, 7022718593

"ಓಂ ನಮಃ ಶಿವಾಯ"
ಶಿವಂ ಬಡಾವಣೆ ಮೈಸೂರು–ನಂಜನಗೂಡು ಹೈವೆ ರಸ್ತೆಯಿಂದ ಕೇವಲ 1 ಕಿ.ಮೀ. ಅಂತರದಲ್ಲಿ ಮುಡಾ ಮತ್ತು ಸಾಲ ಸೌಲಭ್ಯವುಳ್ಳ ನಿವೇಶನಗಳು ಮಾರಾಟಕ್ಕಿವೆ.
8431146597, 9591429166

WANTED FOR Bhaskar Heart Centre

Post	Qualification
Receptionist	Degree / PUC
Marketing / PRO (M)	Degree / PUC
Staff Nurses (F)	GNM / ANM
Pharma Aid	PUC / Degree
Office Boy	SSLC

0821-2499188 / 9880186386

ನಿರುದ್ಯೋಗಿಗಳಿಗೊಂದು ಸುವರ್ಣಾವಕಾಶ
ಮನೆಯಲ್ಲೇ ಕುಳಿತು ಟಾರ್ಗೆಟ್ ಇಲ್ಲದೆ ಬರವಣಿಗೆ ಮೂಲಕ 9 ರಿಂದ 30 ಸಾವಿರದವರೆಗೆ ಹಣಗಳಿಸುವ ಸುವರ್ಣಾವಕಾಶ. ಆಸಕ್ತರು ಸಂಪರ್ಕಿಸಿ:
6361056646, 7676844160

ಬೇಕಾಗಿದ್ದಾರೆ
ಮೈಸೂರಿನ ಹೂಟಗಳ್ಳಿಯಲ್ಲಿರುವ ಕಂಪನಿಯಲ್ಲಿ ಶಿಫ್ಟ್‌ಗಳಲ್ಲಿ ಕೆಲಸ ಮಾಡಲು ಹೆಲ್ಪರ್‌ಗಳು ಬೇಕಾಗಿದ್ದಾರೆ
ಸಮಯ: ಬೆಳಗ್ಗೆ 8 ರಿಂದ ಸಂಜೆ 8 ರವರೆಗೆ, ಸಂಜೆ 8 ರಿಂದ ಬೆಳಗ್ಗೆ 8 ರವರೆಗೆ.
ಸಂಬಳ: 16000 ಪ್ರತಿ ತಿಂಗಳಿಗೆ (ವಸತಿ ಸೌಲಭ್ಯ ಇರುತ್ತದೆ), ಸಂಪರ್ಕಿಸಿ:
9513777350

Commercial Building for Sale
1st, 2nd, 3rd & 4th Floor, 1200 sq. Ring Road, Ananda Nagar.
Contact:
9844713445, 9066637156

ಬೋಳು ತಲೆಯ ಸಮಸ್ಯೆಯೇ?

ಕಿಮೊತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಸ್ಪರ್ಧಾತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Anikethana Road, Kuvempunagar, Mysuru
MYSURU 9611028523 MANGALORE 9343142258

ಸುಸಜ್ಜಿತವಾಗಿ ನಡೆಯುತ್ತಿರುವ ಇಟ್ಟಿಗೆ ಫ್ಯಾಕ್ಟರಿ
ಬಾಡಿಗೆಗೆ ದೊರೆಯುತ್ತದೆ (ಮಣ್ಣಿನ ಸಮೇತ)
BRICK FACTORY AVAILABLE FOR RENT (WITH SOIL)
ಸಂಪರ್ಕಿಸಿ :
8296240149

Aquaguard & Kent Sales and Service
Service Charge: 300/-
9901200444

ಕುಕ್ ಬೇಕಾಗಿದ್ದಾರೆ
ಬೆಂಗಳೂರಿನಲ್ಲಿರುವ ಇಂಜಿನಿಯರ್ ಕಾಲೇಜಿನ ಹಾಸ್ಟೆಲ್‌ಗೆ ಕುಕ್ ಬೇಕಾಗಿದ್ದಾರೆ. ಊಟ ವಸತಿ ಸೌಲಭ್ಯವಿರುತ್ತದೆ.
8088419322

HOUSE FOR SALE
Radhakrishna Teacher's Layout Raj Kumar Road ನಲ್ಲಿ 30x40, 3 ಅಂತಸ್ತಿನ ಮನೆ ಮಾರಾಟಕ್ಕಿದೆ (38 ಚದರ ಕಟ್ಟಡದ)
Brokers Please Execuse
9686502151

WANTED
Receptionist, Typist and Housekeeping Staff, Chinese Cook and Asst. Cook, Captain.
Walk-in interview
Call: 9739786223

DTCP SITES FOR SALE
DTCP Sites Rs. 699 per sq.ft., Near Jayapura, H.D. Kote Road, Mysore.
9590491194,9606783264

ಬೈಕ್ ರೈಡರ್ ಬೇಕಾಗಿದ್ದಾರೆ
ರಾಪಿಡೋ ರೈಡರ್ ಆಗಿ ಸೇರಿ ಹಾಗೂ ದಿನಕ್ಕೆ 1500/– ವರೆಗೂ ಸಂಪಾದಿಸಿ. ಅಗತ್ಯ ದಾಖಲೆಗಳು DL, ವಾಹನದ ದಾಖಲೆಗಳು ಮತ್ತು ಆಧಾರ್. ಹೆಚ್ಚಿನ ಮಾಹಿತಿಗಾಗಿ ಕರೆ ಮಾಡಿ.
Mob: 040 48937617

SITES FOR SALE
Near MIT College Premium Gated Community with High end ameneties
75% Bank Loan Available
6361444827

COMMERCIAL SPACE FOR RENT
Office Space available for Rent nearly 2400 sqft with Lift and all amenities, 2nd Floor, near T K Layout Opp BSNL Office Kavitha Bakery Circle Suitable or Banks, Finance Companies, GYM etc.
9845564935

ಈಸ್ಟ್ ಫೇಸಿಂಗ್ ಸೈಟ್
ಮುಡಾ ಖಾತಾ ಕಾರ್ನರ್ ಸೈಟ್ 1124 ಚದರಡಿ, ದಡದಹಳ್ಳಿ, ಜ್ಞಾನಭಾರತಿ ಲೇಔಟ್, ಏರ್ ಪೋರ್ಟ್ ಹಿಂಭಾಗದ ರಸ್ತೆ ಬೆಲೆ 34 ಲಕ್ಷ (ನೆಗೋಷಿಯಬಲ್)
ಡೈರೆಕ್ಟ್ ಓನರ್
9342123373

ಬೇಕಾಗಿದ್ದಾರೆ
ಬೇಕಾಗಿದ್ದಾರೆ : ಕೆಲಸಕ್ಕೆ ಹುಡುಗಿಯರು ಬೇಕಾಗಿದ್ದಾರೆ
ಕೆಲಸದ ವೇಳೆ: 10 AM to 8 PM
ವಿಚಾರಿಸಿ: ಚೇತನ ಬುಕ್ ಹೌಸ್, ನಾರಾಯಣ ಶಾಸ್ತ್ರಿ ರಸ್ತೆ, ಮೈಸೂರು

NEW HOUSE FOR SALE
North facing 30x40 Site Ground floor with East Main door 2 BHK fully Furnished with wardrobes and Kitchen Cabinets and all amenities with borewell at Nagamma Layout Site No. 60 Beside Railway Layout J P Nagar Ring Road
9845564935

WANTED
Captains
Full Time / Part Time
BOPYS
Near Aishwarya Petrol Bunk
9606632166

ತಕ್ಷಣ ಬೇಕಾಗಿದ್ದಾರೆ
ಮೈಸೂರಿನ ಮೇಟಗಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ಕಾರ್ಖಾನೆಯೊಂದಕ್ಕೆ ತಕ್ಷಣ ಪುರುಷ ಕಾರ್ಮಿಕರು ಬೇಕಾಗಿದ್ದಾರೆ. ವಯೋಮಿತಿ 18 ರಿಂದ 40 ರವರೆಗೆ ವಿದ್ಯಾರ್ಹತೆ : ಕನಿಷ್ಠ ಓದು/ಬರಹ ಗೊತ್ತಿರಬೇಕು. ವೇತನ 13,448 ESI & PF ಮತ್ತು ಉಚಿತ ಊಟದ ವ್ಯವಸ್ಥೆ. ಅಗತ್ಯ ದಾಖಲಾತಿಗಳು, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಫೋಟೋ–06, ಟಿ.ಸಿ. ಅಥವಾ ಮಾರ್ಕ್ಸ್ ಕಾರ್ಡ್ ಕಡ್ಡಾಯ
8453408502,9108100117

ನಿರ್ಮಲ ಸರ್ವೀಸ್
ಸಂಪು ಕ್ಲೀನಿಂಗ್‌ಗಾಗಿ ಸಂಪರ್ಕಿಸಿ:
6364079244

ಮೈನಗರ...ಮೈನಗರ...ಮೈನಗರ
ಬನ್ನೂರು ರಸ್ತೆ ವಾಜಮಂಗಲದ ಮೈನಗರ ಬಡಾವಣೆಯಲ್ಲಿ ನೊಂದಣಿಗೆ ಸಿದ್ಧವಿರುವ ಮುಡಾ ನಿವೇಶನಗಳು ಮಾರಾಟಕ್ಕಿವೆ.
8088187466, 8660160225

GODOWN FOR RENT
Built up area 70000 sqft & Easy access for all vehicles and with ample vehicle parking available for lease (part or full) at KRS main road, Metagalli, Mysore
9845118555

ಬೇಕಾಗಿದ್ದಾರೆ
1) ಫೀಲ್ಡ್ ಆಫೀಸರ್
2) ಸೆಕ್ಯೂರಿಟಿ ಗಾರ್ಡ್
3) ಹೌಸ್ ಕೀಪಿಂಗ್ (ಸ್ತ್ರೀ/ಪುರುಷ)
ಸಾತಗಳ್ಳಿ ಡಿಪೋ ಮತ್ತು ಆಲನಹಳ್ಳಿ ಹತ್ತಿರ ಇರುವವರಿಗೆ ಮೊದಲ ಆದ್ಯತೆ.
9886862554
7676500669

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 9591815191

ಉಚಿತ ಕುಡಿತ ಬಿಡಿಸುವ ಶಿಬಿರ
ಮೈಸೂರು ಚೈತನ್ಯ ಫೌಂಡೇಷನ್‌ನ ಪ್ರಥಮ ವಾರ್ಷಿಕೋತ್ಸವದ ಪ್ರಯುಕ್ತ ಮಾ.25 ರಿಂದ 10 ದಿನಗಳ ಕಾಲ ಉಚಿತ ಕುಡಿತ ಬಿಡಿಸುವ ಶಿಬಿರ ನಡೆಯಲಿದೆ. ಊಟ/ವಸತಿ ಸೌಲಭ್ಯ ಉಚಿತ, ಹೆಚ್ಚಿನ ಮಾಹಿತಿಗೆ
9164469570
6361744190

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ಶುಂಠಿ ಕೃಷಿಕರೆ
ಉತ್ತಮ ದರ್ಜೆಯ ಬೇವಿನ ಹಿಂಡಿ ಹಾಗೂ ಬೇವಿನ ಹುಡಿ ನಿಮ್ಮ ಸಮಕ್ಷಮ ಮಾಡಿಕೊಡಲಾಗುತ್ತದೆ.
ಶ್ರೀ ಕಾಮಾಕ್ಷಿ ಬಯೋ–ನೀಮ್ #203, ಬನ್ನಿಮಂಟಪ ಬಡಾವಣೆ, ಮೈಸೂರು–570 015
Mob: 80888-87802

ಕೆಲಸಕ್ಕೆ ಬೇಕಾಗಿದ್ದಾರೆ
ನೀರಿನ ಗನ್ ಉಪಯೋಗಿಸಿ ಕಾರ್ ವಾಶ್ ಮಾಡಲು ಅನುಭವವಿರುವ ಹುಡುಗರು ಬೇಕಾಗಿದ್ದಾರೆ. ಆಕರ್ಷಕ ಸಂಬಳ ನೀಡಲಾಗುವುದು. ಸ್ಥಳ: ತ್ರಿವೇಣಿ ಸರ್ಕಲ್, ಡಾ|| ರಾಜ್‌ಕುಮಾರ್ ರಸ್ತೆ. ಸಂಪರ್ಕಿಸಿ:
8861221755

SITE FOR SALE
Site No. 74, Measurement : 1344 sqft Rajarajeswari Layout 2nd Stage, Kellahally Village (Near Thalur Cross) Jayapura hobli Mysore Taluk. (Prasanna)
9916161641

ಬೇಕಾಗಿದ್ದಾರೆ
1) ಮಹಿಳಾ ಹೌಸ್ ಕೀಪರ್
2) ವಿದ್ಯಾವಂತ ಸೆಕ್ಯೂರಿಟಿ ಗಾರ್ಡುಗಳು
ಸ್ಥಳ: ಶಾರದಾದೇವಿನಗರ, ಸಿಟಿ ಸುತ್ತಮುತ್ತ
3) ಫೀಲ್ಡ್ ಸೂಪರ್‌ವೈಸರುಗಳು
9242406261
9686422400

PAY 4 LAKH, BUY 30X40 SITES IN CITY BUS ROUTE
80% LOAN RS. 17 LAKH ONWARDS
* ಸಪ್ತಮಾತೃಕ ಲೇಔಟ್ –ಟಿ.ಎನ್.ಪುರ ರಸ್ತೆ
* TVS COMPANY –ತಳೂರು ಮುಖ್ಯ ರಸ್ತೆ
* ಇಲವಾಲ KHB ಪಕ್ಕ
* MIT ಕಾಲೇಜು ಪಕ್ಕ ಹಳೇ ಕೆಸರೆ
*ಬೋಗಾದಿ ರಸ್ತೆ @ 26.5 ಲಕ್ಷ (BROKER EXCUSE)
8123075038
7892445689

ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್
ಜರ್ಮನ್ ಟೆಕ್ನಾಲಜಿ ಬಳಸಿ ಸಂಪು, ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್ ಮಾಡಲಾಗುತ್ತದೆ.
Mob: 9008711654

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 8880558064

ಬೇಕಾಗಿದ್ದಾರೆ
ಬೇಕಾಗಿದ್ದಾರೆ : ಕೆಲಸಕ್ಕೆ 40 ವರ್ಷ ಮೇಲ್ಪಟ್ಟ ಪುರುಷರು
ಕೆಲಸದ ವೇಳೆ: 10 AM to 8 PM
ವಿಚಾರಿಸಿ: ಚೇತನ ಬುಕ್ ಹೌಸ್, ನಾರಾಯಣ ಶಾಸ್ತ್ರಿ ರಸ್ತೆ, ಮೈಸೂರು

HOUSE FOR LEASE
first floor,3 sqare 12x14. room small kitchen attach bath Vijayanagar 3rd stage
7892661998

URGENT REQUIRED
ಈ ಕೆಳಗಿನ ಲೋಕೇಶನ್‌ಗಳಿಗೆ ಕಲೆಕ್ಷನ್ ಎಕ್ಸಿಕ್ಯೂಟಿವ್ ಗ್ರಾಮಶಕ್ತಿ ಸಂಘದ ಕಲೆಕ್ಷನ್ (SMFG) ಗೆ
1. ಚಾಮರಾಜನಗರ, 2. ಮೈಸೂರು, 3. ಕೆ.ಆರ್.ನಗರ, 4. ಕೊಳ್ಳೇಗಾಲ, 5. ನಂಜನಗೂಡು, 6. ತುಮಕೂರು, ಶಿರಾ, ತಿಪಟೂರ್
10% ರಿಂದ 18% ರವರೆಗೆ ಕಮಿಷನ್ ಕೊಡಲಾಗುವುದು.
7676624697
9986219833

ಉಚಿತ ಭವಿಷ್ಯ
ಶ್ರೀ ಸಿಗಂದೂರು ಚೌಡೇಶ್ವರಿ ಜ್ಯೋತಿಷ್ಯಾಲಯ ಕೊಳ್ಳೇಗಾಲದಲ್ಲಿ ಲಭ್ಯವಿರುತ್ತಾರೆ.
ಸಾಲದ ಭಾದೆ, ದಾಂಪತ್ಯ ಸಮಸ್ಯೆ, ಕೋರ್ಟ್ ಕೇಸ್ ಸಮಸ್ಯೆ ಪ್ರೀತಿಯಲ್ಲಿ ನಂಬಿ ಮೋಸ ಯಾವುದೇ ಸಮಸ್ಯೆಗಳಿಗೆ ಪರಿಹಾರ ತಿಳಿಸುತ್ತಾರೆ.
ಗುರೂಜಿ ವಿಷ್ಣುಕಾಂತ್ ಜೋಶಿ
ಫೋನಿನ ಮೂಲಕ ಪರಿಹಾರ ಕೊಳ್ಳೇಗಾಲದಲ್ಲಿದ್ದಾರೆ.
9148540496

ಸಾಲ / LOANS
* House / Site Purchase
* Construction Loan
* House / Site Mortgage Loan
Loans for MUDA, Corporation, Revenue, 11A & 11B Property.
77605-98705

ಮೈಸೂರಿನ ರೆಸ್ಟೋರೆಂಟ್ ಒಂದಕ್ಕೆ
ಅಡುಗೆ ಸಹಾಯಕರು, ಕಾಫಿ, ಟೀ ಮಾಸ್ಟರ್ ಹಾಗೂ ಪಾರ್ಸಲ್ ಕಟ್ಟಲು ಹುಡುಗರು ಬೇಕಾಗಿದ್ದಾರೆ. ಒಳ್ಳೆಯ ಸಂಬಳ ನೀಡಲಾಗುವುದು. ಸಂಪರ್ಕಿಸಿ:
Mob: 9900661620

ಬೇಕಾಗಿದ್ದಾರೆ
Receptionist (Male)
Cooks, KT / Asst., RST / Asst., Room Boys
Attractive salary, PF & ESI with food and accommodation.
ಸಂಪರ್ಕಿಸಿ: ಪಾರ್ಕ್‌ಲೇನ್ ಹೋಟೆಲ್ 2720, ಹರ್ಷ ರಸ್ತೆ, ಮೈಸೂರು

ಮನೆ ಬಾಡಿಗೆಗೆ ಇದೆ
ರಾಜಶೇಖರ ಆಸ್ಪತ್ರೆ ಹಿಂಭಾಗ ಮನೆ ನಂ. 172, ರಾಗಿಮಿಲ್ 2ನೇ ಅಡ್ಡ ರಸ್ತೆ, ಮೊದಲನೇ ಮಹಡಿ, 3 ಬೆಡ್ ರೂಂ, ಹಾಲ್, ಅಡುಗೆ ಮನೆ, ಊಟದ ಹಾಲ್, ದೇವರ ಮನೆ, ಸ್ನಾನದ ಮನೆ, ಸೋಲಾರ್, ಗೀಸರ್, ನೀರಿನ ಸೌಕರ್ಯ, ಉತ್ತರ ಬಾಗಿಲು.
7975023201, 7815812948

AVAILABLE HOME TUTOR
8th, 9th and 10th
Physics & maths
(CBSE / State)
Adarasha.M.V
9008231304

ಕೆಲಸಕ್ಕೆ ಬೇಕಾಗಿದ್ದಾರೆ
ಮೈಸೂರಿನ ಹಾಸ್ಟೆಲ್ ಒಂದರಲ್ಲಿ ಅಡುಗೆ ತಯಾರಿಸಿಕೊಡಲು ಅಡುಗೆ ಭಟ್ಟರು ಬೇಕಾಗಿದ್ದಾರೆ. ಆಸಕ್ತರು ಕೆಳಕಂಡ ಸಂಖ್ಯೆಗೆ ಸಂಪರ್ಕಿಸಿ:
8431315761

ಮನೆ ಬಾಡಿಗೆಗೆ ಇದೆ
2ಬಿಹೆಚ್‌ಕೆ ಗ್ರೌಂಡ್ ಮತ್ತು 1 ಫ್ಲೋರ್ 20x30 # 241, 'ಬಿ' ಬ್ಲಾಕ್, 3 ಸ್ಟೇಜ್ ದಟ್ಟಗಳ್ಳಿ, ಕನಕದಾಸ ನಗರ, ಮೈಸೂರು
9845700809

ಸೈಟು ಬೇಕಾಗಿದೆ
ವರುಣ ಬಸವೇಶ್ವರ ಲೇಔಟ್, JSS ಲೇಔಟ್, ನಿರ್ಮಾಣ್ ನಗರ ಹಾಗೂ ಸುತ್ತ ಮುತ್ತ ಇರುವ ಲೇಔಟ್‌ಗಳಲ್ಲಿ.
9844436672

HYBRID ECO SOLAR WANTED
■ Marketing Executives : 4 Nos.
■ Accountant : 1 No.
■ Telecaller : 1 No.
6360240286, 9606083803

NAATYA (R)
PRESENTS
Makkala Sainya Summer Camp Season II: Dance, Drama, 25 activities with grand finale.
Place: Samarasri Complex, Opp , Mylari Hotel Nazarbad, Mysore.
9964491957, 9964566070

SITE FOR SALE
60x40 West face site at Zilla Employees Layout, Near Yedalli (Brahmin's Layout). Contact:
9845435804,
(Only genuine buyers please)

WANTED
1) Diploma in Mechanical and Instrumentation : Male candidate, 2 years experience in Nanjangud.
2) Tender Executive cum Office Admin: Male candidate with 2 years relevant experience in Mysore.
3) Motor Line / Battery lire / Main Line: Male staff with 2 years relevant experience required, Jigani, Bangalore.
Interested candidates may contact @
9606958602
9886970631, 8884402327

ಬೇಕಾಗಿದ್ದಾರೆ
ಮೈಸೂರು ನಗರದ ಮಧ್ಯ ಭಾಗದಲ್ಲಿ ಆಧುನೀಕರಣಗೊಳ್ಳುತ್ತಿರುವ ಪೆಟ್ರೋಲ್ ಬಂಕ್‌ನಲ್ಲಿ ಕೆಲಸ ನಿರ್ವಹಿಸಲು ಯುವಕರು/ಯುವತಿಯರು ಬೇಕಾಗಿದ್ದಾರೆ. ಆಕರ್ಷಕ ಸಂಬಳ, ಮಾರಾಟ ಉತ್ತೇಜನ ಭತ್ಯೆ ನೀಡಲಾಗುವುದು. ಆಸಕ್ತಿವುಳ್ಳವರು ಸಂಪರ್ಕಿಸಿ:
9606222435

ಬೇಕಾಗಿದ್ದಾರೆ
ಹೆಬ್ಬಾಳು ಮೇಟಗಳ್ಳಿ ಕೈಗಾರಿಕಾ ಪ್ರದೇಶಗಳಲ್ಲಿ ಕೆಲಸ ಮಾಡಲು ಹುಡುಗ, ಹುಡುಗಿಯರು ಬೇಕಾಗಿದ್ದಾರೆ. ವಿದ್ಯಾರ್ಹತೆ, ITI, 8th to 2nd PUC ವರೆಗೆ, ಊಟ ವಸತಿ ESI & PF ಸೌಲಭ್ಯ, ಸಂಬಳ 11400 ರಿಂದ 18000 ಇರುತ್ತದೆ.
8951869646
9902645646

SITE FOR SALE
30x40 DTCP Approved
(Corporation limit) Nirman Promoters, Nirmaan Nagar, Mosambayanahalli Road, Near Kalpavruksha Raghavendra Swamy Temple, Chikkalli, T.Narasipura Road, Mysore. Rs. 1850 per sq.ft.
9916939424, 8317450753

SITES FOR SALE
20x30, 30x40, 30x50
Sites Per sq.ft. Rs. 2600/-
Just 2 km Bogadi Main Road, K.M. Halli
Call: 9141506297

WANTED
Required
Direct Field Executives
Salary : 40,000/- + Incentives
Qualifications: 10th & above
Location: Karnataka & Hosur
Free Accomodation & Training Provided
8971320890

ತಕ್ಷಣ ಬೇಕಾಗಿದ್ದಾರೆ
ಹೂಟಗಳ್ಳಿ ಮತ್ತು ಹೆಬ್ಬಾಳು ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಸೂಪರ್‌ವೈಸರ್ ಮತ್ತು ಗಾರ್ಡ್‌ಗಳು ಬೇಕಾಗಿದ್ದಾರೆ. ವಿದ್ಯಾರ್ಹತೆ: SSLC ಮತ್ತು ಮೇಲ್ಪಟ್ಟು ಸಂಬಳ: 18000/- + W/o (8 hrs) ಊಟ ತಿಂಡಿ ಸೌಲಭ್ಯವಿರುತ್ತದೆ.
9880727819
9538567819

ಹೊಸ ಮನೆ ಮಾರಾಟಕ್ಕಿದೆ
20x30, N/F ಗುರೂರು 4ನೇ ಹಂತ ಶ್ರೀನಗರ D ಬ್ಲಾಕ್ ಹತ್ತಿರ ರೂ. 39 ಲಕ್ಷ
9379056972

LIFE PARTNER ಆಗಲು ಶ್ರೀಮಂತ ವರನಿಗೆ ವಧು ಬೇಕಾಗಿದ್ದಾರೆ.
ಲಿಂಗಾಯತ Age: 49/5.6 ಡಾಕ್ಟರೇಟ್ ಪದವೀಧರ Independent & Well Settled 5 ಲಕ್ಷಕ್ಕಿಂತ ಅಧಿಕ ಆದಾಯ ಮತ್ತು ತೋಟ/ಮನೆ ಇರುವಂತಹ ವಿಚ್ಛೇದಿತ ವರನಿಗೆ ವಿದ್ಯಾವಂತೆ/ ವಿಧವೆ/ ವಿಚ್ಛೇದಿತೆ/ನೌಕರಸ್ಥೆ/ ಬಡವ ವಧು ಬೇಕು ಯಾವುದೇ ಜಾತಿಯ ಅಭ್ಯಂತರವಿಲ್ಲ/ ಮಕ್ಕಳಿದ್ದರೂ ಪರವಾಗಿಲ್ಲ
ಮೈಸೂರು: 9480385742
9742458242

ಉಚಿತ ಭವಿಷ್ಯ ಶಾಶ್ವತ ಪರಿಹಾರ
ಶ್ರೀ ಸಾಯಿ ಕೃಷ್ಣ ಜ್ಯೋತಿಷ್ಯಾಲಯ
ಪಂ|| ಕೃಷ್ಣಪ್ರಸಾದ್
ಮನೆಯಲ್ಲಿ ಅಶಾಂತಿ ಸತಿಪತಿ ಕಲಹ ಸಾಲಬಾಧೆ, ದಾಂಪತ್ಯ ಸಮಸ್ಯೆ, ಭೂಮಿ ವಶ, ಸ್ತ್ರೀಪುರುಷ ಶತೃಕಾಟ, ನೀವು ಬೇರೆ ಜ್ಯೋತಿಷ್ಯರಲ್ಲಿ ಹಣ ನೆಮ್ಮದಿ ವಿಶ್ವಾಸ ಕಳೆದುಕೊಂಡಿದ್ದಲ್ಲಿ ನಿಮ್ಮ ಜೀವನದ ಯಾವುದೇ ಸಮಸ್ಯೆ ಇದ್ದರು ಕೊಳ್ಳೇಗಾಲದ 500 ವರ್ಷದ ಯಂತ್ರ ಮಂತ್ರ ವಿದ್ಯೆಯಿಂದ 9 ದಿನದಲ್ಲಿ ಶಾಶ್ವತ ಪರಿಹಾರ ಶತಸಿದ್ಧ
9535161120

ತಕ್ಷಣ ಬೇಕಾಗಿದ್ದಾರೆ
ಆರೋಗ್ಯವಂತ ಸೆಕ್ಯೂರಿಟಿ ಗಾರ್ಡ್ಸ್ & ಹೆಲ್ಪರ್ಸ್ (Helpers) ಗಳು ಬನ್ನಿಮಂಟಪ, ಕೂರ್ಗಳ್ಳಿ, ನಂಜನಗೂಡು, ಕಡಕೊಳ, ಜೆಪಿ ನಗರ (Helper) ಮೇಟಗಳಿ, ಕೈಗಾರಿಕೆಯ ಪ್ರದೇಶದಲ್ಲಿ ಕೆಲಸಕ್ಕಾಗಿ (Helpers 8 Hrs, Security 12 Hrs)
9035367083
8123769346

ವಧು–ವರಾನ್ವೇಷಣೆ
ಒಕ್ಕಲಿಗ/ಕುರುಬ/ಲಿಂಗಾಯಿತ/ನಾಯಕ/SC & ಎಲ್ಲಾ ಜಾತಿಯ ವಧು–ವರರಿಗಾಗಿ ಕೂಡಲೇ ಸಂಪರ್ಕಿಸಿ:
(II Marriages Also)
9343175000

ತಕ್ಷಣ ಬೇಕಾಗಿದ್ದಾರೆ
ಜಾಕಿ ಕ್ವಾಟರ್, ಕಾರಂಜಿಕೆರೆ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. ವಿದ್ಯಾರ್ಹತೆ: SSLC ಸಂಬಳ: 12000/-
9620777819
9538567819

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

ಐಪಿಎಲ್ ಉದ್ಘಾಟನಾ ಪಂದ್ಯದಲ್ಲಿ ಸಿಎಸ್‌ಕೆ ಶುಭಾರಂಭ

ಚೆನ್ನೈ, ಮಾ.22– ತಂಡದ ಸಂಘಟಿತ ಪ್ರದರ್ಶನ ಹಾಗೂ ಮುಸ್ತಫಿಜುರ್ ರೆಹಮಾನ್ ಅವರ ಮಾರಕ ಬೌಲಿಂಗ್ ದಾಳಿ ನೆರವಿನಿಂದ ಚೆನ್ನೈ ಸೂಪರ್ ಕಿಂಗ್ಸ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ 6 ವಿಕೆಟ್‌ಗಳ ಜಯ ಸಾಧಿಸಿದೆ. ಈ ಮೂಲಕ ಚೆನ್ನೈ ಟೂರ್ನಿಯಲ್ಲಿ ಶುಭಾರಂಭ ಮಾಡಿದೆ.

ಇಲ್ಲಿನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ನಡೆದ 17ನೇ ಆವೃತ್ತಿಯ ಐಪಿಎಲ್ ಪಂದ್ಯಾವಳಿಯ ಉದ್ಘಾಟನಾ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 173 ರನ್ ಗಳಿಸಿತ್ತು. 174 ರನ್‌ಗಳ ಗುರಿ ಬೆನ್ನತ್ತಿದ ಚೆನ್ನೈ ಸೂಪರ್ ಕಿಂಗ್ಸ್ 18.4 ಓವರ್‌ಗಳಲ್ಲಿ 176 ರನ್ ಗಳಿಸುವ ಮೂಲಕ ಜಯದ ನಗೆ ಬೀರಿತು.

ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ನಾಯಕ ಋತುರಾಜ್ ಗಾಯಕ್ವಾಡ್ ಹಾಗೂ ರಚಿನ್ ರವೀಂದ್ರ ತಂಡಕ್ಕೆ ಸ್ಫೋಟಕ ಆರಂಭ ಒದಗಿಸಿದರು. ಆದರೂ ಚೆನ್ನೈ ನಿಗದಿತವಾಗಿ ವಿಕೆಟ್ ಕಳೆದುಕೊಳ್ಳುತ್ತಾ ಸಾಗಿತು. ನಾಯಕ ಋತುರಾಜ್ ಗಾಯಕ್ವಾಡ್ 15 ರನ್ ಗಳಿಸಿದರೇ, ಮತ್ತೋರ್ವ ಆರಂಭಿಕ ಆಟಗಾರ ರಚಿನ್ ರವೀಂದ್ರ 15 ಎಸೆತಗಳಲ್ಲಿ ತಲಾ 3 ಸಿಕ್ಸರ್, ಬೌಂಡರಿ ಒಳಗೊಂಡ 37 ರನ್ ಗಳಿಸಿದರು. ನಂತರ ಬಂದ ಅಜಿಂಕ್ಯಾ ರಹಾನೆ 27 ರನ್, ಡೇರಿಲ್ ಮಿಚೆಲ್ 22 ರನ್ ಗಳಿಸಿ ಬಹುಬೇಗ ಪೆವಿಲಿಯನ್ ಸೇರಿಕೊಂಡರು.



ಈ ವೇಳೆ ಇಂಪ್ಯಾಕ್ಟ್ ಪ್ಲೇಯರ್ ಆಗಿ ಕಣಕ್ಕಿಳಿದ ಶಿವಂ ದುಬೆ ಹಾಗೂ ರವೀಂದ್ರ ಜಡೇಜಾ 37 ಎಸೆತಗಳಲ್ಲಿ 67 ರನ್‌ಗಳ ಜೊತೆಯಾಟ ನೀಡಿದರು. ದುಬೆ 28 ಎಸೆತಗಳಲ್ಲಿ 34 ರನ್ ಗಳಿಸಿದರೆ, ಜಡೇಜಾ 17 ಎಸೆತಗಳಲ್ಲಿ 25 ರನ್ ಬಾರಿಸಿ ಗೆಲುವಿಗೆ ನೆರ ವಾದರು. ಆರ್‌ಸಿಬಿ ಪರ ಕ್ಯಾಮರೂನ್ ಗ್ರೀನ್ 2, ಯಶ್ ದಯಾಳ್ ಹಾಗೂ ಕರ್ಣ್ ಶರ್ಮಾ ತಲಾ ಒಂದೊಂದು ವಿಕೆಟ್ ಪಡೆದರು.

ಇದಕ್ಕೂ ಮುನ್ನಾ ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ಪರ ನಾಯಕ ಫಾಫ್ ಡು ಪ್ಲೆಸಿಸ್ ಆರಂಭದಲ್ಲೇ ಸ್ಫೋಟಕ ಇನ್ನಿಂಗ್ಸ್ ಕಟ್ಟಲು ಮುಂದಾದರು. ಮೊದಲ ವಿಕೆಟ್‌ಗೆ ಕೊಹ್ಲಿ ಹಾಗೂ ಡುಪ್ಲೆಸಿಸ್ ಜೋಡಿ 27 ಎಸೆತಗಳಲ್ಲಿ 41 ರನ್‌ಗಳ ಜೊತೆಯಾಟ ನೀಡಿತ್ತು. ಆದರೆ ಡುಪ್ಲೆಸಿಸ್ 35ರನ್ ಗಳಿಸಿ ನಿರ್ಗಮಿಸಿದರು. ನಂತರ ಬಂದ ರಜತ್ ಪಾಟೀದಾರ್ ಹಾಗೂ ಗ್ಲೆನ್ ಮ್ಯಾಕ್ಸ್‌ವೆಲ್ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದರು. ಈ ವೇಳೆ ಒಂದಾದ ವಿರಾಟ್ ಕೊಹ್ಲಿ ಹಾಗೂ ಕ್ಯಾಮರೂನ್ ಗ್ರೀನ್ 35 ರನ್‌ಗಳ ಜೊತೆಯಾಟವಾಡಿದರು. ಆದರೆ 21 ರನ್ ಗಳಿಸಿದ್ದ ಕೊಹ್ಲಿ ವಿಕೆಟ್ ಒಪ್ಪಿಸಿದರು. ಇವರ ಹಿಂದೆಯೇ ಕ್ಯಾಮರೂನ್ 18 ರನ್ ಗಳಿಸಿ ನಿರ್ಗಮಿಸಿದರು.

ಈ ವೇಳೆ ಜೊತೆಯಾದ ದಿನೇಶ್ ಕಾರ್ತಿಕ್ ಮತ್ತು ಅನೂಜ್ ರಾವತ್ ಜೋಡಿ ಉತ್ತಮ ಇನ್ನಿಂಗ್ಸ್ ಕಟ್ಟುವಲ್ಲಿ ಯಶಸ್ವಿಯಾದರು. 50 ಎಸೆತಗಳಲ್ಲಿ ಈ ಜೋಡಿ 95 ರನ್ ಬಾರಿಸುವ ಮೂಲಕ ತಂಡದ ಮೊತ್ತ 170 ರನ್ ಗಳ ಗಡಿ ದಾಟುವಂತೆ ಮಾಡಿತು. ಆರ್‌ಸಿಬಿ ಪರ ಅನೂಜ್ ರಾವತ್ 25 ಎಸೆತಗಳಲ್ಲಿ 4 ಬೌಂಡರಿ, 3 ಸಿಕ್ಸ್ ಒಳಗೊಂಡ 48, ದಿನೇಶ್ ಕಾರ್ತಿಕ್ 28 ಎಸೆತಗಳಲ್ಲಿ 3 ಬೌಂಡರಿ, 2 ಸಿಕ್ಸರ್ ಒಳಗೊಂಡ 38 ರನ್ ಗಳಿಸಿದರು.

ಚೆನ್ನೈ ಪರ ಮುಸ್ತಫಿಜುರ್ ರೆಹಮಾನ್ 4 ವಿಕೆಟ್, ದೀಪಕ್ ಚಹಾರ್ 1 ವಿಕೆಟ್‌ಗೆ ಉರುಳಿಸಿದರು. ಮುಸ್ತಫಿಜುರ್ ರೆಹಮಾನ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಉದ್ಘಾಟನಾ ಪಂದ್ಯ: 17ನೇ ಆವೃತ್ತಿಯ ಐಪಿಎಲ್ ಆರಂಭಕ್ಕೂ ಮುನ್ನಾ ಆಯೋಜಿಸಿದ್ದ ವರ್ಣರಂಜಿತ ಉದ್ಘಾಟನಾ ಸಮಾರಂಭ ಅದ್ದೂರಿಯಾಗಿ ನಡೆಯಿತು.

ಸಮಾರಂಭದಲ್ಲಿ ಬಾಲಿವುಡ್ ನಟರಾದ ಅಕ್ಷಯ್ ಕುಮಾರ್, ಟೈಗರ್ ಶ್ರಾಫ್ ಹಿಂದಿ ಚಿತ್ರ ಗೀತೆಗಳಿಗೆ ಹೆಜ್ಜೆ ಹಾಕಿದರೆ, ಸಂಗೀತ ದಿಗ್ಗಜ ಎ.ಆರ್. ರೆಹಮಾನ್ ಹಾಗೂ ಸೋನು ನಿಗಮ್ ಅವರು ತಮ್ಮ ಗಾಯನದ ಮೂಲಕ ಅಭಿಮಾನಿಗಳನ್ನು ರಂಜಿಸಿದರು.

2 ದಾಖಲೆ ಬರೆದ ವಿರಾಟ್ ಕೊಹ್ಲಿ!

ಚೆನ್ನೈ: ಮೂರೂ ಸ್ವರೂಪದ ಕ್ರಿಕೆಟ್‌ನಲ್ಲಿ ರನ್ ಹೊಳೆ ಹರಿಸಿ ಈಗಾಗಲೇ ಹಲವು ದಾಖಲೆಗಳನ್ನು ಬರೆದಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಬ್ಯಾಟ್ಸ್‌ಮನ್ ವಿರಾಟ್ ಕೊಹ್ಲಿ, ಇದೀಗ ಟಿ20 ಕ್ರಿಕೆಟ್‌ನಲ್ಲಿ ಎರಡು ವಿಶೇಷ ದಾಖಲೆಗಳನ್ನು ಬರೆದಿದ್ದಾರೆ. ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ 1000 ರನ್‌ಗಳನ್ನು ಪೂರ್ಣಗೊಳಿಸಿದ ಕೊಹ್ಲಿ, ಟಿ20 ಕ್ರಿಕೆಟ್‌ನಲ್ಲಿ 12000 ರನ್‌ಗಳನ್ನು ಪೂರ್ಣಗೊಳಿಸಿದ ಮೊದಲ ಭಾರತೀಯ ಬ್ಯಾಟ್ಸ್‌ಮನ್ ಎನಿಸಿಕೊಂಡಿದ್ದಾರೆ.

ಶುಕ್ರವಾರ ಇಲ್ಲಿನ ಎಂಎ ಚಿದಂಬರಂ ಕ್ರಿಕೆಟ್ ಕ್ರೀಡಾಂಗಣದಲ್ಲಿ ಆರಂಭವಾದ 2024ರ ಇಂಡಿಯನ್ ಪ್ರೀಮಿಯರ್ ಲೀಗ್ ಆರಂಭಿಕ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಆರ್‌ಸಿಬಿ ಪರ ವಿರಾಟ್ ಕೊಹ್ಲಿ 20 ಎಸೆತಗಳಲ್ಲಿ 21 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಇದರೊಂದಿಗೆ ಕೊಹ್ಲಿ ಟಿ20 ಕ್ರಿಕೆಟ್‌ನಲ್ಲಿ 12000 ರನ್‌ಗಳನ್ನು ಪೂರ್ಣಗೊಳಿಸಿದ್ದಾರೆ. ಟಿ20 ಕ್ರಿಕೆಟ್‌ನಲ್ಲಿ ಈ ಸಾಧನೆ ಮಾಡಿದ ಮೊದಲ ಭಾರತೀಯ ಬ್ಯಾಟ್ಸ್‌ಮನ್ ಎಂಬ ನೂತನ ಮೈಲುಗಲ್ಲು ಸ್ಥಾಪಿಸಿದ್ದಾರೆ. ಆ ಮೂಲಕ ಈ ಸಾಧನೆ ಮಾಡಿದವರ ಎಲೈಟ್ ಲಿಸ್ಟ್‌ಗೆ ಸೇರ್ಪಡೆಯಾಗಿದ್ದಾರೆ. ಅಷ್ಟೇ ಅಲ್ಲದೆ ಟಿ20 ಕ್ರಿಕೆಟ್‌ನಲ್ಲಿ ವೇಗವಾಗಿ 12000 ರನ್‌ಗಳನ್ನು ಪೂರ್ಣಗೊಳಿಸಿದ ವಿಶ್ವದ ಮೂರನೇ ಬ್ಯಾಟ್ಸ್‌ಮನ್ ಆಗಿದ್ದಾರೆ.

ವಿರಾಟ್ ಕೊಹ್ಲಿಗೂ ಮುನ್ನ ಐದು ಮಂದಿ ಬ್ಯಾಟ್ಸ್‌ಮನ್‌ಗಳು ಟಿ20 ಕ್ರಿಕೆಟ್‌ನಲ್ಲಿ ಈ ಸಾಧನೆ ಮಾಡಿದ್ದಾರೆ. ವಿಂಡೀಸ್ ದಿಗ್ಗಜ ಕ್ರಿಸ್ ಗೇಲ್, ಪಾಕಿಸ್ತಾನದ ಶೋಯಬ್ ಮಲಿಕ್, ಕೈರೋನ್ ಪೊಲಾರ್ಡ್, ಅಲೆಕ್ಸ್ ಹೇಲ್ಸ್ ಹಾಗೂ ಡೇವಿಡ್ ವಾರ್ನರ್ ಅವರು ಈ ದಾಖಲೆಯ ಪಟ್ಟಿಯಲ್ಲಿದ್ದಾರೆ. 12 ಸಾವಿರ ಟಿ20 ರನ್‌ಗಳನ್ನು ವೇಗವಾಗಿ ಪೂರ್ಣಗೊಳಿಸಿದ ಮೂರನೇ ಬ್ಯಾಟ್ಸ್‌ಮನ್ ಕೊಹ್ಲಿ. ಇವರು 377 ಪಂದ್ಯಗಳಲ್ಲಿ ಈ ಸಾಧನೆ ಮಾಡಿದ್ದಾರೆ. ಕ್ರಿಸ್‌ಗೇಲ್ 352 ಪಂದ್ಯಗಳಲ್ಲಿ 12000 ರನ್‌ಗಳನ್ನು ಪೂರ್ಣಗೊಳಿಸಿದ ಈ ಪಟ್ಟಿಯಲ್ಲಿ ಅಗ್ರ ಸ್ಥಾನದಲ್ಲಿದ್ದಾರೆ.



ನಟ ಶಿವರಾಜ್ ಕುಮಾರ್ ಚಿತ್ರ, ಜಾಹೀರಾತು ನಿಷೇಧಕ್ಕೆ ಬಿಜೆಪಿ ದೂರು

ಬೆಂಗಳೂರು, ಮಾ.22– ಶಿವಮೊಗ್ಗ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಬಂಗಾರಪ್ಪ ಅವರ ಪುತ್ರಿ ಹಾಗೂ ನಟ ಶಿವರಾಜ್ ಕುಮಾರ್ ಅವರ ಪತ್ನಿ ಗೀತಾ ಶಿವರಾಜ್ ಕುಮಾರ್ ಅಖಾಡಕ್ಕಿಳಿದಿದ್ದು, ಭರ್ಜರಿ ಪ್ರಚಾರ ನಡೆಸುತ್ತಿದ್ದಾರೆ. ಭದ್ರಾವತಿ ಮತ್ತಿತರ ಕಡೆಗಳಲ್ಲಿ ಈಗಾಗಲೇ ಪ್ರಚಾರ ಆರಂಭಿಸಿದ್ದಾರೆ. ಪತ್ನಿ ಗೀತಾ ಪರವಾಗಿ ಶಿವರಾಜ್ ಕುಮಾರ್ ಕೂಡಾ ಪ್ರಚಾರದಲ್ಲಿ ಭಾಗಿಯಾಗುವ ಮೂಲಕ ಮತಯಾಚನೆ ಮಾಡುತ್ತಿದ್ದಾರೆ.

ಪತ್ನಿ ಪರ ಪ್ರಚಾರ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ನಟ ಶಿವರಾಜ್ ಕುಮಾರ್ ವಿರುದ್ಧ ಬಿಜೆಪಿ ಒಬಿಸಿ ಯುವ ಮೋರ್ಚಾ ಚುನಾವಣಾ ಆಯೋಗದಲ್ಲಿ ದೂರು ಸಲ್ಲಿಸಿದೆ. ಸದ್ಯ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದೆ. ಪತ್ನಿ ಪರ ಪ್ರಚಾರ ಮಾಡುತ್ತಿರುವ ನಟ ಶಿವರಾಜ್ ಕುಮಾರ್ ಅವರ ಭಾವಚಿತ್ರವುಳ್ಳ ಫ್ಲೆಕ್ಸ್, ಸಿನಿಮಾ ಪೋಸ್ಟರ್, ಜಾಹೀರಾತುಗಳನ್ನು ನಿಷೇಧ ಮಾಡಬೇಕು ಎಂದು ದೂರು ನೀಡಲಾಗಿದೆ.



ಶಿವರಾಜ್ ಕುಮಾರ್, ರಾಜ್ಯದಲ್ಲಿ ಜನಪ್ರಿಯ ವ್ಯಕ್ತಿಯಾಗಿದ್ದು, ಪ್ರಸ್ತುತ ಕಾಂಗ್ರೆಸ್ ಪಕ್ಷದ ಪರ ಚುನಾವಣಾ ಪ್ರಚಾರದಲ್ಲಿ ತೊಡಗಿಸಿಕೊಂಡಿದ್ದಾರೆ. ಅವರ ಸಿನಿಮೀಯ ಕೆಲಸ ಮತ್ತು ಸಾರ್ವಜನಿಕ ವ್ಯಕ್ತಿತ್ವದ ಮೂಲಕ ಗಮನಾರ್ಹ ಪ್ರಭಾವ ಬೀರುವವರಾಗಿದ್ದಾರೆ. ಪ್ರಜಾಪ್ರಭುತ್ವ ಪ್ರಕ್ರಿಯೆಯಲ್ಲಿ ಭಾಗವಹಿಸುವ ಅವರ ಹಕ್ಕನ್ನು ನಾವು ಗೌರವಿಸುತ್ತೇವೆ. ಆದರೆ, ಚುನಾವಣಾ ಅವಧಿಯಲ್ಲಿ ಅನಗತ್ಯ ಲಾಭ ಅಥವಾ ಪ್ರಭಾವವನ್ನು ತಡೆಯುವುದು ಕಡ್ಡಾಯವಾಗಿದೆ ಎಂದು ರಾಜ್ಯ ಬಿಜೆಪಿ ಒಬಿಸಿ ಮೋರ್ಚಾ ಅಧ್ಯಕ್ಷ ಆರ್ ರಘು ಚುನಾವಣಾ ಆಯೋಗಕ್ಕೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ.

ಶಿವರಾಜ್ ಕುಮಾರ್ ಅವರ ಜನಪ್ರಿಯತೆ ಹಾಗೂ ಗಮನಾರ್ಹ ಪ್ರಭಾವವನ್ನು ಗಮನದಲ್ಲಿಟ್ಟುಕೊಂಡು, ಚಿತ್ರಮಂದಿರಗಳು, ಟಿವಿ ಚಾನೆಲ್‌ಗಳು, ಸಾಮಾಜಿಕ ಮಾಧ್ಯಮ ವೇದಿಕೆಗಳು ಮತ್ತು ಸ್ಥಳೀಯ ಕಾರ್ಯಕ್ರಮಗಳಲ್ಲಿ ಅವರ ಯಾವುದೇ ಚಲನಚಿತ್ರಗಳು, ಜಾಹೀರಾತುಗಳು ಅಥವಾ ಜಾಹೀರಾತು ಫಲಕವನ್ನು ಚುನಾವಣೆ ಮುಕ್ತಾಯದವರೆಗೂ ಪ್ರದರ್ಶಿಸದಂತೆ ಆದೇಶವನ್ನು ಹೊರಡಿಸುವ ಮೂಲಕ ತಕ್ಷಣ ಕ್ರಮ ಕೈಗೊಳ್ಳುವಂತೆ ಅವರು ಚುನಾವಣಾ ಆಯೋಗವನ್ನು ಒತ್ತಾಯಿಸಿದ್ದಾರೆ. ದೂರಿನ ಕುರಿತು ಪರಿಶೀಲಿಸುತ್ತಿದ್ದೇವೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ತಿಳಿಸಿದ್ದಾರೆ.



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಶುಕ್ರವಾರ ಆದಿಚುಂಚನಗಿರಿ ಮಹಾಸಂಸ್ಥಾನಕ್ಕೆ ಭೇಟಿ ನೀಡಿ, ಶ್ರೀ ಕಾಲಭೈರವೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಪೀಠಾಧ್ಯಕ್ಷರಾದ ಶ್ರೀ ನಿರ್ಮಲಾನಂದ ಸ್ವಾಮೀಜಿ ಆಶೀರ್ವಾದ ಪಡೆದರು. ಈ ವೇಳೆ ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್, ನಗರಾಧ್ಯಕ್ಷ ಆರ್.ಮೂರ್ತಿ, ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮಾಜಿ ಮೇಯರ್ ಬಿ.ಕೆ.ಪ್ರಕಾಶ್, ಮುಖಂಡರಾದ ಎಲ್.ಭಾಸ್ಕರ್ ಗೌಡ, ಡಾ.ಭರತ್, ಕೆ.ಮಹೇಶ್ ಉಪಸ್ಥಿತರಿದ್ದರು.


ಹೆಚ್ಚಿನ ವರ್ಗೀಕೃತ ಜಾಹೀರಾತು ಪುಟ 9ರಲ್ಲಿ

ಅರಸು ಸಮುದಾಯದಿಂದ ಯದುವೀರ್‌ಗೆ ಶುಭ ಹಾರೈಕೆ

ರಾಜಕೀಯ ಯಶಸ್ಸಿಗೆ ಜನಾಂಗದ ಆಶೀರ್ವಾದ ಕೋರಿದ ಮೈಸೂರು–ಕೊಡಗು ಬಿಜೆಪಿ ಅಭ್ಯರ್ಥಿ

ಮೈಸೂರು, ಮಾ.22(ಎಂಕೆ)– ಸಮಸ್ತ ಅರಸು ಜನಾಂಗದ ವತಿಯಿಂದ ಮೈಸೂರು–ಕೊಡಗು ಲೋಕಸಭಾ ಅಭ್ಯರ್ಥಿ ಹಾಗೂ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಗೆಲುವಿಗೆ ಮನತುಂಬಿ ಹಾರೈಸಲಾಯಿತು.

ನಗರದ ಕೆ.ಆರ್.ವನಂನಲ್ಲಿರುವ ಶ್ರೀ ರಾಮಸೇವಾ ಅರಸು ಮಂಡಳಿ ನಂಜರಾಜ ಬಹದ್ದೂರ್ ಎಜುಕೇಷನ್ ಚಾರಿಟಿ ಫಂಡ್ ಬೋರ್ಡಿಂಗ್ ಹೋಂನಲ್ಲಿ ಅರಸು ಸಮುದಾಯದ ವಿವಿಧ ಸಂಘ–ಸಂಸ್ಥೆಗಳ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಹಾರೈಕೆ ಕಾರ್ಯಕ್ರಮದಲ್ಲಿ ಯದುವೀರ್ ಅವರನ್ನು ಅತ್ಯಂತ ಆತ್ಮೀಯವಾಗಿ ಅಭಿನಂದಿಸುವುದರ ಜೊತೆಗೆ ಲೋಕಸಭಾ ಚುನಾವಣೆಯಲ್ಲಿ ಜಯಶೀಲರಾಗುವಂತೆ ಶುಭ ಕೋರಲಾಯಿತು.



ಸಮಸ್ತ ಅರಸು ಜನಾಂಗದ ವತಿಯಿಂದ ಮೈಸೂರು–ಕೊಡಗು ಲೋಕಸಭಾ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಅಭಿನಂದಿಸಲಾಯಿತು

ಈ ವೇಳೆ ಕಾರ್ಯಕ್ರಮ ಉದ್ಘಾಟಿಸಿ, ನಾಲ್ವಡಿ ಕೃಷ್ಣರಾಜ ಒಡೆಯರ್ ಸೇರಿದಂತೆ ಇನ್ನಿತರ ಒಡೆಯರು ಹಾಗೂ ಅರಸು ಜನಾಂಗಕ್ಕೆ ಕೊಡುಗೆ ನೀಡಿದ ಮಹನೀಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಆತ್ಮೀಯ ಅಭಿನಂದನೆ ಸ್ವೀಕರಿಸಿದ ಬಳಿಕ ಮಾತನಾಡಿದ ಯದುವೀರ್, ಈ ಸನ್ಮಾನ ಇಡೀ ಅರಸು ಸಮುದಾಯಕ್ಕೆ ಸಲ್ಲುತ್ತದೆ. ನಿಮ್ಮೆಲ್ಲರ ಸಹಕಾರ, ಸೇವೆಯಿಂದ ನಾನು ಇಲ್ಲಿ ನಿಂತಿರುವೆ. ಸಮಾಜದ ಪ್ರತಿನಿಧಿಯಾಗಿ ಸೇವೆ ಸಲ್ಲಿಸಲು ರಾಜಕೀಯದಲ್ಲಿ ನನ್ನ ಮುಂದಿನ ಯಶಸ್ಸಿಗೆ ನಿಮ್ಮ ಆಶೀರ್ವಾದ ಬಹಳ ಮುಖ್ಯ ಎಂದರು.

ರಾಜಮನೆತನದವರಾಗಿ ಮಾಡುವ ಸೇವೆ ಬೇರೆ. ಆದರೆ ರಾಜಕೀಯ ಪ್ರತಿನಿಧಿಯಾಗಿ ಅಧಿಕಾರದಿಂದ ಮಾಡುವ ಸೇವೆಯೇ ಬೇರೆ. ಒಂದು ವರ್ಷದ ಹಿಂದೆಯೇ ರಾಜಕೀಯಕ್ಕೆ ಬರಬೇಕೆಂಬ ನಿರ್ಣಯ ಮಾಡಿದ್ದೆ. ನರೇಂದ್ರ ಮೋದಿಯವರು ಪ್ರಧಾನಿಯಾಗಿ 10 ವರ್ಷದಿಂದ ಅನೇಕ ಅಭಿವೃದ್ಧಿ ಕಾರ್ಯ ಮಾಡಿಕೊಂಡು ಬಂದಿದ್ದಾರೆ. ಅವರು ಮಾಡಿರುವ ಹಲವಾರು ಅಭಿವೃದ್ಧಿ, ಕೈಗೊಂಡಿರುವ ಕಾರ್ಯ ಯೋಜನೆಗಳು ಭಾರತೀಯ ಸಂಸ್ಕೃತಿ, ಪರಂಪರೆಯ ರಕ್ಷಣೆಯ ಪರವಾಗಿವೆ. ಈ ಹಿನ್ನೆಲೆಯಲ್ಲಿ ವಿಕಸಿತ ಭಾರತ ಯೋಜನೆಯ ಕೆಲಸ ಮಾಡಲು ಕೈಜೋಡಿಸಿ ಎಂದು ಮನವಿ ಮಾಡಿದರು.

ಅರಸು ಜನಾಂಗದ ಮುಖಂಡರಾದ ಲಕ್ಷ್ಮಿಕಾಂತ್ ರಾಜೇ ಅರಸ್, ಮಲ್ಲರಾಜೇ ಅರಸ್, ಸುಬ್ರಹ್ಮಣ್ಯ ಅರಸ್, ಜಯರಾಜ್ ಅರಸ್, ಶ್ರೀಧರ್ ರಾಜೇ ಅರಸ್, ನಿರಂಜನ್ ರಾಜೇ ಅರಸ್, ಲಿಂಗರಾಜೇ ಅರಸ್, ಲಾವಣ್ಯ ಅರಸ್ ಮತ್ತಿತರರಿದ್ದರು.

ಜಯಘೋಷ...

ಕಿಕ್ಕಿರಿದು ತುಂಬಿದ್ದ ಸಭಾಂಗಣಕ್ಕೆ ಯದುವೀರ್ ಆಗಮಿಸುತ್ತಿದಂತೆ ಜಯಘೋಷ ಕೂಗಲಾಯಿತು. ಶಿಳ್ಳೆ–ಚಪ್ಪಾಳೆಗಳು ಮೊಳಗಿದವು. ಲೋಕಸಭಾ ಚುನಾವಣೆಯಲ್ಲಿ ಜಯಶೀಲರಾಗುವಂತೆ ಶುಭ ಕೋರಿದರು. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರ ವ್ಯಾಪ್ತಿ ಸೇರಿದಂತೆ, ಬೆಂಗಳೂರು, ಮಂಡ್ಯ, ಚಿಕ್ಕಮಗಳೂರು ಸೇರಿದಂತೆ ರಾಜ್ಯದ ವಿವಿಧೆಡೆಯ 15ಕ್ಕೂ ಹೆಚ್ಚು ಅರಸು ಸಮುದಾಯದ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು ಹಾರೈಕೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಸಮಾಜದಲ್ಲಿ ಗಂಡು, ಹೆಣ್ಣು ನಾಣ್ಯದ ಎರಡು ಮುಖ

● ಭರತನಾಟ್ಯ ಕಲಾವಿದೆ ಡಾ.ಕೃಪಾ ಪಡ್ಕೆ ಅಭಿಮತ ● ವಿವಿಧ ಕ್ಷೇತ್ರದ ಸಾಧಕಿಯರಿಗೆ ಪ್ರಶಸ್ತಿ ಪ್ರದಾನ



ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಉತ್ತಿಷ್ಠ ಭಾರತ ಪ್ರತಿಷ್ಠಾನದ ಸಹಯೋಗದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರದ ಸಾಧಕಿಯರಿಗೆ 'ಅಭಿಜಾತ ಸ್ತ್ರೀ' ಪ್ರಶಸ್ತಿ ನೀಡಿ, ಅಭಿನಂದಿಸಲಾಯಿತು.

ಮೈಸೂರು, ಮಾ.22(ಎಸ್‌ಬಿಡಿ)– ಸಮಾಜದಲ್ಲಿ ಮಹಿಳೆ ಮತ್ತು ಪುರುಷ, ನಾಣ್ಯದ ಎರಡು ಮುಖಗಳಿದ್ದಂತೆ ಎಂದು ಭರತನಾಟ್ಯ ಕಲಾವಿದೆ ವಿದುಷಿ ಡಾ.ಕೃಪಾ ಪಡ್ಕೆ ಅಭಿಪ್ರಾಯಿಸಿದರು.

ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಉತ್ತಿಷ್ಠ ಭಾರತ ಪ್ರತಿಷ್ಠಾನದ ಸಹಯೋಗದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ವಿಜಯನಗರದ ಕನ್ನಡ ಸಾಹಿತ್ಯ ಭವನದಲ್ಲಿ ಶುಕ್ರವಾರ ಏರ್ಪಡಿಸಿದ್ದ ವಿವಿಧ ಕ್ಷೇತ್ರದ ಸಾಧಕಿಯರಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ, ಮಾತನಾಡಿದರು.

ಈ ಭೂಮಿಯಲ್ಲಿ ಹುಟ್ಟಿದ ಪ್ರತಿಯೊಬ್ಬ ಮಹಿಳೆಯೂ ಉತ್ತಮಳು. ಹೆಣ್ಣು ಏನು ಬೇಕಾದರೂ ಸಾಧಿಸ ಬಹುದು. ಇದಕ್ಕೆ ಯಾವ ಅಡ್ಡಿಯೂ ಇಲ್ಲ. ಆದರೆ ಸ್ವಾತಂತ್ರ್ಯ ಹಾಗೂ ಸ್ವಚ್ಛಂದ ನಡುವಿನ ವ್ಯತ್ಯಾಸ ತಿಳಿದು ಮುನ್ನಡೆದರೆ ಯಾವುದೇ ಸಮಸ್ಯೆ ಉಂಟಾಗುವುದಿಲ್ಲ. ಸ್ತ್ರೀ ಮತ್ತು ಪುರುಷ, ನಾಣ್ಯದ ಎರಡು ಮುಖಗಳಿದ್ದಂತೆ. ಕವಿವಾಣಿಯಂತೆ ಇಲ್ಲಿ ಯಾರೂ ಮುಖ್ಯರಲ್ಲ, ಯಾರೂ ಅಮುಖ್ಯರಲ್ಲ ಎನ್ನುವ ಸತ್ಯವನ್ನು ಎಲ್ಲರೂ ಅರಿತುಕೊಳ್ಳಬೇಕು ಎಂದರು.

ಒಬ್ಬ ಪುರುಷನ ಯಶಸ್ಸಿನ ಹಿಂದೆ ಮಹಿಳೆ ಇರುತ್ತಾಳೆ ಎನ್ನುವಂತೆ ಮಹಿಳೆಯರ ಸಾಧನೆಯಲ್ಲೂ ಪುರುಷರ ಪ್ರೋತ್ಸಾಹ ಮುಖ್ಯವಾಗಿದೆ. ಪುರುಷರಾಗಲೀ, ಮಹಿಳೆಯಾಗಲೀ ನಾವು ಏನೇ ಮಾಡಿದರೂ ಸರಿ ಎನ್ನುವ ಸ್ವೇಚ್ಛೆ ಇರಬಾರದು. ಸಮಾಜದಲ್ಲಿ ಒಬ್ಬರ ಕೆಲಸ ಗುರುತಿಸಿ, ಹೀಗೆ ಅಭಿನಂದಿಸುವುದರಿಂದ ಪ್ರೋತ್ಸಾಹದ ಜೊತೆಗೆ ಮುಂದಿನ ಜವಾಬ್ದಾರಿ ಬಗ್ಗೆ ಎಚ್ಚರಿಸುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸಾಹಿತಿ ಡಾ.ಲೀಲಾ ಪ್ರಕಾಶ್ ಮಾತನಾಡಿ, ಮಹಿಳೆ ಹಾಗೂ ಪುರುಷ ಸಮಾನರು. ಪುರುಷ ಇಲ್ಲದೆ ಮಹಿಳೆ ಇಲ್ಲ, ಮಹಿಳೆ ಇಲ್ಲದೆ ಪುರುಷನಿಲ್ಲ. ಆದರೆ ಸಹನೆ, ತಾಳ್ಮೆ, ಕಾಳಜಿ, ಪ್ರೀತಿಯಿಂದ ಸಲಹುವ ಶಕ್ತಿ ಮಹಿಳೆಗಿದೆ. ಆಕೆ ಏಕ ಕಾಲದಲ್ಲಿ ಮೂರ್ನಾಲ್ಕು ಕೆಲಸ ಮಾಡಬಲ್ಲಳು. ನಮ್ಮ ಭಾರತ, ಸ್ತ್ರೀಯನ್ನು ಸದಾ ಗೌರವಿಸುವ ದೇಶ. ಸ್ತ್ರೀಗೆ ಮಾನ್ಯತೆ ಎಂದಿಗೂ ಇದ್ದೇ ಇದೆ ಎಂದು ತಿಳಿಸಿದರು.


ಇದೇ ವೇಳೆ ಉತ್ತಿಷ್ಠ ಭಾರತ ಪ್ರತಿಷ್ಠಾನದ ಕಾರ್ಯದರ್ಶಿ, ವ್ಯಂಗ್ಯಚಿತ್ರಕಾರ ಎಂ.ವಿ.ನಾಗೇಂದ್ರ ಬಾಬು ರಚಿಸಿದ 'ಸ್ತ್ರೀ ಶಕ್ತಿ' ಭಿತ್ತಿಚಿತ್ರವನ್ನು ಬಿಡುಗಡೆಗೊಳಿಸಲಾಯಿತು. ಸಮರ್ಪಣಾ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಸುಧಾ ಫಣೀಶ್ ಉಪನ್ಯಾಸ ನೀಡಿದರು. ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಾಹಿತಿಗಳಾದ ಡಾ.ಎ. ಪುಷ್ಪಾ ಅಯ್ಯಂಗಾರ್, ಡಾ.ಕೆ.ಲೀಲಾ ಪ್ರಕಾಶ್, ಉದ್ಯಮಿ ವಿನುತಾ ಎಸ್. ಗಿರಿ, ವೈದ್ಯರಾದ ಡಾ.ಪೂರ್ಣಿಮಾ ಹಾಗೂ ಡಾ.ಭಾವನ ಆರ್.ಮಧುಸೂದನ್ ಅವರಿಗೆ 'ಅಭಿಜಾತ ಸ್ತ್ರೀ' ಪ್ರಶಸ್ತಿ ಪ್ರದಾನ ಮಾಡಿ, ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಉಪಾಧ್ಯಕ್ಷ ಎನ್.ಅನಂತ್, ಉತ್ತಿಷ್ಠ ಭಾರತ ಪ್ರತಿಷ್ಠಾನದ ಕಾರ್ಯದರ್ಶಿ ಎಂ.ವಿ.ನಾಗೇಂದ್ರಬಾಬು, ಸಹ ಕಾರ್ಯದರ್ಶಿ ರಾಕೇಶ್ ಭಟ್ ಮತ್ತಿತರರು ಭಾಗವಹಿಸಿದ್ದರು. ನಂತರ ವಿದುಷಿ ಎಂ.ಕೆ. ಶೋಭಾ ಭರತನಾಟ್ಯ ಪ್ರದರ್ಶನ ನೀಡಿದರು.

ಮೈಸೂರು ಮಿತ್ರ

ವಿಜೃಂಭಣೆಯ ಗೌತಮ ಪಂಚ ಮಹಾರಥೋತ್ಸವ

ಶ್ರೀಕಂಠೇಶ್ವರ ಸೇರಿದಂತೆ 5 ರಥಗಳನ್ನು ಕಣ್ತುಂಬಿಕೊಂಡ ಲಕ್ಷಾಂತರ ಭಕ್ತ ಸಮೂಹ



ನಂಜನಗೂಡಿನಲ್ಲಿ ಶುಕ್ರವಾರ ಮುಂಜಾನೆ ನಡೆದ ಐತಿಹಾಸಿಕ ಗೌತಮ ಪಂಚ ರಥೋತ್ಸವದಲ್ಲಿ ಲಕ್ಷಾಂತರ ಭಕ್ತ ಸಾಗರದ ಮಧ್ಯೆ ಶ್ರೀಶ್ರೀಕಂಠೇಶ್ವರಸ್ವಾಮಿ ರಥ(ಗೌತಮ ರಥ) ಚಲಿಸುತ್ತಿರುವ ವಿಹಂಗಮ ನೋಟ.

ನಂಜನಗೂಡು, ಮಾ.22– ಗರಳಾಪುರಿ, ದಕ್ಷಿಣಕಾಶಿ ಎಂದೇ ಪ್ರಸಿದ್ಧಿಯಾಗಿರುವ ನಂಜನಗೂಡಿನ ಶ್ರೀಕಂಠೇಶ್ವರ ಗೌತಮ ಪಂಚ ರಥೋತ್ಸವ ಶುಕ್ರವಾರ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು. ಈ ವೇಳೆ ನೆರೆದಿದ್ದ ಭಕ್ತರು ಶ್ರೀಕಂಠೇಶ್ವರನ ಪಂಚ ರಥಗಳ ಸೊಬಗನ್ನು ಕಣ್ತುಂಬಿಕೊಂಡರು.

ಜಾತ್ರೆ ಅಂಗವಾಗಿ ಗುರುವಾರ ಮಧ್ಯರಾತ್ರಿ 2 ಗಂಟೆಯಿಂದಲೇ ದೇವಾಲಯದಲ್ಲಿ ಶ್ರೀಕಂಠೇಶ್ವರ ಸ್ವಾಮಿಗೆ ಕ್ಷೀರಾಭಿಷೇಕ, ಫಲಪಂಚಾಮೃತಾಭಿಷೇಕ, ಮಹೋನ್ನತ ಪೂರ್ವಕ ಏಕದಶಾವರ ರುದ್ರಾಭಿಷೇಕ, ಪ್ರಾತಃಕಾಲ ಪೂಜೆ ಬಳಿಕ ಹೋಮ ಹವನಾದಿಗಳನ್ನು ನೆರವೇರಿಸಲಾಯಿತು. ನಂತರ ರಥಕ್ಕೆ ಬಲಿ ಪೂಜೆ ನೆರವೇರಿಸಲಾಯಿತು. ಉತ್ಸವ ಮೂರ್ತಿಯನ್ನು ವಿಶೇಷ ವಜ್ರ, ವೈಡೂರ್ಯಗಳಿಂದ ಶೃಂಗರಿಸಿ, ಬಗೆ ಬಗೆಯ ಹೂಗಳಿಂದ ಅಲಂಕಾರ ಮಾಡಲಾಯಿತು.

ಉದಯಾತ್ಪೂರ್ವ 6.30 ರಿಂದ 6.50 ಗಂಟೆಯೊಳಗೆ ಸಲ್ಲುವ ಶುಭ ಮೀನ ಲಗ್ನದಲ್ಲಿ ದೇವಾಲಯದ ಪ್ರಧಾನ ಅರ್ಚಕ ಜೆ.ನಾಗಚಂದ್ರ ದೀಕ್ಷಿತ್ ಹಾಗೂ ಅರ್ಚಕ ವೃಂದ ಧಾರ್ಮಿಕ ವಿಧಿವಿಧಾನ ಪೂರೈಸಿದ ನಂತರ ಶ್ರೀಕಂಠೇಶ್ವರನ ಉತ್ಸವ ಮೂರ್ತಿಯನ್ನು ರಥದಲ್ಲಿ ಪ್ರತಿಷ್ಠಾಪನೆ ಮಾಡಲಾಯಿತು.

ಬೆಳಗ್ಗೆ 6.40ಕ್ಕೆ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು ಮತ್ತು ದೇವಾಲಯ ಕಾರ್ಯ ನಿರ್ವಾಹಣಾಧಿಕಾರಿ ಜಗದೀಶ್ ಈಡುಗಾಯಿ ಹೊಡೆಯುವ ಮೂಲಕ ರಥೋತ್ಸವಕ್ಕೆ ಚಾಲನೆ ನೀಡಿದರು. ನಾಡಿನ ವಿವಿಧ ಮೂಲೆಗಳಿಂದ ಆಗಮಿಸಿದ್ದ ಲಕ್ಷಾಂತರ ಭಕ್ತರು 'ಜೈ ಶ್ರೀಕಂಠೇಶ್ವರ' ಎಂಬ ಜಯಘೋಷ ಉದ್ಘೋಷಗಳನ್ನು ಕೂಗುತ್ತಾ ತೇರಿನ ಹಗ್ಗ ಹಿಡಿದು ಎಳೆಯುವ ಮೂಲಕ ಭಕ್ತಿ ಪರಾಕಾಷ್ಠೆ ಮೆರೆದರು. ಬೆಳಗ್ಗೆ 8.30ರ ವೇಳೆಗೆ ಗೌತಮ ರಥ ಯಾವುದೇ ಅಡ್ಡಿ ಆತಂಕಗಳಿಲ್ಲದೆ ಸ್ವಸ್ಥಾನ ತಲುಪಿತು.

ಮೊದಲು ಗಣಪತಿ ರಥ, ನಂತರ ಶ್ರೀಕಂಠೇಶ್ವರ ಸ್ವಾಮಿಯವರ ದೊಡ್ಡರಥ (ಗೌತಮ ರಥ), ನಂತರ ಸುಬ್ರಹ್ಮಣ್ಯೇಶ್ವರ, ಚಂಡಿಕೇಶ್ವರಸ್ವಾಮಿ ಮತ್ತು ಕೊನೆಯಲ್ಲಿ ಶ್ರೀ ಪಾರ್ವತಮ್ಮನವರ ರಥ ಸೇರಿದಂತೆ ಐದು ರಥಗಳು ರಥಬೀದಿಯಲ್ಲಿ 1.5 ಕಿಮೀ ದೂರ ಕ್ರಮಿಸಿ ಯಾವುದೇ ಅಡ್ಡಿ ಆತಂಕವಿಲ್ಲದೆ ಬೆಳಗ್ಗೆ 10.30 ವೇಳೆಗೆ ಸ್ವಸ್ಥಾನಕ್ಕೆ ತಲುಪಿದವು. ರಥಗಳು ಚಲಿಸುವಾಗ ರಸ್ತೆಯ ಇಕ್ಕೆಲಗಳಲ್ಲಿ ನೆರದಿದ್ದ ಲಕ್ಷಾಂತರ ಭಕ್ತರು ರಥಕ್ಕೆ ಹಣ್ಣು–ಧವನ ಎಸೆದು ಹರಕೆ ತೀರಿಸಿದರು. ನವ ವಧು–ವರರು ಇಷ್ಟಾರ್ಥಕ್ಕಾಗಿ ಪ್ರಾರ್ಥಿಸಿದರು.

ಸಂಘ ಸಂಸ್ಥೆಗಳಿಂದ ಪ್ರಸಾದ ವಿತರಣೆ: ಶ್ರೀಕಂಠೇಶ್ವರಸ್ವಾಮಿ ದೊಡ್ಡಜಾತ್ರೆ ಅಂಗವಾಗಿ ಜಾತ್ರೆಗೆ ಆಗಮಿಸಿದ್ದ ಭಕ್ತರಿಗೆ ವಿವಿಧ ಸಂಘ ಸಂಸ್ಥೆಗಳು ಪಾನಕ, ಮಜ್ಜಿಗೆ, ರೈಸ್‌ಬಾತ್, ಮೊಸರನ್ನ, ಲಾಡು, ಐಸ್‌ಕ್ರೀಂ, ಕುಡಿಯುವ ನೀರಿನ ಬಾಟಲ್‌ಗಳನ್ನು ವಿತರಣೆ ಮಾಡಿದವು.

ವಿಶೇಷ ಹೂವಿನ ಅಲಂಕಾರ: ರಾಜ್ಯದಲ್ಲೇ 5 ರಥಗಳು ಚಲಿಸುವುದು ನಂಜನಗೂಡಿನ ದೊಡ್ಡ ಜಾತ್ರೆಯಲ್ಲಿ ಮಾತ್ರ. ಹೀಗಾಗಿ ಶ್ರೀಕಂಠೇಶ್ವರ ಸ್ವಾಮಿ ಗೌತಮ ಪಂಚ ಮಹಾರಥೋತ್ಸವದ ಪ್ರಯುಕ್ತ ಐದು ರಥಗಳಿಗೂ ವಿಶೇಷ ಹೂವಿನಿಂದ ಅಲಂಕಾರ ಮಾಡಲಾಗಿತ್ತು ಅಲ್ಲದೇ ನಗರದ ಕಟ್ಟಡಗಳಿಗೆ ವಿಶೇಷ ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿತ್ತು. ದೇವಾಲಯದ ಮುಂಭಾಗ ತಳಿರು ತೋರಣ ಕಟ್ಟಲಾಗಿತ್ತು. ಅಲ್ಲದೆ ಭಕ್ತರ ಅನುಕೂಲಕ್ಕಾಗಿ ತಾತ್ಕಾಲಿಕ ಶೌಚಾಲಯ, ಆಸ್ಪತ್ರೆ, ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿತ್ತು. ಸುರಕ್ಷತೆ ಹಿತದೃಷ್ಟಿಯಿಂದ ನಗರದ ಆಯಕಟ್ಟಿನ ಪ್ರದೇಶಗಳಲ್ಲಿ ಹೆಚ್ಚುವರಿ ಸಿಸಿ ಕ್ಯಾಮರಾಗಳನ್ನು ಅವಳವಡಿಸಲಾಗಿತ್ತು. ಅಲ್ಲದೇ ಹೆಚ್ಚಿನ ಪೊಲೀಸ್ ಸಿಬ್ಬಂದಿ ನಿಯೋಜಿಸಿ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿತ್ತು.


ಜಾತ್ರೋತ್ಸವ ಅಂಗವಾಗಿ ಕಳೆದ ಶುಕ್ರವಾರ ದಿಂದಲೇ ದೇವಾಲಯದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಪ್ರಾರಂಭವಾಗಿ ದೇವತಾ ಕಾರ್ಯಗಳು ಮುಂದುವರಿದು ಇಂದು ಗೌತಮ ಪಂಚ ರಥೋತ್ಸವ ನೆರವೇರಿತು. ಮಾ.24 ರಂದು ಅವಭೃತ ತೀರ್ಥಸ್ನಾನ ನಡೆಯಲಿದ್ದು, ಸಂಜೆ 7 ಗಂಟೆಗೆ ಕಪಿಲಾ ನದಿ ತಟದ ತೇಲುವ ದೇವಾಲಯದಲ್ಲಿ ತೆಪ್ಪೋತ್ಸವ ಜರುಗಲಿದೆ. ಮಾ.25ರಂದು ಪುಷ್ಪಯಾಗ ಪೂರ್ವಕ ಕೈಲಾಸಯಾನಾರೋಹಣೋತ್ಸವ ಜರುಗಲಿದೆ. ಮಾ.26ರಂದು ಮಹಾಸಂಪ್ರೋಕ್ಷಣೆ, ಪೂರ್ವಕ ನಂದಿ ವಾಹನೋತ್ಸವ ಮತ್ತು ಶಯನೋತ್ಸವದೊಂದಿಗೆ ದೊಡ್ಡ ಜಾತ್ರಾ ಮಹೋತ್ಸವಕ್ಕೆ ತೆರೆ ಬೀಳಲಿದೆ.

ಇದೇ ವೇಳೆ ಶಾಸಕ ದರ್ಶನ್ ಧ್ರುವನಾರಾಯಣ್, ಮಾಜಿ ಶಾಸಕರಾದ ಕಳಲೆ ಕೇಶವಮೂರ್ತಿ, ಬಿ.ಹರ್ಷವರ್ಧನ್, ಕಾಂಗ್ರೆಸ್ ಮುಖಂಡ ಸುನೀಲ್ ಬೋಸ್ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡಿದ್ದರು. ದೇವಾಲಯದ ಇಓ ಜಗದೀಶ್, ಎಇಓ ಸತೀಶ್, ಎಸ್‌ಪಿ ಸೀಮಾ ಲಾಟ್ಕರ್, ಎಎಸ್‌ಪಿ ನಂದಿನಿ, ಸೇರಿದಂತೆ ಇತರರಿದ್ದರು.

ಗಣಪತಿ ರಥದ ಹಿಂಬದಿ ಚಕ್ರ ವಾಲಿ ಆತಂಕ ಸೃಷ್ಟಿ

ಗಣಪತಿ ರಥವು ರಥ ಬೀದಿಯಲ್ಲಿ ಸಾಗಿ ಬರುವಾಗ ತಿಮ್ಮಯ್ಯ ಕಟ್ಟಡದ ಬಳಿ ರಥದ ಹಿಂಬಂದಿ ಚಕ್ರದ ಬಳೆ ಕಳಚಿ ಚಕ್ರ ವಾರಡಿ ಆಗಿ ರಥವೂ ಕೂಡ ಎಡ ಭಾಗಕ್ಕೆ ವಾಲಿಕೊಂಡು ಕೆಲಕಾಲ ಭಕ್ತರಲ್ಲಿ ಆತಂಕ ಸೃಷ್ಟಿಯಾಗಿತ್ತು. ಆದರೂ ರಥ ಸ್ವಸ್ಥಾನವನ್ನು ತಲುಪಿತು. ನಂತರ ಭಕ್ತರ ಆತಂಕ ನಿವಾರಣೆಯಾದಂತಾಯಿತು.

ಲೋಕಸಭೆ ಚುನಾವಣೆಗೆ ಸಿದ್ಧತೆ ಪ್ರಾರಂಭ: ಎಸಿ



ಸುದ್ದಿಗೋಷ್ಠಿಯಲ್ಲಿ ಉಪವಿಭಾಗಾಧಿಕಾರಿ ಮೊಹಮ್ಮದ್ ಹ್ಯಾರೀಸ್ ಸುಮೇರ್ ಮಾತನಾಡಿದರು.

ಹುಣಸೂರು, ಮಾ.22– ಚುನಾವಣೆ ಪರ್ವ ದೇಶದ ಗರ್ವ ಎಂಬ ಘೋಷ ವಾಕ್ಯದಡಿ ಲೋಕಸಭೆ ಚುನಾವಣೆಗೆ ಎಲ್ಲಾ ಸಿದ್ಧತೆ ಪ್ರಾರಂಭಿಸಿದ್ದೇವೆ ಎಂದು ಚುನಾವಣಾಧಿಕಾರಿಯೂ ಆದ ಉಪವಿಭಾಗಾಧಿಕಾರಿ ಮೊಹಮ್ಮದ್ ಹ್ಯಾರೀಸ್ ಸುಮೇರ್ ತಿಳಿಸಿದರು.

ನಗರದ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಹುಣಸೂರು ಕ್ಷೇತ್ರದಲ್ಲಿ ಮಾ.16ರ ಅಂತ್ಯಕ್ಕೆ 1,24,245 ಮಹಿಳೆಯರು, 1,22,571 ಪುರುಷರು, 3676 ಅಂಗವಿಕಲರು, 85 ವರ್ಷ ಮೇಲ್ಪಟ್ಟ 3928, 16 ತೃತೀಯ ಲಿಂಗಿಗಳು ಸೇರಿದಂತೆ 2,46, 832 ಮತದಾರರಿದ್ದು, ಏ.26ರಂದು ನಡೆಯುವ ಮತದಾನಕ್ಕಾಗಿ 274 ಮತಗಟ್ಟೆಗಳನ್ನು ನಿರ್ಮಿಸಲಾಗುವುದು. ಇವುಗಳಲ್ಲಿ 3 ಸೂಕ್ಷ್ಮ, ಒಂದು ಅತೀ ಸೂಕ್ಷ್ಮ ಮತಗಟ್ಟೆ ಇದೆ ಎಂದರು.

ತಾಲೂಕಿನಲ್ಲಿ ಪುರುಷರಿಗಿಂತ ಮಹಿಳೆಯರ ಸಂಖ್ಯೆ ಹೆಚ್ಚಾಗಿದ್ದು, 18ವರ್ಷ ಮೇಲ್ಪಟ್ಟ ಯುವ ಮತದಾರರಲ್ಲಿ ಯುವಕರು ಜಾಸ್ತಿ ಇದ್ದಾರೆ. ಕಳೆದ ಚುನಾವಣೆಯಲ್ಲಿ ಮಂಗಳೂರು ಮಾಳ ಮತಗಟ್ಟೆ ಸಂಖ್ಯೆ 111ರಲ್ಲಿ ಹೆಚ್ಚು ಮತದಾನ ನಡೆದರೆ, ಚಿಕ್ಕಪಡುಕೋಟೆ ಮತಗಟ್ಟೆ ಸಂಖ್ಯೆ 264 ರಲ್ಲಿ ಅತೀ ಕಡಿಮೆ ಮತದಾನವಾಗಿತ್ತು. ಹೀಗಾಗಿ ಈ ಬಾರಿ ಇನ್ನೂ ಹೆಚ್ಚಿನ ಮತದಾನ ಮಾಡಿಸಲು ಎಲ್ಲರನ್ನೂ ಪ್ರೇರೇಪಿಸಲು ಜಾಗೃತಿ ಜಾಥಾ ಆಯೋಜಿಸಲಾಗುವುದು ಎಂದರು. ಪ್ರತಿ ಮತಗಟ್ಟೆಗೆ ಒಬ್ಬರು ಮತಗಟ್ಟೆ ಅಧಿಕಾರಿ, ಮೂವರು ಸಹಾಯಕ ಮತಗಟ್ಟೆ ಅಧಿಕಾರಿ ಮತ್ತು ಸಿಬ್ಬಂದಿ ನೇಮಿಸಲಾಗುವುದು. ಅದರಂತೆ 274 ಮತಗಟ್ಟೆಗಳಿಗೆ 274 ಮತಗಟ್ಟೆ ಅಧಿಕಾರಿ, 1096 ಸಹಾಯಕ ಮತಗಟ್ಟೆ ಅಧಿಕಾರಿಗಳು, 1096 ಸಹಾಯಕ ಸಿಬ್ಬಂದಿ, 55 ಮಂದಿ ಮೈಕ್ರೊ ಅಬ್ಸರ್‌ವರ್‌ಗಳನ್ನು ನೇಮಿಸಲಾಗಿದೆ ಎಂದರು.

ಮೇಲ್ವಿಚಾರಣೆ ಉಸ್ತುವಾರಿಗಾಗಿ ಮೂರು ಪಾಳಿಯಲ್ಲಿ ಐದು ಪಾಳಿಯಲ್ಲಿ ಫ್ಲೈಯಿಂಗ್ ಸ್ಕ್ವಾಡ್‌ಗಳನ್ನು ರಚಿಸಿದ್ದು, ಒಂದು ತಂಡದಲ್ಲಿ ಮೂವರು ಅಧಿಕಾರಿಗಳು ಕಾರ್ಯ ನಿರ್ವಹಿಸುತ್ತಾರೆ. ಅಲ್ಲದೇ ತಾಲೂಕಿನ ವಿವಿಧೆಡೆ 4 ಚೆಕ್‌ಪೋಸ್ಟ್‌ಗಳನ್ನು ನಿರ್ಮಿಸಲಾಗಿದ್ದು, ವಾಹನ ತಪಾಸಣೆ ನಡೆಸಲಾಗುತ್ತಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ತಾಪಂ ಇಓ ಶಿವಕುಮಾರ್, ತಹಸೀಲ್ದಾರ್ ಡಾ.ನಯನ ಕುಮಾರಿ, ಪೌರಾಯುಕ್ತೆ ಎಂ.ಲಕ್ಷ್ಮೀ ಇತರರಿದ್ದರು.

ಮೊಪೆಡ್‌ಗೆ ಮಿಲಿಟರಿ ವಾಹನ ಡಿಕ್ಕಿ: ಮಹಿಳೆ ಸಾವು



ನಂಜನಗೂಡು, ಮಾ.22– ಟಿವಿಎಸ್ ಮೊಪೆಡ್‌ಗೆ ಮಿಲಿಟರಿ ವಾಹನ ಡಿಕ್ಕಿ ಹೊಡೆದು ಕೆಳಗೆ ಬಿದ್ದ ಮಹಿಳೆ ಮೇಲೆ ಹರಿದ ಪರಿಣಾಮ ಆಕೆ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಾಲೂಕಿನ ಚಿನ್ನದಗುಡಿ ಹುಂಡಿ ಬಳಿ ಜರುಗಿದೆ.

ತಾಲೂಕಿನ ಕವಲಂದೆ ಹೋಬಳಿ ಮಲ್ಲಹಳ್ಳಿ ಗ್ರಾಮದ ನಿವಾಸಿ ಪಾಪಣ್ಣ ನಾಯಕರ ಪತ್ನಿ ಮಂಗಳಮ್ಮ (35) ಮೃತಪಟ್ಟವರು. ಘಟನೆಯಲ್ಲಿ ಪಾಪಣ್ಣ ನಾಯಕ (44), ತೇಜಸ್(10), ಲಕ್ಷ್ಮೀಗೆ(8) ಸಣ್ಣಪುಟ್ಟ ಗಾಯಗಳಾಗಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ನಂಜನಗೂಡಿನ ದೊಡ್ಡ ಜಾತ್ರೆಗೆ ಸ್ವಗ್ರಾಮ ಮಲ್ಲಹಳ್ಳಿಯಿಂದ ಪಾಪಣ್ಣ ನಾಯಕ ತಮ್ಮ ಟಿವಿಎಸ್ ಮೊಪೆಡ್‌ನಲ್ಲಿ ಪತ್ನಿ ಮಂಗಳಮ್ಮ, ಪುತ್ರ ತೇಜಸ್ ಹಾಗೂ ಮಗಳು ಲಕ್ಷ್ಮಿ ಅವರೊಂದಿಗೆ ಬರುತ್ತಿದ್ದರು. ಈ ವೇಳೆ ತಾಲೂಕಿನ ಚಿನ್ನದಗುಡಿ ಹುಂಡಿ ಬಳಿ ಮಿಲಿಟರಿ ವಾಹನ ಮೊಪೆಡ್‌ಗೆ ಹಿಂದಿನಿಂದ ಡಿಕ್ಕಿ ಹೊಡೆದಿದೆ. ಈ ವೇಳೆ ಪಾಪಣ್ಣ ನಾಯಕ, ಪುತ್ರ ತೇಜಸ್, ಪುತ್ರಿ ಲಕ್ಷ್ಮಿ ರಸ್ತೆ ಎಡಭಾಗಕ್ಕೆ ಬಿದ್ದು ಸಣ್ಣಪುಟ್ಟ ಗಾಯಗಳಾಗಿ ಪ್ರಾಣಾಪಾಯದಿಂದ ಪಾರಾಗಿದ್ದರೆ. ಆದರೆ, ಮಂಗಳಮ್ಮ ರಸ್ತೆ ಬಲಭಾಗಕ್ಕೆ ಬಿದ್ದಿದ್ದು, ಅವರ ಮೇಲೆ ಮಿಲಿಟರಿ ವಾಹನ ಹರಿದು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಕವಲಂದೆ ಪೊಲೀಸ್ ಠಾಣೆ ಎಎಸ್‌ಐ ಶಿವಣ್ಣ ಪರಿಶೀಲನೆ ನಡೆಸಿ ಶವವನ್ನು ನಂಜನಗೂಡು ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ, ಬಳಿಕ ಮರಣೋತ್ತರ ಪರೀಕ್ಷೆ ನಡೆಸಿ, ವಾರಸುದಾರರಿಗೆ ಒಪ್ಪಿಸಲಾಯಿತು. ಈ ಸಂಬಂಧ ಕವಲಂದೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪ್ರೇಯಸಿ ಕೊಂದ ಪ್ರಿಯಕರನಿಗೆ ಜೀವಾವಧಿ ಶಿಕ್ಷೆ

ನಂಜನಗೂಡು/ಮಲ್ಕುಂಡಿ, ಮಾ.22– ಮದುವೆ ಮಾಡಿಕೊಳ್ಳುವಂತೆ ಒತ್ತಾಯಿಸಿದ ಪ್ರೇಯಸಿಯನ್ನು ಹತ್ಯೆಗೈದ ಪ್ರಿಯಕರನಿಗೆ ಮೈಸೂರಿನ ಜಿಲ್ಲಾ 3ನೇ ಅಧಿಕ ಜಿಲ್ಲಾ ಸತ್ರ ನ್ಯಾಯಾಲಯದ ನ್ಯಾಯಾಧೀಶೆ ಕೆ.ಭಾಗ್ಯ ಜೀವಾವಧಿ ಶಿಕ್ಷೆ ಹಾಗೂ 10 ಸಾವಿರ ರೂ. ದಂಡ ವಿಧಿಸಿ, ತೀರ್ಪು ನೀಡಿದ್ದಾರೆ.

ವಿವರ: ನಂಜನಗೂಡು ತಾಲೂಕಿನ ಹಾಡ್ಯ ಗ್ರಾಮದ ನಾಗೇಶ ಶಿಕ್ಷೆಗೆ ಗುರಿಯಾಗಿರುವ ಪ್ರಿಯಕರ. ಈತ ಹುಲ್ಲಹಳ್ಳಿ ಗ್ರಾಮದ ನಿವಾಸಿ ನಂಜಮ್ಮಣ್ಣಿ ಎಂಬುವರ ಪುತ್ರಿ, ವಿಧವಾ ಮಹಿಳೆ ಲಕ್ಷ್ಮೀ ಎಂಬಾಕೆಯನ್ನು ಮದುವೆಯಾಗುವುದಾಗಿ ನಂಬಿಸಿ ಹುಲ್ಲಹಳ್ಳಿಯಲ್ಲಿ ಬಾಡಿಗೆ ಮನೆಯಲ್ಲಿ ಆಕೆಯೊಂದಿಗೆ ವಾಸವಿದ್ದ. ಕೆಲ ದಿನಗಳ ನಂತರ ತನ್ನನ್ನು ಮದುವೆಯಾಗು ವಂತೆ ಲಕ್ಷ್ಮಿ ಒತ್ತಾಯಿಸಿದ್ದರಿಂದ 2019ರ ನ.15ರಂದು ಬೆಳಗ್ಗೆ ಆಕೆಯನ್ನು ಟವೆಲ್‌ನಿಂದ ಉಸಿರುಗಟ್ಟಿಸಿ ಕೊಲೆ ಮಾಡಿದ್ದಾನೆ. ಈ ಸಂಬಂಧ ಹುಲ್ಲಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಅಂದಿನ ನಂಜನಗೂಡು ವೃತ್ತ ನಿರೀಕ್ಷಕ ರಾಜಶೇಖರ್ ತನಿಖೆ ನಡೆಸಿ, ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ್ದ ನ್ಯಾಯಾಧೀಶರು ನಾಗೇಶನಿಗೆ ಜೀವಾವಧಿ ಶಿಕ್ಷೆ ಹಾಗೂ 10 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕಿ ಟಿ.ಹೆಚ್.ಲೋಲಾಕ್ಷಿ ವಾದ ಮಂಡಿಸಿದ್ದರು.

ವಿಜೃಂಭಣೆಯ ಕಾಳಮ್ಮ ದೇವಿ ಜಾತ್ರಾ ಮಹೋತ್ಸವ



ಕಾಳಮ್ಮನವರ ಜಾತ್ರಾ ಮಹೋತ್ಸವದಲ್ಲಿ ದನಗಳ ಪ್ರದರ್ಶನ ನಡೆಯಿತು.

ಹೆಚ್.ಡಿ.ಕೋಟೆ, ಮಾ.22– ತಾಲೂಕಿನ ಕಟ್ಟೆಮನುಗನಹಳ್ಳಿಯಲ್ಲಿ ಕಾಳಮ್ಮ ದೇವಿಯ ಜಾತ್ರಾ ಮಹೋತ್ಸವ ಮತ್ತು ದನಗಳ ಪ್ರದರ್ಶನ ವಿಜೃಂಭಣೆಯಿಂದ ನಡೆಯಿತು. 2 ದಿನ ನಡೆದ ಜಾತ್ರೆಯಲ್ಲಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಕಾಳಮ್ಮನವರ ರಥೋತ್ಸವ ನಡೆಯಿತು. ಬಳಿಕ ದೇವಾಲಯ ಮುಂಭಾಗ ಉತ್ಸವ ಮೂರ್ತಿಗೆ ವಿವಿಧ ಪೂಜೆ ನೆರವೇರಿಸಲಾಯಿತು. ಹರಕೆ ಹೊತ್ತ ಗ್ರಾಮಸ್ಥರು ಹರಕೆ ತೀರಿಸಿದರು. ಇದೇ ವೇಳೆ ದನಗಳ ಪ್ರದರ್ಶನ ಗಮನ ಸೆಳೆಯಿತು. ದನಗಳ ಮಾಲೀಕರು ತಮ್ಮ ರಾಸುಗಳಿಗೆ ಮಧುವಣಗಿತ್ತಿಯಂತೆ ಶೃಂಗಾರ ಮಾಡಿ ಪ್ರದರ್ಶನಕ್ಕಿಟ್ಟಿದ್ದರು. ಕಾಳಮ್ಮನವರ ಜಾತ್ರೆ ಅಂಗವಾಗಿ ಕಬಡ್ಡಿ ಪಂದ್ಯಾವಳಿ ಏರ್ಪಡಿಸಲಾಗಿತ್ತು. ತಾಲೂಕಿನ ವಿವಿಧ ಗ್ರಾಮಗಳಿಂದ ತಂಡಗಳು ಭಾಗವಹಿಸಿದ್ದವು.

ಸಮರ್ಪಕ ವಿದ್ಯುತ್, ಅಕ್ರಮ ಸಕ್ರಮ ಯೋಜನೆ ಮರು ಜಾರಿಗೆ ಒತ್ತಾಯಿಸಿ

ಕಬ್ಬು ಬೆಳೆಗಾರರ ಸಂಘದಿಂದ ಸೆಸ್ಕ್ ಕಚೇರಿಗೆ ಮುತ್ತಿಗೆ



ಕಬ್ಬು ಬೆಳೆಗಾರರ ಸಂಘದಿಂದ ಸೆಸ್ಕ್ ಕಚೇರಿಗೆ ಎದುರು ಪ್ರತಿಭಟನೆ ನಡೆಸಲಾಯಿತು.

ತಿ.ನರಸೀಪುರ, ಮಾ.22– ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ನೀಡಬೇಕು, ಅಕ್ರಮ ಸಕ್ರಮ ಯೋಜನೆ ಮರು ಜಾರಿಗೆ ಒತ್ತಾಯಿಸಿ ರಾಜ್ಯ ಕಬ್ಬು ಬೆಳೆಗಾರರ ಸಂಘದಿಂದ ಪಟ್ಟಣದ ಸೆಸ್ಕ್ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಸೆಸ್ಕ್ ಕಚೇರಿ ಎದುರು ಜಮಾಯಿಸಿದ ರೈತ ಮುಖಂಡರು, ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡದ ಅಧಿಕಾರಿಗಳು ಹಾಗೂ ಕೇಂದ್ರ, ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ಕೃಷಿ ಪಂಪ್‌ಸೆಟ್‌ಗಳಿಗೆ 10 ಗಂಟೆ ವಿದ್ಯುತ್ ಪೂರೈಕೆ ಮಾಡಬೇಕು. ಹಗಲು ವೇಳೆ ಸರ್ಕಾರದ ಆದೇಶದಂತೆ ಸಮರ್ಪಕ ವಿದ್ಯುತ್ ನೀಡುವಲ್ಲಿ ವಿಳಂಬ ನೀತಿ ಕೈ ಬಿಡಬೇಕು. ರೈತರಿಗೆ ಸೋಲಾರ್ ಪಂಪ್‌ಸೆಟ್ ಅನ್ನು ವೈಯಕ್ತಿಕವಾಗಿ ಅಳವಡಿಸಿಕೊಳ್ಳಲು ಇಲಾಖೆ ಪ್ರೇರೇಪಿಸುತ್ತಿರುವುದು ಸರಿಯಲ್ಲ. ಕಳೆದ ಸಾಲಿನಲ್ಲಿ ಇದ್ದಂತೆ ಅಕ್ರಮ ಸಕ್ರಮ ಜಾರಿ ಮಾಡಬೇಕು ಎಂದು ಒತ್ತಾಯಿಸಿದರು.

ಹೊಸ ವಿದ್ಯುತ್ ಸಂಪರ್ಕ ಪಡೆಯಲು ರೈತರಿಗೆ ಸಾಧ್ಯವಾಗುತ್ತಿಲ್ಲ. ಸರ್ಕಾರದ ಆದೇಶವಿದೆ ಎಂದು ಯಾವುದೇ ನೋಂದಣಿ ಮಾಡಿಕೊಳ್ಳದೆ ಎರಡೂವರೆ ಲಕ್ಷ ರೂ. ಕಟ್ಟಿ ಸಂಪರ್ಕ ಪಡೆಯಲು ಹೇಳುತ್ತಿರುವುದು ರೈತರನ್ನು ವಂಚಿಸುವ ಹುನ್ನಾರವಾಗಿದೆ. ಇಲಾಖೆಯು ಕಾಡಂಚಿನ ಪ್ರದೇಶಗಳಿಗೆ ಸಮರ್ಪಕವಾಗಿ ಹಗಲು ವೇಳೆ ವಿದ್ಯುತ್ ಪೂರೈಕೆ ಮಾಡಬೇಕು. ರೈತರ ಜಮೀನುಗಳಲ್ಲಿ ಜೋತು ಬಿದ್ದಿರುವ ತಂತಿಗಳನ್ನು ಸರಿಪಡಿಸಿರುವ ಅಧಿಕಾರಿಗಳು ಜಂಗಲ್ ಕಟಿಂಗ್ ಮಾಡಿಸದಿರುವುದು ಸರಿಯಲ್ಲ. ತಕ್ಷಣ ಹೆಚ್ಚುವರಿ ಟಿಸಿ ನೀಡುವ ಬಗ್ಗೆ, ಸೋಲಾರ್ ಪಂಪ್‌ಸೆಟ್ ಅಳವಡಿಕೆಗೆ ಈ ಮೊದಲು ಇದ್ದ 23 ಸಾವಿರ ರೂ. ಕಟ್ಟಿಸಿಕೊಂಡು ಸರ್ಕಾರವೇ ಉಳಿದ ಹಣವನ್ನು ತುಂಬಿ ರೈತರಿಗೆ ವಿದ್ಯುತ್ ಸಂಪರ್ಕ ನೀಡಲಿ ಎಂದು ಅವರು ಒತ್ತಾಯಿಸಿದರು.

ವಿದ್ಯುತ್ ಅವಘಡದಿಂದ ಸಾವನ್ನಪ್ಪಿದವರ ಕುಟುಂಬಕ್ಕೆ 25 ಲಕ್ಷ ರೂ. ಪರಿಹಾರ ನೀಡಬೇಕು. ಶಾರ್ಟ್ ಸರ್ಕ್ಯೂಟ್‌ನಿಂದ ರೈತರು ಬೆಳೆದ ಕಬ್ಬು ನಷ್ಟವಾದರೆ 30 ದಿನದೊಳಗೆ ಪರಿಹಾರ ನೀಡಬೇಕು. ರಾಜ್ಯ ಸರ್ಕಾರ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ ಭರವಸೆಯಂತೆ ಪ್ರತಿ ಕುಟುಂಬಕ್ಕೆ 200 ಯೂನಿಟ್ ಉಚಿತ ವಿದ್ಯುತ್ ನೀಡಬೇಕು. ಅದನ್ನು ಬಿಟ್ಟು ಷರತ್ತುಗಳನ್ನು ಹಾಕಿ ಸರಾಸರಿಯಂತೆ ವಿದ್ಯುತ್ ನೀಡುತ್ತೇವೆ ಎಂಬ ನಿಯಮ ಬದಲಾಗಬೇಕು ಎಂದು ಒತ್ತಾಯಿಸಿದ ಅವರು, ದೇಶದ ಆಹಾರವನ್ನು ಮೋದಿಯವರು ಉಚಿತವಾಗಿ ಶ್ರೀಲಂಕಾ, ಪಾಕಿಸ್ತಾನ ಮತ್ತು ಪ್ರವಾಹ ಪೀಡಿತ ರಾಷ್ಟ್ರಗಳಿಗೆ ಹಂಚುತ್ತಾರೆ. ರಾಜ್ಯ ಸರ್ಕಾರ ಪಡಿತರ ವ್ಯವಸ್ಥೆಯಲ್ಲಿ 10 ಕೆಜಿ ಅಕ್ಕಿ ನೀಡುತ್ತಿದೆ. ಆದರೆ ಕೃಷಿಗೆ ಮೂಲವಾದ ವಿದ್ಯುತ್ ನೀಡುವಲ್ಲಿ ಎರಡೂ ಸರ್ಕಾರಗಳು ನಾಟಕ ವಾಡುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಕಬ್ಬು ಬೆಳೆಗಾರರ ಸಂಘದ ತಾಲೂಕು ಅಧ್ಯಕ್ಷ ಜಯಸ್ವಾಮಿ, ರಾಜಣ್ಣ, ಜಿಲ್ಲಾಧ್ಯಕ್ಷ ರವಿ, ಜಿಲ್ಲಾ ಕಾರ್ಯಾಧ್ಯಕ್ಷ ಶಿವಕುಮಾರ್, ಮಹದೇವಸ್ವಾಮಿ, ಮಹೇಂದ್ರ, ಮಹೇಶ್, ಮಹದೇವಸ್ವಾಮಿ, ಜಯಶಂಕರ, ಶ್ರೀಕಂಠ, ರೂಪೇಶ್, ಉಮೇಶ್, ಅರುಣ್, ಪವನ್, ರಾಜು ಇತರರಿದ್ದರು.

26ಕ್ಕೆ ಜಿಲ್ಲಾ ಸೆಸ್ಕ್ ಕಚೇರಿಗೆ ಮುತ್ತಿಗೆ

ಸಮರ್ಪಕ ವಿದ್ಯುತ್ ಪೂರೈಕೆ ಹಾಗೂ ಅಕ್ರಮ ಸಕ್ರಮ ಯೋಜನೆ ಮರು ಜಾರಿಗೆ ಒತ್ತಾಯಿಸಿ ಮಾ.26ರಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ಆಶ್ರಯದಲ್ಲಿ ಮೈಸೂರಿನ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ವ್ಯವಸ್ಥಾಪಕ ನಿರ್ದೇಶಕರ ಕಚೇರಿಗೆ ಮುತ್ತಿಗೆ ಹಾಕಿ ಬೃಹತ್ ಪ್ರತಿಭಟನೆ ನಡೆಸಲಾಗುವುದು. ಕೃಷಿ ಉಳಿವಿಗಾಗಿ ಕೃಷಿ ಪಂಪ್‌ಸೆಟ್ ಬಳಕೆದಾರ ರಕ್ಷಣೆಗಾಗಿ ಜಿಲ್ಲೆಯ ಪಂಪ್‌ಸೆಟ್ ಬಳಕೆದಾರರು ಹೊಸ ಕೊಳವೆ ಬಾವಿ ಕೊರೆದಿರುವ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿಭಟನೆಗೆ ಭಾಗವಹಿಸಿ ಯಶಸ್ವಿಗೊಳಿಸುವಂತೆ ಭಾಗ್ಯರಾಜ್ ಮನವಿ ಮಾಡಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಊರು ಪೇರು ಭೈರವಕೋನಾ (ತೆ)	4 ಪ್ರದರ್ಶನಗಳು,
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕರಟಕ ಧಮನಕ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸೈತಾನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ದಿಲ್ ಕುಷ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಜಾಕಿ (ಕ)	4 ಪ್ರದರ್ಶನಗಳು
ರಾಜಕಮಲ್	
ಪ್ರೇಮುಲು (ತೆ)	4 ಪ್ರದರ್ಶನಗಳು
ಸಂಗಂ	
ಬ್ಲಿಂಕ್ (ಕ)	4 ಪ್ರದರ್ಶನಗಳು
ಲಿಡೋ	
ದಿಲ್ ಕುಷ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಊರು ಪೇರು ಭೈರವಕೋನಾ (ತೆ)	4 ಪ್ರದರ್ಶನಗಳು
ಪ್ರಭಾ	
ಶಾಖಾಹಾರಿ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕುಂಗ್ ಫು ಪಾಂಡ 4(3ಡಿ) (ಇಂ): ಬೆ.11ಕ್ಕೆ, ಸಂ.4ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ಕರಟಕ ದಮನಕ (ಕ): ಮ.1ಕ್ಕೆ, ಓಂ ಭೀಮ್ ಬುಶ್ (ತೆ): ರಾ.10ಕ್ಕೆ.
ಸ್ಕ್ರೀನ್ 2	ಮಂಜುಮ್ಮೆಲ್ ಬಾಯ್ಸ್ (ಮ): ಬೆ.10.30ಕ್ಕೆ, ರಾ.7.20ಕ್ಕೆ, ದಿಲ್‌ಖುಷ್ (ಕ): ಮ.1.25ಕ್ಕೆ, ಆರ್ಟಿಕಲ್ 370 (ಹಿಂ): ಸಂ.4.10ಕ್ಕೆ, ಅಂಚಕಲ್ಲಕೊಕ್ಕನ್ (ಮ): ರಾ.10ಕ್ಕೆ
ಸ್ಕ್ರೀನ್ 3	ತೂತು ಕಾಸು (ಕ): ಬೆ.10.45ಕ್ಕೆ, ಲೈನ್‌ಮನ್ (ಕ): ಮ.1.30ಕ್ಕೆ, ಯೋಧ (ಹಿಂ): ಸಂ.4.15ಕ್ಕೆ, ಜಾಕಿ (ಕ): ರಾ.7.05ಕ್ಕೆ, ರಜಾಕರ್ ಸೈಲೆಂಟ್ ಜಿನೋಸೈಡ್ ಆಫ್ ಹೈದ್ರಾಬಾದ್ (ತೆ): ರಾ.9.55ಕ್ಕೆ.
ಸ್ಕ್ರೀನ್ 4	ಜಾಕಿ (ಕ): ಬೆ.10.30ಕ್ಕೆ, ರೆಬಲ್ (ತ): ಮ.1.20ಕ್ಕೆ, ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ಸಂ.4.10ಕ್ಕೆ, ರಾ.7.30ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಮಡಗಾಂವ್ ಎಕ್ಸ್‌ಪ್ರೆಸ್ (ಹಿಂ): ಮ.12.15ಕ್ಕೆ, ಸಂ.6.15ಕ್ಕೆ, ರಾ.9.20ಕ್ಕೆ, ಸೈತಾನ್ (ಹಿಂ): ಮ.3.20ಕ್ಕೆ.
ಸ್ಕ್ರೀನ್ 2	ಜಾಕಿ (ಕ): ಮ.12.55ಕ್ಕೆ, ರಾ.7.15ಕ್ಕೆ, ಕರಟಕ ದಮನಕ (ಕ): ಸಂ.4ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಮಂಜುಮ್ಮೆಲ್ ಬಾಯ್ಸ್ (ಮ): ಬೆ.10ಕ್ಕೆ, ರಾ.7ಕ್ಕೆ, ಓಂ ಭೀಮ್ ಬುಶ್ (ತೆ): ಮ.1ಕ್ಕೆ, ಯೋಧ (ಹಿಂ): ಸಂ.4.05ಕ್ಕೆ, ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ರಾ.10ಕ್ಕೆ
ಸ್ಕ್ರೀನ್ 4	ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ಬೆ.10ಕ್ಕೆ, ಮ.3.55ಕ್ಕೆ, ಕುಂಗ್ ಫು ಪಾಂಡ 4(3ಡಿ) (ಇಂ): ಮ.1.40ಕ್ಕೆ, ರಾ.7.35ಕ್ಕೆ, ರಾ.9.50ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಆರ್ಟಿಕಲ್ 370 (ಹಿಂ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ಡೆಮೋನ್ ಸ್ಲೇಯರ್ (ಜ): ಸಂ.4.30ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ & ಹಿಂ): ಬೆ.9.45ಕ್ಕೆ, ಮ.3.40ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ, ಲಾಪತಾ ಲೇಡಿಸ್ (ಹಿಂ): ಬೆ.10.35ಕ್ಕೆ, ಸಂ.4.10ಕ್ಕೆ, ರಾ.9.45ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಬೆ.10.20ಕ್ಕೆ, ಮ.1.25ಕ್ಕೆ, ರಾ.7.25ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಜಾ ಜಿಯಾ (ಹಿಂ): ಬೆ.11.55ಕ್ಕೆ, ಕ್ರೀಂ (ಕ): ಸಂ.6.55ಕ್ಕೆ, ಪ್ರೇಮಲು (ಮ): ರಾ.10.20ಕ್ಕೆ, ಜೋಶುವಾ (ತ): ಮ.1.20ಕ್ಕೆ, ಸಂ.6.55ಕ್ಕೆ, ಭ್ರಮಯುಗಂ (ಮ): ರಾ.9.45ಕ್ಕೆ, ವಾರನಂ ಆಯಿರಂ (ತ): ಮ.3.40ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

5ನೇ ವರ್ಷದ ಪುಣ್ಯ ಸ್ಮರಣೆ



ನೀವು ನಮ್ಮನ್ನು ಅಗಲಿ ಇಂದಿಗೆ ಐದು ವರ್ಷ ಕಳೆದರೂ ನಿಮ್ಮ ನೆನಪು ಸದಾ ನಮ್ಮ ಮನದಲ್ಲಿದೆ.

ದುಃಖತಪ್ತರು: ಪತಿ: ಕೆ.ಪಿ.ತಮ್ಮಯ್ಯ ಮಕ್ಕಳು, ಸೊಸೆಯಂದಿರು ಅಳಿಯಂದಿರು, ಮೊಮ್ಮಕ್ಕಳು ಹಾಗೂ ಕುಟುಂಬವರ್ಗ ಮಂಡ್ಯ, ಕುಟ್ಟ

ಕೆ.ಟಿ.ಪಾರ್ವತಿ (ಪಾಲ)

ಸೋಫಾ ರಿಪೇರ್ಸ್ ಅಂಡ್ ವರ್ಕ್ಸ್
9591012944

TO-LET
Independent 2 BHK readily available on rent with all facilities at Martikyathnalli gate on Gaddige Main Road (Near new petrol bunk).
Genuine persons may contact:
Call: 97317 69347 / 99029 34365

Pay Just 3 Lakhs
& Own Your Dream Sites
- Balance through Bank Loan
- Behind Airport -TVS Road
- 600 to 1200 Sqft Area
- Starts from 9 Lakhs

NIDHI ESTATES 78991 28100 99018 48182

HOUSE FOR RENT WANTED
For PRE SCHOOL / DAY CARE
3 BHK / 4 BHK
1500 to 4000sq.ft.,
Residential / Semi Residential area in and around Mysore
Call / WhatsApp
ALPHA CUBS PRE-SCHOOL
Franchise - 7829937469
www.alphacubspreschool.com

CNM GROUP OF INSTITUTION
Wanted (Female Teachers)
Mahadevapura & Jayapura

DESIGNATION	QUALIFICATION
Montessori Teacher	NST, NTT OR Montessori Training
Primary Teacher	English, Hindi, Maths, Science Social and Kannada Degree with D.Ed
High School Teacher	English, Hindi, Math, Science Social and Kannada, Master Degree with B.Ed
Computer Teacher ACCOUNTANT	BCA OR MCA Degree and 3 years experience in accountancy

WALK IN INTERVIEW
Date: 23/03/2024 & 24/03/2024, Time: 10:00 AM TO 12:30 PM
Venue: 710, Mahadevapura, Near Judge Quarters, Srirampura village – 570008
Contact no : 8150993434, 8147470606



JOCKEY
FACTORY SECONDS
UPTO 50% OFF*
* T & C apply
• 10 am to 8 pm • Open All Days • Master / Visa Card Accepted
INNERWEAR • LEISUREWEAR • ACTIVEWEAR • KIDSWEAR • SOCKS
Venue In Mysore
JLB Road
The Institution Of Engineers (Auditorium Hall), Jhansi Lakshmibai Road - 5
Org. by: Surya Agency Pvt. Ltd.

PURNA CHETANA PUBLIC SCHOOL, Mysore
on the lookout for passionate educators to join our dynamic team!
POSITIONS OPEN FOR
- English • Social • Art & Craft
- Physical Education Trainer
- Graphic Designer and Video Editor

If you're ready to make a real impact and inspire the next generation, bring your passion to our prestigious school. Don't miss the chance to shape the future!
Send your resumes to **72048 36513**
and be part of a team dedicated to nurturing future leaders.



ಮೈಸೂರು ಮಿತ್ರ
ವಾರ್ಷಿಕೋತ್ಸವ ವಿಶೇಷ ಸಂಚಿಕೆ

"ಮೈಸೂರು ಮಿತ್ರ" ತನ್ನ ಓದುಗರು ಹಾಗೂ ಜಾಹೀರಾತುದಾರರ ಸೇವೆಯಲ್ಲಿ ಏಪ್ರಿಲ್ 16, 2024ಕ್ಕೆ 44 ವರ್ಷಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, 45ನೇ ವರ್ಷಕ್ಕೆ ಕಾಲಿಡುತ್ತಿರುವ ಈ ಸುಸಂದರ್ಭದಲ್ಲಿ ವರ್ಣರಂಜಿತ ವಿಶೇಷಾಂಕವನ್ನು ಹೊರತರಲಾಗುತ್ತಿದೆ. ಹಾಗಾಗಿ ಜಾಹೀರಾತುದಾರರಿಗೆ ಇದೊಂದು ಸುಸಮಯ. ಮುದ್ರಣದ ದೃಷ್ಟಿಯಿಂದ ತಮ್ಮ ಜಾಹೀರಾತುಗಳನ್ನು ಏಪ್ರಿಲ್ 10, 2024 ರೊಳಗೆ ನೀಡಬೇಕಾಗಿ ಕಳಕಳಿಯ ಮನವಿ.

ಪ್ರಧಾನ ಕಛೇರಿ
0821-2496522, 2496523, 0821-2496520 (5 ಲೈನುಗಳು)
ಮರಿಯ ಫರ್ನಾಂಡೀಸ್, ಜಾಹೀರಾತು ವ್ಯವಸ್ಥಾಪಕರು: 9448525060
ಜಾಯ್ ಆಂಥೋಣಿ ಡೋವ್: 8951668960
ಪ್ರೇಮ: 9880549879
ಕೆ.ಆರ್. ಸರ್ಕಲ್ ಕಛೇರಿ: 0821-2431774
ದೇವರಾಜ ಅರಸ್ ರಸ್ತೆ ಕಛೇರಿ: 0821-2428695

ಕೊಡಗು: ಪ್ರಸಾದ್, ಪೂಜಾ ಆರ್ಕೇಡ್, ಜೂನಿಯರ್ ಕಾಲೇಜು ರಸ್ತೆ, ಮಡಿಕೇರಿ 9731469871

ಮಂಡ್ಯ: ಕೆ. ಮೋಹನ್‌ರಾಜ್, 3ನೇ ಕ್ರಾಸ್, ಅಶೋಕನಗರ, ಮಂಡ್ಯ 8762960325

ಶ್ರೀರಂಗಪಟ್ಟಣ: ವಿನಯ್ ಕಾರೇಕುರ, ಶ್ರೀರಂಗಪಟ್ಟಣ 9686893234

ಹುಣಸೂರು: ಕೆ. ಕೃಷ್ಣ (ಕೆ.ಕೆ.), EWS 204, KHB ಕಾಲೋನಿ, ಹುಣಸೂರು. 9448720626

ಚಾಮರಾಜನಗರ: ಸಿದ್ದಲಿಂಗಸ್ವಾಮಿ, ಎ.ಹೆಚ್.ಆರ್. ಕಾಂಪ್ಲೆಕ್ಸ್, ಸರ್ಕಾರಿ ಆಸ್ಪತ್ರೆ ಎದುರು, ಚಾಮರಾಜನಗರ 9242265657

ಟಿ. ನರಸೀಪುರ: ಕುಮಾರ್, ಸಾರ್ವಜನಿಕ ಆಸ್ಪತ್ರೆ ರಸ್ತೆ, ಆರ್ಯ ಮಹಲ್ ಛತ್ರದ ಎದುರು, ಟಿ. ನರಸೀಪುರ. 9986719590

ಗುಂಡ್ಲುಪೇಟೆ: ಸೋಮಶೇಖರ್, ದ.ರಾ. ಬೇಂದ್ರೆ ನಗರ, ಅಶ್ವಿನಿ ಲೇಔಟ್,ಗುಂಡ್ಲುಪೇಟೆ. 9845995426

ಕೆ.ಆರ್. ನಗರ: ಕೆ.ಬಿ. ರಮೇಶ್, ಸ್ನೇಹ ಎಂಟರ್ ಪ್ರೈಸಸ್, ವಿ.ವಿ.ರಸ್ತೆ, ಕೆ.ಆರ್. ನಗರ. 9448021368

ಮಳವಳ್ಳಿ: ಶಿವಶಂಕರ, ನಂ.47, 1ನೇ ಕ್ರಾಸ್, ಎನ್.ಇ.ಎಸ್ ಮಳವಳ್ಳಿ ಟೌನ್–571430 9632407806

ಕೊಳ್ಳೇಗಾಲ: ರಾಜು, ಮೈಸೂರು ಮಿತ್ರ ರಿಪೋರ್ಟರ್ #101, ಮರಳೇಶ್ವರ ಬೀದಿ, ಕೊಳ್ಳೇಗಾಲ 9916621007

ಹಾಸನ: ಆರ್.ಎನ್.ಸೋಮೇಶ್‌ಗೌಡ, ಜ್ಯೋತಿ ಟೈಲ್ಸ್ ಶಾಪ್ ಹತ್ತಿರ, ಜಯನಗರ, 1ನೇ ಹಂತ, 2ನೇ ಕ್ರಾಸ್, ಹಾಸನ. 9448401175

ಕುಶಾಲನಗರ: ರಘು, ಮೈಸೂರು ಮಿತ್ರ ರಿಪೋರ್ಟರ್ ಮನು ಪ್ರೆಸ್, ಐ.ಬಿ.ರಸ್ತೆ, ಕುಶಾಲನಗರ 9845698401

ಜಯಪುರ: ಬಿಳಿಗಿರಿ, ಜಯಪುರ 9945479288

ಪಿರಿಯಾಪಟ್ಟಣ: ವೀರೇಶ್, ಪಿರಿಯಾಪಟ್ಟಣ 8660057128

ವಿರಾಜಪೇಟೆ: ಮಂಜುನಾಥ, ವಿರಾಜಪೇಟೆ 9900949353

ಕೆ.ಆರ್.ಪೇಟೆ: ಶ್ರೀನಿವಾಸ, ಅಗ್ರಹಾರ ಬಾಚಹಳ್ಳಿ, ಕೆ.ಆರ್.ಪೇಟೆ 9449326847, 7022757438

ಹೆಚ್.ಡಿ.ಕೋಟೆ: ಮಂಜುನಾಥ ಎಸ್., ಹೆಚ್.ಡಿ.ಕೋಟೆ. 9483574452

ಕೆ.ಎಂ.ದೊಡ್ಡಿ: ಸತೀಶ್ ವಿ.ಎಲ್, ಕೆ.ಎಂ.ದೊಡ್ಡಿ 9242120338

ನಂಜನಗೂಡು: ರಂಗಸ್ವಾಮಿ, ನಂ.4565, ಕಬಿನಿ ಕಾಲೋನಿ ಹಿಂಭಾಗ, ನೀಲಕಂಠ ನಗರ, ನಂಜನಗೂಡು ಟೌನ್–571301 9901602226

ಹುಣಸೂರು: ಹೆಚ್.ಆರ್. ಕೃಷ್ಣಕುಮಾರ್ (ಚಿನ್ನ ರಾಮಣ್ಣ), ನಂದಿನಿ ಮಾರಾಟ ಕೇಂದ್ರ ಮಾರುತಿ ಪೆಟ್ರೋಲ್ ಬಂಕ್ ಹತ್ತಿರ ಹಳೇಯ ಬಿ.ಎಂ. ರಸ್ತೆ ಪಕ್ಕದ, ಹುಣಸೂರು 9060406093

ಕೊಳ್ಳೇಗಾಲ: ನಾಗೇಂದ್ರ ಸ್ವಾಮಿ, ನಂ.7ಎ, 684, 14 ನೇ ಕ್ರಾಸ್, ಬಸವೇಶ್ವರ ನಗರ, ಕೊಳ್ಳೇಗಾಲ 9448576247, 7899849858

ಮೈಸೂರಿನಲ್ಲಿ ಭಾರತದ ಅತಿ ದೊಡ್ಡ ಶಾಪಿಂಗ್ ಎಕ್ಸ್‌ಪೋ
ಪೂರ್ಣ ಹೊಸ ಸ್ಟಾಕ್‌ನೊಂದಿಗೆ ಇಂದು ತೆರೆಯಲಾಗುತ್ತಿದೆ

ಗಾರ್ಮೆಂಟ್ಸ್, ಪಾದರಕ್ಷೆಗಳು, ಸೀರೆಗಳು ಮತ್ತು ಅಕ್ಸೆಸರಿಸ್
ಮೈಸೂರಿನಲ್ಲಿ ಮೊದಲ ಬಾರಿಗೆ @ ಜಯಮ್ಮ ಗೋವಿಂದಗೌಡ ಕಲ್ಯಾಣ ಮಂಟಪ

ಗಾರ್ಮೆಂಟ್ಸ್ ಕಂಪನಿ ಮತ್ತು ಪಾದರಕ್ಷೆಗಳ ಕಾರ್ಖಾನೆಗಳು 2 ಕೋಟಿ ನಷ್ಟದಲ್ಲಿದ್ದು, ಕೋಲ್ಕತ್ತಾ, ಮುಂಬೈ, ದೆಹಲಿ ಗಾರ್ಮೆಂಟ್ ಡೀಲರ್‌ಗಳು ಕೋಟಿಗಟ್ಟಲೆ ಸಾಲದಲ್ಲಿದ್ದಾರೆ, ಹೀಗಾಗಿ ಕಂಪನಿಯು 2023 ರ ಸಂಪೂರ್ಣ ಸ್ಟಾಕ್ ಅನ್ನು ಮಾರಾಟ ಮಾಡಲು ನಿರ್ಧರಿಸಿದೆ, ಕ್ಯಾಷ್ ಮತ್ತು ಕ್ಯಾರಿ ಮೂಲಕ ದೊಡ್ಡ ರಿಯಾಯಿತಿ ಬೆಲೆಗಳಲ್ಲಿ

upto **85% OFFER**
FACTORY SECONDS

PUMA ನೇರ ಫ್ಯಾಕ್ಟರಿ ಮಾರಾಟ, ಪೂಮಾ ಶೂಸ್ ರೂ.1500
ಫುಟ್‌ವೇರ್, ಸ್ವೆಟ್ ಶರ್ಟ್, ಹೂಡೀಸ್, ಜಿಪ್ಪರ್, ಸ್ಯಾಂಡಲ್, ಜೆಂಟ್ಸ್ & ಲೇಡೀಸ್

ಯಾವುದೇ ವಸ್ತುವನ್ನು ಖರೀದಿಸಿ **RS.250/-**
ಲೇಡೀಸ್ ಸ್ಯಾರಿ, ಲೇಡೀಸ್ ಕುರ್ತೀಸ್, ಲೇಡೀಸ್ ಜೀನ್ಸ್ ಪ್ಯಾಂಟ್, ಲೇಡೀಸ್ ಲೆಗ್ಗಿನ್ಸ್, ಲೇಡೀಸ್ ಜೆಗ್ಗಿನ್ಸ್
ಲೇಡೀಸ್ ಪ್ಲಾಜಾ ಪ್ಯಾಂಟ್, ಲೇಡೀಸ್ 3/4 ಪ್ಯಾಂಟ್, ಲೇಡೀಸ್ ಶಾರ್ಟ್ಸ್
ವೆಸ್ಟರ್ನ್ ಟಾಪ್ಸ್ ರೂ.150 (ವಿಶೇಷವಾಗಿ ಕಾಲೇಜು ಹುಡುಗಿಯರಿಗೆ)

ಪುರುಷರ ಬಾಕ್ಸರ್ ಶಾರ್ಟ್ಸ್ ರೂ.200, ಪುರುಷರ ಬ್ರಾಂಡೆಡ್ ಶರ್ಟ್ ರೂ.500
ಮೆನ್ಸ್ ಜೀನ್ಸ್ ರೂ.750

ಬ್ರ್ಯಾಂಡ್: ಪೆಪೆ ಜೀನ್ಸ್, ಫ್ಲಕ್ ಫ್ರೀ ಸೋಲ್, ರೇಮಂಡ್, ಕಲರ್ ಪ್ಲಸ್
ವಿ.ಐ.ಪಿ ಕೌಂಟರ್: ಜೀನ್ಸ್, ಟೌಸರ್, ಶರ್ಟ್‌ಗಳು, ಟ್ರ್ಯಾಕ್ ಪ್ಯಾಂಟ್, ಜಿಪ್ಪರ್, ಪುಡೀಸ್, ಸ್ವೆಟ್ ಶರ್ಟ್‌ಗಳು, ಟಿ.ಶರ್ಟ್‌ಗಳು, ಜಾಕೆಟ್‌ಗಳು.
MRP. ರೂ.999 ರಿಂದ ರೂ.4999, ಯಾವುದೇ ಒಂದಕ್ಕೆ ರೂ.400 ರಿಂದ ರೂ.1000

ಎಲ್ಲಾ ಬಟ್ಟೆಗಳು ಅತ್ಯಂತ ಕಡಿಮೆ ನಂಬಲಾಗದ ದರದ ರೀತಿಯಲ್ಲಿ, ಬನ್ನಿ ಮತ್ತು ನೋಡಿ, ನಿಮಗೆ ಇಷ್ಟವಾದರೆ ಮಾತ್ರ ತೆಗೆದುಕೊಳ್ಳಿ

ಸೇಲ್ 3 ದಿನಗಳು ಮಾತ್ರ, ಯಾವುದೇ ವಿಸ್ತರಣೆ ಇರುವುದಿಲ್ಲ — ಶನಿ 23 ಭಾನು 24 ಸೋಮ 25 ಮಾರ್ಚ್ 2024

JAYAMMA GOVINDAGOWDA KALYANA MANTAPA
ಸ್ಥಳ: ಜಯಮ್ಮ ಗೋವಿಂದಗೌಡ ಕಲ್ಯಾಣ ಮಂಟಪ
ಉದಯರವಿ ರಸ್ತೆ, ಕುವೆಂಪು ನಗರ, ಮೈಸೂರು

FREE PARKING ENTRANCE — All Major Debit/Credit Cards, Google Pay, PhonePe Accepted
ಸಮಯ : ಬೆಳಗ್ಗೆ 10 ಗಂಟೆಯಿಂದ ರಾತ್ರಿ 10 ರವರೆಗೆ

ಸೂಚನೆ: ಜಾಹಿರಾತು ಪ್ರಕಟಣೆಯ ಪೇಪರ್ ಕಟಿಂಗ್ ತನ್ನಿ ಮತ್ತು ಹಾಯ್ ಲುಕ್ ಆರ್ಟ್ ಸಿಲ್ಕ್ ಸ್ಯಾರಿಯನ್ನು ಕೇವಲ 200 ರೂ (ಒಂದು ಪೇಪರ್ ಕಟಿಂಗ್‌ಗೆ 1 ಸ್ಯಾರಿ ಮಾತ್ರ)